ಸಂಪುಟ: 21, ಸಂಚಿಕೆ: 148, ಪುಟಗಳು: 8, ಗುರುವಾರ, 7 ಮಾರ್ಚ್ 2024 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

### ಸುಭಾಷಿತ

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆನೆಕಾ

### ಪಂಚಾಂಗ

(ಗುರುವಾರ 7, ಮಾರ್ಚ್ -2024)

- ಶ್ರೀ ಶೋಭಕೃತನಾಮ ಸಂವತ್ಸರ,
- ಉತ್ತರಾಯಣ, ಶಿಶಿರ ಋತು,
- ಮಾಘಮಾಸ, ಕೃಷ್ಣ ಪಕ್ಷ,
- ದ್ವಾದಶಿ, ಗುರುವಾರ,
- ಉತ್ತರಾಷಾಡ ನಕ್ಷತ್ರ / ಶ್ರವಣ ನಕ್ಷತ್ರ.
- ರಾಹುಕಾಲ : 02:04 ರಿಂದ 03:34
- ಗುಳಿಕಕಾಲ : 09:34 ರಿಂದ 11:04
- ಯಮಗಂಡಕಾಲ : 06:35 ರಿಂದ 08:04

## ಜಮ್ಮು- ಕಾಶ್ಮೀರಕ್ಕೆ ಮೋದಿ ಭೇಟಿ

**ಜಮ್ಮು:** ಜಮ್ಮು ಮತ್ತು ಕಾಶ್ಮೀರಕ್ಕೆ ವಿಶೇಷ ಸ್ಥಾನ ನೀಡುವ ಸಂವಿಧಾನದ 370ನೇ ವಿಧಿಯನ್ನು ತೆಗೆದು ಹಾಕಿದ ಬಳಿಕ ಮೊದಲ ಬಾರಿಗೆ ಪ್ರಧಾನಿ ನರೇಂದ್ರ ಮೋದಿ ಶ್ರೀನಗರಕ್ಕೆ ಭೇಟಿ ನೀಡುತ್ತಿದ್ದಾರೆ. ದೇಶದಲ್ಲಿ ಚುನಾವಣೆಯ ವಾತಾವರಣವಿದೆ, ಇದು ಗ್ಯಾರಂಟಿ ಸೀಸನ್ ಕೂಡ. ಶ್ರೀನಗರದಲ್ಲಿ ಮೋದಿ ಮೆರವಣಿಗೆ ನಡೆಸಲಿದ್ದಾರೆ. ಕಾಶ್ಮೀರದ ಇತಿಹಾಸದಲ್ಲಿ ಇದು ಅತ್ಯಂತ ದೊಡ್ಡ ರ್ಯಾಲಿ ಎಂದೇ ಹೇಳಬಹುದು. ಇದರಲ್ಲಿ 2 ಲಕ್ಷಕ್ಕೂ ಹೆಚ್ಚು ಮಂದಿ ಪಾಲ್ಗೊಳ್ಳಲಿದ್ದಾರೆ. ಈ ರ್ಯಾಲಿಗೆ ಬಿಗಿ ಭದ್ರತೆ ಕಲ್ಪಿಸಲಾಗಿದೆ. ಶ್ರೀನಗರವನ್ನು ತ್ರಿವರ್ಣ ಹಾಗೂ ಬಿಜೆಪಿ ಧ್ವಜಗಳಿಂದ ಅಲಂಕರಿಸಲಾಗಿದೆ. ಪ್ರಧಾನಿ ಮೋದಿ 7 ಕಿ.ಮೀ ಪ್ರಯಾಣಿಸಿ ಶ್ರೀನಗರದ ಬಕ್ಷಿ ಕ್ರೀಡಾಂಗಣಕ್ಕೆ ತೆರಳಲಿದ್ದಾರೆ.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಗುರುವಾರ ಶ್ರೀನಗರದಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ 6,400 ಕೋಟಿ ರೂ.ಗೂ ಹೆಚ್ಚು ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳನ್ನು ಅನಾವರಣಗೊಳಿಸಲಿದ್ದಾರೆ.



ದೇಖೋ ಅಪ್ನಾ ದೇಶ್ ಪೀಪಲ್ಸ್ ಚಾಯ್ಸ್ ಟೂರಿಸ್ಟ್ ಡೆಸ್ಟಿನೇಶನ್ ಪೋಲ್ ಮತ್ತು ಚಲೋ ಇಂಡಿಯಾ ಗ್ಲೋಬಲ್ ಡಯಾಸ್ಪೊರಾ ಅಭಿಯಾನವನ್ನು ಪ್ರಾರಂಭಿಸಲಿದ್ದಾರೆ.

ಮೋದಿ ಅವರು ಜಮ್ಮು ಮತ್ತು ಕಾಶ್ಮೀರದಲ್ಲಿ ಹೊಸದಾಗಿ ನೇಮಕಗೊಂಡ ಸುಮಾರು 1,000 ಸರ್ಕಾರಿ ನೌಕರರಿಗೆ ನೇಮಕಾತಿ ಪತ್ರಗಳನ್ನು ವಿತರಿಸಲಿದ್ದಾರೆ ಮತ್ತು ಮಹಿಳಾ ಸಾಧಕರು, ರೈತರು ಮತ್ತು ಉದ್ಯಮಿಗಳು ಸೇರಿದಂತೆ ವಿವಿಧ ಕೇಂದ್ರ ಯೋಜನೆಗಳ ಫಲಾನುಭವಿಗಳೊಂದಿಗೆ ಸಂವಾದ ನಡೆಸಲಿದ್ದಾರೆ ಎಂದು ಹೇಳಿಕೆ ತಿಳಿಸಿದೆ.

ಪುಟ 2

### ರಾಮೇಶ್ವರಂ ಕೆಫೆ ಬಾಂಬ್ ಬ್ಲಾಸ್ಟ್ ಕೇಸ್

## ಬಾಂಬರ್ ಬಳ್ಳಾರಿಯಿಂದ ಭಟ್ಕಳಕ್ಕೆ ತೆರಳಿರುವ ಶಂಕೆ

**ಬೆಂಗಳೂರು/ ಬಳ್ಳಾರಿ:** ರಾಮೇಶ್ವರಂ ಕೆಫೆ ಬಾಂಬ್ ಬ್ಲಾಸ್ಟ್ ಪ್ರಕರಣಕ್ಕೆ ಸಂಬಂಧಿಸಿದಂತೆ ಸ್ಫೋಟಕ ಮಾಹಿತಿ ಲಭ್ಯವಾಗಿದೆ. ಬೆಂಗಳೂರಿನ ಸುಜಾತ ಸರ್ಕಲ್‌ನಲ್ಲಿ ಬಾಂಬರ್ ಬಸ್ ಹತ್ತಿ ತುಮಕೂರಿನಲ್ಲಿ ಇಳಿದಿದ್ದಾನೆ. ತುಮಕೂರಿನಿಂದ ಬಳ್ಳಾರಿಗೆ ಬಸ್‌ನಲ್ಲಿ ಬಂದು ನಂತರ ಮಂತ್ರಾಲಯ- ಗೋಕರ್ಣ ಬಸ್ ಹತ್ತಿ ಭಟ್ಕಳಕ್ಕೆ ತೆರಳಿರುವ ಶಂಕೆ ವ್ಯಕ್ತವಾಗಿದೆ.

ಈ ವಿಚಾರ ತಿಳಿಯುತ್ತಿದ್ದಂತೆ ರಾಷ್ಟ್ರೀಯ ತನಿಖಾ ದಳ ಬಳ್ಳಾರಿ ಮತ್ತು ತುಮಕೂರು ಬಸ್ ನಿಲ್ದಾಣಕ್ಕೆ ಆಗಮಿಸಿ ಮಾಹಿತಿ ಕಲೆ ಹಾಕಿದೆ. ತಡರಾತ್ರಿಯಿಂದ ಬೆಳಗಿನ ಜಾವದವರೆಗೂ ಬಳ್ಳಾರಿ ಬಸ್ ನಿಲ್ದಾಣದಲ್ಲಿ ಎನ್‌ಐಎ ತಂಡ ಮಾಹಿತಿ ಪಡೆದಿದ್ದು ಬಳ್ಳಾರಿ ಮತ್ತು ತುಮಕೂರು ಪೊಲೀಸರು ಸಹಕಾರ ನೀಡಿದ್ದಾರೆ. ಬೆಂಗಳೂರಿಂದ ಎರಡು



ಕಾರುಗಳಲ್ಲಿ ಹತ್ತಕ್ಕೂ ಹೆಚ್ಚು ಅಧಿಕಾರಿಗಳು ಆಗಮಿಸಿ ಮಾಹಿತಿ ಕಲೆ ಹಾಕಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಶಂಕಿತ ಉಗ್ರನ ಸುಳಿವು ಕೊಟ್ಟವರಿಗೆ 10 ಲಕ್ಷ ರೂ. ಬಹುಮಾನ ಘೋಷಣೆ ಮಾಡಲಾಗಿದೆ.

ಪುಟ 2

## ಸಂಕ್ಷಿಪ್ತ ಸುದ್ದಿ

### ಚಿಕ್ಕೋಡಿ ಗೆಲ್ಲಲು ರಣತಂತ್ರ, ಸವದಿಗೆ ಆಫರ್ ಕೊಟ್ಟ ಕಾಂಗ್ರೆಸ್



**ಬೆಳಗಾವಿ:** ಲೋಕಸಭಾ ಚುನಾವಣೆಗೆ ದಿನಗಣನೆ ಶುರುವಾಗಿದೆ. ಚಿಕ್ಕೋಡಿ ಅಖಾಡವನ್ನು ಗೆಲ್ಲಲು ಕಾಂಗ್ರೆಸ್ ಸ್ಪೆಷಲ್ ರಣತಂತ್ರ ಹೆಣೆದಿದೆ. ಚಿಕ್ಕೋಡಿ ಕ್ಷೇತ್ರ ಗೆಲ್ಲಲು ಲಕ್ಷ್ಮಣ ಸವದಿಗೆ ಸ್ಪೆಷಲ್ ಟಾಸ್ಕ್ ನೀಡಿ ಆಫರ್ ಒಂದನ್ನು ನೀಡಿದೆ.

ಪುಟ 2

### ಬೆಂಗಳೂರು ನೀರಿನ ಬಿಕ್ಕಟ್ಟು ಬಗೆಹರಿಸಲು ಸರ್ಕಾರ ಕೈಗೊಂಡ ಕ್ರಮ?



**ಬೆಂಗಳೂರು:** ಬೆಂಗಳೂರು ನಗರವು ಇತಿಹಾಸದಲ್ಲಿಯೇ ಅತಿದೊಡ್ಡ ನೀರಿನ ಬಿಕ್ಕಟ್ಟನ್ನು ಎದುರಿಸುತ್ತಿದೆ. ನೀರು ಸರಬರಾಜು ಕಡಿತ, ಖಾಲಿ ಬಕೆಟ್‌ಗಳನ್ನು ಹಿಡಿದು ನಿಂತಿರುವ ಮಹಿಳೆಯರ ಉದ್ದನೆಯ ಸರದಿ ಇತ್ಯಾದಿ ದೃಶ್ಯಗಳು ನಗರದಲ್ಲಿ ದಿನ ಬೆಳಗಾದರೆ ಸಾಮಾನ್ಯವಾಗಿ ಕಂಡುಬರುತ್ತಿವೆ.

ಪುಟ 2

### ಎನ್‌ಎಲ್ ಸಿ ಇಂಡಿಯಾದ ಶೇ. 7ರಷ್ಟು ಪಾಲನ್ನು ಮಾರುತ್ತಿರುವ ಸರ್ಕಾರ

**ನವದೆಹಲಿ:** ತಮಿಳುನಾಡಿನಲ್ಲಿರುವ ಲಿಗ್ನೈಟ್ ಉತ್ಪಾದನಾ ಸಂಸ್ಥೆಯಾದ ಎನ್‌ಎಲ್‌ಸಿ ಇಂಡಿಯಾದ ತನ್ನ ಕೆಲ ಷೇರುಪಾಲನ್ನು ಸರ್ಕಾರ ಮಾರಾಟಕ್ಕಿಟ್ಟಿದೆ. ನೆಯ್ವೇಲಿ ಲಿಗ್ನೈಟ್ ಕಾರ್ಪೊರೇಶನ್ ಸಂಸ್ಥೆಯಲ್ಲಿನ ತನ್ನ ಶೇ. 7ರಷ್ಟು ಷೇರುಗಳನ್ನು ಸರ್ಕಾರ ಮಾರುತ್ತಿದೆ. ಸಾಂಸ್ಥಿಕ ಹೂಡಿಕೆದಾರರು ಮತ್ತು ರೀಟೇಲ್ ಹೂಡಿಕೆದಾರರಿಗೆ 9.7 ಕೋಟಿ ಷೇರುಗಳು ಮಾರಾಟವಾಗಲಿವೆ.

ಪುಟ 2

### ಕಾಂಗ್ರೆಸ್ ಪಟ್ಟಿ ಬಿಡುಗಡೆಗೆ ಮುಹೂರ್ತ ಫಿಕ್ಸ್

# ದೆಹಲಿಯಲ್ಲಿ ಹೈವೋಲ್ಟೇಜ್ ಸಭೆ

**ಬೆಂಗಳೂರು:** ಬಿಜೆಪಿ ವಿರುದ್ಧ ಪ್ರಬಲ ಅಭ್ಯರ್ಥಿಗಳನ್ನ ಕಣಕ್ಕಿಳಿಸೋಕೆ ಕಾಂಗ್ರೆಸ್ ಭರ್ಜರಿ ಸಿದ್ಧತೆ ನಡೆಸಿದೆ. ನಾಳೆ, ನಾಡಿದ್ದು ಎರಡು ದಿನ ದೆಹಲಿಯಲ್ಲಿ ಹೈವೋಲ್ಟೇಜ್ ಸಭೆಗಳನ್ನ ನಡೆಸಲಿದ್ದಾರೆ. ಮೂರ್ನಾಲ್ಕು ದಿನಗಳಲ್ಲಿ ಮೊದಲ ಲಿಸ್ಟ್ ಅನೌನ್ಸ್ ಆಗಲಿದ್ದು, ಸಚಿವರ ಸ್ಪರ್ಧೆ ಸಸ್ಪೆನ್ಸ್‌ಗೂ ತೆರೆ ಬೀಳುವ ಸಾಧ್ಯತೆ ಇದೆ. ಲೋಕಸಭೆ ಎಲೆಕ್ಷನ್‌ಗೆ ಯಾವುದೇ ಕ್ಷಣದಲ್ಲಿ ಮುಹೂರ್ತ ಫಿಕ್ಸ್ ಆಗಬಹುದು. ಕರ್ನಾಟಕದಲ್ಲಿ ಕನಿಷ್ಠ 18-20 ಸ್ಥಾನ ಗೆಲ್ಲಲೇಬೇಕು ಎಂದು ರಾಜ್ಯ ಕಾಂಗ್ರೆಸ್ ನಾಯಕರು ಪಣ ತೊಟ್ಟಿದ್ದಾರೆ. ಹೀಗಾಗಿ ಅರ್ಹ ಅಭ್ಯರ್ಥಿಗಳನ್ನ ಕಣಕ್ಕಿಳಿಸೋದಕ್ಕೆ ತೀರ್ಮಾನ ಮಾಡಿದ್ದು, ಅಭ್ಯರ್ಥಿಗಳ ಆಯ್ಕೆಗೆ ಹೈವೋಲ್ಟೇಜ್ ಸಭೆಗಳನ್ನ ಕರೆದಿದ್ದಾರೆ.

ನಾಳೆ ಹಾಗೂ ನಾಡಿದ್ದು ಎರಡು ದಿನ ದೆಹಲಿಯಲ್ಲಿ ಕಾಂಗ್ರೆಸ್ ಎಲೆಕ್ಷನ್ ಮೀಟಿಂಗ್ ಹಾಗೂ ಸ್ಕ್ರೀನಿಂಗ್ ಕಮಿಟಿ ಸಭೆಗಳನ್ನ ಆಯೋಜಿಸಲಾಗಿದೆ. ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ ನೇತೃತ್ವದಲ್ಲಿ ಸಿಇಸಿ ಸಭೆ ನಡೆಯಲಿದ್ದು, ಸ್ಕ್ರೀನಿಂಗ್ ಕಮಿಟಿಯಲ್ಲಿ ಶಿಫಾರಸುಗೊಂಡ ಹೆಸರುಗಳನ್ನ ಅಧಿಕೃತವಾಗಿ ಘೋಷಣೆ ಮಾಡಲಿದ್ದಾರೆ ಎನ್ನಲಾಗಿದೆ.



**15 ಕ್ಷೇತ್ರಗಳಿಗೆ ಸಿಂಗಲ್ ನೇಮ್!:** ಈಗಾಗಲೇ ಸ್ಕ್ರೀನಿಂಗ್ ಕಮಿಟಿಯಿಂದ 15 ಕ್ಷೇತ್ರಗಳಿಗೆ ಸಿಂಗಲ್ ನೇಮ್ ಶಿಫಾರಸು ಮಾಡಲಾಗಿದೆ. ನಾಳೆ ಸಂಜೆ ಆರು ಗಂಟೆಗೆ ದೆಹಲಿಯಲ್ಲಿ ಮತ್ತೊಂದು ಸುತ್ತಿನ ಸ್ಕ್ರೀನಿಂಗ್ ಕಮಿಟಿ ಮೀಟಿಂಗ್ ನಡೆಯಲಿದ್ದು, ಅಂತಿಮ ಮಾತುಕತೆ ನಡೆಯಲಿದೆ.

ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ, ಚಿಕ್ಕಬಳ್ಳಾಪುರ, ಮಂಡ್ಯ, ಹಾಸನ, ಕಲಬುರಗಿ ಸೇರಿ ಹಲವು ಕಡೆ ಹೊಸ ಮುಖಗಳಿಗೆ ಈ ಬಾರಿ ಮಣೆ ಹಾಕಲಾಗ್ತಿದೆ ಎನ್ನಲಾಗಿದೆ. ಅದು ವರ್ಕೌಟ್ ಆಗುತ್ತಾ ಅಥವಾ ಬೇರೊಬ್ಬರನ್ನ ಕಣಕ್ಕಿಳಿಸಬೇಕಾ ಅನ್ನೋ ಬಗ್ಗೆ ಚರ್ಚೆ ನಡೆಯಲಿದೆ.

ಪುಟ 2

## ನೀರಿನ ಸಮಸ್ಯೆ ಬಗೆಹರಿಸಿದರೆ ಕರ್ನಾಟಕಕ್ಕೆ ಸೇರುತ್ತೇವೆ

### ಸಿಎಂಗೆ ಮನವಿ ಮಾಡಿದ ಮಹಾರಾಷ್ಟ್ರದ ರೈತರು

**ಬೆಳಗಾವಿ:** ಮಹಾರಾಷ್ಟ್ರದ ಜತ್ತ ತಾಲೂಕಿನ ರೈತ ಮುಖಂಡರ ನಿಯೋಗವು ಬೆಳಗಾವಿಯ ಅಥಣಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯಮತ್ತು ಡಿಸಿಎಂ ಡಿಕೆ ಶಿವಕುಮಾರ್ ಅವರನ್ನು ಕಾರ್ಯಕ್ರಮದ ವೇದಿಕೆಯಲ್ಲಿ ಭೇಟಿಯಾಗಿ ನೀರಿನ ಸಮಸ್ಯೆ ಸರಿಪಡಿಸುವಂತೆ ಮನವಿ ಪತ್ರವನ್ನು ಸಲ್ಲಿಸದೆ. ನೀರಾವರಿ ಭರವಸೆ ನೀಡಿದರೆ ಕರ್ನಾಟಕಕ್ಕೆ ಸೇರಲು ಸಿದ್ಧ ಎಂದು ಅವರು ಸಲ್ಲಿಸಿದ ಮನವಿಯಲ್ಲಿ ಉಲ್ಲೇಖಿಸಲಾಗಿದೆ.



ಮಹಾರಾಷ್ಟ್ರದ ಗಡಿ ಗ್ರಾಮಗಳ ಹೊಲಗಳಿಗೆ ರಾಜ್ಯದ ನೀರಾವರಿ ಯೋಜನೆಗಳಿಂದ ಸ್ವಲ್ಪ ನೀರು ಬಿಡುವಂತೆ ಮನವಿ ಪತ್ರದಲ್ಲಿ ಒತ್ತಾಯಿಸಲಾಗಿದೆ. ದಯವಿಟ್ಟು ನಮಗೆ ನೀರು ಕೊಡಿ ಅಥವಾ ನಮ್ಮನ್ನು ಕರ್ನಾಟಕಕ್ಕೆ ಸೇರಿಸಿ ಎಂದು ಪತ್ರದಲ್ಲಿ ತಿಳಿಸಲಾಗಿದೆ. ಜತ್ತ ತಾಲೂಕಿನ ಸುಮಾರು 40 ಗ್ರಾಮಗಳು ತೀವ್ರ ನೀರಿನ ಕೊರತೆಯಿಂದ ಬಳಲುತ್ತಿವೆ. ಬಿಕ್ಕಟ್ಟಿಗೆ ಶಾಶ್ವತ ಪರಿಹಾರವನ್ನು ಕಂಡುಕೊಳ್ಳುವಂತೆ ಮಹಾರಾಷ್ಟ್ರ ಸರ್ಕಾರಕ್ಕೆ ನಾವು ಪದೇ ಪದೇ ಮಾಡಿದ ಮನವಿಯನ್ನು ನಿರ್ಲಕ್ಷಿಸಲಾಗಿದೆ. ಇಡೀ ತಾಲೂಕು ಬರಪೀಡಿತವಾಗಿದ್ದರೂ ಮಹಾರಾಷ್ಟ್ರ ಸರಕಾರ ಬರಪೀಡಿತ ಎಂದು ಘೋಷಿಸುವಲ್ಲಿ ವಿಫಲವಾಗಿದೆ ಎಂದು ನಿಯೋಗ ಆರೋಪಿಸಿದೆ.

ಪುಟ 2

## ಮತ್ತೆ ಸಿಬಿಐ ವಶಕ್ಕೆ ಶೇಖ್ ಶಹಜಹಾನ್ ಬ್ಯಾನರ್ಜಿ ಸರ್ಕಾರಕ್ಕೆ ಮುಖಭಂಗ!



**ಕೋಲ್ಕತ್ತಾ:** ಸಂದೇಶ್‌ಖಾಲಿ ಪ್ರಕರಣ ಪ್ರಮುಖ ಆರೋಪಿ ಶೇಖ್ ಶಹಜಹಾನ್‌ನನ್ನು ಸಿಬಿಐಗೆ ಒಪ್ಪಿಸುವ ವಿಚಾರದಲ್ಲಿ ಮಮತಾ ಬ್ಯಾನರ್ಜಿ ಸರ್ಕಾರಕ್ಕೆ ಮುಖಭಂಗ ಉಂಟಾಗಿದೆ. ಕೊಲ್ಕತ್ತಾ ಹೈಕೋರ್ಟ್ ಗರಂ ಆಗಿ ಗಡುವು ನೀಡಿದ ಹಿನ್ನೆಲೆಯಲ್ಲಿ ಶೇಖ್ ಶಹಜಹಾನ್‌ನನ್ನು ಪೊಲೀಸರು ಸಿಬಿಐ ವಶಕ್ಕೆ ಒಪ್ಪಿಸಿದ್ದಾರೆ.

ಪಶ್ಚಿಮ ಬಂಗಾಳದ ಸಂದೇಶ್‌ಖಾಲಿಯಲ್ಲಿ ಇ.ಡಿ ಅಧಿಕಾರಿಗಳ ಮೇಲೆ ದಾಳಿ, ಬುಡಕಟ್ಟು ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ, ರೈತರ ಕೃಷಿ ಜಮೀನು ಅತಿಕ್ರಮಣ ಸೇರಿ ಹಲವು ಪ್ರಕರಣಗಳಲ್ಲಿ

ಪುಟ 2

### ಕರ್ನಾಟಕದಲ್ಲಿ ಹೆದ್ದಾರಿ ಯೋಜನೆಗೆ

## 2,675 ಕೋಟಿ ರೂ. ಮಂಜೂರು

**ನವದೆಹಲಿ:** ಪಣಜಿ-ಹೈದರಾಬಾದ್ EC10 ಕಾರಿಡಾರ್ ಅಡಿಯಲ್ಲಿ ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಯ ರಾಷ್ಟ್ರೀಯ ಹೆದ್ದಾರಿ-748ಎ ಬೆಳಗಾವಿ-ಹುನಗುಂದ-ರಾಯಚೂರು ವಿಭಾಗದ 92.40 ಕಿಮೀ ಉದ್ದದ ಹೆದ್ದಾರಿಯನ್ನು ಚತುಷ್ಪಥ ರಸ್ತೆಯಾಗಿ ಉನ್ನತೀಕರಿಸಲು ರಾಷ್ಟ್ರೀಯ ಹೆದ್ದಾರಿ ಸಚಿವಾಲಯ 2,675 ಕೋಟಿ ರೂ. ಮಂಜೂರು ಮಾಡಿದೆ. ಸಾರ್ವಜನಿಕ ಮತ್ತು ಖಾಸಗಿ ಪಾಲುದಾರಿಯಲ್ಲಿ ಹೆದ್ದಾರಿ ಉನ್ನತೀಕರಿಸಲಾಗುತ್ತದೆ.



ಈ ಯೋಜನೆಯು ಪಣಜಿ-ಹೈದರಾಬಾದ್ ಆರ್ಥಿಕ ಕಾರಿಡಾರ್‌ನ ಅವಿಭಾಜ್ಯ ಅಂಗವಾಗಿದೆ. EC10ಯೋಜನೆಯು ಪಣಜಿ ಸೇರಿದಂತೆ ಪ್ರಮುಖ ಕೈಗಾರಿಕಾ ಕೇಂದ್ರಗಳನ್ನು ಸಂಪರ್ಕಿಸುತ್ತದೆ. ಈ EC10 ಮೀನುಗಾರಿಗೆ ಮತ್ತು ಪ್ರವಾಸೋದ್ಯಮಕ್ಕೆ ಹೆಸರುವಾಸಿಯಾಗಿರುವ ಪಣಜಿ, ಆಹಾರ ಧ್ಯಾನಗಳು ಮತ್ತು ಹಾಲಿನ ಉತ್ಪನ್ನಗಳಿಗೆ ಹೆಸರುವಾಸಿಯಾಗಿರುವ ಬೆಳಗಾವಿ, ಅಕ್ಕಿ, ಹತ್ತಿ, ಶೇಂಗಾ ಮತ್ತು ಬೇಳೆಕಾಳುಗಳಿಗೆ ಹೆಸರುವಾಸಿಯಾಗಿರುವ ರಾಯಚೂರು ಮತ್ತು ಐಟಿ, ಫಾರ್ಮ್ ಮತ್ತು ಹೆಲ್ತ್‌ಕೇರ್ ಗೆ ವಿಶಿಷ್ಟ ಸ್ಥಾನ ಪಡೆದಿರುವ ಹೈದರಾಬಾದ್ ಸೇರಿದಂತೆ ಪ್ರಮುಖ ಕೈಗಾರಿಕಾ ಕೇಂದ್ರಳನ್ನು ಸಂಪರ್ಕಿಸುತ್ತದೆ.

ಪುಟ 2

### ಭದ್ರತಾ ಲೋಪ: ಶಾಸಕರು, ಸಚಿವರಿಂದ ಪೋನ್ ಮಾಡಿಸಿ ವಿಧಾನಸೌಧದ ಒಳಗೆ ಹೋಗುತ್ತಾರೆ

## ಭದ್ರತಾ ಸಿಬ್ಬಂದಿ ಅಸಮಾಧಾನ

**ಬೆಂಗಳೂರು:** ವಿಧಾನಸೌಧದಲ್ಲಿ ಪಾಕಿಸ್ತಾನ ಜಿಂದಾಬಾದ್ ಅಂತ ಘೋಷಣೆ ಕೂಗಿರುವುದು ರಾಷ್ಟ್ರಾದ್ಯಂತ ಸುದ್ದಿಯಾಗಿದೆ. ರಾಜ್ಯಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಯ್ಯದ್ ನಾಸೀರ್ ಹುಸೇನ್ ಗೆಲುವಿನ ಸಂಭ್ರಮಾಚರಣೆಗೆ ಕಾರ್ಯಕರ್ತರು ಮತ್ತು ಬೆಂಬಲಿಗರು ವಿಧಾನಸೌಧದಲ್ಲಿ ಜಮಾಯಿಸಿದ್ದರು. ಸಂಭ್ರಮಾಚರಣೆ ವೇಳೆ ನಾಸೀರ್ ಸಾಬ್ ಜಿಂದಾಬಾದ್ ಜೊತೆಗೆ ಪಾಕಿಸ್ತಾನ್ ಜಿಂಬಾದ್ ಎಂದು ಘೋಷಣೆ ಕೂಗಲಾಗಿತ್ತು. ಪಾಕ್ ಪರ ಘೋಷಣೆ ಕೂಗಿದ ಆರೋಪಿಗಳನ್ನು ಬಂಧಿಸಲಾಗಿದ್ದು, ಪ್ರಕರಣ ತನಿಖೆಯಲ್ಲಿ. ಇನ್ನು ಪಾಕ್ ಪರ ಘೋಷಣೆ ಕೂಗಿದ ದಿನ ವಿಧಾನಸೌಧದಲ್ಲಿ ಭದ್ರತಾ ಲೋಪ ಆಗಿದ್ದು, ಪಾಸ್ ಇಲ್ಲದವರೂ ಪ್ರವೇಶ ಮಾಡಿದ್ದರು. ಈ ಹಿನ್ನೆಲೆಯಲ್ಲಿ



ಹಿರಿಯ ಅಧಿಕಾರಿಗಳು ಅಂದು ಭದ್ರತೆಗೆ ಇದ್ದವರನ್ನು ವಿಚಾರಣೆ ನಡೆಸಿದ್ದು, ಭದ್ರತಾ ಸಿಬ್ಬಂದಿ ಬೇಸರ ವ್ಯಕ್ತಪಡಿಸಿದ್ದಾರೆ.

ಕಾರ್ಯಕರ್ತರು ಶಾಸಕರು ಹಾಗೂ ಸಚಿವರ ಹೆಸರು ಹೇಳಿಕೊಂಡು ಅಂದು ವಿಧಾನಸೌಧಕ್ಕೆ ಬಂದಿದ್ದರು. ಪ್ರಶ್ನಿಸಿದರೇ ಶಾಸಕರಿಂದಲೇ ಫೋನ್ ಮಾಡಿಸಿ ಒಳಗೆ ಹೋಗುತ್ತಾರೆ. ಫಲಿತಾಂಶದ ದಿನ ಬಹುತೇಕರು ಶಾಸಕರ ಹಾಗೂ ಅಭ್ಯರ್ಥಿಗಳ ಕಾರುಗಳಲ್ಲಿ ಬಂದರು. ಒಬ್ಬಂಟಿಯಾಗಿ ಬರುವವರ ಬಳಿ ಪಾಸ್ ಇಲ್ಲದಿದ್ದರೆ ತಡೆಯುತ್ತೇವೆ. ಆದರೆ ಅವರು ಶಾಸಕರು ಹಾಗೂ ಸಚಿವರ ಹೆಸರು ಹೇಳಿಕೊಂಡು ಒಳಗೆ ಹೋಗಲು ಮುಂದಾಗುತ್ತಾರೆ. ಆದರೂ ಬಿಡದೆ ಹೋದರೆ ಅವರಿಂದಲೇ ಕರೆ ಮಾಡಿಸಿಕೊಂಡು ಒಳ ಹೋಗುತ್ತಾರೆ. ಇಂತಹ ಸಂದರ್ಭಗಳಲ್ಲಿ

ಪುಟ 2

## ರಾಜ್ಯಕ್ಕೆ ಹೀಟ್ ವೇವ್ ಎಚ್ಚರಿಕೆ!

**ಬೆಂಗಳೂರು:** ದೇಶದ ಮೆಟ್ರೋ ಸಿಟಿಗಳಲ್ಲಿ ಬೆಂಗಳೂರು ಕೂಲ್ ಸಿಟಿ ಅನ್ನೋ ಹೆಸರನ್ನು ಅಳಿಸಿಕೊಂಡು ಹಾಟ್ ಸಿಟಿ ಆಗಿ ಬದಲಾಗ್ತಿದೆ. ಬೆಳಗ್ಗೆ 10 ಗಂಟೆ ಆಗ್ತಿದ್ದ ಹಾಗೆ ಬೇಸಿಗೆ ತಾಪ ಜನರನ್ನು ಸಾಕಪ್ಪ ಸಾಕು ಎನಿಸುವಂತಿದೆ. ಉರಿಯುವ ಬಿಸಿಲಿನಲ್ಲಿ ಹೀಟ್ ಸ್ಟ್ರೋಕ್ ಭೀತಿಯೂ ಕಾಡ್ತಿದೆ. ವೈದ್ಯರು ಕೂಡ ಎಚ್ಚರ ನೀಡ್ತಿದ್ದಾರೆ.



**ಆರೋಗ್ಯ ಇಲಾಖೆ ಮಾರ್ಗಸೂಚಿ ಬಿಡುಗಡೆ:** ಬೇಸಿಗೆ ಆಗುವಾಗಲೇ ಈ ಬಾರಿ ಬಿಸಿಲು ಜಾಸ್ತಿ ಆಗಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ ಈ ವರ್ಷ ಬೆಂಗಳೂರು ಹೆಚ್ಚು ಹಾಟ್ ಆಗಿದೆ. ಬಿರು ಬಿಸಿಲಿನ ಝಳಕ್ಕೆ ಸಿಟಿ ಜನ ಬಸವಳಿದು ಹೋಗಿದ್ದಾರೆ. ರಾಜ್ಯ ರಾಜಧಾನಿಯಲ್ಲಿ ತಾಪಮಾನ ಏರಿಕೆ ಕಂಡಿದ್ದು, ಇದರ ಬೆನ್ನಲ್ಲೇ ಆರೋಗ್ಯ ಇಲಾಖೆ ಮಾರ್ಗಸೂಚಿ ಬಿಡುಗಡೆ ಮಾಡಿದೆ. ಮುಂದಿನ ಕೆಲ ದಿನಗಳ ಕಾಲ ಇದೇ ರೀತಿ ಗರಿಷ್ಠ ತಾಪಮಾನ ಇರಲಿದ್ದು, ಬೆಳಗ್ಗೆ 11 ರಿಂದ 4 ಗಂಟೆಯವರೆಗೂ ಬಿಸಿಲಿಗೆ ಬಾರದಂತೆ ಆರೋಗ್ಯ ಇಲಾಖೆ ಸುತ್ತೋಲೆ ಹೊರಡಿಸಿದೆ.

ಪುಟ 2

## ಮಂಡ್ಯದಿಂದ ಕುಮಾರಸ್ವಾಮಿ ಸ್ಪರ್ಧೆಗೆ ನಾಯಕರ ಒತ್ತಾಯ

**ಮಂಡ್ಯ:** ಲೋಕಸಭಾ ಚುನಾವಣೆ ಸಮೀಪದಲ್ಲಿದ್ದು, ಕರ್ನಾಟಕದಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿ ಒಕ್ಕೂಟ ಸೀಟು ಹಂಚಿಕೆಯ ಮಾತುಕತೆ ನಡೆಸುತ್ತಿದೆ. ಈಗಾಗಲೇ ಮಂಡ್ಯ ಕ್ಷೇತ್ರದ ಟಿಕೆಟ್ ಜೆಡಿಎಸ್‌ಗೆ ಫಿಕ್ಸ್ ಎಂದು ಹೇಳಲಾಗುತ್ತಿದ್ದರೂ ಹಾಲಿ ಸಂಸದೆ ಸುಮಲತಾ ಅವರು ಬಿಜೆಪಿ ಟಿಕೆಟ್‌ಗಾಗಿ ಪೈಪೋಟಿ ನಡೆಸುತ್ತಿದ್ದಾರೆ. ಈ ನಡುವೆ, ಮಂಡ್ಯದಿಂದ ಹೆಚ್‌ಡಿ ಕುಮಾರಸ್ವಾಮಿ ಸ್ಪರ್ಧೆಗೆ ಜೆಡಿಎಸ್ ನಾಯಕರ ಒತ್ತಾಯಗಳು ಹೆಚ್ಚುತ್ತಿದ್ದು, ನಿನ್ನೆ ನಡೆದ ಸಭೆಯಲ್ಲೂ ಮಂಡ್ಯದಿಂದ ಕಣಕ್ಕಿಳಿಯುವಂತೆ ಒತ್ತಾಯಿಸಿದ್ದಾರೆ. ಇನ್ನೊಂದೆಡೆ, ಬಿಜೆಪಿ ಜೊತೆಗಿನ ಸಭೆಯಲ್ಲಿ ಹೆಚ್ಚುವರಿಯಾಗಿ ಚಾಮರಾಜನಗರ ಕ್ಷೇತ್ರದವನ್ನು ಕೇಳುವ ಸಾಧ್ಯತೆ ಇದೆ.



ಮಾರ್ಚ್ 10 ರಂದು ಸೀಟು ಹಂಚಿಕೆ ವಿಚಾರವಾಗಿ ದೆಹಲಿಗೆ ತೆರಳಲಿರುವ ಹೆಚ್ ಡಿ ಕುಮಾರಸ್ವಾಮಿ ಅವರು ಬಿಜೆಪಿ ನಾಯಕರ ಜೊತೆ ಸಭೆಯಲ್ಲಿ ಭಾಗಿ ಮಾತುಕತೆ ನಡೆಸಲಿದ್ದಾರೆ. ಮಂಡ್ಯ, ಹಾಸನ ಕೋಲಾರ ಕ್ಷೇತ್ರಗಳ ಜೊತೆಗೆ ಹೆಚ್ಚುವರಿಯಾಗಿ ಚಾಮರಾಜನಗರ ಲೋಕಸಭಾ ಕ್ಷೇತ್ರಕ್ಕೆ ಬೇಡಿಕೆ ಇಡುವ ಸಾಧ್ಯತೆ ಇದೆ.

ಅತ್ತ ಚಾಮರಾಜನಗರ ಲೋಕಸಭಾ ಕ್ಷೇತ್ರ ಬಿಟ್ಟುಕೊಡಲು ಬಿಜೆಪಿ ನಾಯಕರು ನಕಾರ ವ್ಯಕ್ತಪಡಿಸುತ್ತಿದ್ದಾರೆ. ಈ ಸಂಬಂಧ ಈಗಾಗಲೇ ಪ್ರಾಥಮಿಕ ಹಂತದ ಮಾತುಕತೆ ನಡೆಸಲಾಗಿದೆ. ದೂರವಾಣಿ ಮೂಲಕವೇ ಬಿಜೆಪಿ ನಾಯಕರ ಜತೆ ಮಾತುಕತೆ ನಡೆಸಿರುವ ಕುಮಾರಸ್ವಾಮಿ, ಭಾನುವಾರದ ಸಭೆಯಲ್ಲಿ ಮೈತ್ರಿ ಸೀಟು ಹಂಚಿಕೆ ಅಂತಿಮಗೊಳ್ಳುವ ಸಾಧ್ಯತೆ ಇದೆ. ಕ್ಷೇತ್ರವಾರು ವಿವಿಧ ಮಾಹಿತಿ, ಸರ್ವೆ ಸೇರಿದಂತೆ ಎಲ್ಲಾ ವಿವರಗಳೊಂದಿಗೆ ಮಾತುಕತೆ ನಡೆಯಲಿದೆ.

ಪುಟ 2

### 15 ವರ್ಷದ ಬಳಿಕ ಘರ್ ವಾಪ್ಸಿ

## ಮರಳಿ ಬಿಜೆಪಿ ಜೊತೆ ಬಿಜೆಡಿ ಮೈತ್ರಿ?

**ನವದೆಹಲಿ:** ಲೋಕಸಭಾ ಚುನಾವಣೆಯಲ್ಲಿ ಈಗಾಗಲೇ ಹಲವು ಪಕ್ಷಗಳ ಜೊತೆ ಮೈತ್ರಿ ಮಾಡಿಕೊಂಡಿರುವ ಬಿಜೆಪಿ ಈಗ ಒಡಿಶಾದಲ್ಲೂ ಬಿಜೆಡಿ ಜೊತೆ ಚುನಾವಣಾ ಪೂರ್ವ ಮೈತ್ರಿ ಮಾಡಿಕೊಳ್ಳುವ ಸಾಧ್ಯತೆಯಿದೆ.

ಎರಡು ಪಕ್ಷದಲ್ಲೂ ಬಿರುಸಿನ ಮಾತುಕತೆ ನಡೆಯುತ್ತಿದ್ದು ಒಂದು ವೇಳೆ ಮೈತ್ರಿ ಮಾಡಿಕೊಂಡರೆ 15 ವರ್ಷದ ಬಳಿಕ ಬಿಜೆಡಿ ಮರಳಿ ಎನ್‌ಡಿಎ ಮೈತ್ರಿಕೂಟವನ್ನು ಸೇರಿದಂತಾಗುತ್ತದೆ. ಮೈತ್ರಿಯ ಬಗ್ಗೆ ಯಾವುದೇ ಅಧಿಕೃತ ಘೋಷಣೆಯಾಗಿಲ್ಲ. ಆದರೆ ಎರಡು ಪಕ್ಷದಲ್ಲಿ ನಡೆಯುತ್ತಿರುವ ವಿದ್ಯಮಾನಗಳು ಮೈತ್ರಿ ಬಗ್ಗೆ ಸುಳಿವು ನೀಡುತ್ತಿದೆ.

ಬಿಜೆಡಿ ನಾಯಕರು ಮುಖ್ಯಮಂತ್ರಿ ನವೀನ್ ಪಟ್ನಾಯಕ್ ನಿವಾಸದಲ್ಲಿ ಸುದೀರ್ಘ ಸಭೆ ನಡೆಸಿದ್ದರೆ ದೆಹಲಿಯಲ್ಲಿ ಬಿಜೆಪಿ ನಾಯಕರು ಕೂಡ ಚುನಾವಣೆ



ಕುರಿತು ಬಿರುಸಿನ ಚರ್ಚಿಸಿದ್ದಾರೆ.ಎರಡು ಪಕ್ಷಗಳು 1998 ರಿಂದ 2009 ರವರೆಗೆ ಮಿತ್ರಪಕ್ಷಗಳಾಗಿದ್ದವು. ಮುಖ್ಯಮಂತ್ರಿ ಯಾಗುವ ಮೊದಲು ನವೀನ್ ಪಟ್ನಾಯಕ್ ಅವರು 1990ರ ದಶಕದಲ್ಲಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಸಂಪುಟದಲ್ಲಿ ಕೇಂದ್ರ ಸಚಿವರಾಗಿದ್ದರು. 2008ರಲ್ಲಿ ನಡೆದ ಕಂಧಮಾಲ್ ಗಲಭೆಯ ನಂತರ ಬಿಜೆಪಿ ಜೊತೆಗಿನ ಮೈತ್ರಿಗೆ ಬಿಜೆಡಿ ಗುಡ್‌ಬೈ ಹೇಳಿತ್ತು.

ಪುಟ 2

# ಅತ್ತೆ ಬೇಗ ಸಾಯಬೇಕು 50 ರೂ. ನೋಟ್ ಮೇಲೆ ಹರಕೆ ಬರೆದ ಸೊಸೆ!




**ಕಲಬುರಗಿ:** ಪ್ರಸಿದ್ಧ ದೇಗುಲಗಳ ಹುಂಡಿ ಎಣಿಕೆ ಕಾರ್ಯ ಮಾಡುವಾಗ ಅನೇಕ ರೀತಿಯ ಚೀಟಿಗಳು ಸಿಗುತ್ತವೆ. ಇವುಗಳಲ್ಲಿ ಪ್ರೀತಿ-ಪ್ರೇಮ, ಮದುವೆ, ಪತಿ-ಪತ್ನಿ, ಅತ್ತೆ-ಸೊಸೆ ನಡುವಿನ ಜಗಳಗಳು, ಪಕ್ಕದಮನೆಯವರ ವಿಚಾರ ಹೀಗೆ ದೇವರಿಗೆ ಹರಕೆ ಕಟ್ಟಿ ಚೀಟಿ ಬರೆದು ಹಾಕುವುದನ್ನು ನೋಡಿರುತ್ತೇವೆ. ಅಂಥದ್ದೇ ವಿಚಾರವೊಂದು ಇದೀಗ ಕಲಬುರಗಿಯಲ್ಲಿಯೂ ಬೆಳಕಿಗೆ ಬಂದಿದೆ.

ಕೆಲ ದಿನಗಳ ಹಿಂದೆ ಕಲಬುರಗಿ ಜಿಲ್ಲೆಯ ಅಫಜಲಪುರ ತಾಲೂಕಿನ ಗಾಣಗಾಪುರ ಕ್ಷೇತ್ರ, ದೇವಲಗಾಣಗಾಪುರ ದತ್ತನಹುಂಡಿ ಎಣಿಕೆ ಕಾರ್ಯ ನಡೆದಿತ್ತು. ಬೇಡಿದ ವರ ಕೊಡುವ ಶ್ರೀಕ್ಷೇತ್ರ ದತ್ತಾತ್ರೇಯ ದೇವಸ್ಥಾನದ ಹುಂಡಿಯಲ್ಲಿ ವಿಶೇಷ ನೋಟ್ ಸಿಕ್ಕಿದೆ. ಈ ನೋಟಿನಲ್ಲಿ ಬರೆದಿದ್ದನ್ನು ಓದಿದ ಹುಂಡಿ ಎಣಿಕಾರ್ಯ ಮಾಡುತ್ತಿರುವ ಸಿಬ್ಬಂದಿಯೇ ಅಚ್ಚರಿ ವ್ಯಕ್ತಪಡಿಸಿದ್ದಾರೆ.

**ಚೀಟಿಯಲ್ಲಿ ಏನಿತ್ತು..?:** ಸೊಸೆಯೊಬ್ಬಳು ತನ್ನ ಅತ್ತೆಯ ಮೇಲಿನ ಸಿಟ್ಟನ್ನು ಈ ನೋಟಿನಲ್ಲಿ ಬರೆಯುವ ಮುಖಾಂತರ ತೋರಿಸಿಕೊಂಡಿದ್ದಾಳೆ. ಅತ್ತೆ ಬೇಗ ಸಾಯಬೇಕು ಎಂದು ಹರಕೆ ಹೊತ್ತಿದ್ದಾಳೆ. ಅಲ್ಲದೆ 50 ರೂಪಾಯಿ ನೋಟಿನ ಮೇಲೆ ''ಅತ್ತೆ ಬೇಗ ಸಾಯಬೇಕು'' ಎಂದು ಬರೆದು ದತ್ತಾತ್ರೇಯ ದೇವಸ್ಥಾನದ ಹುಂಡಿಗೆ ಹಾಕಿದ್ದಾಳೆ. ಈ ವಿಚಾರ ಇದೀಗ ಸೋಶಿಯಲ್ ಮೀಡಿಯಾದಲ್ಲಿ ಚರ್ಚೆಗೆ ಗ್ರಾಸವಾಗಿದೆ.

# ಶಂಕಿತ ಉಗ್ರನ ಸುಳಿವು ಕೊಟ್ಟವರಿಗೆ 10 ಲಕ್ಷ ರೂ.

**ಬೆಂಗಳೂರು:** ರಾಮೇಶ್ವರಂ ಕೆಫೆ ಬ್ಲಾಸ್ಟ್ ಪ್ರಕರಣಕ್ಕೆ ಸಂಬಂಧಿಸಿದಂತೆ ಶಂಕಿತ ಉಗ್ರನ ಸುಳಿವು ಕೊಟ್ಟವರಿಗೆ 10 ಲಕ್ಷ ರೂ. ಬಹುಮಾನ ಘೋಷಣೆ ಮಾಡಲಾಗಿದೆ. ಎನ್‌ಐಎಯಿಂದ 10 ಲಕ್ಷ ಬಹುಮಾನ ಘೋಷಣೆ ಮಾಡಿದ್ದು, ಶಂಕಿತನ ಸುಳಿವು ನೀಡಿದವರ ಹೆಸರು ಗೌಪ್ಯವಾಗಿ ಇಡುವುದಾಗಿ ಎನ್‌ಐಎ ತಿಳಿಸಿದೆ. ಶಂಕಿತ ಉಗ್ರನ ಸುಳಿವು ಸಿಕ್ಕಲ್ಲಿ 08029510900, 8904241100 ನಂಬರಿಗೆ ಕರೆ ಮಾಡುವಂತೆ ಸೂಚನೆ ನೀಡಲಾಗಿದೆ. ಎನ್‌ಐಎ ಟ್ವಿಟ್ಟರ್‌ನಲ್ಲಿ ಶಂಕಿತ ಬಾಂಬರ್‌ನ ಫೋಟೋ ರಿವೀಲ್ ಮಾಡಿದ್ದು, ರಾಮೇಶ್ವರಂ ಬಾಂಬ್ ಬ್ಲಾಸ್ಟ್ ರುವಾರಿಯ ಸುಳಿವು ನೀಡಿದವರಿಗೆ 10 ಲಕ್ಷ ನಗದು ಬಹುಮಾನ ನೀಡಲಾಗುತ್ತದೆ. ಮುಖಕ್ಕೆ ಮಾಸ್ಕ್ ಇಲ್ಲದೇ ಇರುವ ಹತ್ತಿರದ ಫೋಟೋವೊಂದನ್ನು ಎನ್‌ಐಎ ರಿಲೀಸ್ ಮಾಡಿದೆ. ಎನ್‌ಐಎ ಇಂದ ಆರೋಪಿಗಾಗಿ ತೀವ್ರ ತಲಾಷ್ ನಡೆಯುತ್ತಿದೆ. ಇದುವರೆಗೂ ಆರೋಪಿ ಹೋಲುವ ಫೋಟೋ ಇರಲಿಲ್ಲ. ಎನ್‌ಐಎ ಬಿಡುಗಡೆ ಮಾಡಿರುವ ಫೋಟೋದಲ್ಲಿ ಅಲ್ಪ ಸ್ವಲ್ಪ ಮುಖ ಚಹರೆ ಪತ್ತೆಯಾಗಿದೆ.



# ಕರ್ನಾಟಕದ ಎಲ್ಲ ಶಾಲೆಗಳ 5, 8, 9ನೇ ತರಗತಿಗಳ ಬೋರ್ಡ್ ಪರೀಕ್ಷೆ ರದ್ದು

**ಬೆಂಗಳೂರು:** ರಾಜ್ಯ ಪಠ್ಯಕ್ರಮ ಅನುಸರಿಸುತ್ತಿರುವ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳಲ್ಲಿನ 5,8,9ನೇ ತರಗತಿಗಳ ಬೋರ್ಡ್ ಪರೀಕ್ಷೆಯನ್ನು ರದ್ದು ಮಾಡಿ ಹೈಕೋರ್ಟ್ ಆದೇಶ ಹೊರಡಿಸಿದೆ. ರಾಜ್ಯ ಸರ್ಕಾರ 5,8,9ನೇ ತರಗತಿಗಳಿಗೆ ಬೋರ್ಡ್ ಪರೀಕ್ಷೆ ನಿಗದಿಪಡಿಸಿತ್ತು. ಸರ್ಕಾರದ ಸುತ್ತೋಲೆಯನ್ನು ಪ್ರಶ್ನಿಸಿ ರೂಪ್ಸಾ ಅನುದಾನಿತ ಖಾಸಗಿ ಶಾಲೆಗಳ ಒಕ್ಕೂಟದ ಅಧ್ಯಕ್ಷ ಲೋಕೇಶ್ ತಾಳಿಕಟ್ಟೆ ಅವರು ಹೈಕೋರ್ಟ್‌ನಲ್ಲಿ ರಿಟ್ ಅರ್ಜಿ ಸಲ್ಲಿಸಿದ್ದರು. ಅರ್ಜಿ ವಿಚಾರಣೆ ನಡೆಸಿದ ನ್ಯಾಯ ಪೀಠ 5, 8, 9ನೇ ತರಗತಿಗಳ ಬೋರ್ಡ್ ಪರೀಕ್ಷೆಯನ್ನು ರದ್ದು ಮಾಡಿದೆ.



2023-24ನೇ ಸಾಲಿನಿಂದ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿ ವತಿಯಿಂದ 5, 8, 9ನೇ ತರಗತಿಗಳ ವಿದ್ಯಾರ್ಥಿಗಳಿಗೆ ಸಂಕಲನಾತ್ಮಕ ಮೌಲ್ಯಮಾಪನ-2 (ಬೋರ್ಡ್ ಪರೀಕ್ಷೆ) ನಡೆಸಲು ಸರ್ಕಾರ ಆದೇಶಿಸಿತ್ತು. ಹಾಗೇ 11ನೇ ತರಗತಿಯ ವಿದ್ಯಾರ್ಥಿಗಳಿಗೆ ವಾರ್ಷಿಕ ಪರೀಕ್ಷೆಯನ್ನು ನಡೆಸಲು ಅನುಮತಿ ನೀಡಿತ್ತು. ಸರ್ಕಾರದ ಈ ನಿರ್ಧಾರವನ್ನು ಪ್ರಶ್ನಿಸಿ ಅನುದಾನ ರಹಿತ ಶಾಲೆಗಳ ಸಂಘ ಹೈಕೋರ್ಟ್ ಮೆಟ್ಟಿಲೇರಿತ್ತು.

ರಾಜ್ಯ ಸರ್ಕಾರದ ಆದೇಶ ನಿರಂತರ ಮತ್ತು ಸಮಗ್ರ ಮೌಲ್ಯಮಾಪನ (ಸಿಸಿಇ) ಮಾನದಂಡಗಳಿಗೆ ವಿರುದ್ಧವಾಗಿದೆ ಎಂದು ರೂಪ್ಸಾ ಅನುದಾನಿತ ಖಾಸಗಿ ಶಾಲೆಗಳ ಒಕ್ಕೂಟ ನ್ಯಾಯಾಲಯದಲ್ಲಿ ವಾದಿಸಿತು. ವಾದ-ಪ್ರತಿವಾದ ಆಲಿಸಿದ ನ್ಯಾಯಾಲಯ ರೂಪ್ಸಾ ಪರವಾಗಿ ತೀರ್ಪು ನೀಡಿದೆ. 5,8,9ನೇ ತರಗತಿಗಳ ಬೋರ್ಡ್ ಪರೀಕ್ಷೆಗಳನ್ನು ರದ್ದುಗೊಳಿಸಿದೆ. ಮುಂದಿನ ವಾರದಿಂದಲೇ ಪರೀಕ್ಷೆಗಳು ಪ್ರಾರಂಭವಾಗಲಿದ್ದು, ಹೈಕೋರ್ಟ್‌ನ ಈ ಆದೇಶದಿಂದ ಶಿಕ್ಷಣ ಇಲಾಖೆ ಅಧಿಕಾರಿಗಳಲ್ಲಿ ಗೊಂದಲ ಉಂಟಾಗಿದೆ.

ರೂಪ್ಸಾ ಅನುದಾನಿತ ಖಾಸಗಿ ಶಾಲೆಗಳ ಒಕ್ಕೂಟದ ಕರ್ನಾಟಕ ಅಧ್ಯಕ್ಷ ಲೋಕೇಶ್ ತಾಳಿಕಟ್ಟೆ ಅವರು ಹೈಕೋರ್ಟ್ ಆದೇಶವನ್ನು ಸ್ವಾಗತಿಸಿದ್ದಾರೆ. ಮತ್ತು ರಾಜ್ಯ ಸರ್ಕಾರದ ಆದೇಶವು ಶಿಕ್ಷಣ ಸಂಸ್ಥೆಗಳು ಅನುಸರಿಸುತ್ತಿದ್ದ ಸಿಸಿಇ ನಿಯಮಗಳನ್ನು ಉಲ್ಲಂಘಿಸಿದೆ ಎಂದರು.

ವಿದ್ಯಾರ್ಥಿಗಳು ಉತ್ತಮ ಅಂಕ ಗಳಿಸಲಿ ಎಂದು ಕರ್ನಾಟಕ ಸರ್ಕಾರವು ಎಸ್ ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಮೂರು ಬೋರ್ಡ್ ಪರೀಕ್ಷೆಗಳನ್ನು ನಡೆಸುವುದಾಗಿ ಘೋಷಿಸಿತ್ತು. ಉತ್ತಮ ಫಲಿತಾಂಶಗಳನ್ನು ಅಂಕ ಪಟ್ಟಿಗೆ ಪರಿಗಣಿಸಲಾಗುತ್ತದೆ ಎಂದು ಹೇಳಿದೆ. ಆದರೆ ಇದಕ್ಕೆ ಪರ-ವಿರೋಧ ವ್ಯಕ್ತವಾಗುತ್ತಿದೆ.

# ಮಲ್ಲಿಕಾರ್ಜುನ ಖರ್ಗೆ ಅಂತವರಿಗೆ ಪ್ರಿಯಾಂಕ್ ಖರ್ಗೆ ಹುಟ್ಟಿರುವುದೇ ಅನ್ಯಾಯ

**ಶಿವಮೊಗ್ಗ:** ಮಲ್ಲಿಕಾರ್ಜುನ ಖರ್ಗೆ ಅಂತಹವರಿಗೆ ಪ್ರಿಯಾಂಕ್ ಖರ್ಗೆ ಅಂತಹವರು ಹುಟ್ಟಿರುವುದೇ ಅನ್ಯಾಯ ಎಂದು ಮಾಜಿ ಡಿಸಿಎಂ ಕೆ.ಎಸ್.ಈಶ್ವರಪ್ಪ ವಾಗ್ದಾಳಿ ನಡೆಸಿದ್ದಾರೆ. ಶಿವಮೊಗ್ಗದಲ್ಲಿ ಮಾತನಾಡಿದ ಅವರು, 'ಪ್ರಿಯಾಂಕ್ ಖರ್ಗೆ ಅವರು ಯಾವುದೇ ಕಾರಣಕ್ಕೂ ಪಾಕಿಸ್ತಾನ ಜಿಂದಾಬಾದ್ ಎಂದು ಕೂಗಿಲ್ಲ ಅಂದಿದ್ದರು, ಎ2 ಆರೋಪಿ ಕುಟುಂಬ ಸಮೇತ ಓಡಿ ಹೋಗಿದ್ದಾನೆ. ಅವನು ಓಡಿ ಹೋಗಲು ಯಾರು ಕಾರಣ?, ಪೊಲೀಸರ ವೈಫಲ್ಯವಾ, ರಾಜ್ಯ ಸರಕಾರ ಸಹಕಾರ ಕೊಟ್ಟಿದೆಯಾ ಅಥವಾ ಪಾಕಿಸ್ತಾನ ಪರವಾಗಿ ಇರುವ ವ್ಯಕ್ತಿಗಳು ಸಹಕಾರ ಕೊಟ್ಟಿದ್ದಾರಾ ಎಂದು ಪ್ರಶ್ನಿಸಿದ್ದಾರೆ.



**ಕರ್ನಾಟಕ ರಾಜ್ಯ, ರಾಷ್ಟ್ರ ದ್ರೋಹಿಗಳ ತಾಣ ಆಗ್ತಿದೆ:** ಕರ್ನಾಟಕ ರಾಜ್ಯ, ರಾಷ್ಟ್ರ ದ್ರೋಹಿಗಳ ತಾಣ ಆಗುತ್ತಿದೆ. ಪಾಕಿಸ್ತಾನ ಪರ ಘೋಷಣೆ, ಬಾಂಬ್ ಬ್ಲಾಸ್ಟ್, ರಾಜ್ಯದಲ್ಲಿ ಮಾಮೂಲಿ ಆಗಿರುವುದು ರಾಜ್ಯದ ಜನತೆಗೆ ಅಪಮಾನವಾಗಿದೆ. ಪಾಕಿಸ್ತಾನ ಪರ ಘೋಷಣೆ ಕೂಗಿದವರು, ಬ್ಲಾಸ್ಟ್ ಮಾಡಿದವರ ಪರ ಬೆಂಬಲ ನೀಡಿದವರ ವಿರುದ್ಧ ಕ್ರಮ ಕೈಗೊಳ್ಳಬೇಕು. ಇದೇ ವೇಳೆ ಮಂಡ್ಯದಲ್ಲಿ ಬಿಜೆಪಿ ಕಾರ್ಯಕರ್ತ ಪಾಕ್ ಪರ ಘೋಷಣೆ ವಿಚಾರ, ' ಅವನು ಮಂಡ್ಯದಲ್ಲಿ ಬಾಯ್ತಪ್ಪಿ ಹೇಳಿದ್ದಾನೆ. ಆತನ ವಿರುದ್ಧ ಇಲ್ಲಿಯವರೆಗೆ ಯಾವುದೇ ಕ್ರಮ ಇರಲಿಲ್ಲ. ಕಾಂಗ್ರೆಸ್ ಸರಕಾರಕ್ಕೆ ಅಪಮಾನ ಆಯ್ತು ಎನ್ನುವ ಕಾರಣಕ್ಕ ಈ ರೀತಿ ಮಾಡಿದ್ದಾರೆ. ಯಾವೊಬ್ಬ ಬಿಜೆಪಿ ಕಾರ್ಯಕರ್ತ ರಾಷ್ಟ್ರ ದ್ರೋಹಿ ಹೇಳಿಕೆ ಕೊಡಲು ಸಾಧ್ಯವಿಲ್ಲ ಎಂದು ಹೇಳಿದರು.

ಉಪ ಮುಖ್ಯಮಂತ್ರಿ, ಆದಾಗ ಬಿಜೆಪಿಯ ಅರ್ಧಕ್ಕಿಂತ ಹೆಚ್ಚು ಜನ ಕಾಂಗ್ರೆಸ್‌ಗೆ ಬರುತ್ತಾರೆ ಎಂದರು, ಹೆಬ್ಬಾರ್, ಸೋಮಶೇಖರ್ ರಾಜ್ಯಸಭೆ ಚುನಾವಣೆ ವೇಳೆ ಗೈರಾದರು, ಅವರು ಬಿಟ್ಟು ಇನ್ನು ಯಾರು ಬಿಜೆಪಿ ಬಿಟ್ಟು ಹೋಗಲ್ಲ. ಮುಳುಗಿ ಹೋಗ್ತಿರುವ ಹಡಗಿಗೆ ಯಾರು ಹೋಗುತ್ತಾರೆ, ಕಾಂಗ್ರೆಸ್‌ನವರು ಅವರ ಪಕ್ಷ ಬಿಟ್ಟು ಬರುವವರನ್ನು ಹಿಡಿದಿಟ್ಟುಕೊಳ್ಳಲಿ, ನಮ್ಮಲ್ಲಿ ಯಾರೂ ಬಿಜೆಪಿ ಬಿಟ್ಟು ಹೋಗಲ್ಲ ಎಂದರು.

ಕಾಂಗ್ರೆಸ್‌ನಲ್ಲಿ ಟಿಕೆಟ್ ಪಡೆಯಲು 100 ಕೋಟಿ ಕೊಡಬೇಕು ಎಂಬ ಆರೋಪಕ್ಕೆ ಉತ್ತರಿಸಿದ ಇವರು, '100 ಕೋಟಿ ಯಾರಿಗೆ ಕೊಡಬೇಕು? ಯಾರು ತಗೊಂಡಿದ್ದಾರೆ ಎಂಬ ಬಗ್ಗೆ ತನಿಖೆ ಆಗಬೇಕು. 100 ಕೋಟಿ ಯಾರಿಗೆ ತಲುಪುತ್ತಿದೆ ಎಂಬ ಬಗ್ಗೆ ಸಿಎಂ, ಡಿಸಿಎಂ ಹೇಳಲಿ, ಮುಂಬರುವ ಲೋಕಸಭಾ ಚುನಾವಣೆಯಲ್ಲಿ ರಾಜ್ಯದಲ್ಲಿ ಬಿಜೆಪಿ 28 ಕ್ಕೆ 28 ಸ್ಥಾನದಲ್ಲಿ ಗೆಲ್ಲುತ್ತದೆ. ಆ ಮೂಲಕ ಮೋದಿ ಮತ್ತೊಮ್ಮೆ ಪ್ರಧಾನಮಂತ್ರಿ ಆಗುತ್ತಾರೆ.

ಶಿವಮೊಗ್ಗ ನಗರದಲ್ಲಿ ಅತಿರುದ್ರ ಮಹಾಯಾಗ ಯಶಸ್ವಿಯಾಗಿ ನಡೆದಿದೆ. ಲೋಕ ಕಲ್ಯಾಣಕ್ಕಾಗಿ ಮತ್ತೊಮ್ಮೆ ನರೇಂದ್ರ ಮೋದಿ ಎಂಬ ಅಪೇಕ್ಷೆಯಿಂದ ಯಾಗ ಮಾಡಲಾಗಿತ್ತು. ನಿರೀಕ್ಷೆ ಮೀರಿ ಭಕ್ತರು ಭಾಗವಹಿಸಿದ್ದರು. 11 ಹೋಮ ಕುಂಡಗಳಲ್ಲಿ ಹೋಮ ಮಾಡಿದ್ದಾರೆ. ರಾಜ್ಯಕ್ಕೆ , ದೇಶಕ್ಕೆ ಒಳ್ಳೆಯದು ಆಗಲಿ ಎಂದು ಉಜ್ಜಯಿನಿ ಜಗದ್ಗುರುಗಳು ಆಶಿಸಿದ್ದಾರೆ. ದೇಶ ಉಳಿಸಬೇಕಾದರೆ, ಧರ್ಮ ಉಳಿಯಬೇಕಾದರೆ ಮತ್ತೊಮ್ಮೆ ನರೇಂದ್ರ ಮೋದಿ ಪ್ರಧಾನಮಂತ್ರಿ ಆಗಲಿ ಎಂದರು.

## ಕಾಂಗ್ರೆಸ್‌ನಲ್ಲಿ ಮತ್ತೆ ದಲಿತ ಸಿಎಂ ಕೂಗು?

# ಕಿಚ್ಚು ಹಚ್ಚಿದ ಸಚಿವ ಡಾ. ಮಹದೇವಪ್ಪ ಹೇಳಿಕೆ

**ಬೆಂಗಳೂರು:** ಕಾಂಗ್ರೆಸ್ ಪಕ್ಷದಲ್ಲಿ ದಲಿತ ಸಿಎಂ ವಿಚಾರ ಮತ್ತೊಮ್ಮೆ ಮುನ್ನೆಲೆಗೆ ಬರುವ ಎಲ್ಲ ಲಕ್ಷಣ ಗೋಚರಿಸುತ್ತಿದೆ. ದಲಿತರಿಗೆ ಸಿಎಂ ಆಗುವ ಅವಕಾಶ ಸಿಗಲಿಲ್ಲವೆಂದು ಸಚಿವ ಡಾ. ಮಹದೇವಪ್ಪ ಬೇಸರ ವ್ಯಕ್ತಪಡಿಸಿದ್ದು, ಇದು ರಾಜ್ಯ ರಾಜಕೀಯದಲ್ಲಿ ಕಿಚ್ಚು ಹಚ್ಚುವ ಸಾಧ್ಯತೆ ಇದೆ. ರಾಜ್ಯಮಟ್ಟದ ಎಸ್‌ಸಿ, ಎಸ್‌ಟಿ ನೌಕರರ ಸಮಾವೇಶದಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಹೇಗೆ ಸಿಎಂ ಆದರು ಎಂದು ವಿವರಿಸಿದರು. ಆದರೆ, ಮಲ್ಲಿಕಾರ್ಜುನ ಖರ್ಗೆ, ಪ್ರಿಯಾಂಕ್, ನಾನು ಪಾಲಿಸಿ ಮೇಕಿಂಗ್ ಸ್ಥಾನದಲ್ಲಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.



ನೀವು ನಾಯಕರನ್ನು ಫಾಲೋ ಮಾಡುತ್ತಿಲ್ಲ. ಸಿದ್ದರಾಮಯ್ಯ, ಯಡಿಯೂರಪ್ಪ, ದೇವೇಗೌಡರು ಯಾಕೆ ಸಿಎಂ ಆದರು? ರಾಜ್ಯದಲ್ಲಿ ಒಗ್ಗಟ್ಟಾಗಿ ಪಕ್ಷಕ್ಕೆ ಮತ ನೀಡಿದ ಬಳಿಕವೂ ಪುನಃ ಸಿಎಂ ಸ್ಥಾನ ಕೊಡಿ ಎಂದು ಕೇಳುವ ಪರಿಸ್ಥಿತಿ ನಮ್ಮದಾಗಿದೆ. ಮತ ನಮ್ಮದಿದೆ, ನಾಯಕತ್ವ ಇನ್ಯಾರ ಬಳಿಯೋ ಇದೆ. ಇದಕ್ಕೆ ನಾವು ನಮ್ಮ ನಾಯಕತ್ವ ಬೆಳೆಸದಿರುವುದೇ ಕಾರಣ ಎಂದು ಮಹದೇವಪ್ಪ ಬೇಸರದಿಂದ ಹೇಳಿದರು.

ಡಾ. ಜಿ ಪರಮೇಶ್ವರ್, ಖರ್ಗೆ ಅವರಾಗಲಿ, ನಾನಾಗಲಿ ನೀತಿ ರೂಪಿಸುವ ಜಾಗದಲ್ಲಿಲ್ಲ. ನಾವು ಸಿಎಂ ಆಗಲಿಲ್ಲ. ಅಂಬೇಡ್ಕರ್ ಬಳಿಕ ಮತ್ತೊಬ್ಬ ದಲಿತ ನಾಯಕ ಸಿಗಲಿಲ್ಲ. ಕರ್ನಾಟಕದಲ್ಲಿ ಪ್ರಭಾವಿ ದಲಿತ ನಾಯಕರಿದ್ದರೂ ಸಿಎಂ ಸ್ಥಾನ ಸಿಗಲಿಲ್ಲ. ಆದರೂ ನಮ್ಮ ಪ್ರಭಾವ ಬಳಸಿ ಎಸ್ಸಿಪಿ, ಟಿಎಸ್ಪಿ ಕಾಯ್ದೆ, ಮುಂಬಡ್ತಿ ಮೀಸಲಾತಿ ಸೇರಿದಂತೆ ಕೆಲ ಐತಿಹಾಸಿಕ ತೀರ್ಮಾನ ಮಾಡಿಸಿದ್ದೇವೆ. ಇದು ಇವತ್ತಿನ ದೇಶದ ರಾಜಕೀಯ ಸನ್ನಿವೇಶ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

1987 ರಲ್ಲಿ 27 ಜನ ದಲಿತ ಶಾಸಕರು ಇದ್ದರು. ಬಿ.ರಾಚಯ್ಯನವರು ಮುಖ್ಯಮಂತ್ರಿ ಆಗಬೇಕು ಅಂತ ಎದ್ದು ಹೇಳಿದವನು ನಾನೊಬ್ಬನೇ ಶಾಸಕ. ಉಳಿದ 26 ಜನ ದಲಿತ ಶಾಸಕರು ತಲೆ ಮೇಲೆ ಸೆರಗು ಹಾಕಿಕೊಂಡು ಕೂತಿದ್ದರು. ಕೊನೇ ಪಕ್ಷ 26 ಜನರೂ ಎದ್ದಿದ್ದರೆ ನಾಯಕತ್ವ ರಕ್ಷಣೆ ಮಾಡಬಹುದಿತ್ತು. ಆಗ ದೇವೇಗೌಡರು 'ನಾನೇನಪ್ಪ ಮಾಡಲಿ ಮಹದೇವಪ್ಪ ಬಿಟ್ಟರೆ ಯಾರೂ ಮತ್ತೊಬ್ಬರು ಹೇಳಲೇ ಇಲ್ಲ' ಎಂದು ಹೇಳಿದ್ದರು. ಇದು ನಮ್ಮ ಹಣೆಬರಹ ಎಂದು ಸಚಿವ ಮಹದೇವಪ್ಪ ಅಸಮಾಧಾನ ಹೊರಹಾಕಿದರು.

**ದಲಿತ ಸಿಎಂ ಕೂಗು ಇದೇ ಮೊದಲಲ್ಲ:** ರಾಜ್ಯ ಕಾಂಗ್ರೆಸ್ ಪಕ್ಷದಲ್ಲಿ ಈ ಹಿಂದೆ ಕೂಡ ಕೆಲವು ಬಾರಿ ದಲಿತ ಸಿಎಂ ವಿಚಾರ ಚರ್ಚೆಗೆ ಬಂದಿತ್ತು. ದಲಿತ ನಾಯಕರಾದ ಮಲ್ಲಿಕಾರ್ಜುನ ಖರ್ಗೆ, ಜಿ ಪರಮೇಶ್ವರ್ ಮತ್ತಿತರ ದಲಿತ ನಾಯಕರ ಹೆಸರುಗಳು ಸಿಎಂ ಸ್ಥಾನಕ್ಕೆ ಕೇಳಿಬಂದಿದ್ದವು. ಇದನ್ನು ರಾಜಕೀಯ ದಾಳ ಮಾಡಿಕೊಂಡಿದ್ದ ಬಿಜೆಪಿ ಕೂಡ ದಲಿತರ ಹೆಸರಿನಲ್ಲಿ ರಾಜಕೀಯ ಮಾಡುವ ಕಾಂಗ್ರೆಸ್, ಅವರಿಗೆ ಅಧಿಕಾರ ನೀಡುತ್ತಿಲ್ಲ ಎಂದು ಟೀಕಾ ಪ್ರಹಾರ ನಡೆಸಿತ್ತು.

ಇದೀಗ ಮಹದೇವಪ್ಪ ಹೇಳಿಕೆ ಮತ್ತೆ ಪ್ರತಿಪಕ್ಷಗಳ ಅಸ್ತ್ರವಾಗಿ ಪರಿಣಮಿಸುವ ಸಾಧ್ಯತೆ ಇದೆ. ಅಲ್ಲದೆ, ಕಾಂಗ್ರೆಸ್ ಪಕ್ಷದ ಆಂತರಿಕ ವಲಯದಲ್ಲಿಯೂ ಮತ್ತೆ ಚರ್ಚೆಗೆ ಗ್ರಾಸವಾಗುವ ಸಾಧ್ಯತೆ ಇದೆ.

# ಬೆಂಗಳೂರಲ್ಲಿ ಕುಡಿಯುವ ನೀರಿಗೆ ಹಾಹಾಕಾರ, ಮನೆ ಬಾಡಿಗೆಯೂ ಹೆಚ್ಚುತ್ತಾ?

**ಬೆಂಗಳೂರು:** ಈ ಬಾರಿಯ ಬೇಸಿಗೆ ಎಲ್ಲರನ್ನೂ ಸುಡುತ್ತಿದೆ. ಮಳೆಯಿಲ್ಲದೇ ಜನ ಕಂಗಾಲಾಗಿದ್ದಾರೆ. ಅಲ್ಲದೇ ಹಲವೆಡೆ ಕುಡಿಯುವ ನೀರಿಗೆ ಹಾಹಾಕಾರ ಶುರುವಾಗಿದೆ. ಅಲ್ಲದೇ ಬೆಂಗಳೂರಲ್ಲೂ ಕುಡಿಯುವ ನೀರಿನ ಸಮಸ್ಯೆ ಎದುರಾಗಿದೆ. ಟ್ಯಾಂಕರ್ ನೀರನ್ನೇ ಜನರು ಅವಲಭಿಸಿದ್ದಾರೆ. ಇದೀಗ ಮನೆಯಲ್ಲಿ ಬಾಡಿಗೆ ಇರೋರಿಗೆ ಹೆಚ್ಚು ಬಾಡಿಗೆ ನೀಡುವಂತೆ ಹೇಳ್ತಿದ್ದಾರೆ ಮನೆ ಮಾಲೀಕರು. 500, 1000 ರೂಪಾಯಿವರೆಗು ಹೆಚ್ಚು ಬಾಡಿಗೆ ಹಣ ನೀಡುವಂತೆ ಮನೆ ಮಾಲೀಕರ ಡಿಮ್ಯಾಂಡ್ ಮಾಡ್ತಾ ಇದ್ದಾರೆ. ಹೆಚ್ಚು ಹಣ ಕೇಳಿದ್ರೆ, ಹೇಗೆ ಬಾಡಿಗೆಗೆ ಇರೋದು ಎಂದು ಬಾಡಿಗೆದಾರರು ಕೇಳ್ತಾ ಇದ್ದಾರೆ. ನೀರಿನ ಸಮಸ್ಯೆಯಿಂದ ಬಾಡಿಗೆದಾರರು ಹಾಗೂ ಓನರ್‌ಗಳ ನಡುವೆ ಅಸಮಾಧಾನ ಉಂಟಾಗಿದೆ.

ನಗರದ ಕಾಡುಗೋಡಿ, ವರ್ತೂರು ಸೇರಿದಂತೆ ಅನೇಕ ಕಡೆಗಳಲ್ಲಿ ಹೆಚ್ಚು ಬಾಡಿಗೆ ನೀಡುವಂತೆ ಬೇಡಿಕೆ ಕೇಳಿ ಬಂದಿದೆ. ಒಂದೆಡೆ ಜನರಿಗೆ ನೀರಿನ ಸಮಸ್ಯೆಯಾದ್ರೆ, ಮತ್ತೊಂದೆಡೆ ಬಾಡಿಗೆ ಸಮಸ್ಯೆ ಎದುರಾಗುತ್ತಿದೆ.

## ಜಮ್ಮು- ಕಾಶ್ಮೀರಕ್ಕೆ ಮೋದಿ ಭೇಟಿ

ಹಜರತ್‌ಬಾಲ್ ದೇಗುಲ ಯೋಜನೆಯ ಜೊತೆಗೆ, ಉಪಕ್ರಮಗಳಲ್ಲಿ ಮೇಘಾಲಯದ ಈಶಾನ್ಯ ಸರ್ಕ್ಯೂಟ್‌ನಲ್ಲಿ ಪ್ರವಾಸೋದ್ಯಮ ಸೌಲಭ್ಯಗಳು, ಬಿಹಾರ ಮತ್ತು ರಾಜಸ್ಥಾನದ ಆಧ್ಯಾತ್ಮಿಕ ಸರ್ಕ್ಯೂಟ್, ಬಿಹಾರದ ಗ್ರಾಮೀಣ ಮತ್ತು ತೀರ್ಥಂಕರ ಸರ್ಕ್ಯೂಟ್ ಮತ್ತು ತೆಲಂಗಾಣ ಮತ್ತು ಮಧ್ಯಪ್ರದೇಶದಂತಹ ರಾಜ್ಯಗಳಲ್ಲಿ ಕೆಲವು ಇತರ ಯೋಜನೆಗಳು ಸೇರಿವೆ.

ದೇಶದಾದ್ಯಂತ ವ್ಯಾಪಕವಾದ ಯಾತ್ರಾ ಮತ್ತು ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸುವ 43 ಯೋಜನೆಗಳಿಗೂ ಪ್ರಧಾನಿ ಚಾಲನೆ ನೀಡಲಿದ್ದಾರೆ. ಶ್ರೀನಗರದಲ್ಲಿ, ಪ್ರಧಾನಿ ಹೋಗುವ ಮಾರ್ಗದಲ್ಲಿ ಬೀಳುವ ಹಲವಾರು ಶಾಲೆಗಳನ್ನು ಬುಧವಾರ ಮತ್ತು ಗುರುವಾರ ಮುಚ್ಚಲು ಆದೇಶಿಸಲಾಗಿದೆ, ಆದರೆ ಗುರುವಾರ ನಡೆಯಬೇಕಿದ್ದ ಬೋರ್ಡ್ ಪರೀಕ್ಷೆಗಳನ್ನು ಮುಂದಿನ ತಿಂಗಳಿಗೆ ಮುಂದೂಡಲಾಗಿದೆ.

ಡ್ರೋನ್‌ಗಳು ಮತ್ತು ಸಿಸಿಟಿವಿ ಕ್ಯಾಮೆರಾಗಳನ್ನು ಕಣ್ಗಾವಲುಗಾಗಿ ಬಳಸಲಾಗುತ್ತಿದ್ದು, ಸ್ಥಳದ ಸುತ್ತ ಎರಡು ಕಿಲೋಮೀಟರ್ ವ್ಯಾಪ್ತಿಯಲ್ಲಿ ಭದ್ರತಾ ಪಡೆಗಳ ಕಾಲ್ನಡಿಗೆಯನ್ನು ತೀವ್ರಗೊಳಿಸಲಾಗಿದೆ. ಈ ಜಲಮೂಲಗಳನ್ನು ಯಾವುದೇ ವಿಧ್ವಂಸಕ ಚಟುವಟಿಕೆಗಳಿಗೆ ಬಳಸದಂತೆ ತಡೆಯಲು ಝೀಲಂ ನದಿ ಮತ್ತು ದಾಲ್ ಸರೋವರದಲ್ಲಿ ಮೆರೈನ್ ಕಮಾಂಡೋಗಳನ್ನು ನಿಯೋಜಿಸಲಾಗಿದೆ.

ಬಿಜೆಪಿ ನೇತೃತ್ವದ ಕೇಂದ್ರವು ಆಗಸ್ಟ್ 5, 2019 ರಂದು 370 ನೇ ವಿಧಿಯನ್ನು ರದ್ದುಗೊಳಿಸಿತು ಮತ್ತು ಹಿಂದಿನ ರಾಜ್ಯವನ್ನು ಜಮ್ಮು ಮತ್ತು ಕಾಶ್ಮೀರ ಮತ್ತು ಲಡಾಖ್ ಕೇಂದ್ರಾಡಳಿತ ಪ್ರದೇಶಗಳಾಗಿ ವಿಭಜಿಸಿತು.

## ಭಟ್ಕಳಕ್ಕೆ ತೆರಳಿರುವ ಶಂಕೆ

ಎನ್‌ಐಎ 10 ಲಕ್ಷ ರೂ. ಬಹುಮಾನ ಘೋಷಣೆ ಮಾಡಿದ್ದು, ಶಂಕಿತನ ಸುಳಿವು ನೀಡಿದವರ ಹೆಸರು ಗೌಪ್ಯವಾಗಿ ಇಡುವುದಾಗಿ ತಿಳಿಸಿದೆ. ಇಲ್ಲಿಯವರೆಗೆ ಆರೋಪಿ ಚಹರೆ ಕಾಣುವ ಫೋಟೋ ಇರಲಿಲ್ಲ. ಎನ್‌ಐಎ ಬಿಡುಗಡೆ ಮಾಡಿರುವ ಫೋಟೋದಲ್ಲಿ ಅಲ್ಪ ಸ್ವಲ್ಪ ಮುಖ ಕಾಣಿಸುತ್ತದೆ.

ಭಟ್ಕಳದ ನೆಲೆಸಿಗದ ಮಂದಿಗೂ ಉಗ್ರರ ಜೊತೆ ನಂಟು ಇರುವುದು ಹೊಸದೇನಲ್ಲ. ಹಲವು ಮಂದಿಗೆ ಈ ಹಿಂದೆ ಉಗ್ರರ ಜೊತೆ ಸಂಪರ್ಕ ಇರುವುದು ತನಿಖೆಯಿಂದ ದೃಢಪಟ್ಟಿತ್ತು. ಈ ಹಿಂದೆ ಭಟ್ಕಳ ಸಹೋದರರಾದ ರಿಯಾಜ್ ಮತ್ತು ಇಕ್ಬಾಲ್ ಅವರನ್ನು ಕೇಂದ್ರ ಸರ್ಕಾರ ಉಗ್ರರ ಪಟ್ಟಿಗೆ ಸೇರಿಸಿತ್ತು.

ಇದೇ ಜನವರಿ ಕೊನೆಯ ವಾರದಲ್ಲಿ ಮುಂಬೈನಲ್ಲಿ ಬಂಧನವಾದ ಶಂಕಿತ ಉಗ್ರನೋರ್ವನ ಜತೆ ನಂಟು ಹೊಂದಿರುವ ಆರೋಪದಡಿ ಭಟ್ಕಳದ ಮಹಿಳೆಯ ಮನೆಯ ಮೇಲೆ ಮಹಾರಾಷ್ಟ್ರದ ಭಯೋತ್ಪಾದನಾ ನಿಗ್ರದ ದಳ ಮಾಡಿ ವಶಕ್ಕೆ ಪಡೆದಿತ್ತು.

## ದೆಹಲಿಯಲ್ಲಿ ಹೈವೋಲ್ಟೇಜ್ ಸಭೆ

**ಅಭ್ಯರ್ಥಿಗಳ ಆಯ್ಕೆ ಬಗ್ಗೆ ಪರಮೇಶ್ವರ್ ಹೇಳಿದ್ದೇನು?:** ಈ ಕುರಿತು ಪ್ರತಿಕ್ರಿಯಿಸಿರುವ, ಗೃಹ ಸಚಿವ ಜಿ ಪರಮೇಶ್ವರ್ ನಾಳೆ ದೆಹಲಿಯಲ್ಲಿ ಸಿಇಸಿ ಸಭೆ ಕರೆದಿದ್ದಾರೆ. ಸಿಎಂ, ಡಿಸಿಎಂ ಎಲ್ಲರೂ ಹೋಗಬೇಕಾಗುತ್ತದೆ. ಸಿಇಸಿ ಸಭೆಯಲ್ಲಿ ಅಭ್ಯರ್ಥಿ ಆಯ್ಕೆ ಅಂತಿಮಗೊಳಿಸ್ತಾರೆ. ಎರಡು ಮೂರು ಬಾರಿ ಸ್ಕ್ರೀನಿಂಗ್ ಕಮಿಟಿ ಸಭೆ ನಡೆಯಲಿದೆ ಎಂದು ಹೇಳಿದರು.

ಸಿಂಗಲ್ ನೇಮ್ ಅಭ್ಯರ್ಥಿಗಳ ಆಯ್ಕೆ ಅಲ್ಲಿ ಆಗುತ್ತೆ, ಹತ್ತು ದಿನದಲ್ಲಿ ಮೊದಲ ಪಟ್ಟಿ ರಿಲೀಸ್ ಆಗಬಹುದು. ಎಷ್ಟು ಅಭ್ಯರ್ಥಿಗಳ ಹೆಸರು ಅನ್ನೋದನ್ನ ಅಧ್ಯಕ್ಷರು ಹೇಳಬೇಕು ಎಂದು ಹೇಳಿದ್ದಾರೆ.

**ಗೆಲ್ಲುವ ಅಭ್ಯರ್ಥಿಗಳ ಆಯ್ಕೆ:** ಇದೇ ವೇಳೆ ಎಲ್ಲಾ ಜಿಲ್ಲಾ ಮಂತ್ರಿ, ಶಾಸಕರಿಗೆ ಟಾಸ್ಕ್ ಕೊಟ್ಟಿದ್ದಾರೆ. ನಾವಿರೋ ಪರಿಸ್ಥಿತಿಯಲ್ಲಿ ಗೆಲ್ಲೋದೊಂದೇ ಮಾನದಂಡ, ಕೆಪಿಸಿಸಿಯಂದ ಸರ್ವೇ ಆಗಿದ್ದು, ಮುಖಂಡರ ಅಭಿಪ್ರಾಯ ಸಂಗ್ರಹ ಮಾಡಿದ್ದಾರೆ. ಗೆಲ್ಲೋ ಅಭ್ಯರ್ಥಿಗಳನ್ನ ಆಯ್ಕೆ ಮಾಡಲಾಗುತ್ತೆ ಎಂದು ತಿಳಿಸಿದರು.

ಇನ್ನು ಹದಿನೈದು ಕ್ಷೇತ್ರಗಳನ್ನ ಹೊರತು ಪಡಿಸಿದ್ರೆ ಉಳಿದೆಡೆ ಪ್ರಬಲ ಅಭ್ಯರ್ಥಿಗಳ ಕೊರತೆ ಎದ್ದು ಕಾಣ್ತಿದೆ. ಹೀಗಾಗಿ ಸಚಿವರನ್ನ ಕಣಕ್ಕಿಳಿಸೋ ಬಗ್ಗೆ ಕೆಪಿಸಿಸಿ, ಎಐಸಿಸಿ ಸರ್ವೇಯಲ್ಲೂ ಸೂಚಿಸಲಾಗಿದೆ. ಈ ಬಗ್ಗೆಯೂ ನಾಳಿನ ಸಭೆಯಲ್ಲಿ ಗಂಭೀರವಾದ ಚರ್ಚೆ ನಡೆಯುವ ಸಾಧ್ಯತೆಗಳಿವೆ.

**ಈ ಸಚಿವರು ಸ್ಪರ್ಧೆ ಮಾಡ್ತಾರಾ?:** ಚಾಮರಾಜನಗರದಿಂದ ಡಾ ಹೆಚ್‌ಸಿ ಮಹದೇವಪ್ಪ, ಕೋಲಾರದಿಂದ ಕೆಎಚ್ ಮುನಿಯಪ್ಪ, ಬೆಳಗಾವಿಯಲ್ಲಿ ಸತೀಶ್ ಜಾರಕಿಹೊಳಿ, ಬಳ್ಳಾರಿಯಲ್ಲಿ ಬಿ. ನಾಗೇಂದ್ರ, ಬೀದರ್‌ನಲ್ಲಿ ಈಶ್ವರ್ ಖಂಡ್ರೆ ಸೇರಿ ಕೆಲವು ಸಚಿವರನ್ನ ಕಣಕ್ಕಿಳಿಸೋ ಬಗ್ಗೆ ಚರ್ಚೆಗಳು ನಡೆಯುತ್ತಿವೆ.

ಆದ್ರೆ ಹಾಲಿ ಸಚಿವರು ನಿಲ್ಲೋದೇ ಇಲ್ಲ ಅಂತಾ ಹೇಳ್ತಿರೋದ್ರಿಂದ ಹೈಕಮಾಂಡ್‌ಗೆ ತಲೆಬಿಸಿಯಾಗಿದೆ. ಸಚಿವರುಗಳ ಮನವೊಲಿಕೆ ಬಗ್ಗೆಯೂ ನಾಳೆಯ ಸಭೆಯಲ್ಲಿ ಚರ್ಚೆ ನಡೆಯಲಿದೆ. ಮತ್ತೊಂದು ಕಡೆ ಸಚಿವರು ತಮ್ಮ ಸಂಬಂಧಿಕರಿಗೆ ಟಿಕೆಟ್ ಕೇಳ್ತಿರೋ ಹಿನ್ನೆಲೆ ಕುಟುಂಬ ರಾಜಕಾರಣಕ್ಕೆ ಮಣೆ ಹಾಕಬೇಕಾ? ಬೇಡ್ವಾ ಅನ್ನೋ ಬಗ್ಗೆಯೂ ತೀರ್ಮಾನವಾಗಲಿದೆ.

**ಸಚಿವ ಹೆಚ್‌ಸಿ ಮಹದೇವಪ್ಪ ಗರಂ:** ಇನ್ನು ಲೋಕಸಭಾ ಚುನಾವಣೆಯಲ್ಲಿ ನಾನು ನಿಲ್ಲಲ್ಲ, ಪದೇ ಪದೇ ಯಾಕೆ ಪ್ರಶ್ನೆ ಕೇಳ್ತಿರಾ ಎಂದು ಗರಂ ಆಗಿರುವ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ದಲಿತರಿಗೆ ಹೆಚ್ಚು ಟಿಕೆಟ್ ಕೊಡುವ ಬಗ್ಗೆ ಪಾರ್ಟಿ ನಿರ್ಧಾರ ಮಾಡಬೇಕು ಎಂದಿದ್ದಾರೆ.

ಮೀಸಲು ಕ್ಷೇತ್ರ ಬಿಟ್ಟು ಬೇರೆ ಕಡೆ ಅಭ್ಯರ್ಥಿಗಳು ಇದ್ದಾರೆ, ಇದರ ಬಗ್ಗೆ ಕಾಂಗ್ರೆಸ್ ನಿರ್ಧಾರ ಮಾಡಬೇಕು. ಜನರಲ್ ಕ್ಷೇತ್ರದಲ್ಲಿ ಕೂಡ ಗೆಲ್ಲುವ ಸಾಮರ್ಥ್ಯ ನಮ್ಮ ನಾಯಕರಿಗಿದೆ. ಆದ್ರೆ ಪಕ್ಷ ಅವಕಾಶ ಕೊಡಬೇಕು. ಸದ್ಯಕ್ಕೆ ಹೆಚ್ಚಿನ ಕ್ಷೇತ್ರಗಳಿಗೆ ಡಿಮ್ಯಾಂಡ್ ಇಡಲ್ಲ ಎಂದು ಹೇಳಿದ್ದಾರೆ

ಇನ್ನು ಸಿಇಸಿ ಹಾಗೂ ಸ್ಕ್ರೀನಿಂಗ್ ಕಮಿಟಿ ಸಭೆ ಹಿನ್ನೆಲೆ ಕೆಲವು ಆಕಾಂಕ್ಷಿಗಳು ಟಿಕೆಟ್ ಡಿಮ್ಯಾಂಡ್ ಇಟ್ಟಿದ್ದಾರೆ. ಬೆಂಗಳೂರು ಸೆಂಟ್ರಲ್ ಕಾಂಗ್ರೆಸ್ ಟಿಕೆಟ್ ಕ್ರೈಸ್ತ ಸಮುದಾಯಕ್ಕೆ ನೀಡುವಂತೆ ಒತ್ತಾಯ ಮಾಡಿದ್ದಾರೆ.

ಈ ಹಿನ್ನೆಲೆಯಲ್ಲಿ ಗ್ಯಾರಂಟಿ ಕಮಿಟಿಗಳಿಗೆ ಆದಷ್ಟು ಬೇಗ, ಕಾರ್ಯಕರ್ತರನ್ನ ನೇಮಿಸೋ ಬಗ್ಗೆ ಸಭೆಯಲ್ಲಿ ತೀರ್ಮಾನವಾಗಲಿದೆ. ಜಿಲ್ಲಾವಾರು ಕ್ಲಸ್ಟರ್ ಗಳನ್ನ ರಚಿಸಿ ಸಭೆಗಳನ್ನ ನಡೆಸಲು ಕಾಂಗ್ರೆಸ್ ನಾಯಕರು ಪ್ಲ್ಯಾನ್ ಮಾಡಿದ್ದಾರೆ. ರಾಜ್ಯದ ನಾಲ್ಕೂ ದಿಕ್ಕುಗಳಲ್ಲಿ ಜಾತಿವಾರು, ಸಮುದಾಯವಾರು ಸಮಾವೇಶಗಳನ್ನು ನಡೆಸೋ ಬಗ್ಗೆಯೂ ಚರ್ಚೆ ನಡೆಯಲಿದೆ. ಒಟ್ನಲ್ಲಿ ಲೋಕಸಭೆ ಎಲೆಕ್ಷನ್ ನಲ್ಲಿ ಬಿಜೆಪಿಗೆ ಟಕ್ಕರ್ ಕೊಡಲು ಕಾಂಗ್ರೆಸ್ ನಾಯಕರು ಭಾರೀ ರಣತಂತ್ರ ರೂಪಿಸ್ತಿದ್ದು, ಮೂರ್ನಾಲ್ಕು ದಿನಗಳಲ್ಲಿ ಅಭ್ಯರ್ಥಿಗಳ ಲಿಸ್ಟ್ ಅನೌನ್ಸ್ ಮಾಡುವ ಸಾಧ್ಯತೆ ದಟ್ಟವಾಗಿದೆ.

## ಕರ್ನಾಟಕಕ್ಕೆ ಸೇರುತ್ತೇವೆ

ಜತ್ತ ತಾಲೂಕಿನ ಗ್ರಾಮಗಳಿಗೆ ಕುಡಿಯುವ ನೀರು ಪೂರೈಸಲು ಸುಮಾರು 60 ಟ್ಯಾಂಕರ್‌ಗಳನ್ನು ಮಾತ್ರ ಬಳಸಲಾಗುತ್ತಿದೆ. ವಿಶೇಷ ನೀರಾವರಿ ಯೋಜನೆಯನ್ನು ನಿರ್ಮಿಸುವ ಮೂಲಕ ಜತ್ತ ತಾಲೂಕಿನ ನೀರಿನ ಕೊರತೆಯನ್ನು ನೀಗಿಸಲು ಸರ್ಕಾರಗಳು ನೀಡಿದ ಭರವಸೆಗಳು ಈಡೇರಿಲ್ಲ. ಆದ್ದರಿಂದ, ಜತ್ತ ತಾಲೂಕಿನ ರೈತರೊಂದಿಗೆ ತುಬಚಿ ಬಬಲೇಶ್ವರ ಅಥವಾ ಕೊಟ್ಟಲಗಿ ಯೋಜನೆಗಳಂತಹ ಯೋಜನೆಗಳಿಂದ ಸ್ವಲ್ಪ ನೀರನ್ನು ಹಂಚಿಕೊಳ್ಳಲು ನಾವು ಕರ್ನಾಟಕ ಸರ್ಕಾರವನ್ನು ಒತ್ತಾಯಿಸುತ್ತೇವೆ ಎಂದು ಮನವಿ ಮಾಡಿದೆ.

ಮಹಾರಾಷ್ಟ್ರದಲ್ಲಿರುವಂತೆ ಕರ್ನಾಟಕ ಸರ್ಕಾರಕ್ಕೆ ನೀರು ಕೊಡಲು ಸಾಧ್ಯವಾಗದಿದ್ದರೆ 40 ಗ್ರಾಮಗಳನ್ನು ಕರ್ನಾಟಕಕ್ಕೆ ಸೇರಿಸಿ ನೀರಾವರಿ ಕಲ್ಪಿಸುವಂತೆ ಒತ್ತಾಯಿಸುತ್ತೇವೆ ಎಂದು ತಿಳಿಸಿದೆ. ಮಾಜಿ ಸಚಿವ ವಿಶ್ವಜಿತ್ ಕದಂ, ಜತ್ತ ಶಾಸಕ ವಿಕ್ರಂ ಸಾವಂತ್, ಸ್ಥಳೀಯ ಮುಖಂಡರಾದ ಬಾಬು ಮಾಳಿ, ರಮೇಶ ಪಾಟೀಲ, ಎಂ.ಸಿರಗೊಂಡ, ನೀಲೇಶ ಬಾಮನೆ, ಸುಜಯ ಶಿಂಧೆ ಇತರರು ಇದ್ದರು. ನಿಯೋಗದಲ್ಲಿ ಕೆಲ ಗ್ರಾಮ ಪಂಚಾಯಿತಿಗಳ ಗ್ರಾಮದ ಮುಖ್ಯಸ್ಥರು ಹಾಗೂ ಸದಸ್ಯರಿದ್ದರು.

## ಮುಖಭಂಗ!

ಬಂಧಿತನಾಗಿರುವ ಟಿಎಂಸಿ ಉಚ್ಚಾಟಿತ ನಾಯಕ ಶೇಖ್ ಶಹಜಹಾನ್‌ನನ್ನು ಸಿಬಿಐ ಕಸ್ಟಡಿಗೆ ವಹಿಸಬೇಕು ಎಂದು ಕೋಲ್ಕೊತಾ ಹೈಕೋರ್ಟ್ ಮತ್ತೆ ಆದೇಶ ಹೊರಡಿಸಿತು. ನಂತರ ಸಿಬಿಐ ಅಧಿಕಾರಿಗಳು ಕೋಲ್ಕತ್ತಾದಲ್ಲಿರುವ ಪೊಲೀಸ್ ಕೇಂದ್ರ ಕಚೇರಿಯಲ್ಲಿ ಶಹಜಹಾನ್‌ನನ್ನ ವಶಕ್ಕೆ ಪಡೆದರು.

ಶೇಖ್ ಶಹಜಹಾನ್‌ನನ್ನು ಮಂಗಳವಾರವೇ (ಮಾರ್ಚ್ 5) ಸಿಬಿಐ ವಶಕ್ಕೆ ನೀಡಬೇಕು. ಇ.ಡಿ ಅಧಿಕಾರಿಗಳ ಮೇಲೆ ದಾಳಿ, ಲೈಂಗಿಕ ದೌರ್ಜನ್ಯ ಸೇರಿ ಎಲ್ಲ ಪ್ರಕರಣಗಳ ಕುರಿತ ದಾಖಲೆಗಳನ್ನು ಕೂಡ ಸಿಬಿಐ ಅಧಿಕಾರಿಗಳಿಗೆ ನೀಡಬೇಕು ಎಂದು ಕೊಲ್ಕತ್ತಾ

### ಮೊದಲನೇ ಪುಟದಿಂದ...

ಹೈಕೋರ್ಟ್ ಆದೇಶಿಸಿತ್ತು. ಆದರೆ, ಶೇಖ್ ಶಹಜಹಾನ್‌ನನ್ನು ಸಿಬಿಐಗೆ ವಹಿಸಲು ಪಶ್ಚಿಮ ಬಂಗಾಳ ಸರ್ಕಾರ ನಿರಾಕರಿಸಿತ್ತು. ಅಷ್ಟೇ ಅಲ್ಲ, ಹೈಕೋರ್ಟ್ ಆದೇಶ ಪ್ರಶ್ನಿಸಿ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿತ್ತು. ಆದರೆ, ಕೋಲ್ಕೊತಾ ಹೈಕೋರ್ಟ್ ಆದೇಶಕ್ಕೆ ತಡೆಯಾಜ್ಞೆ ನೀಡಲು ಸುಪ್ರೀಂ ಕೋರ್ಟ್ ನಿರಾಕರಿಸಿತು, ಜೊತೆಗೆ ತುರ್ತು ವಿಚಾರಣೆಗೆ ನಿರಾಕರಿಸಿತು. ಆದ್ದರಿಂದಾಗಿ ಮತ್ತೆ ಹೈಕೋರ್ಟ್ ಸಿಬಿಐಗೆ ಒಪ್ಪಿಸುವಂತೆ ಆದೇಶಿಸಿತು.

ಈ ನಡುವೆ ಶಹಜಹಾನ್ ಶೇಖ್‌ಗೆ ಸಂಬಂಧಿಸಿದ 12.78 ಕೋಟಿ ರೂಪಾಯಿ ಮೌಲ್ಯದ ಆಸ್ತಿಯನ್ನು ಇ.ಡಿ ಅಧಿಕಾರಿಗಳು ಜಪ್ತಿ ಮಾಡಿದ್ದಾರೆ. ಸಂದೇಶ್‌ಖಾಲಿಯಲ್ಲಿರುವ ಕೃಷಿ ಭೂಮಿ, ಕೋಲ್ಕತ್ತಾದಲ್ಲಿರುವ ಅಪಾರ್ಟ್ಮೆಂಟ್, ಬ್ಯಾಂಕ್ ಠೇವಣಿ ಸೇರಿ ಹಲವು ಆಸ್ತಿಗಳನ್ನು ಇ.ಡಿ ಜಪ್ತಿ ಮಾಡಿದೆ. ಇದರಿಂದಾಗಿ ಶಹಜಹಾನ್ ಶೇಖ್‌ಗೆ ಮತ್ತೊಂದು ಸಂಕಷ್ಟ ಎದುರಾದಂತಾಗಿದೆ.

## ಭದ್ರತಾ ಸಿಬ್ಬಂದಿ ಅಸಮಾಧಾನ

ನಾವು ಅಸಹಾಯಕರಾಗುತ್ತೇವೆ ಎಂದು ಭದ್ರತಾ ಸಿಬ್ಬಂದಿಗಳು ಹಿರಿಯ ಪೊಲೀಸ್ ಅಧಿಕಾರಿಗಳ ಬಳಿ ಅಸಮಧಾನ ವ್ಯಕ್ತಪಡಿಸಿದ್ದಾರೆ.

ಚುನಾವಣೆ ದಿನ ವಿಧಾನಸೌಧಕ್ಕೆ ಪಾಸ್ ಇದ್ದವರು, ಸರ್ಕಾರಿ ನೌಕರರು ಮತ್ತು ಪತ್ರಕರ್ತರು ಮಾತ್ರ ಪ್ರವೇಶಿಸಲು ಅರ್ಹರಾಗಿದ್ದರು. ಆದರೆ, ಈ ಮೂರು ಮಾದರಿಯನ್ನು ಹೊರತುಪಡಿಸಿ ಪಾಕ್ ಪರ ಘೋಷಣೆ ಆರೋಪದಲ್ಲಿ ಬಂಧನಕ್ಕೊಳಗಾದವರು ಮತ್ತು ಇತರ ಹಲವಾರು ಜನರು ವಿಧಾನಸೌಧಕ್ಕೆ ಪ್ರವೇಶ ಪಡೆದಿದ್ದರು. ಕೆಲವರು ಪಾಸ್ ಇಲ್ಲದೇ ವಿಧಾನಸೌಧ ಪ್ರವೇಶಿಸಿರುವುದು ವಿಚಾರಣೆ ವೇಳೆ ಗೊತ್ತಾಗಿದೆ. ಇವರೆಲ್ಲ ವಿಧಾನಸೌಧಕ್ಕೆ ಹೇಗೆ ಬಂದಿದ್ದರು, ಯಾರು ಮೂಲಕ ಬಂದಿದ್ದರು ಎಂಬುದು ಪರಿಶೀಲನೆ ನಡೆಯುತ್ತಿದೆ. ಯಾವುದೇ ಆಧಾರ ಇಲ್ಲದೆ ಬಂದ ವ್ಯಕ್ತಿಗಳು ಏನು ಬೇಕಾದರೂ ಮಾಡಬಹುದಿತ್ತು. ಬಹುತೇಕರನ್ನು ಕರೆತಂದಿರುವುದು ರಾಜ್ಯಸಭೆ ಚುನಾವಣೆಯಲ್ಲಿ ಸ್ಪರ್ಧಿಸಿದ್ದವರೇ ಎಂಬುದು ಬೆಳಕಿಗೆ ಬಂದಿದೆ.

**ಮೂವರು ಆರೋಪಿಗಳ ತೀವ್ರ ವಿಚಾರಣೆ:** ವಿಧಾನಸೌಧ ಇನ್ಸ್‌ಪೆಕ್ಟರ್ ಕುಮಾರಸ್ವಾಮಿ, ಕಬ್ಬನ್ ಪಾರ್ಕ್ ಎಸಿಪಿ ಬಾಲಕೃಷ್ಣರಿಂದ ಮೂವರು ಆರೋಪಿಗಳಾದ ಮಹಮ್ಮದ್ ಶಫಿ ನಾಶಿಪುಡಿ, ಮುನ್ನಾವರ್ ಅಹಮದ್, ಹಾಗೂ ಮಹಮ್ಮದ್ ಇಲ್ತಾಜ್ ಅನ್ನು ತೀವ್ರ ವಿಚಾರಣೆಗೆ ಒಳಪಡಿಸಲಾಗುತ್ತಿದೆ. ಬಂಧಿತ ಮೂವರ ಪೈಕಿ ಬ್ಯಾಡಗಿಯ ಶಫಿ ನಾಶಿಪುಡಿ ಹಾಗೂ ಆರ್.ಟಿ.ನಗರದ ಮುನಾವರ್ ಅಹಮದ್ ಕೆಲ ವರ್ಷಗಳ ಸ್ನೇಹಿತರು. ದೆಹಲಿ ಮೂಲದ ಮಹಮ್ಮದ್ ಇಲ್ತಾಜ್ ಗೂ ಉಳಿದ ಇಬ್ಬರು ಆರೋಪಿಗಳಿಗೂ ಯಾವುದೇ ಪರಿಚಯವಿಲ್ಲ ಎನ್ನಲಾಗಿದೆ.

**ಘೋಷಣೆ ಕೂಗಿಲ್ಲ ಅನ್ನುತ್ತಿರುವ ನಾಶಿಪುಡಿ:** ಫುಲ್ ಜೋಶ್ ನಲ್ಲಿ ಜಿಂದಾಬಾದ್ ಅಂದಿದ್ದು ನಿಜ. ಜಿಂದಾಬಾದ್ ಜಿಂದಾಬಾದ್ ಅಂತ ಜೈಕಾರ ಹಾಕಿದ್ವಿ. ಪಾಕಿಸ್ತಾನ ಪರ ಘೋಷಣೆ ಕೂಗಿಲ್ಲ. ಯಾಕಾದರೂ ಸನ್ಮಾನಿಸಲು ಬಂದ್ವೋ ಸನ್ಮಾನ ಮಾಡಲು ಬಂದು ಜೈಲು ಸೇರುವ ಸ್ಥಿತಿ ಬಂತು ಎಂದು ಆರೋಪಿ ನಾಶಿಪುಡಿ ಅಧಿಕಾರಿಗಳ ಬಳಿ ಹೇಳಿಕೊಂಡಿದ್ದಾನೆ.

## ಮಂಜೂರು

ದೇಶದಲ್ಲಿ ರಸ್ತೆಗಳ ನಿರ್ಮಾಣವನ್ನು ವೇಗಗೊಳಿಸಲು ರಾಷ್ಟ್ರೀಯ ಹೆದ್ದಾರಿ ಸಚಿವಾಲಯವು ಖಾಸಗಿ-ಸಾರ್ವಜನಿಕ ಸಹಭಾಗಿತ್ವದ ಅಡಿಯಲ್ಲಿ ರಸ್ತೆಗಳನ್ನು ನಿರ್ಮಾಣ ಮಾಡುತ್ತದೆ. ಯೋಜನಾ ವೆಚ್ಚದ 40 ಪ್ರತಿಶತ ಹಣವನ್ನು ಸರ್ಕಾರವು ರಸ್ತೆ ನಿರ್ಮಾಣದ ಅವಧಿಯಲ್ಲಿ ನೀಡುತ್ತದೆ. ಉಳಿದ 60 ಪ್ರತಿಶತದಷ್ಟು ಹಣವನ್ನು ಬಡ್ಡಿಯೊಂದಿಗೆ ರಸ್ತೆ ಕಾರ್ಯಾರಂಭವಾದ ಮೇಲೆ ನೀಡುತ್ತದೆ.

## ಬಿಜೆಡಿ ಮೈತ್ರಿ?

ರಾಜ್ಯಸಭಾ ಚುನಾವಣೆಯಲ್ಲಿ ಕೇಂದ್ರ ರೈಲ್ವೇ ಖಾತೆಯ ಸಚಿವ ಅಶ್ವಿನಿ ವೈಷ್ಣವ್ ಅವರಿಗೆ ಬಿಜೆಡಿ ಬೆಂಬಲ ನೀಡಿತ್ತು. ರಾಜ್ಯಸಭೆಯಲ್ಲಿ ಬಿಜೆಪಿಗೆ ಬಹುಮತ ಇಲ್ಲದೆ ಇದ್ದರೂ ಮಹತ್ವದ ಮಸೂದೆಗಳು ಮಂಡನೆಯಾದ ಸಂದರ್ಭದಲ್ಲಿ ಬಿಜೆಡಿ ಮೋದಿ ಸರ್ಕಾರಕ್ಕೆ ಬೆಂಬಲ ನೀಡಿತ್ತು.

ಮೂಲಗಳ ಪ್ರಕಾರ ಮೈತ್ರಿ ಮಾತುಕತೆ ನಡೆದರೆ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಹೆಚ್ಚಿನ ಕ್ಷೇತ್ರ ಕೇಳಿದರೆ ವಿಧಾನ ಸಭಾ ಚುನಾವಣೆಯಲ್ಲಿ ಬಿಜೆಡಿ ಹೆಚ್ಚಿನ ಕ್ಷೇತ್ರದಲ್ಲಿ ಸ್ಪರ್ಧೆ ನಡೆಸಲಿದೆ. ಒಡಿಶಾದ 21 ಲೋಕಸಭಾ ಕ್ಷೇತ್ರಗಳಲ್ಲಿ 14 ಕ್ಷೇತ್ರಗಳನ್ನು ಬಿಜೆಪಿ ಕೇಳುತ್ತಿದೆ. ಅಂತಿಮವಾಗಿ ಬಿಜೆಪಿಗೆ 11, ಬಿಜೆಡಿಗೆ 9 ಕ್ಷೇತ್ರ ಸಿಗಬಹುದು ಎಂದು ಅಂದಾಜಿಸಲಾಗಿದೆ. ಸದ್ಯ ಬಿಜೆಪಿ 8, ಬಿಜೆಡಿ 12, ಕಾಂಗ್ರೆಸ್ 1 ಸ್ಥಾನವನ್ನು ಹೊಂದಿದೆ.

2019ರ ವಿಧಾನಸಭಾ ಚುನಾವಣೆಯ ಒಟ್ಟು 147 ಸ್ಥಾನಗಳ ಪೈಕಿ ಬಿಜೆಡಿ 112, ಬಿಜೆಪಿ 23 ಸ್ಥಾನಗಳನ್ನು ಹೊಂದಿದ್ದರೆ ಕಾಂಗ್ರೆಸ್ 9 ಕ್ಷೇತ್ರಗಳಲ್ಲಿ ಜಯಗಳಿಸಿದೆ. ಈ ಚುನಾವಣೆಯಲ್ಲಿ ಬಿಜೆಡಿ 100ಕ್ಕೂ ಅಧಿಕ ಕ್ಷೇತ್ರಗಳನ್ನು ಕೇಳಿದರೆ ಬಿಜೆಪಿ 40 ಕ್ಷೇತ್ರಗಳನ್ನು ಕೇಳಬಹುದು ಎಂದು ಅಂದಾಜಿಸಲಾಗಿದೆ.

## ಸ್ಪರ್ಧೆಗೆ ನಾಯಕರ ಒತ್ತಾಯ

ಮಂಡ್ಯದ ಜೆಡಿಎಸ್ ನಾಯಕರ ಸಭೆಯಲ್ಲಿ ಅಭ್ಯರ್ಥಿ ಆಯ್ಕೆ ಬಗ್ಗೆ ಚರ್ಚೆ ನಡೆಸಲಾಗಿದೆ. ಈ ಸಭೆಯಲ್ಲಿ ಮಂಡ್ಯ ಲೋಕಸಭಾ ಕ್ಷೇತ್ರದಿಂದ ಹೆಚ್‌ಡಿ ಕುಮಾರಸ್ವಾಮಿಗೆ ಸ್ಪರ್ಧೆಗೆ ಮತ್ತೆ ಒತ್ತಾಯಿಸಲಾಗಿದೆ. ನೀವೇ ಮಂಡ್ಯ ಕ್ಷೇತ್ರದಿಂದ ಸ್ಪರ್ಧಿಸಿ ಎಂದು ನಾಯಕರು ಮನವಿ ಮಾಡಿದ್ದಾರೆ. ಈ ಬಗ್ಗೆ ಅಷ್ಟಾಗಿ ಒಲವು ತೋರದ ಕುಮಾರಸ್ವಾಮಿ, ಅಭ್ಯರ್ಥಿ ಆಯ್ಕೆ ಸಂಬಂಧ ಎಲ್ಲಾ ತೊಡಕುಗಳನ್ನ ನಿವಾರಿಸುವ ಹಾಗೂ ಪಕ್ಷದ ನಾಯಕರ ನಡುವಿನ ಸಣ್ಣಪುಟ್ಟ ಭಿನ್ನಮತ ನಿವಾರಿಸುವ ಬಗ್ಗೆ ಚರ್ಚೆ ನಡೆಸಿದರು. ಎಲ್ಲಾ ನಾಯಕರ ಅಭಿಪ್ರಾಯ ಪಡೆದ ಕುಮಾರಸ್ವಾಮಿ, ಜೆಡಿಎಸ್ ಅಭ್ಯರ್ಥಿ ಗೆಲುವಿಗೆ ಒಗ್ಗಟ್ಟಾಗಿ ಕೆಲಸ ಮಾಡುವಂತೆ ಸೂಚನೆ ನೀಡಿದರು.

**ಅಭ್ಯರ್ಥಿ ಪಟ್ಟಿಯಲ್ಲಿ ಮುಂಚೂಣಿಯಲ್ಲಿರುವ ಪುಟ್ಟರಾಜು:** ಮಂಡ್ಯ ಕ್ಷೇತ್ರದ ಅಭ್ಯರ್ಥಿ ಪಟ್ಟಿಯಲ್ಲಿ ಮಾಜಿ ಸಚಿವ ಪುಟ್ಟರಾಜು ಹೆಸರು ಮುಂಚೂಣಿಯಲ್ಲಿದೆ. ಇನ್ನೊಂದೆಡೆ ಬಿಜೆಪಿ ಹೈಕಮಾಂಡ್‌ನಿಂದ ಕುಮಾರಸ್ವಾಮಿ ಸ್ಪರ್ಧೆಗೆ ಒತ್ತಡ ಬಂದರೆ ಮುಂದಿನ ನಿರ್ಧಾರದ ಬಗ್ಗೆಯೂ ಚರ್ಚೆ ನಡೆಸಲಾಗಿದೆ. ಎಲ್ಲಾ ಆಯ್ಕೆಗಳನ್ನ ಮುಕ್ತವಾಗಿಟ್ಟುಕೊಳ್ಳುವಂತೆ ಜೆಡಿಎಸ್ ನಾಯಕರು ಮನವಿ ಮಾಡಿದ್ದಾರೆ. ಬಿಜೆಪಿ ನಾಯಕರ ಜೊತೆಗಿನ ಮಾತುಕತೆ ಬಳಿಕ ಸ್ಪಷ್ಟ ಚಿತ್ರಣ ದೊರೆಯಲಿದೆ ಎಂದು ಕುಮಾರಸ್ವಾಮಿ ಸಭೆಯಲ್ಲಿ ಹೇಳಿದ್ದಾರೆ.

## ಹೀಟ್ ವೇವ್ ಎಚ್ಚರಿಕೆ!

ತಾಪಮಾನ ಏರಿಕೆ ಬೆನ್ನಲ್ಲೇ ಹವಮಾನ ಇಲಾಖೆ ಹೀಟ್ ವೇವ್ ಎಚ್ಚರಿಕೆ ನೀಡಿದೆ. ದಿನದಿಂದ ದಿನಕ್ಕೆ ಬೆಂಗಳೂರಿನ ತಾಪಮಾನ 36 ಡಿಗ್ರಿ ಸೆಲ್ಸಿಯಸ್ಸ್ ದಾಖಲಾಗುತ್ತಿದ್ದಂತೆ ರಾಜ್ಯಕ್ಕೆ ಹೀಟ್ ವೇವ್ ಎಚ್ಚರಿಕೆ ನೀಡಿದ್ದು, ಉರಿಯುವ ಬಿಸಿಲಿನಲ್ಲಿದ್ದರೆ ಹೀಟ್ ಸ್ಟ್ರೋಕ್ ಭೀತಿ ಎದುರಾಗಿದೆ. ರಾಜ್ಯದ ಉತ್ತರ ಭಾಗ ಹಾಗು ಕರಾವಳಿ ಜಿಲ್ಲೆಗಳಲ್ಲಿ ತಾಪಮಾನ ಗರಿಷ್ಠ ಮಟ್ಟಕ್ಕೆ ಹೋಗುವ ಸಾಧ್ಯತೆ ಇದ್ದು ಉಷ್ಣ ಅಲೆಗಳ ಬಗ್ಗೆ ರಾಜ್ಯ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ. ಹೈಬಿಪಿ, ಹೃದಯ ಸಂಬಂಧಿ ಖಾಯಿಲೆ ಇರುವವರು, ಗರ್ಭಿಣಿಯರು, ವೃದ್ದರು ಮತ್ತು ಮಕ್ಕಳು ರಣ ಬಿಸಿಲಿಗೆ ಮೈ ಒಡ್ಡದಂತೆ ಆರೋಗ್ಯ ಇಲಾಖೆ ಎಚ್ಚರಿಕೆ ನೀಡಿದೆ. ದೇಹದ ಉಷ್ಣತೆ 40 ಡಿಗ್ರಿ ಸೆಲ್ಸಿಯಸ್ ಮೀರಿದರೆ ಅತ್ಯಂತ ಗಂಭೀರ ಸಮಸ್ಯೆ ಎದುರಾಗುವ ಸಂಭವ ಇದೆ. ಹೀಟ್ ಸ್ಟೋಕ್ ಜೀವಕ್ಕೆ ಕುತ್ತು ತರುವ ಸಾಧ್ಯತೆ ಇದೆ ಎಂದು ಎಚ್ಚರಿಸಿದ್ದಾರೆ.

ಸಿಲಿಕಾನ್ ಸಿಟಿಯಲ್ಲಿ ಹೀಟ್ ವೇವ್ ಆತಂಕ ಹೆಚ್ಚಾಗಿದ್ದು, ಜನರು ತಮ್ಮ ಆರೋಗ್ಯದ ಬಗ್ಗೆ ಗಮನಹರಿಸಬೇಕಿದೆ. ಜೊತೆಗೆ ಹೆಚ್ಚಿನ ಉಷ್ಣಾಂಶದಿಂದ ಹಾಗೂ ಪ್ರಜ್ಞೆ ತಪ್ಪುವ ಸ್ಥಿತಿಯಲ್ಲಿ ಇದ್ದರೆ ಬೆವರುವಿಕೆ ಸ್ಥಗಿತವಾದ್ರೆ 108 ಅಥವಾ 102 ಗೆ ಕರೆ ಮಾಡುವಂತೆ ಆರೋಗ್ಯ ಇಲಾಖೆ ಸೂಚಿಸಿದೆ.

## ಕಾಂಗ್ರೆಸ್

ಲೋಕಸಭಾ ಚುನಾವಣೆಯಲ್ಲಿ ಹೆಚ್ಚಿನ ಸ್ಥಾನಗಳನ್ನು ಗೆಲ್ಲಲು ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಈಗಿನಿಂದಲೇ ರಣತಂತ್ರ ರೂಪಿಸಲು ಆರಂಭಿಸಿದ್ದಾರೆ. ಬೆಳಗಾವಿ ಹಾಗೂ ಚಿಕ್ಕೋಡಿ ಎರಡು ಕ್ಷೇತ್ರಗಳಲ್ಲೂ ಕಾಂಗ್ರೆಸ್ ಅಭ್ಯರ್ಥಿಗಳನ್ನ ಶತಾಯ ಗತಾಯ ಗೆಲ್ಲಿಸಲು ಮುಂದಾಗಿದ್ದಾರೆ.

ಬೆಳಗಾವಿಯ ಅಥಣಿ ತಾಲೂಕಿನ ಕೊಟ್ಟಲಗಿ ಗ್ರಾಮದ 1,480 ಕೋಟಿ ರೂ ಮೊತ್ತದ ಅಮ್ಮಾಜೇಶ್ವರಿ ಏತ ನೀರಾವರಿಗೆ ಸಿಎಂ ಚಾಲನೆ ನೀಡಿದರು. ಇದರ ಬೆನ್ನಲ್ಲೇ ಚಿಕ್ಕೋಡಿ ಲೋಕಸಭೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೆಲ್ಲಿಸಿದರೆ ಲಕ್ಷ್ಮಣ ಸವದಿಗೆ ಮಂತ್ರಿಗಿರಿ ಫಿಕ್ಸ್ ಎಂದು ಡಿಕೆಶಿ ಭರವಸೆ ನೀಡುವುದರ ಜೊತೆಗೆ ಕಾಂಗ್ರೆಸ್ ಗೆಲ್ಲಿಸುವ ಟಾಸ್ಕ್ ನೀಡಿದ್ದಾರೆ.

ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಪರ ಮತ ಚಲಾಯಿಸುವಂತೆ ಮನವಿ ಮಾಡಿದ ಸಿಎಂ, ಡಿಸಿಎಂ ಕಾರ್ಯಕ್ರಮದಲ್ಲಿ ಬಿಜೆಪಿ ಪಕ್ಷದ ವಿರುದ್ಧ ಹರಿಹಾಯ್ದರು. ಸುಳ್ಳೇ ಬಿಜೆಪಿ ಅವರ ಮನೆ ದೇವರು. ಬಿಜೆಪಿ ಅವರನ್ನು ನಂಬದೇ ಕಾಂಗ್ರೆಸ್ ಅಭ್ಯರ್ಥಿಗಳನ್ನ ಗೆಲ್ಲಿಸಬೇಕು. ಮುಂದಿನ ದಿನದಲ್ಲಿ ಶಾಸಕ ಲಕ್ಷ್ಮಣ ಸವದಿಗೆ ಭವಿಷ್ಯವಿದೆ ಎನ್ನುವ ಮೂಲಕ ಸಿಎಂ ಸಿದ್ದರಾಮಯ್ಯ ಸವದಿಗೆ ಮಂತ್ರಿಗಿರಿ ನೀಡುವ ಮುನ್ಸೂಚನೆ ನೀಡಿದರು.

## ಕ್ರಮ?

ಕುಸಿಯುತ್ತಿರುವ ಅಂತರ್ಜಲ ಮಟ್ಟ, ಕ್ಷೀಣಿಸುತ್ತಿರುವ ಜಲಾಶಯಗಳು, ಮಳೆಯ ಕೊರತೆ ಇತ್ಯಾದಿ ಕಾರಣಗಳಿಂದ ಈ ವರ್ಷ ಬೆಂಗಳೂರು ಹಾಗೂ ರಾಜ್ಯದ ಇತರ ಕಡೆಗಳಲ್ಲಿ ಪರಿಸ್ಥಿತಿ ಗಂಭೀರವಾಗಿದೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ತನ್ನ ಕೇಂದ್ರ ಕಚೇರಿಯಲ್ಲಿ 35 ವಾರ್ಡ್‌ಗಳಲ್ಲಿ 110 ಹಳ್ಳಿಗಳಲ್ಲಿ ನೀರು ಸರಬರಾಜು ಸವಾಲುಗಳನ್ನು ಎದುರಿಸಲು ನಿಯಂತ್ರಣ ಕೊಠಡಿಯನ್ನು ಸ್ಥಾಪಿಸಿದೆ. ಹೆಚ್ಚುವರಿಯಾಗಿ, ನಗರದ ವಿವಿಧ ಭಾಗಗಳಲ್ಲಿ ಕುಡಿಯುವ ನೀರಿನ ಸಮಸ್ಯೆಗಳನ್ನು ನಿರ್ವಹಿಸಲು ನೋಡಲ್ ಅಧಿಕಾರಿಗಳನ್ನು ನೇಮಿಸಿದೆ. ನೀರಿನ ಟ್ಯಾಂಕರ್‌ಗಳ ಮಾಲೀಕರು ಇಂದಿನ (ಮಾರ್ಚ್ 7) ಗಡುವಿನ ಒಳಗೆ ನೋಂದಣಿ ಮಾಡಿಕೊಳ್ಳಲು ವಿಫಲವಾದರೆ ಸರ್ಕಾರವು ಸರ್ಕಾರವು ಟ್ಯಾಂಕರ್‌ಗಳನ್ನು ವಶಪಡಿಸಿಕೊಳ್ಳಲಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಈಗಾಗಲೇ ಎಚ್ಚರಿಕೆ ನೀಡಿದ್ದಾರೆ.

ಬಿಬಿಎಂಪಿ ಕೇಂದ್ರ ಕಚೇರಿಯಲ್ಲಿ ಕೆಲವು ದಿನಗಳ ಹಿಂದೆ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ್ದ ಶಿವಕುಮಾರ್, ಬೆಂಗಳೂರು ನಗರದಲ್ಲಿ ಒಟ್ಟು 3,500 ನೀರಿನ ಟ್ಯಾಂಕರ್‌ಗಳ ಪೈಕಿ ಶೇ 10ರಷ್ಟು ಅಂದರೆ 219 ಟ್ಯಾಂಕರ್‌ಗಳು ಮಾತ್ರ ನೋಂದಣಿಯಾಗಿವೆ. ಗಡುವಿನೊಳಗೆ ನೋಂದಣಿ ಮಾಡದಿದ್ದರೆ ಸರ್ಕಾರ ಅವುಗಳನ್ನು ವಶಪಡಿಸಿಕೊಳ್ಳಲಿದೆ. ನೀರು ಯಾವುದೇ ವ್ಯಕ್ತಿಯ ಸ್ವತ್ತಲ್ಲ, ಅದು ಸರ್ಕಾರಕ್ಕೆ ಸೇರಿದ ಸಂಪನ್ಮೂಲವಾಗಿದೆ. ಜಲಮೂಲಗಳ ಮೇಲೆ ಹಿಡಿತ ಸಾಧಿಸುವ ಹಕ್ಕು ಸರ್ಕಾರಕ್ಕಿದೆ ಎಂದು ಅವರು ಹೇಳಿದ್ದಾರೆ.

ಬಳಕೆಯಾಗದ ಹಾಲಿನ ಟ್ಯಾಂಕರ್‌ಗಳನ್ನು ನೀರು ಪೂರೈಕೆಗೆ ಬಳಸಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಕರ್ನಾಟಕ ಹಾಲು ಒಕ್ಕೂಟದ (ಕೆಎಂಎಫ್) ಒಡೆತನದ ಟ್ಯಾಂಕರ್‌ಗಳನ್ನು ಬೆಂಗಳೂರಿನಲ್ಲಿ ನೀರು ಒದಗಿಸಲು ಬಳಸುವ ಮೊದಲು ಸ್ವಚ್ಛಗೊಳಿಸಲಾಗುತ್ತದೆ. ಸಮಸ್ಯೆ ಬಗೆಹರಿಯುವವರೆಗೆ ನೀಗುವವರೆಗೆ ಈ ಟ್ಯಾಂಕರ್‌ಗಳ ಮೂಲಕ ನೀರು ಪೂರೈಸಲಾಗುತ್ತದೆ. ಬೆಂಗಳೂರಿನ ನೀರಿನ ಸಮಸ್ಯೆ ನಿವಾರಣೆಗೆ ಒಟ್ಟು 556 ಕೋಟಿ ರೂ.ಗಳನ್ನು ಮೀಸಲಿಡಲಾಗಿದೆ ಎಂದು ಶಿವಕುಮಾರ್ ಘೋಷಿಸಿದ್ದಾರೆ. ಬೆಂಗಳೂರು ನಗರದ ಪ್ರತಿ ಶಾಸಕರಿಗೆ ತಮ್ಮ ತಮ್ಮ ಕ್ಷೇತ್ರಗಳಲ್ಲಿ ನೀರಿನ ಕೊರತೆ ನೀಗಿಸಲು 10 ಕೋಟಿ ರೂ. ಘೋಷಿಸಲಾಗಿದೆ.

ಹೆಚ್ಚುವರಿಯಾಗಿ, ಬಿಬಿಎಂಪಿಯು 148 ಕೋಟಿ ರೂಪಾಯಿಗಳನ್ನು ಮೀಸಲಿಟ್ಟಿದ್ದರೆ, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ಸಮಸ್ಯೆಯನ್ನು ನಿಭಾಯಿಸಲು 128 ಕೋಟಿ ರೂಪಾಯಿಗಳನ್ನು ನಿಗದಿಪಡಿಸಿದೆ.

## ಸರ್ಕಾರ

ಕನಿಷ್ಠ ಬೆಲೆ ಅಥವಾ ಫ್ಲೋರ್ ಪ್ರೈಸ್ 212 ರೂನಂತೆ ಷೇರುಗಳು ಬಿಕರಿಯಾಗಲಿವೆ. ಈ ಮಾರಾಟದಿಂದ ಸರ್ಕಾರ ಸುಮಾರು 2,000 ಕೋಟಿ ರೂ ಆದಾಯ ಸಿಗುವ ನಿರೀಕ್ಷೆ ಇದೆ.

ಇಂದು ಗುರುವಾರ (ಮಾ. 7) ಸಾಂಸ್ಥಿಕ ಹೂಡಿಕೆದಾರರಿಗೆ ಎನ್ ಎಲ್ ಸಿ ಇಂಡಿಯಾದ ಷೇರುಗಳು ಮಾರಾಟಕ್ಕೆ ಲಭ್ಯ ಇರುತ್ತವೆ. ಶುಕ್ರವಾರ ಮಹಾಶಿವರಾತ್ರಿ ಹಬ್ಬದ ಪ್ರಯುಕ್ತ ಷೇರು ಮಾರುಕಟ್ಟೆ ಬಂದ್ ಆಗಿರುತ್ತದೆ. ಶನಿವಾರ ಮತ್ತು ಭಾನುವಾರ ಷೇರುಪೇಟೆಗೆ ವೀಕೆಂಡ್ ರಜೆಗಳಾಗಿವೆ. ಸೋಮವಾರ (ಮಾ. 11) ಎನ್ ಎಲ್ ಸಿ ಷೇರುಗಳನ್ನು ರೀಟೇಲ್ ಹೂಡಿಕೆದಾರರು ಖರೀದಿಸಬಹುದಾಗಿದೆ.

ತಮಿಳುನಾಡಿನ ಕಡಲೂರು ಜಿಲ್ಲೆಯ ನೇಯ್ವೇಲಿಯಲ್ಲಿ ಲಿಗ್ನೈಟ್ ಗಣಿಗಾರಿಕೆಗೆ 1956ರಲ್ಲಿ ಸ್ಥಾಪನೆಯಾದ ಕಂಪನಿ ಎನ್ ಎಲ್ ಸಿ ಇಂಡಿಯಾ. ಲಿಗ್ನೈಟ್ ಎಂಬುದು ಒಂದು ವಿಧದ ಕಲ್ಲಿದ್ದಲು. ನೇಯ್ವೇಲಿ ಮತ್ತು ರಾಜಸ್ಥಾನದ ಬಿಕನೇರ್ ಜಿಲ್ಲೆಯಲ್ಲಿ ಇದು ಲಿಗ್ನೈಟ್ ಗಣಿಗಾರಿಕೆ ನಡೆಸುತ್ತದೆ.

# ನಾಲೆಗಳಿಗೆ ನೀರು ಹರಿಸುವಂತೆ ಒತ್ತಾಯಿಸಿ ರೈತರ ಪ್ರತಿಭಟನೆ

**ಮೈಸೂರು:** ಕಾವೇರಿ ಕಬಿನಿ ಅಚ್ಚುಕಟ್ಟು ಭಾಗದ ಕೆರೆಗಳು ಒಣಗಿದ್ದು ಜನ ಜಾನುವಾರುಗಳಿಗೆ ಕುಡಿಯಲು ನೀರಿಲ್ಲ. ಬೆಳೆಗಳು ಒಣಗಿ ಹಾಳಾಗುತ್ತಿವೆ. ತಕ್ಷಣವೇ ಕಾಲುವೆಗಳ ಮೂಲಕ ನೀರು ಹರಿಸಿ ಕೆರೆ ಕಟ್ಟೆಗಳನ್ನು ತುಂಬಿಸಿ ಎಂದು ಒತ್ತಾಯಿಸಿ ರಾಜ್ಯ ರೈತ ಸಂಘಟನೆಗಳ ಒಕ್ಕೂಟ, ರಾಜ್ಯ ಕಬ್ಬು ಬೆಳೆಗಾರ ಸಂಘದ ನೂರಾರು ರೈತರು ಪ್ರತಿಭಟನೆ ನಡೆಸಿ ದಕ್ಷಿಣ ವಲಯ ನೀರಾವರಿ ಇಲಾಖೆಯ ಉಪ ಮುಖ್ಯ ಅಭಿಯಂತರಿಗ ಗೌತಮ್ ಅವರಿಗೆ ಹಕ್ಕೊತ್ತಾಯ ಪತ್ರ ಸಲ್ಲಿಸಿದರು.

ಮೂರು ದಿನದ ಒಳಗೆ ನೀರು ಹರಿಸುವ ನಿರ್ಧಾರ ಪ್ರಕಟಿಸಬೇಕು ಎಂದು ಇದೇ ಸಂರ್ಭದಲ್ಲಿ ಒತ್ತಾಯಿಸಲಾಯಿತು.

ರೈತರು ಮಾಡಿದ ಸಾಲ ತೀರಿಸಲಾಗದೇ ಜೀವನ ನಡೆಸಲು ಕಷ್ಟಕರ ವಾಗಿದ್ದು, ಸರ್ಕಾರವೇ ಬರಗಾಲ ಘೋಷಣೆ ಮಾಡಿದದೆ. ಬರ ಪರಿಹಾರ ಎಕರೆಗೆ ಕನಿಷ್ಟ 25,000/- ಹಾಗೂ ಜೀವನ ನಿರ್ವಹಣೆಗೆ ಪ್ರತಿ ತಿಂಗಳು ಪ್ರತಿ ಕುಟುಂಬಕ್ಕೆ ರೂ -10,000/- ಕೊಡಬೇಕು ಎಂದು ಸರ್ಕಾರಕ್ಕೆ ಒತ್ತಯಿಸಲಾಯಿತು.

ಪ್ರತಿಭಟನೆಯ ನೇತೃತ್ವ ವಹಿಸಿದ ರಾಜ್ಯಾಧ್ಯಕ್ಷರಾಧ ಕುರುಬೂರ್ ಶಾಂತಕುಮಾರ್ ಮಾತನಾಡಿ, ತಮಿಳುನಾಡಿನ ಮುಖ್ಯಮಂತ್ರಿಗಳ ಬಾಂಧವ್ಯಕ್ಕೆ ತಲೆಬಾಗಿ ನೀರಾವರಿ ಸಚಿವ ಡಿ ಕೆ ಶಿವಕುಮಾರ್ ಅವರು ಕಾವೇರಿ ಜಲಾಶಯಗಳಿಂದ ತಮಿಳುನಾಡಿಗೆ ನೀರು ಹರಿಸಿ ಖಾಲಿ ಮಾಡಿದ ಕಾರಣ ಬೆಂಗಳೂರು ನಗರದ ನಿವಾಸಿಗಳು ಕಾವೇರಿ ಅಚ್ಚುಕಟ್ಟು ಭಾಗದ ರೈತರು ನೀರಿನ ಸಮಸ್ಯೆಗೆ ಬಲಿಯಾಗಿದ್ದಾರೆ. ಅಚ್ಚುಕಟ್ಟು ಭಾಗದ ಕೆರೆಕಟ್ಟೆಗಳು ಒಣಗಿ ಹೋಗಿವೆ. ಜನ ಜಾನುವಾರುಗಳು ಕುಡಿಯುವ ನೀರಿಗೆ ಕಾದಾಡುತ್ತಿದ್ದಾರೆ. ಕೂಡಲೇ ನಾಲೆಗಳಲ್ಲಿ ನೀರು ಹರಿಸಿ ರೈತರ ರಕ್ಷಿಸಬೇಕು, ಕಾವೇರಿ ಅಚ್ಚು ಕಟ್ಟು ಭಾಗದ ರೈತರು ನರಕಯಾತನೆ ಅನುಭವಿಸುತ್ತಿದ್ದಾರೆ ಕೇಂದ್ರ, ರಾಜ್ಯ ಸರ್ಕಾರಗಳು ರೈತರನ್ನ ಹಗುರವಾಗಿ ಕಾಣುತ್ತಿವೆ ದೆಹಲಿಯಲ್ಲಿ ಚಳುವಳಿ ಮಾಡುವ ರೈತರ ಶಕ್ತಿ ಹೆಚ್ಚಿಸಲು ನಾವೆಲ್ಲ ನಿರಂತರ ಹೋರಾಟ ಮಾಡಬೇಕಾಗಿದೆ, ಎಂದು ರೈತರಿಗೆ ಕರೆ ನೀಡಿದರು. ಇಂದಿನ ಪ್ರತಿಭಟನೆಯಲ್ಲಿ ಜಿಲ್ಲಾಧ್ಯಕ್ಷ ಪಿ ಸೋಮಶೇಖರ್ ಇಂದಿನ ಚಳುವಳಿಯಲ್ಲಿ ರಾಜ್ಯ ಕಬ್ಬು ಬೆಳೆಗಾರರ ಸಂಘದ ಜಿಲ್ಲಾಧ್ಯಕ್ಷ ಪಿ ಸೋಮಶೇಖರ್, ರಾಜ್ಯ ಸಂಘಟನಾ ಕಾರ್ಯದರ್ಶಿ ಅತ್ತಹಳ್ಳಿ ದೇವರಾಜ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬರಡನಪುರ ನಾಗರಾಜ್, ಜಿಲ್ಲಾ ಪ್ರಧಾನಕಾರ್ಯದರ್ಶಿ ಕಿರಗಸೂರು ಶಂಕರ್, ಜಿಲ್ಲಾ ಉಪಾಧ್ಯಕ್ಷ ಮಾರ್ಬಳ್ಳಿ ನೀಲಕಂಠಪ್ಪ, ಮುಖಂಡರಾದ ಸಿದ್ದೇಶ್, ವೆಂಕಟೇಶ್, ರಾಜೇಶ್, ದೇವನೂರು ವಿಜಯೇಂದ್ರ, ಪ್ರದೀಪ್, ಸೂರಿ, ಉಮೇಶ್, ಕಾಟೂರು ನಾಗೇಶ್, ಅಂಬಳೆ ಮಂಜುನಾಥ್, ಸುನಿಲ್, ಶಿವಸ್ವಾಮಿ ಚೇತನ್, ಶಂಭು, ಶಾಂತರಾಜ್, ಶಿವಮೂರ್ತಿ, ಮಂಜುನಾಥ್, ಶಿವಕುಮಾರ್, ನೂರಕ್ಕೂ ಹೆಚ್ಚು ರೈತರು ಭಾಗವಹಿಸಿದ್ದರು.



# ಪ್ರಾಣಿ, ಪಕ್ಷಿಸಂಕುಲದ ಸಂರಕ್ಷಣೆ ನಮ್ಮ ಹೊಣೆ

**ಮೈಸೂರು:** ಅನಾದಿ ಕಾಲದಿಂದಲೂ ಮನುಷ್ಯನಿಗೆ ಪ್ರಕೃತಿಯೊಂದಿಗೆ ಅವಿನಾಭಾವ ಸಂಬಂಧವಿದೆ. ಇಂದು ಪ್ರಕೃತಿಯ ಅಸಮತೋಲನ, ಮಾನವ ನಿರ್ಮಿತ ಕೆಲವು ತಪ್ಪುಗಳಿಂದ ಪಕ್ಷಿ ಸಂಕುಲ ನಾಶದ ಅಂಚಿನಲ್ಲಿದೆ. ಬೇಸಿಗೆಯ ತಾಪಮಾನದಲ್ಲಿ ಪ್ರಾಣಿ, ಪಕ್ಷಿಗಳು ನೀರಿಲ್ಲದೆ ಕಂಗೆಡುವ ಸ್ಥಿತಿ ಇದೆ. ಪರಿಸರದ ಜತೆಗೆ ಪ್ರಾಣಿ, ಪಕ್ಷಿಗಳ ಸಂರಕ್ಷಣೆ ನಮ್ಮ ಜವಾಬ್ದಾರಿಯಾಗಿದೆ ಎಂದು ಉರಗ ತಜ್ಞ ಸ್ನೇಕ್ ಶಾಮ್ ಹೇಳಿದರು. ನಗರದ ಸರಸ್ವತಿಪುರಂ ನಲ್ಲಿರುವ ಟಿ.ಟಿ.ಎಲ್ ಟ್ರಸ್ಟ್ ಹಾಗೂ ಟಿ.ಟಿ.ಎಲ್ ವಾಣಿಜ್ಯ ವ್ಯವಹಾರ ನಿರ್ವಹಣಾ ಕಾಲೇಜು ಮತ್ತು ಟಿ.ಟಿ.ಎಲ್ ಸ್ವತಂತ್ರ ಪದವಿ ಪೂರ್ವ ಕಾಲೇಜು , ಯುವ ರೆಡ್ ಕ್ರಾಸ್ ಘಟಕ ಹಾಗೂ ರಾಷ್ಟ್ರೀಯ ಸೇವಾ ಯೋಜನೆ ಘಟಕ ಮತ್ತು ಐಕ್ಯೂಎಸಿ ವತಿಯಿಂದ ಸುಡುಬಿಸಿಲ ತಾಪಕ್ಕೆ ತಲ್ಲಣಿಸುವ ಮೂಕ ಜೀವಿಗಳ ದಾಹಕ್ಕೆ ಮೌನ ಮಿಡಿತ ಪ್ರಾಣಿ-ಪಕ್ಷಿಗಳಿಗೆ ನೀರು ಉಣಿಸುವ ಚಟುವಟಿಕ ಕಾರ್ಯಕ್ರಮವು ಟಿ.ಟಿ.ಎಲ್ ಕಾಲೇಜ್ ಆವರಣದಲ್ಲಿ

ಹಕ್ಕಿಗಳಿಗೆ ನೀರುಣಿಸಲು ಬಟ್ಟಲು ಹಾಗೂ ಸಿಮೆಂಟ್ ತೊಟ್ಟಿಗೆ ನೀರ ಹಾಕುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು ಭವಿಷ್ಯದ ರೂವಾರಿಗಳಾದ ವಿದ್ಯಾರ್ಥಿಗಳಲ್ಲಿ ಈ ಬಗ್ಗೆ ಅರಿವು ಮೂಡಿಸಿ ಪಕ್ಷಿಗಳಿಗೆ ನೀರುಣಿಸುವ ಕಾರ್ಯಕ್ಕೆ ಮುಂದಾಗಿರುವುದು ಮಾದರಿ ಸೇವೆಯಾಗಿದೆ. ವಿದ್ಯಾರ್ಥಿಗಳು ಹಾಗೂ ಯುವ ಸಂಘಟನೆಗಳು ಇದನ್ನು ಆಂದೋಲನದ ಮಾದರಿಯಲ್ಲಿ ಜಿಲ್ಲೆಯ ಎಲ್ಲೆಡೆ ಹಮ್ಮಿಕೊಳ್ಳಬೇಕು. ತನ್ಮೂಲಕ ಪ್ರಾಣಿ, ಪಕ್ಷಿಗಳನ್ನು ಪ್ರೀತಿಸುವ ವಾತಾವರಣ ನಿರ್ಮಾಣವಾಗಬೇಕು ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಟಿ.ಟಿ. ಎಲ್ ಕಾಲೇಜಿನ ಪ್ರಾಂಶುಪಾಲರು,ಆಡಳಿತ ಮತ್ತು ನಿಯೋಜನ ಅಧಿಕಾರಿ ಡಾ.ಬಿ ವಿ ಪ್ರಶಾಂತ್ ನೆರವೇರಿಸಿದರು, ಮುಖ್ಯ ಅತಿಥಿಗಳಾಗಿ ಟಿ.ಟಿ. ಎಲ್ ಟ್ರಸ್ಟ್ನ ಡಾ. ಗೀತಾ ರಾಮ್ ದಾಸ್, ಉರಗ ತಜ್ಞರಾದ ಸ್ನೇಕ್ ಶಾಮ್, ಕೆಎಂಪಿ ಕೆ ಟ್ರಸ್ಟ್ ಅಧ್ಯಕ್ಷರಾದ ವಿಕ್ರಮ ಅಯ್ಯಂಗಾರ್, ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಬ್ರಹ್ಮರಂಬ. ಎಸ್, ಪದವಿ ಕಾಲೇಜಿನ ಹಿರಿಯ ವಾಣಿಜ್ಯ ಶಾಸ್ತ್ರದ ಉಪನ್ಯಾಸಕರಾದ ಪ್ರೊ . ಎನ್.ಎಂ. ರಾಮಚಂದ್ರಯ್ಯ,ಯುವ ರೆಡ್ ಕ್ರಾಸ್ ಘಟಕದ ಸಂಚಾಲಕರಾದ ಎಚ್ ಆರ್ ಗಿರೀಶ್ , ಪ್ರಜ್ಞಾವಂತ ನಾಗರಿಕ ವೇದಿಕೆ ಅಧ್ಯಕ್ಷ ಕಡಕೋಳ ಜಗದೀಶ್, ಸುಚಿಂದ್ರ, ಮಿರ್ಲೆ ಪನೀಶ್ ಹಾಗೂ ಶಾಲೆಯ ಶಿಕ್ಷಕ /ಶಿಕ್ಷಕೇತರ ವೃಂದ ಮತ್ತು ವಿದ್ಯಾರ್ಥಿಗಳು ಹಾಜರಿದ್ದರು



# ಹೋಮ್ ಸ್ಟೇ ನಡೆಸಲು ಅಧಿಕೃತವಾಗಿ ನೋಂದಣಿ ಮಾಡಿಕೊಳ್ಳುವುದು ಕಡ್ಡಾಯ

ಮೈಸೂರು:- ಜಿಲ್ಲೆಯಾದ್ಯಂತ ಇರುವ ಅಧಿಕೃತವಾಗಿ ನೊಂದಾಯಿಸಿರುವ ಹೋಮ್ ಸ್ಟೇಗಳನ್ನು ಪಟ್ಟಿಯನ್ನು ಪಡೆದು,ಅನಧಿಕೃತವಾಗಿ ಕಾರ್ಯನಿರ್ವಹಿಸುತ್ತಿರುವ ಹೋಮ್ ಸ್ಟೇ ಗಳನ್ನು ಮುಚ್ಚಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿಯ ಅಧ್ಯಕ್ಷರಾದ ಡಾ. ಕೆ ವಿ ರಾಜೇಂದ್ರ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಜಿಲ್ಲಾಪಂಚಾಯಿತಿಯ ಡಿ. ದೇವರಾಜ ಅರಸು ಸಭಾಂಗಣದಲ್ಲಿ ನಡೆದ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಅನಧಿಕೃತ ಹೋಮ್ ಸ್ಟೇ ನಿರ್ಮಾಣ ಹೆಚ್ಚಾಗುತ್ತಿದ್ದು ಅದರ ಬಗ್ಗೆ ಅಧಿಕಾರಿಗಳು ವರದಿ ಪಡೆದು ಕ್ರಮ ಕೈಗೊಳ್ಳಬೇಕು ಎಂದರು.

ಮೈಸೂರು ಜಿಲ್ಲೆಯ ಎಲ್ಲಾ ಇಲಾಖೆಯ ಅಧಿಕಾರಿಯನ್ನು ಪ್ರವಾಸೋದ್ಯಮ ಅಭಿವೃದ್ಧಿ ಇಲಾಖೆಯ ಸದಸ್ಯರನ್ನಾಗಿ ನೇಮಿಸಿ, ಹಾಗೂ ನೇರ ಪಾಲುದಾರರೊಂದಿಗೆ ಪ್ರತಿ ಮೂರು ತಿಂಗಳಿಗೊಮ್ಮೆ ಸಭೆ ಕರೆದು, ಕೆಲಸದ ಪ್ರವಾಸಿ ತಾಣಗಳ ಅಭಿವೃದ್ಧಿ ಮಾಡಬೇಕು ಎಂದರು.

ಮೈಸೂರು ಪ್ರವಾಸೋದ್ಯಮವನ್ನು ಹೆಚ್ಚಾಗಿ ಪ್ರಚಾರ ಮಾಡಲು ಇಲಾಖೆಯ ವೆಬ್ ಸೈಟ್ ಪ್ರಾರಂಭಿಸಿ



ಅದರಲ್ಲಿ ಸಾರ್ವಜನಿಕರಿಗೆ ಎಲ್ಲಾ ಮಾಹಿತಿಯು ತಿಳಿಯುವಂತೆ ಮಾಡಬೇಕು. ಯಾವುದೇ ಹೋಟೆಲ್, ರೆಸ್ಟೋರೆಂಟ್ ಹಾಗೂ ಇತ್ಯಾದಿಗಳನ್ನು ಪ್ರಾರಂಭಿಸಲು ಗ್ರಾಮಪಂಚಾಯಿತಿ ಅಥವಾ ಕಾರ್ಪೋರೇಶನ್ ಅವರು ಅನುಮತಿ ನೀಡುವ ಮೊದಲು ನಿಧಿ ಪೋರ್ಟಲ್ ನಲ್ಲಿ ಕಡ್ಡಾಯವಾಗಿ ನೋಂದಣಿ ಮಾಡಿಕೊಳ್ಳುವಂತೆ ತಿಳಿಸಬೇಕು. ಇದರಿಂದ ಹೆಚ್ಚಿನ ಜನರಿಗೆ ನಿಧಿ ಪೋರ್ಟಲ್ ಬಗ್ಗೆ ಅವರ ಸೌಲಭ್ಯದ ಬಗ್ಗೆ ತಿಳಿಯುತ್ತದೆ ಎಂದರು.

ಈಗಾಗಲೇ ಗುರುತಿಸಿರುವ ಪ್ರವಾಸಿತಾಣಗಳಲ್ಲಿನ ಕುಂದು ಕೊರತೆಯನ್ನು ಗಮನಿಸಿ ಅದರ ಅಭಿವೃದ್ಧಿಗೆ ಬೇಕಾದ ಕಾಮಗಾರಿಗನ್ನು ಕೈಗೊಳ್ಳಬೇಕು.ಇದಕ್ಕೆ ಜಿಲ್ಲಾಧಿಕಾರಿಗಳ ಅನುಮತಿ ಕಡ್ಡಾಯ ಮಾಡಬೇಕು. ಅದಲ್ಲದೆ ಸಾರ್ವಜನಿಕರಿಂದ ಇತರೆ ಬಿಟ್ಟು ಹೋದಂತಹ ಪ್ರವಾಸಿ ತಾಣಗಳೇನಾದರೂ ಇದ್ದರೆ ಅದರ ಬಗ್ಗೆ ಮಾಹಿತಿ ಪಡೆದು ಅವುಗಳನ್ನು ಪಟ್ಟಿಯಲ್ಲಿ ಸೇರಿಸಬೇಕು ಎಂದರು.

ಪ್ರವಾಸಿಗರನ್ನು ಸೆಳೆಯಲು ಪುಟ್ಟ ವಿಡಿಯೋಗಳ ಮೂಲಕ ಪ್ರಚಾರ ಮಾಡಬೇಕು. ಅದಕ್ಕೆ ಪ್ರಸಿದ್ಧ ಬ್ಲಾಗರ್ಸ್ ಹಾಗೂ ಛಾಯಾಚಿತ್ರಗಾರರಿಗೆ ಮೈಸೂರು ಪ್ರವಾಸಿ ತಾಣಗಳ ಬಗ್ಗೆ ಸ್ಪರ್ಧೆಯನ್ನು ಏರ್ಪಡಿಸಿ ನಗದು ಬಹುಮಾನವನ್ನು ನೀಡಬೇಕು. ಇದರಿಂದ ಬಂದ ಉತ್ತಮ ವಿಡಿಯೋ ಮತ್ತು ಫೋಟೋವನ್ನು ಆಯ್ದುಕೊಂಡು ಕಾಫಿ ಟೇಬಲ್ ಬುಕ್ ಅನ್ನು ತಯಾರಿಸಬೇಕು ಎಂದರು. ಪ್ರವಾಸೋದ್ಯಮ ಇಲಾಖೆಯಿಂದ ಬರುವಂತಹ ಪ್ರವಾಸಿಗರಿಗೆ ವಿವಿಧ ರೀತಿಯ ಪ್ಯಾಕೇಜ್ ಗಳನ್ನು ನೀಡಿ ಅವರನ್ನು ಸೆಳೆಯಬೇಕು ಎಂದರು. ಬ್ರಾಂಡ್ ಮೈಸೂರು ಲೋಗೋ ವನ್ನು ಜಿಲ್ಲೆಯಾದ್ಯಂತ ಪ್ರಮುಖ ಸ್ಥಳಗಳಲ್ಲಿ ಹಾಕಿ ಅದರ ಪ್ರಚಾರ ಮಾಡಬೇಕು ಎಂದರು. ಸಭೆಯಲ್ಲಿ ಜಿಲ್ಲಾಪಂಚಾಯತ್ ನ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಾದ ಕೆ. ಎಂ ಗಾಯತ್ರಿ, ಮಹಾನಗರ ಪಾಲಿಕೆ ಆಯುಕ್ತರಾದ ಡಾ ಮಧು, ಪೊಲೀಸ್ ವರಿಷ್ಠಾಧಿಕಾರಿಗಳಾದ ಸೀಮಾ ಲಾಟ್ಕರ್, ಪ್ರವಾಸೋದ್ಯಮ ಇಲಾಖೆಯ ಜಂಟಿ ನಿರ್ದೇಶಕರಾದ ಸವಿತಾ, ವಾರ್ತಾ ಇಲಾಖೆ ಸಹಾಯಕ ನಿರ್ದೇಶಕ ಟಿ.ಕೆ.ಹರೀಶ್ ಸೇರಿದಂತೆ ವಿವಿಧ ಸಂಸ್ಥೆಯ ನೇರ ಪಾಲುದಾರರು ಉಪಸ್ಥಿತರಿದ್ದರು.

## ಕಟ್ಟಡ ನಿರ್ಮಾಣದಲ್ಲಿನ ಸಮಗ್ರ ಕೌಶಲ್ಯ ತರಬೇತಿ

**ಮೈಸೂರು:** ನಿರ್ಮಾಣ ವಲಯದಲ್ಲಿ ಕೌಶಲ್ಯ ಮತ್ತು ಜ್ಞಾನವನ್ನು ಹೆಚ್ಚಿಸುವ ಉದ್ದೇಶದಿಂದ ನಕ್ಷಾ ಬಿಲ್ಡರ್ಸ್, ಅಲ್ಟ್ರಾಟೆಕ್ ಸಿಮೆಂಟ್ ಸಹಭಾಗಿತ್ವದಲ್ಲಿ ನಕ್ಷಾ ಬಿಲ್ಡರ್ಸ್ ಉದ್ಯೋಗಿಗಳಿಗೆ ಏರ್ಪಡಿಸಿದ್ದ ಐದು ವಾರಗಳ ಸಮಗ್ರ ಪ್ರಮಾಣೀಕರಣ ತರಬೇತಿ ಕಾರ್ಯಕ್ರಮಕ್ಕೆ ಅಲ್ಟ್ರಾಟೆಕ್ ಸಿಮೆಂಟ್ ಕಂಪನಿಯ ಟೆರಿಟೋರಿಯಲ್ ಮ್ಯಾನೇಜರ್ ಮೋಹನ್ ದೇವಾಂಗ್ ಚಾಲನೆ ನೀಡಿದರು. ವಿದ್ಯಾವರ್ಧಕ ಕಾಲೇಜ್ ಆಫ್ ಇಂಜಿನಿಯರಿಂಗ್ ಸಹಯೋಗದೊಂದಿಗೆ ಅಲ್ಟ್ರಾಟೆಕ್ ಕಂಪನಿ ಕಾಲೇಜಿನಲ್ಲಿ ಸ್ಥಾಪಿಸಿರುವ ಸೆಂಟರ್ ಆಫ್ ಎಕ್ಸಲೆನ್ಸ್ - ಸಸ್ಟೈನಬಲ್ ಮೆಟೀರಿಯಲ್ಸ್ ಲ್ಯಾಬ್ ನಲ್ಲಿ ಈ ತರಬೇತಿ ಕಾರ್ಯಕ್ರಮ ನಡೆಯಿತು.

ಈ ಸಂದರ್ಭದಲ್ಲಿ ಮೋಹನ್ ದೇವಾಂಗ್ ಮಾತನಾಡಿ, ಅಲ್ಟ್ರಾಟೆಕ್ ತಜ್ಞರಿಂದ ಅತ್ಯಂತ ಸರಳ ಮತ್ತು ಸುಗಮವಾದ ಈ ಪ್ರಮುಖ ತರಬೇತಿ ಕಾರ್ಯಕ್ರಮವು ಮೂಲಭೂತ ಕಟ್ಟಡ ಸಾಮಗ್ರಿಗಳು ಮತ್ತು ಕಟ್ಟಡದ ಗುಣಮಟ್ಟ, ಆರ್‌ಸಿಸಿ ವಿವರಗಳ ಪ್ರಾಯೋಗಿಕ ಅಂಶಗಳು, ಅಡಿಪಾಯ ಮತ್ತು ಬ್ಯಾಕ್ ಫಿಲ್ಲಿಂಗ್‌ನ ಪ್ರಾಮುಖ್ಯತೆ, ನಿರ್ಮಾಣ ವಿಧಾನಗಳು ಮತ್ತು ಹೊಸ ಪೀಳಿಗೆಯ ಸಾಮಗ್ರಿಗಳು ಸೇರಿದಂತೆ ವಿವಿಧ ಶ್ರೇಣಿಯ ನಿರ್ಣಾಯಕ ವಿಷಯಗಳನ್ನು ತರಬೇತಿಯು ಒಳಗೊಂಡಿದೆ ಎಂದರು.



## 11 ರಂದು ಮಹಿಳಾ ಕ್ರೀಡಾಕೂಟ

**ರಾಮನಗರ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ 2023-24ನೇ ಸಾಲಿನ ರಾಮನಗರ ಜಿಲ್ಲೆಯ ಮಹಿಳಾ ಕ್ರೀಡಾಕೂಟವನ್ನು ಇದೇ ಮಾ. 11ರಂದು ಸಂಘಟಿಸಲಾಗುತ್ತಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ರಾಷ್ಟ್ರೀಯ ಲೋಕ್ ಅದಾಲತ್ ಮುಂದೂಡಿಕೆ

**ಬೆಂಗಳೂರು:** ರಾಷ್ಟ್ರೀಯ ಲೋಕ್ ಅದಾಲತ್‌ನ್ನು ಈ ಹಿಂದೆ ಮಾರ್ಚ್ 9 ರಂದು ನಿಗಧಿಯಾಗಿದ್ದು, ಕಾರಣಾಂತರಗಳಿಂದ ದಿನಾಂಕವನ್ನು ಮಾರ್ಚ್ 16 ಕ್ಕೆ ಮುಂದೂಡಲಾಗಿದೆ. ಸಾರ್ವಜನಿಕರು ಬಾಕಿ ಉಳಿದಿರುವ ವ್ಯಾಜ್ಯಗಳನ್ನು ಲೋಕ್ ಅದಾಲತ್ ಮೂಲಕ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಪ್ರಕಟಣೆ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ- 15100 ಮತ್ತು 1800-425-90900 ಜಾಲತಾಣ www.kslsa.kar.nic.in ಅಥವಾ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಗಳು ಅಥವಾ ತಾಲೂಕು ಕಾನೂನು ಸೇವಾ ಸಮಿತಿಯ ಸದಸ್ಯ ಕಾರ್ಯದರ್ಶಿ ಅವರನ್ನು ಸಂಪರ್ಕಿಸಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ನೇಮಕಾತಿ ಬಗ್ಗೆ ಮಾಹಿತಿ ಸಲ್ಲಿಸಿ

**ಮಂಡ್ಯ:** ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960 ನಿಯಮ 29-ಬಿ(8) ರನ್ವಯ ಯಾವುದೇ ಸಹಕಾರ ಸಂಘದ ಮುಖ್ಯ ಕಾರ್ಯನಿರ್ವಾಹಕರು ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004 ನಿಯಮ 8- ಬಿ(8) ರನ್ವಯ ಯಾವುದೇ ಸೌಹಾರ್ದ ಸಹಕಾರಿಯ ಮುಖ್ಯ ಕಾರ್ಯನಿರ್ವಾಹಕರು ವಾರ್ಷಿಕ ಮಹಾಸಭೆಯಲ್ಲಿ ಲೆಕ್ಕಪರಿಶೋಧಕರ ಅಥವಾ ಲೆಕ್ಕಪರಿಶೋಧನೆಯ ಫರ್ಮನ್ನು ನೇಮಕ ಮಾಡಿಕೊಂಡ ಬಗ್ಗೆ ವಾರ್ಷಿಕ ಮಹಾಸಭೆಯ ದಿನಾಂಕದಿಂದ 07 ದಿನದೊಳಗೆ ಇಲಾಖಾ ಲೆಕ್ಕಪರಿಶೋಧಕರಿಗೆ/ ಸನ್ನದು ಲೆಕ್ಕಪರಿಶೋಧನಾ ಸಂಸ್ಥೆಗೆ ಮತ್ತು ಸಹಕಾರಿ ಲೆಕ್ಕಪರಿಶೋಧಕ ನಿರ್ದೇಶಕರಿಗೆ ತಿಳಿಸಬೇಕಾಗಿರುತ್ತದೆ. ಆದರೆ ಜಿಲ್ಲೆಯ ಬಹುಪಾಲು ಸಹಕಾರ ಸಂಘಗಳು ಮತ್ತು ಸೌಹಾರ್ದ ಸಹಕಾರಿಗಳು ಇಲಾಖಾ ಲೆಕ್ಕ ಪರಿಶೋಧಕರ/ಸನ್ನದು ಲೆಕ್ಕಪರಿಶೋಧನಾ ಸಂಸ್ಥೆಗೆ ನೇಮಕಾತಿ ಬಗ್ಗೆ ಮಾಹಿತಿ ಸಲ್ಲಿಸಿರುವುದಿಲ್ಲ. ಈವರೆಗೂ ಸದರಿ ಮಾಹಿತಿಯನ್ನು ಸಲ್ಲಿಸದ ಸಹಕಾರ ಸಂಘಗಳು ಈ ಪ್ರಕಟಣೆ ಪ್ರಕಟಣೆಯಾದ 07 ದಿನದೊಳಗೆ ವಾರ್ಷಿಕ ಮಹಾಸಭೆಯಲ್ಲಿ ಇಲಾಖಾ ಲೆಕ್ಕಪರಿಶೋಧಕರನ್ನು ಅಥವಾ ಸನ್ನದು ಲೆಕ್ಕಪರಿಶೋಧನಾ ಸಂಸ್ಥೆಯನ್ನು ನೇಮಕಾತಿ ಮಾಡಿಕೊಂಡಿರುವ ಬಗ್ಗೆ ಮಾಹಿತಿಯನ್ನು ವಾರ್ಷಿಕ ಮಹಾಸಭೆಯ ನಡವಳಿಯೊಂದಿಗೆ ಮಂಡ್ಯ ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆಯ ಜಂಟಿ ನಿರ್ದೇಶಕರ ಕಛೇರಿಗೆ ದೂ. ಸಂ. 08232-239705 ಹಾಗೂ ಇಮೇಲ್ jdcamandya70@gmail.com ಈ ಕಚೇರಿಗೆ ಸಲ್ಲಿಸಬೇಕು. ಇಲ್ಲವಾದಲ್ಲಿ ಸಹಕಾರ ಸಂಘಗಳ ಅಧಿನಿಯಮ 1960ರ ನಿಯಮ 63(2) ರಂತೆ ಸಂಘದ ಲೆಕ್ಕಪತ್ರಗಳ ಪರಿಶೋಧನೆಯನ್ನು ಮಾಡಲು ಲೆಕ್ಕಪರಿಶೋಧಕರನ್ನು ಇಲಾಖೆಯಿಂದ ನೇಮಕ ಮಾಡಲಾಗುವುದು ಎಂದು ಮಂಡ್ಯ ಸಹಕಾರ ಸಂಘಗಳ ಲೆಕ್ಕ ಪರಿಶೋಧನಾ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ

**ಮಂಡ್ಯ:** ಸರ್.ಎಂ.ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದ ಅಭಿವೃದ್ಧಿ ಕಾಮಗಾರಿಯ ಉದ್ಘಾಟನೆ ಹಾಗೂ 2023-24ನೇ ಸಾಲಿನ ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಮಾರ್ಚ್ 11 ಹಾಗೂ 12 ರಂದು ಬೆಳಿಗ್ಗೆ 10.00 ಗಂಟೆಗೆ ಮಂಡ್ಯ ಸರ್.ಎಂ.ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಸಂಘಟಿಸಲಾದ ತಾಲ್ಲೂಕು ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟದಲ್ಲಿ ಭಾಗವಹಿಸಿ ವೈಯುಕ್ತಿಕ ಸ್ಪರ್ಧೆಗಳಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದ ಹಾಗೂ ಗುಂಪು ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ ಪಡೆದವರು ಹಾಗೂ ನೇರ ಜಿಲ್ಲಾ ಮಟ್ಟದ ಸ್ಪರ್ಧೆಗಳಲ್ಲಿ ಭಾಗವಹಿಸಲು ಇಚ್ಛಿಸುವ ಸ್ಪರ್ಧಿಗಳು ಮಾರ್ಚ್ 11 ರಂದು ಬೆಳಿಗ್ಗೆ 9.00 ಗಂಟೆಗೆ ಮಂಡ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಲ್ಲಿ ವರದಿ ಮಾಡಿಕೊಂಡು ಕ್ರೀಡಾಕೂಟ/ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಮಂಡ್ಯ ಯುವ ಸಬಲೀಕರಣ ಮತ್ತುಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ಪ್ರವಹಿಸಿ ಗಾಯ

**ಚನ್ನಪಟ್ಟಣ:** ತಾಲ್ಲೂಕಿನ ಮೊಳೆದೊಡ್ಡಿ ಗ್ರಾಮದ ಶಾಲೆಯ ಬಳಿ ಕೆಟ್ಟು ಹೋಗಿದ್ದ ಟ್ರಾನ್ಸ್ ಪಾರ್ಮರ್ ಬದಲಿಸುವ ವೇಳೆ ವಿದ್ಯುತ್ ಪ್ರವಹಿಸಿ ಕಾರ್ಮಿಕನೊಬ್ಬ ಗಂಭೀರ ಗಾಯಗೊಂಡಿದ್ದಾನೆ.ಕೊಳ್ಳೆಗಾಲದ ಚಿಕ್ಕ ಇಂಡವಾಡಿ ಗ್ರಾಮದ ಚಂದ್ರು(28) ಎಂಬ ಯುವಕನಿಗೆ ಘಟನೆಯಲ್ಲಿ ಎರಡು ಕಾಲುಗಳು ಸುಟ್ಟು ಹೋಗಿದ್ದು ಗಂಭೀರವಾಗಿ ಗಾಯಗೊಂಡಿದ್ದಾನೆ. ಶಾಲೆಯ ಬಳಿ ಇರುವ ಟ್ರಾನ್ಸ್ ಫಾರ್ಮರ್ ಅನ್ನು ಬದಲಿಸುವಂತೆ ಸೂಚಿಸಿದ್ದ ಹಿನ್ನೆಲೆಯಲ್ಲಿ ಸತೀಶ್ ಎಂಬ ಗುತ್ತಿಗೆದಾರ ಕಾರ್ಮಿಕರನ್ನು ಕರೆತಂದು ಕೆಲಸ ಮಾಡುತ್ತಿದ್ದು, ಸಂಜೆ 6.20 ಕ್ಕೆ ಕೆಲಸ ಮುಗಿದಿರುತ್ತೆ, ಲೈನ್ ಚಾರ್ಜ್ ಮಾಡುವಂತೆ ಹೇಳಿದ್ದರಿಂದ ವಿದ್ಯುತ್ ಕೊಡಲಾಗಿದ್ದು ಈ ವೇಳೆ ಇನ್ನೂ ಕಂಬದಲ್ಲೆ ಕೆಲಸ ಮಾಡುತ್ತಿದ್ದ ಈತ ವಿದ್ಯುತ್ ಪ್ರವಹಿಸಿ ಮೇಲಿನಿಂದ ಕೆಳಕ್ಕೆ ಬಿದ್ದು ಗಂಭೀರವಾಗಿ ಗಾಯಗೊಂಡಿದ್ದಾನೆ. ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿಗೆ ರವಾನಿಸಲಾಗಿದೆ.

# ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮ



**ಮಂಡ್ಯ:** ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕ ಪಿ ರವಿಕುಮಾರ್ ಅವರು ಇಂದು ಮಂಡ್ಯ ನಗರಸಭೆ ಮುಂಭಾಗ ಸಂವಿಧಾನ ಜಾಗೃತಿ ಜಾಥಾ ಸ್ತಬ್ಧ ಚಿತ್ರಕ್ಕೆ ಇಂದು ಚಾಲನೆ ನೀಡಿದರು. ಜಾಗೃತಿ ಜಾಥಾದಲ್ಲಿ ವಿವಿಧ ಕಲಾತಂಡಗಳು, ಬ್ಯಾಂಡ್ ನೊಂದಿಗೆ ವಿದ್ಯಾರ್ಥಿಗಳು ಕಳಸ ಹೊತ್ತ ಮಹಿಳೆಯರು ಭಾಗವಹಿಸಿ ಕಾರ್ಯಕ್ರಮಕ್ಕೆ ವಿಶೇಷ ಮೆರಗು ನೀಡಿದರು. ವಿವಿಧ ಸಂಘಟನೆಯ ಮುಖ್ಯಸ್ಥರು ಕಾರ್ಯಕ್ರಮದಲ್ಲಿ ಭಾಗವಹಿಸಿದರು.

# 147 ಶಾಲಾ ಕಟ್ಟಡ ನಿರ್ಮಾಣಕ್ಕೆ ಕ್ರಮ

**ಮೈಸೂರು:** ವರುಣಾ ಕ್ಷೇತ್ರದಲ್ಲಿ 147 ನೂತನ ಶಾಲಾ ಕಟ್ಟಡಗಳನ್ನು ನಿರ್ಮಾಣ ಮಾಡಬೇಕಿದ್ದು. ಈ ಕಟ್ಟಡಗಳ ನಿರ್ಮಾಣಕ್ಕೆ 24 ಕೋಟಿ ರೂ. ಬೇಕಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯರವರ ಗಮನಕ್ಕೆ ತಂದು 2025 ರೊಳಗೆ ಎಲ್ಲಾ ಕಟ್ಟಡಗಳ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುವುದು ಎಂದು ವರುಣಾ ಕ್ಷೇತ್ರದ ಮಾಜಿ ಶಾಸಕ ಆಶ್ರಯಸಮಿತಿ ಅಧ್ಯಕ್ಷ ಡಾ. ಯತೀಂದ್ರ ಸಿದ್ದರಾಮಯ್ಯ ತಿಳಿಸಿದರು.

ವರುಣಾಕ್ಷೇತ್ರದ ನಗರ್ಲೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆಚರಣದಲ್ಲಿ 42 ಲಕ್ಷರೂ ವೆಚ್ಚದ 3 ಶಾಲಾ ಕೊಠಡಿಗಳ ನಿರ್ಮಾಣಕ್ಕೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದ ಅವರು ಶಿಕ್ಷಣದಿಂದ ಮಾತ್ರ ದೇಶ ಮುಂದುವರಿಯಲು ಸಾಧ್ಯ. ಕೇಂದ್ರ ಸರ್ಕಾರ ಶಿಕ್ಷಣ ಕ್ಷೇತ್ರಕ್ಕೆ ಯಾವುದೇ ಅನುದಾನ ನೀಡದಿದ್ದರೂ ಸಹ ನಾನು ಶಾಸಕನಾಗಿದ್ದ ಸಂದರ್ಭದಲ್ಲಿ ಶಾಲಾ ಕಟ್ಟಡಗಳ ನಿರ್ಮಾಣಕ್ಕೆ 12 ಕೋಟಿ ರೂಗಳನ್ನು ಬಿಡುಗಡೆ ಮಾಡಿಸಿದ್ದೆ. ಸಿ.ಎಸ್.ಆರ್. ಯೋಜನೆಯಡಿ ಕಂಪನಿಗಳಿಂದ 8 ಕೋಟಿ ರೂಗಳನ್ನು ಕೊಡುತ್ತಿದ್ದಾರೆ ಎಂದ ಅವರು 2025 ರೊಳಗೆ ಎಲ್ಲಾ ಕೊಠಡಿಗಳನ್ನು ನಿರ್ಮಾಣ ಮಾಡಿಕೊಡುವುದಾಗಿ ಭರವಸೆ ನೀಡಿದರು, ಶಾಲಾ ಕಟ್ಟಡದ ಕಾಮಗಾರಿ ಗುಣಮಟ್ಟದಿಂದ ಕೂಡಿರಬೇಕು. ಕಳಪೆ ಕಾಮಗಾರಿ ಮಾಡಿದರೆ ಅದಕ್ಕೆ ಸಂಬಂಧಪಟ್ಟ ಅಧಿಕಾರಿಗಳೇ ಹೊಣೆಗಾರರಾಗುತ್ತಾರೆ. ಉಳಿದ ಇನ್ನು 4 ಕೊಠಡಿಗಳ ನಿರ್ಮಾಣವನ್ನು ಮಾಡಿಕೊಡುವುದಾಗಿ ಭರವಸೆ ನೀಡಿದ ಅವರು ನಗರ್ಲೆ ಗ್ರಾಮದ ಪರಿಶಿಷ್ಠ ಜನಾಂಗದ ರಾಮಮಂದಿರಕ್ಕೆ 5 ಲಕ್ಷ, ಮಾರಮ್ಮನ ದೇವಸ್ಥಾನದ ಅಭಿವೃದ್ಧಿಗೆ 5 ಲಕ್ಷ ಬಿಡುಗಡೆ ಮಾಡಿರುವುದಾಗಿ ತಿಳಿಸಿದರು.



ಸಮಾರಂಭದಲ್ಲಿ ರಾಜ್ಯ ವಾಲ್ಮೀಕಿ ನಿಗಮದ ಮಾಜಿ ಅಧ್ಯಕ್ಷ ಎಸ್.ಸಿ. ಬಸವರಾಜು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಂಗಸ್ವಾಮಿ, ಗ್ರಾಪಂ ಅಧ್ಯಕೆ ಮಹಾದೇವಮ್ಮ, ಜಿ.ಪಂ. ಮಾಜಿ ಉಪಾಧ್ಯಕ್ಷ ದಯಾನಂದ, ಮುಖ್ಯ ಶಿಕ್ಷಕಿ ವಿಜಯ, ಬಿಇಒ ಎ.ಟಿ. ಶಿವಲಿಂಗಯ್ಯ, ಮುಖ್ಯಮಂತ್ರಿಗಳ ಆಪ್ತ ಸಹಾಯಕರಾದ ಶಿವಸ್ವಾಮಿ, ಪ್ರದೀಪ್ ಕುಮಾರ್, ಎಇಇ ಪ್ರಕಾಶ್, ಎಇ ಪ್ರಸನ್ನ, ವೆಂಕಟೇಶ್, ಪ್ರಮೋದ್, ಪ್ರಜ್ವಲ್, ಭದ್ರನಾಯಕ, ಕಲ್ಮಳ್ಳಿ ಬಾಬು ಹಾಜರಿದ್ದರು.

# ಅಜ್ಜಯ್ಯ ಲೋಕ ಕಲ್ಯಾಣಕ್ಕೆ ಮುಖ್ಯ ತತ್ವ

**ತಿಪಟೂರು:** ಕಷ್ಟ ಮತ್ತು ಸುಖದಲ್ಲಿ ಅಜ್ಜಯನ ದರ್ಶನ ಪಡೆಯುವುದು ನಮ್ಮ ಕುಟುಂಬದ ಮುಖ್ಯ ಧ್ಯೇಯವಾಗಿದೆ ಮಾನವ ಧರ್ಮಕ್ಕೆ ಜಯವಾಗಲಿ ಎಂದು ಆಶಿಸಿರುವ ಗಂಗಾಧರ ಅಜ್ಜಯ್ಯ ಇಡೀ ಲೋಕ ಕಲ್ಯಾಣಕ್ಕೆ ಮುಖ್ಯ ತತ್ವ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿದರು.



ನೊಣವಿನಕೆರೆ ಶ್ರೀ ಕಾಡಸಿದ್ದೇಶ್ವರ ಸಂಸ್ಥಾನ ಮಠದ ಶ್ರೀ ಕರಿಬಸವ ಸ್ವಾಮಿಗಳ 231ನೇ ವಾರ್ಷಿಕ ಸ್ಮರಣೋತ್ಸವ ಹಾಗೂ ಶ್ರೀ ಕರಿಬಸವದೇಶೀಕೇಂದ್ರ ಸ್ವಾಮಿಗಳ 16ನೇ ವರ್?ದ ಪುಣ್ಯಾರಾಧನೆಯ ಧರ್ಮಸಭೆಯ ಕಾರ್ಯಕ್ರಮದಲ್ಲಿ ಜ್ಯೋತಿ ಬೆಳಗಿಸಿ ಮಾತನಾಡಿದರು.

ಸೂರ್ಯ ಚಂದ್ರರು ಜಾತಿ ಧರ್ಮ ನೋಡಿ ಬೆಳಕು ನೀಡುವುದಿಲ್ಲ, ಒಂದು ಮರ ಬೃಹದಾಕಾರವಾಗಿ ಬೆಳೆಯಲು ಭೂಮಿಗೆ ಬೇರು ಬಿಡಬೇಕು ಅದೇ ರೀತಿ ಮನು?ನಿಗೆ ಸಂಸ್ಕಾರ ಬೇಕಾದರೆ ನಂಬಿಕೆ ಬೇಕು. ಈ ಮಠವು ಬರಿ ರಾಜಕಾರಣಿಗಳಿಗೆ ಆಶೀರ್ವದಿಸುವುದಿಲ್ಲ ಅದರಂತೆ ಜಗತ್ತಿಗೆ ಒಳಿತು ಬಯಸುವ ಸಾಮಾಜಿಕ ಕ್ಷೇತ್ರ, ವೈದ್ಯಕೀಯ, ಶಿಕ್ಷಣ ಸೇವೆ ಸಲ್ಲಿಸಲು ಆಶೀರ್ವದಿಸಿದೆ, ಭಕ್ತನು ಭಗವಂತನಲ್ಲಿ ಶಾಂತಿ ನೆಮ್ಮದಿ ಆರೋಗ್ಯ ಬೇಡುತ್ತಾನೆ, ಭಗವಂತನು ಆಶೀರ್ವದಿಸುವಾಗ ಜಾತಿ ಧರ್ಮ ನೋಡುವುದಿಲ್ಲ ಎಂದು ಮಾತನಾಡಿದರು.

ಶೃಂಗೇರಿ ಶಾಸಕ ರಾಜುಗೌಡ ಮಾತನಾಡಿ ದೇಶದಾದ್ಯಂತ ಸಾಕ?ಟು ಮಠಮಾನ್ಯಗಳಿದ್ದು ಮಾನವ ಧರ್ಮಕ್ಕೆ ಜಯವಾಗಲಿ ಎಂದು ಆಶಿಸಿರುವ ಗಂಗಾಧರ ಅಜ್ಜಯ್ಯನವರ ನುಡಿ ಸೂರ್ಯ ಚಂದ್ರ ಇರುವವರೆಗೆ ಶಾಶ್ವತ ಎಂದರು. ಶ್ರೀ ಮಠದಲ್ಲಿ ಬೆಳಿಗ್ಗೆ ಎಲ್ಲಾ ಗದ್ದುಗೆಗಳಿಗೆ ರುದ್ರಾಭಿ?ೕಕ, ಉಚಿತ ರಕ್ತದಾನ ಶಿಬಿರ, ಉಚಿತ ಆರೋಗ್ಯ ಶಿಬಿರ, ಶಾಲೆಯ ಮಕ್ಕಳಿಂದ ಮಕ್ಕಳ ಸಂತೆ ಕಾರ್ಯಕ್ರಮ, ಶ್ರೀಮಠದ ಗೋಶಾಲೆಯ ವೀರ ಗೋತಳಿಗಳ ಪ್ರದರ್ಶನ ನಡೆಯಿತು. ವೇದಿಕೆಯಲ್ಲಿ ಕಿರಿಯ ಶ್ರೀಗಳಾದ ಅಭಿನವ ಕಾಡಸಿದ್ದೇಶ್ವರ ಶ್ರೀಗಳು, ಹೊನ್ನವಳ್ಳಿ ಕರಿಸಿದ್ದೇಶ್ವರ ಮಠದ ಶಿವಪ್ರಕಾಶ ಶಿವಾಚಾರ್ಯ ಸ್ವಾಮೀಜಿ, ಚಿಕ್ಕಮಗಳೂರು ಬೃಹನ್ಮಠ ಭೇರುಘಂಡಿ ಮಠದ ಶ್ರೀ ರೇಣುಕ ಮಹಾಂತ ಶಿವಾಚಾರ್ಯ ಸ್ವಾಮೀಜಿ, ಮಹಾರಾ?ದ ಪಾನಮಂಗಳೂರು ಶಿವಯೋಗಿ ಶಿವಾಚಾರ್ಯ ಸ್ವಾಮೀಜಿ, ಶ್ರೀ ಗುರುಮೂರ್ತಿ ಶಿವಾಚಾರ್ಯ ಸ್ವಾಮೀಜಿ ಹುಣಸೆಘಟ್ಟ, ಶ್ರೀ ಶಿವಲಿಂಗ ಸ್ವಾಮೀಜಿ ಶಿವಯೋಗೀಶ್ವರ ಮಠ ಅರಳಗುಪ್ಪೆ, ಅಭಿನವ ಶಿವಲಿಂಗ ಸ್ವಾಮಿಗಳು, ಹೆಗ್ಗಡೆಹಳ್ಳಿ ಶ್ರೀಗಳು. ಉಪಸ್ಥಿತರಿದ್ದರು, ಸಂಸ್ಥೆಯ ಶಿಕ್ಷಕ ನಟೇಶ್ ಸ್ವಾಗತಿಸಿ, ಶ್ರೀ ಸುಮಾ ರಾಜ್ ಕುಮಾರ್ ನಿರೂಪಿಸಿದರು.

## 11 ರಂದು ಕಾಮಗಾರಿ ಉದ್ಘಾಟನೆ

**ಮಂಡ್ಯ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಶಾಖಾ ಇವರ ಸಂಯುಕ್ತಾಶ್ರಯದಲ್ಲಿ ಮಂಡ್ಯ ಸರ್.ಎಂ. ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಹಾಗೂ ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳು 2023-24ರ ಉದ್ಘಾಟನಾ ಸಮಾರಂಭವನ್ನು ಮಾರ್ಚ್ 11 ಮತ್ತು 12 ರಂದು ಬೆಳಿಗ್ಗೆ 10.00 ಗಂಟೆಗೆ ಸರ್.ಎಂ. ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್. ಚೆಲುವರಾಯಸ್ವಾಮಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಸಚಿವರಾದ ಬಿ. ನಾಗೇಂದ್ರ ಅವರು ಘನ ಉಪಸ್ಥಿತಿ ಮತ್ತು ಧ್ವಜಾರೋಹಣವನ್ನು ನೆರವೇರಿಸಲಿದ್ದಾರೆ. ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕರಾದ ಪಿ. ರವಿಕುಮಾರ್ ಅವರು ಅಧ್ಯಕ್ಷತೆಯನ್ನು ವಹಿಸಲಿದ್ದು, ಬೆಂಗಳೂರು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷರಾದ ಸಿ.ಎಸ್. ಷಡಾಕ್ಷರಿ ಅವರು ಕ್ರೀಡಾಜ್ಯೋತಿ ಸ್ವೀಕರಿಸಲಿದ್ದಾರೆ. ಕಾರ್ಯಕ್ರಮಕ್ಕೆ ಮುಖ್ಯ ಅಥಿತಿಗಳಾಗಿ ಲೋಕಸಭಾ ಕ್ಷೇತ್ರದ ಸಂಸದೆ ಸುಮಲತಾ ಅಂಬರೀಶ್, ವಿಧಾನ ಪರಿಷತ್ ನ ಶಾಸಕರಾದ ಮರಿತಿಬ್ಬೇಗೌಡ, ಮಧು ಜಿ. ಮಾದೇಗೌಡ, ದಿನೇಶ್ ಗೂಳಿಗೌಡ, ಮಳವಳ್ಳಿ ವಿಧಾನಸಭಾ ಶಾಸಕರಾದ ಪಿ.ಎಂ. ನರೇಂದ್ರಸ್ವಾಮಿ, ಶ್ರೀರಂಗಪಟ್ಟಣ ಶಾಸಕರಾದ ಎ.ಬಿ. ರಮೇಶ ಬಂಡಿಸಿದ್ದೇಗೌಡ, ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣ್ಣಯ್ಯ, ಕೆ.ಆರ್.ಪೇಟೆ ಶಾಸಕ ಹೆಚ್. ಟಿ. ಮಂಜು, ಮದ್ದೂರು ಶಾಸಕ ಕೆ.ಎಂ. ಉದಯ್, ಮಂಡ್ಯ ಮೈಷುಗರ್ ಕಂಪನಿಯ ಅಧ್ಯಕ್ಷ ಸಿ.ಡಿ. ಗಂಗಾಧರ್ ಅವರು ಕಾರ್ಯಕ್ರಮಕ್ಕೆ ಆಗಮಿಸಲಿದ್ದಾರೆ.

## ವೆಲ್ಡಿಂಗ್ ಮಿಷಿನ್‌ಗೆ ಕತ್ತು ಸಿಲುಕಿವ್ಯಕ್ತಿಯೊಬ್ಬ ಸಾವು

**ರಾಮನಗರ:** ನಿರ್ಮಾಣ ಹಂತದ ಮನೆಯ ಕಟ್ಟಡದ ಕಬ್ಬಿಣದ ಕೆಲಸ ಮಾಡುತ್ತಿರುವ ವೇಳೆ ವೆಲ್ಡಿಂಗ್ ಮಿಷಿನ್‌ಗೆ ಕತ್ತು ಸಿಲುಕಿ ವ್ಯಕ್ತಿಯೊಬ್ಬ ಸ್ಥಳದಲ್ಲೆ ಸಾವನ್ನಪ್ಪಿರುವ ಘಟನೆ ತಾಲೂಕಿನ ಅಕ್ಕೂರು ಗ್ರಾಮದಲ್ಲಿ ನಡೆದಿದೆ. ಚನ್ನಪಟ್ಟಣ ನಗರ ನಿವಾಸಿಯಾದ ರವಿ (35) ಮೃತ ವ್ಯಕ್ತಿಯಾಗಿದ್ದು ಈತ ತನ್ನ ಭಾವನೊಂದಿಗೆ ಹೊಸ ಮನೆಯ ವೆಲ್ಡಿಂಗ್ ಕೆಲಸಕ್ಕೆಂದು ತೆರಳಿದ್ದು ಭಾವ ಮಹಡಿ ಮೇಲೆ ಕೆಲಸ ಮಾಡುತ್ತಿದ್ದರೆ, ಈತ ಕೆಳಗೆ ವೆಲ್ಡಿಂಗ್ ಮಿಷಿನ್ ನಲ್ಲಿ ಕಬ್ಬಿಣ ಕಟ್ ಮಾಡಿ ತೆಗೆದುಕೊಂಡು ಹೋಗುತ್ತಿದ್ದು, ಕಬ್ಬಿಣ ಕತ್ತರಿಸುವ ವೇಳೆ ಸ್ಲಿಪ್ ಆಗಿ ಕಬ್ಬಿಣ ಕತ್ತರಿಸುವ ಯಂತ್ರದ ಮೇಲೆ ಬಿದ್ದು ಕತ್ತಿನ ನರಗಳು ಕಟ್ ಆಗಿ ಅಧಿಕ ರಕ್ತಸ್ರಾವ ಉಂಟಾಗಿ ಸ್ಥಳದಲ್ಲೆ ಮೃತಪಟ್ಟಿದ್ದಾನೆ. ಸ್ಥಳಕ್ಕೆ ಅಕ್ಕೂರು ಪೊಲೀಸರು ಭೇಟಿ ನೀಡಿ ಪರಿಶೀಲಿಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

**ಕರ್ನಾಟಕ ಸರ್ಕಾರ**

ಸಂಖ್ಯೆ: ಎ2 / ಬಿಯುಡಿ/ಟೆಂಡರ್ ಪ್ರಕಟಣೆ/ಸಿಆರ್ 15/2023-24 ದಿನಾಂಕ: 05-03-2024

ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ, ಕಾವೇರಿ ವನ್ಯಜೀವಿ ವಿಭಾಗ ಕೊಳ್ಳೇಗಾಲ- 571440

ಕಚೇರಿ: 08224-253027 E-mail: defcnuvcrywl@gmail.com

**ಅಲ್ಪಾವಧಿ ಟೆಂಡರ್ ಪ್ರಕಟಣೆ**

2024-25ನೇ ಸಾಲಿನಲ್ಲಿ ಕಾವೇರಿ ವನ್ಯಜೀವಿ ವಿಭಾಗದ ವ್ಯಾಪ್ತಿಯ ಕಳ್ಳಬೇಟೆ ತಡೆ ಶಿಬಿರಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ಆಹಾರ ಪದಾರ್ಥಗಳನ್ನು ಸರಬರಾಜು ಮಾಡುವ ಸಲುವಾಗಿ ಒಟ್ಟು 41,99,200 ರೂ.ಗಳಿಗೆ ಟೆಂಡರ್ ಆಹ್ವಾನಿಸಲಾಗಿದೆ. ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ: 13-03-2024 ಆಗಿರುತ್ತದೆ. ಹೆಚ್ಚಿನ ವಿವರಗಳಿಗಾಗಿ (http:// kppp.karnataka.gov.in) ನಲ್ಲಿ ಪರಿಶೀಲಿಸಲು ಕೋರಿದೆ.

ಸಂ:ವಾಸಾಸಂಇ:
ಚಾನಗರ:453-2023-24

ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ, ಕಾವೇರಿ ವನ್ಯಜೀವಿ ವಿಭಾಗ ಕೊಳ್ಳೇಗಾಲ- 571440

## ಶಿವರಾತ್ರಿಗೆ ವೇಷಭೂಷಣ ಸ್ಪರ್ಧೆ

**ಹುಳಿಯಾರು:** ಹುಳಿಯಾರಿನ ಎಎಂಜಿ ಡೆಕೋ ವರ್ಲ್ಡ್ ಇವೆಂಟ್ ಮ್ಯಾನೇಜ್ಮೆಂಟ್ ವತಿಯಿಂದ ಶಿವರಾತ್ರಿ ಹಬ್ಬದ ಪ್ರಯುಕ್ತ ವೇಷಭೂಷಣ ಸ್ಪರ್ಧೆ ಆಯೋಜಿಸಲಾಗಿದೆ.ದಿನಾಂಕ-08-03-2024 ಶುಕ್ರವಾರ ಸಂಜೆ 6 ಗಂಟೆಗೆ ಶ್ರೀ ಮಲ್ಲೇಶ್ವರ ಸ್ವಾಮಿ ದೇವಸ್ಥಾನದ ಆವರಣ ನಡೆಯಲಿರುವ ನಡೆಯುವ ಈ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ಹಾಗೂ ಭಾಗವಹಿಸಿದವರಿಗೆ ವಿಶೇಷ ಉಡುಗೊರೆ ಕೊಡಲಾಗುವುದು.ಹೆಚ್ಚಿನ ಮಾಹಿತಿಗಾಗಿ-7406986275, 8884655343 ಕರೆ ಮಾಡುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಎರಡು ತಿಂಗಳ ಕಂದಮ್ಮನನ್ನು ರಸ್ತೆ ದಾಟಿಸಿದ ಆನೆಗಳು

**ಚಾಮರಾಜನಗರ:** ಆನೆಗಳ ಬಿಗಿ ಭದ್ರತೆಯೊಂದಿಗೆ ಎರಡು ತಿಂಗಳ ಕಂದಮ್ಮನನ್ನು ರಸ್ತೆ ದಾಟಿಸಿದ ಘಟನೆ ಚಾಮರಾಜನಗರ ಜಿಲ್ಲೆಗೆ ಹೊಂದಿಕೊಂಡಿರುವ ತಮಿಳುನಾಡಿನ ಬಣ್ಣಾರಿಯಲ್ಲಿ ನಡೆದಿದೆ. ತಮಿಳುನಾಡಿನ ಸತ್ಯಮಂಗಲಂ ಹುಲಿ ಸಂರಕ್ಷಿತ ಪ್ರದೇಶ ವ್ಯಾಪ್ತಿಯಲ್ಲಿ ಹೆಚ್ಚಾಗಿ ಆನೆಗಳು ವಾಸ ಮಾಡುತ್ತಿದ್ದು, ರಾಷ್ಟ್ರೀಯ ಹೆದ್ದಾರಿಯನ್ನು ಹೊಂದಿದೆ. ಬಣ್ಣಾರಿ ವಲಯದಿಂದ ರಾಷ್ಟ್ರೀಯ ಹೆದ್ದಾರಿ ದಾಟಲು ಎರಡು ತಿಂಗಳ ತನ್ನ ಮರಿಯಾನೆಯನ್ನು ಇನ್ನಿತರ ಆನೆಗಳ ಭದ್ರತೆಯಲ್ಲಿ ರಸ್ತೆ ದಾಟಿಸಿದ ದೃಶ್ಯ ಇದೀಗ ವೈರಲ್ ಆಗಿದೆ. ಮರಿಯಾನೆಗೆ ತಾಯಿ ಆನೆ ಹಾಗೂ ಇನ್ನಿತರ ಆನೆಗಳು ಭದ್ರತೆಗೆ ಬಂದಿದ್ದು, ಸುರಕ್ಷಿತವಾಗಿ ರಸ್ತೆ ದಾಟಿಸಿದ ವೀಡಿಯೋ ಇದೀಗ ಸಖತ್ ಆಗಿ ವೈರಲ್ ಆಗುತ್ತಿದೆ.



## ಮಾ.11 ರಂದು ದ್ವಾದಶ ಜ್ಯೋತಿರ್ಲಿಂಗಗಳ ರಥ ಯಾತ್ರೆ

**ಹುಳಿಯಾರು:** ಹುಳಿಯಾರಿನ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದಿಂದ ಮಹಾ ಶಿವರಾತ್ರಿ ಪ್ರಯುಕ್ತ ಮಾ.11 ರ ಸೋಮವಾರ ದ್ವಾದಶ ಜ್ಯೋತಿರ್ಲಿಂಗಗಳ ರಥಯಾತ್ರೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಆಧ್ಯಾತ್ಮ ಶಿಕ್ಷಕಿ ಗೀತಕ್ಕ ತಿಳಿಸಿದರು. ಹುಳಿಯಾರು ಪಟ್ಟಣ ಸೇರಿದಂತೆ ಅಕ್ಕಪಕ್ಕದ ಹಳ್ಳಿಗಳಲ್ಲಿ ಈ ಸಂಬಂಧ ಶಿವ ಸಂದೇಶ ಪುಸ್ತಕಗಳನ್ನು ವಿತರಿಸಿ ರಥಯಾತ್ರೆಯ ಪ್ರಚಾರ ಮಾಡಿ ಅವರು ಮಾತನಾಡಿದರು.

ಮಾರ್ಚ್ 11 ರಂದು ಹುಳಿಯಾರು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಜ್ಯೋತಿರ್ಲಿಂಗಗಳ ರಥಯಾತ್ರೆ ತೆರಳಲಿದೆ. ಈ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಅವರು ತಿಳಿಸಿದರು. ಯಳನಾಡು ಡೇರಿ ಅಧ್ಯಕ್ಷ ವೈ.ಆರ್. ಮಲ್ಲಿಕಾರ್ಜುನಯ್ಯ, ನಿವೃತ್ತ ಶಿಕ್ಷಕ ತಿಮ್ಮಯ್ಯ, ನಿವೃತ್ತ ಶಿಕ್ಷಕಿ ಪ್ರೇಮಲೀಲಾ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

5ಊಗಿಐಖಜಂಖ2: ಹುಳಿಯಾರಿನ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದಿಂದ ಮಹಾ ಶಿವರಾತ್ರಿ ಪ್ರಯುಕ್ತ ಕೆ.ಸಿ.ಪಾಳ್ಯದಲ್ಲಿ ಸೋಮವಾರ ಶಿವ ಸಂದೇಶ ಪುಸ್ತಕಗಳನ್ನು ವಿತರಿಸಿದರು.

## ಪ್ರೊ.ಭಾಷ್ಯಂ ಸ್ವಾಮೀಜಿಗೆ ಸುತ್ತೂರು ಮಠದಿಂದ ಗೌರವ

**ಮೈಸೂರು:** ವಿಜಯನಗರದಲ್ಲಿರುವ ಶ್ರೀ ಯೋಗಾನರಸಿಂಹಸ್ವಾಮಿ ದೇವಸ್ಥಾನದ ಸಂಸ್ಥಾಪಕ, ರಾಜ್ಯೋತ್ಸವ ಹಾಗೂ ನಾಡೋಜ ಪ್ರಶಸ್ತಿ ಪುರಸ್ಕೃತರಾದ ಪ್ರೊ.ಭಾಷ್ಯಂ ಸ್ವಾಮೀಜಿಯವರು ಇತ್ತೀಚೆಗೆ ಮೈಸೂರು ವಿಶ್ವವಿದ್ಯಾನಿಲಯದಿಂದ ಗೌರವ ಡಾಕ್ಟರೇಟ್ ಪದವಿಗೆ ಭಾಜನರಾದ ಸಂದರ್ಭದಲ್ಲಿ ಚಾಮುಂಡಿ ಬೆಟ್ಟದ ತಪ್ಪಲಲ್ಲಿರುವ ಸುತ್ತೂರು ಮಠದಲ್ಲಿ ಸನ್ಮಾನಿಸಿ, ಗೌರವಿಸಲಾಯಿತು. ಚಿತ್ರದಲ್ಲಿ ನೀಲಕಂಠ ಮಠದ ಶ್ರೀ ಸಿದ್ಧಮಲ್ಲ ಸ್ವಾಮೀಜಿ, ದೇವಸ್ಥಾನದ ಆಡಳಿತಾಧಿಕಾರಿ ಎನ್.ಶ್ರೀನಿವಾಸನ್, ಸಮಾಜ ಸೇವಕ ಅಜಯ್ ಶಾಸ್ತ್ರಿ ಹಾಗೂ ಇತರರನ್ನು ಕಾಣಬಹುದು.



## ಅರ್ಜಿ ಆಹ್ವಾನ

**ರಾಮನಗರ:** ಕೇಂದ್ರ ಸರ್ಕಾರದ ಇ-ಶ್ರಮ್ ಪೋರ್ಟಲ್‌ನಲ್ಲಿ ನೊಂದಣಿಯಾದ ಅಸಂಘಟಿತ ವಲಯದ ಕಾರ್ಮಿಕರಿಗೆ ಪ್ರಧಾನ ಮಂತ್ರಿ ಸುರಕ್ಷಾ ಭೀಮಾ ಯೋಜನೆಯಡಿ ಅಪಘಾತ ಪರಿಹಾರ ಒದಗಿಸುವ ಕುರಿತು ಅರ್ಹ ಫಲಾನುಭವಿಗಳ/ಅವರ ನಾಮ ನಿರ್ದೇಶಿತರಿಂದ ಪ್ರಧಾನ ಮಂತ್ರಿ ಸುರಕ್ಷಾ ಭೀಮಾ ಯೋಜನೆಯಡಿ (ಪಿಎಂಎಸ್‌ಬಿವೈ) ಮರಣ ಹೊಂದಿದ ಶಾಶ್ವತ ದುರ್ಬಲತೆಗೆ ಒಳಗಾದವರಿಗೆ ಹಾಗೂ ಭಾಗಶಃ ಅಂಗವೈಕಲ್ಯತೆಗೆ ಒಳಗಾದವರಿಗೆ ಅಪಘಾತ ಪರಿಹಾರವನ್ನು ನೀಡಲು ಅರ್ಜಿ ಆಹ್ವಾನಿಸಲಾಗಿದೆ.

2021ರ ಆಗಸ್ಟ್ 26 ರಿಂದ 2022ರ ಮಾರ್ಚ್ 31ರ ಅಂತ್ಯಕ್ಕೆ ನೋಂದಣಿಯಾದ ಅರ್ಹ ಫಲಾನುಭವಿಗಳ ನಾಮ ನಿರ್ದೇಶಿತು/ಫಲಾನುಭವಿಗಳು ಅರ್ಜಿ ಸಲ್ಲಿಸಲು ಇದೇ ಮಾ. 31ಕ್ಕೆ ಅಂತ್ಯಗೊಳಿಸಿರುವುದರಿಂದ ಈ ದಿನಾಂಕದೊಳಗಾಗಿ ಅಪಘಾತಗೊಂಡ ಕಾರ್ಮಿಕರುಗಳು ಅರ್ಜಿ ಸಲ್ಲಿಸಬಹುದಾಗಿದೆ.

## ಸೀನಿಯರ್ ಛೇಂಬರ್ ಉಪಾಧ್ಯಕ್ಷರಾಗಿ ಆಯ್ಕೆ




**ವಿಜಯಪುರ:** ಸೀನಿಯರ್ ಛೇಂಬರ್ ಇಂಟರ್ ನ್ಯಾಷನಲ್ ನ ರಾಷ್ಟ್ರೀಯ ಉಪಾಧ್ಯಕ್ಷರಾಗಿ ವಿಜಯಪುರದ ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಶಿಕ್ಷಕರು ಹಾಗೂ ಸೀನಿಯರ್ ಛೇಂಬರ್ ಇಂಟರ್ ನ್ಯಾಷನಲ್ ವಿಜಯಪುರ ಲೀಜನ್ ನ ಅಧ್ಯಕ್ಷರಾದ ಡಾ.ಎಂ.ಶಿವಕುಮಾರ್ ರವರು ಆಯ್ಕೆಯಾಗಿದ್ದಾರೆ.

ಇವರು ಕೇರಳ ರಾಜ್ಯದ ಕಣ್ಣೂರಿನಲ್ಲಿ ನಡೆದ ರಾಷ್ಟ್ರೀಯ ಸಮ್ಮೇಳನದಲ್ಲಿ ನಡೆದ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾಗಿದ್ದು, ಅಲ್ಲಿ ಹತ್ತು ರಾಷ್ಟ್ರೀಯ ಪ್ರಶಸ್ತಿಗಳು ಮತ್ತು ಪುರಸ್ಕಾರಗಳು ವಿಜಯಪುರದ ಸೀನಿಯರ್ ಛೇಂಬರ್ ಗೆ ಲಭಿಸಿದೆ. ರಾಷ್ಟ್ರ ಮಟ್ಟದ ಅತ್ಯುತ್ತಮ ಲೀಜನ್ ಅಧ್ಯಕ್ಷ, ಅತ್ಯುತ್ತಮ ಅಭಿವೃದ್ಧಿ ಮತ್ತು ಬೆಳವಣಿಗೆ, ಕಾರ್ಯಕ್ರಮ ಗಳು, ಸಮುದಾಯದ ಅಭಿವೃದ್ಧಿ ಕಾರ್ಯಕ್ರಮಗಳು, ರಾಷ್ಟ್ರೀಯ ಅಧ್ಯಕ್ಷರ ವಿಶೇಷ ಮನ್ನಣೆಗಳು, ಹಾಗೂ ವಿಜಯಪುರದ ಸೀನಿಯರ್ ಜಯರಾಮ್ ರವರಿಗೆ ಅತ್ಯುತ್ತಮ ರಾಷ್ಟ್ರೀಯ ಸಂಯೋಜಕ ಪ್ರಶಸ್ತಿಗಳು ಲಭಿಸಿವೆ.

ಪ್ರಶಸ್ತಿ ಪ್ರದಾನ ಮಾಡಿ, ಮಾತನಾಡಿದ ರಾಷ್ಟ್ರೀಯ ಅಧ್ಯಕ್ಷರಾದ ಪ್ರೋ.ವರ್ಗಿಸ್ ವೈದ್ಯನ್ ರವರು ವಿಜಯಪುರ ಸೀನಿಯರ್ ಛೇಂಬರ್ ಈ ವರ್ಷ ಅತ್ಯುತ್ತಮ ಕಾರ್ಯಕ್ರಮಗಳನ್ನು ಮಾಡಿ, ಜನಮನ್ನಣೆ ಗಳಿಸಿದೆ. ಈ ಲೀಜನ್ ಅಧ್ಯಕ್ಷರಾದ ಶಿವಕುಮಾರ್ ಹಾಗೂ ರಾಷ್ಟ್ರೀಯ ಸಂಯೋಜಕರಾದ ಎನ್ ಜಯರಾಮ್ ರವರನ್ನು ಒಳಗೊಂಡಂತೆ ಎಲ್ಲಾ ಪದಾಧಿಕಾರಿಗಳು ಹಾಗೂ ಸದಸ್ಯರುಗಳು ಸೀನಿಯರ್ ಛೇಂಬರ್ ನ ಬೆಳವಣಿಗೆಗೆ ಅಪಾರ ಕೊಡುಗೆ ನೀಡಿದ್ದಾರೆ ಎಂದು ಶ್ಲಾಘಿಸಿದರು.

ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ವಿಜಯಪುರ ಲೀಜನ್‌ನ ಅಧ್ಯಕ್ಷರಾದ ಶಿವಕುಮಾರ್ ರವರು ನಮ್ಮ ಇಡೀ ತಂಡದ ಸಹಕಾರದಿಂದ ಈ ಪ್ರಶಸ್ತಿಗಳು ಪಡೆಯಲು ಸಾಧ್ಯವಾಯಿತು. ರಾಷ್ಟ್ರೀಯ ಉಪಾಧ್ಯಕ್ಷರಾಗಿ ಆಯ್ಕೆ ಮಾಡಿದ ಎಲ್ಲರಿಗೂ ಧನ್ಯವಾದಗಳು, 2024-25 ನೇ ಸಾಲಿನಲ್ಲಿ ತಾವು ಉತ್ತಮ ಸೇವೆ ಮಾಡುವುದಾಗಿ ತಿಳಿಸಿದರು.

## ಪೌರಾಣಿಕ ನಾಟಕಗಳನ್ನು ಯುವ ಸಮೂಹ ಉಳಿಸಿ ಬೆಳಸಬೇಕು



**ವಿಜಯಪುರ:** ಗ್ರಾಮೀಣ ಭಾಗದ ಪೌರಾಣಿಕ ನಾಟಕಗಳನ್ನು ಉಳಿಸಿ ಬೆಳೆಸುವಲ್ಲಿ ಪ್ರತಿಯೊಬ್ಬ ಯುವಕರು ಕೈ ಜೋಡಿಸಬೇಕೆಂದು ಎಂದು ಶಿಕ್ಷಕ ನಿರ್ದೇಶಕ ಎ.ಎಂ.ನಾರಾಯಣಸ್ವಾಮಿ ತಿಳಿಸಿದರು. ಇವರು ಪಟ್ಟಣದ ರಾಜೀವನಗರದ ಸರಕಾರಿ ಹಿರಿಯ ಪ್ರಾಥಮಿಕ ಪಾಠ ಶಾಲೆಯ ಆವರದಲ್ಲಿ ಶಾರದ ಕೃಪಪೋಷಿತ ಮಂಡಳಿ ಹಾಗೂ ಶಾಲಾ ಮಕ್ಕಳಿಂದ ಆಯೋಜಿಸಿದ್ದ ಶ್ರೀಕೃಷ್ಣ ಸಂಧಾನ ಕನ್ನಡ ಪೌರಣಿಕ ನಾಟಕದಲ್ಲಿ ಮಾತನಾಡಿದರು. ಕಲಾವಿದರು ಸಲ್ಲಿಸಿರುವ ಸೇವೆ ಅಪಾರವಾದದ್ದು. ಪೌರಾಣಿಕ ನಾಟಕಗಳ ಪ್ರದರ್ಶನಗಳಿಂದ ಯುವಕರಿಗೆ ದೇಶದ ಸಾಂಸ್ಕೃತಿಕ ಶ್ರೀಮಂತಿಕೆ ತಿಳಿಸಿಕೊಡಲು ಸಹಕಾರಿಯಾಗುತ್ತದೆ. ನಾಡಿನ ಸಂಸ್ಕೃತಿ ಮತ್ತು ನಡೆ-ನುಡಿಯನ್ನು ಮರೆಯುತ್ತಿರುವ ಪ್ರಸ್ತುತ ದಿನಮಾನಗಳಲ್ಲಿ ಗ್ರಾಮೀಣ ಭಾಗದಲ್ಲಿ ಪೌರಾಣಿಕ ನಾಟಕ ಪರಿಚಯಸುತ್ತಿರುವ ಕಾರ್ಯ ಶ್ಲಾಘನೀಯ ಎಂದು ಹೇಳಿದರು.

ಸಂಗೀತ ನಿರ್ದೇಶಕ ಎಂ.ವಿ.ನಾಯ್ಡು ಮಾತನಾಡಿ, ಕಲಾವಿದರಿಗೆ ಪ್ರೋತ್ಸಾಹ ನೀಡುವುದರ ಜತೆಗೆ ಸುಮಾರು ವರ್ಷಗಳಿಂದ ಎ.ಎಂ.ನಾರಾಯಣಸ್ವಾಮಿ ಸಾವಿರೂರು ಸರಕಾರಿ ಮಕ್ಕಳಿಗೆ ವಿದ್ಯಾಭ್ಯಾಸದ ಜೊತೆಗೆ ಗ್ರಾಮೀಣ ಭಾಗದ ಕಲೆಯನ್ನು ಉಳಿಸಿ ಬೆಳೆಸುವಲ್ಲಿ ನಿರಂತರ ಕಲಾ ಸೇವೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಬಂದಿದ್ದಾರೆ. ಅವರ ಕಲಾ ಸೇವೆ ಎತ್ತರಕ್ಕೆ ಬೆಳೆಯಲಿ ಎಂದು ಹಾರೈಸಿದರು.

### ಶಿಕ್ಷಣ ಸಚಿವ ಮಧುಬಂಗಾರಪ್ಪ ಅಭಯ

## ಸರ್ಕಾರಿ ಶಾಲೆ ಅಭಿವೃದ್ಧಿಗೆ ಬದ್ಧ



**ಮಾಲೂರು:** ಮುಂದಿನ ಶೈಕ್ಷಣಿಕ ವರ್?ದೊಳಗೆ ರಾಜ್ಯದಲ್ಲಿ 1ರಿಂದ 12ನೇ ತರಗತಿಯವರಗಿನ ಪಬ್ಲಿಕ್ ಶಾಲೆ ಶಾಲೆಗಳನ್ನಾಗಿ ಪರಿವರ್ತನೆ ಮಾಡಿಗುಣಾತ್ಮಕ ಶಿಕ್ಷಣನೀಡಿ ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿ ಪಡಿಸಲಾಗುವುದುಎಂದು ಶಿಕ್ಷಣ ಸಚಿವ ಮದುಬಂಗಾರರಪ್ಪ ತಿಳಿಸಿದರು.

ತಾಲ್ಲೂಕಿನ ಮಾಸ್ತಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ನೂತನ ನಾಡಕಚೇರಿಉದ್ಘಾಟನೆ,ಓಸಾಟ್ ಸಂಸ್ಥೆ ವತಿಯಿಂದ 6ಕೋಟಿ ವೆಚ್ಚದಕಟ್ಟಡನಿರ್ಮಾಣಕ್ಕೆ ಮತ್ತು 2ಕೋಟಿ ವೆಚ್ಚದಲ್ಲಿ ಮಾಸ್ತಿ ಬಸ್ ನಿಲ್ದಾಣ ನಿರ್ಮಾಣದ ಕಾಮಗಾರಿಗಳಿಗೆ ಗುದಲಿ ಪೂಜೆ ನೆರವೇರಿಸಿ, ಸರ್ಕಾರದಗ್ಯಾರಂಟಿ ಯೋಜನೆಗಳ ಸಮಾವೇ?ದಲ್ಲಿ ಭಾಗವಹಿಸಿ ಮಾತನಾಡಿದರು. ಅಮೇರಿಕಾದಲ್ಲಿರುವ ಭಾರತಿಯರುಓಸಾಟ್ ಎಂಬ ಸಂಸ್ಥೆ ಮಾಡಿಕೊಂಡುಗ್ರಾಮೀಣ ಭಾಗದಅದರಲ್ಲೂ ಸರ್ಕಾರಿ ಶಾಲೆಗಳ ಕಟ್ಟಡ ನಿರ್ಮಾಣ ಮಾಡಿಗುಣಾತ್ಮಕ ಶಿಕ್ಷಣಕ್ಕೆ ಒತ್ತು ನೀಡುತ್ತಾ ಮಾಸ್ತಿ ಶಾಲಾ ಕಟ್ಟಡ 100ನೇ ಪ್ರಾಜೆಕ್ಟ್ ಆಗಿ 6ಕೋಟಿ ರೂಪಾಯಿಯ ವೆಚ್ಚದಲ್ಲಿ ನೂತನ ಶಾಲಾ ಕಟ್ಟಡವನ್ನು ಸರ್ಕಾರಿ ಶಾಲೆಗೆ ನೀಡುತ್ತಿರುವುದು ಶ್ಲಾಘನೀಯ ವಾದದ್ದುಎಂದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರಾದ ಮಧು ಬಂಗಾರಪ್ಪನವರು ತಿಳಿಸಿದರು.

ಮುಖ್ಯ ಮಂತ್ರಿ ಸಿದ್ದರಾಮಯ್ಯ ನವರ ನೇತೃತ್ವದ ಸರ್ಕಾರದಲ್ಲಿ ಶಿಕ್ಷಣ ಇಲಾಖೆಯಖಾತೆಯು ನನಗೆ ಬಯಸದೆ ಬಂದ ಭಾಗ್ಯವಾಗಿದ್ದು ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹಾಗೂ ಡಿಕೆ ಶಿವಕುಮಾರ್ ರವರು ನನ್ನ ಮೇಲೆ ನಂಬಿಕೆ ಇಟ್ಟುಖಾತೆ ನೀಡಿದ್ದುಅವರ ನಂಬಿಕೆಗೆ ಯಾವುದೇದಕ್ಕೆ ಬಾರದಂತೆ ಆಡಳಿತ ನಡೆಸುತ್ತಿರುವುದಾಗಿ ತಿಳಿಸಿದರು.

ನಾನು ಶಿಕ್ಷಣ ಸಚಿವನಾದ ಮೇಲೆ ಶಾಸಕ ಕೆ.ವೈ.ನಂಜೇಗೌಡರು ಹಾಗೂ ಎಂಎಲ್ಸಿ ಅನಿಲ್ ರವರುಇಂದು ಮಾಲೂರುತಾಲೂಕಿನಜ್ಞಾನಪೀಠ ಪ್ರಶಸ್ತಿ ಮಾಸ್ತಿ ವೆಂಕಟೇಶ್ಅಯ್ಯಂಗಾರ್ ಅವರ ಹುಟ್ಟೂರಿಗೆ ಕರೆಯಿಸಿ ನನ್ನಕೈಯಿಂದಲೇ ಕೆಲವು ಕಾರ್ಯಕ್ರಮಗಳನ್ನು ಗುದ್ದಲಿ ಪೂಜೆ ಮಾಡಿಸಿರುವುದು ನಿಜಕ್ಕೂ ಸಂತಸತಂದಿದೆಎಂದರು. ರಾಜ್ಯದಲ್ಲಿ ಶಾಲೆಗಳ ಅಭಿವೃದ್ಧಿಗೆ ಮುಖ್ಯಮಂತ್ರಿಯ ಸಿದ್ದರಾಮಯ್ಯನವರ ಸಲಹೆಯಂತೆಒಂಬತ್ತು ಮತ್ತು 10ನೇ ತರಗತಿ ಮಕ್ಕಳಿಗೆ ಮೊಟ್ಟೆಕೊಡುತ್ತಿರುವ ಬಗ್ಗೆ ಇಂದು ವಾರದಲ್ಲಿಎರಡು ಬಾರಿ ಮಕ್ಕಳಿಗೆ ಮೊಟ್ಟೆಯನ್ನು ನೀಡಲಾಗುತ್ತಿದ್ದುಒಟ್ಟುಒಂದುಕೋಟಿ ಇಪ್ಪತ್ತು ಲಕ್ಷ ಮೊಟ್ಟೆಯನ್ನುಅರವತ್ತು ಲಕ್ಷ ಮಕ್ಕಳಿಗೆ ನೀಡಲಾಗುತ್ತಿದೆಎಂದರು ವಾರದ ಏಳು ದಿನಗಳು ಕ್ಷೀರ ಭಾಗ್ಯ ನೀಡಲಾಗುತ್ತಿದ್ದು ಮಕ್ಕಳಿಗೆ ಪೌಷ್ಟಿಕಾಂಶದಲ್ಲಿಇದು ಹೆಚ್ಚು ಸಹಕಾರಿಯಾಗುತ್ತದೆಎಂದರು. ಇದೀಗ ಇನ್ನೂ ಹೆಚ್ಚು ಮಕ್ಕಳಿಗೆ ಪೌಷ್ಟಿಕತೆ ನೀಡಲು ವಾರದಲ್ಲಿ ಮೂರು ದಿವಸ ರಾಗಿ ಮಾಲ್ಟ್ ನೀಡುವ ಯೋಜನೆಯನ್ನುರೂಪಿಸಲಾಗಿದ್ದುಒಂದುಕೋಟಿ 80 ಲಕ್ಷ ಮಕ್ಕಳು ಇದರ ಪ್ರಯೋಜನ ಪಡೆಯುತ್ತಿರುತ್ತದೆ. ರಾಜ್ಯದಲ್ಲಿ ಹಂತ ಹಂತವಾಗಿಜಿಲ್ಲಾ ಮತ್ತುತಾಲೂಕು ವರುಗ್ರಾಮೀಣ ಭಾಗದಲ್ಲಿ ಶಾಲೆಗಳ ಅಭಿವೃದ್ಧಿಯಾಗುತ್ತದೆಎಂದುಅತೀ ಹೆಚ್ಚು ಮಕ್ಕಳುಉಚಿತಶಿಕ್ಷಣಕ್ಕಾಗಿಸರ್ಕಾರಿಶಾಲೆಯನ್ನು ಸೇರುತ್ತಿದ್ದುಇಂದು ಸರ್ಕಾರಿ ಶಾಲೆಯಲ್ಲಿಓದಿದ ವಿದ್ಯಾರ್ಥಿಗಳು ಉನ್ನತ ಹುದ್ದೆಯಲ್ಲಿಕಾರ್ಯ ನಿರ್ವಹಿಸುತ್ತಿದ್ದಾರೆಎಂದರು.

ಶಾಸಕ ಕೆ.ವೈ.ನಂಜೇಗೌಡರು ಮಾತನಾಡಿ ಈ ಭಾಗದಜನರ ಶಿಕ್ಷಣ ಸಚಿವರನ್ನುಇಲ್ಲಿಕರೆಸಲು ಬಹುದಿನಗಳ ಬಹುದಿನಗಳ ಬೇಡಿಕೆಯಾಗಿತ್ತುಅದರಂತೆ ಮಾಸ್ತಿ ಕನ್ನಡದ ಆಸ್ತಿ ಎಂಬಂತೆ ಮಾಸ್ತಿಯವರ ಪ್ರತಿಮೆಗೆ ಶಿಕ್ಷಣ ಸಚಿವರು ಮಾಲಾರ್ಪಣೆ ಮಾಡಿಗೌರವ ಸೂಚಿಸಿ ಶಾಲೆಗೆ ಬೇಟಿ ನೀಡಿ ಮಕ್ಕಳ ಜೊತೆ ಸಂವಾದ ನಡೆಸಿ ಮಕ್ಕಳಲ್ಲಿ ಹೊಸ ಚೇತನವನ್ನುತುಂಬಿದ್ದಾರೆ. ರಾಜ್ಯ ಸರ್ಕಾರದಐದು ಗ್ಯಾರಂಟಿಗಳು ಮಾಸ್ತಿ ಹೋಬಳಿಯ ಐದು ಗ್ರಾಮಪಂಚಾಯಿತಿಗಳಲ್ಲಿ ಅತೀ ಹೆಚ್ಚು ಗೃಹಲಕ್ಷ್ಮಿಯೋಜನೆ ಪಡೆದಿದ್ದಾರೆಅಂದರಂತೆ ಶಕ್ತಿ, ಅನ್ನಭಾಗ್ಯ,ಗೃಹಜ್ಯೋತಿ,ಯುವ ನಿಧಿಯನ್ನು ಪಡೆಯುತ್ತಿದ್ದಾರೆಎಂದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಅನಿಲ್ ಕುಮಾರ್ ಮಾತನಾಡಿದರು.ಯುವ ಮುಖಂಡ ಸುನೀಲ್ ನಂಜೇಗೌಡ , ಜಿಲ್ಲಾಕಾಂಗ್ರೆಸ್ಅಧ್ಯಕ್ಷ ಲಕ್ಷೀ ನಾರಾಯಣ, ಮಾಲೂರು- ಮಾಸ್ತಿ ಬ್ಲಾಕ್‌ಕಾಂಗ್ರೆಸ್ ಅಧ್ಯಕ್ಷರುಗಳಾದ ಎಮ್ ಜಿ ಮಧುಸೂದನ್,ಎಚ್‌ಎಮ್ ವಿಜಯ ನರಸಿಂಹ, ಗ್ರಾಮ ಪಂಚಾಯಿತಿಅಧ್ಯಕ್ಷೆ ಲಕ್ಷಮ್ಮ, ಉಪಾಧ್ಯಕ್ಷಚೇತನ್, ಜಿಲ್ಲಾ ಪಂಚಾಯತ್ ಸಿಇಒ ಪದ್ಮ ಬಸಂತಪ್ಪ,ಎಸಿ ವೆಂಕಟಲಕ್ಷ್ಮಮ್ಮ,ಎಸ್ ಪಿ ನಾರಾಯಣ್, ಡಿಡಿಪಿಐರಾಮಚಂದ್ರಪ್ಪ, ಸರ್ಕಾರಿ ನೌಕರರ ಸಂಘದಅಧ್ಯಕ್ಷ ಮುನೇಗೌಡ,ತಹಶೀಲ್ದಾರ್ ಕೆ ರಮೇಶ್, ಇಒ ವೀಣಾ,ಬಿಇಒ ಚಂದ್ರಕಲಾ, ಪೋಲಿಸ್ ಇನ್ಸಪೆಕ್ಟರ್ ವಸಂತ್ ಕುಮಾರ್, ಮುಖಂಡರುಗಳಾದ ಸಂಪಂಗೆರೆ ಮುನಿರಾಜುಆನೇಪುರ ಹನುಮಂತಪ್ಪ,ಕೆ ಸಿ ವೆಂಕಟೇಶ್‌ಗೌಡ ಉಪಸ್ಥಿತರಿದ್ದರು.

## ಉತ್ತಮ ಮೌಲ್ಯ, ಆದರ್ಶ, ತತ್ವ ಗುಣಗಳನ್ನು ಬೆಳೆಸಿಕೊಳ್ಳಿ

**ವಿಜಯಪುರ:** ಮಕ್ಕಳು ಬಾಲ್ಯದಿಂದಲೇ ಉತ್ತಮ ಮೌಲ್ಯ, ಆದರ್ಶ, ತತ್ವ ಗುಣಗಳನ್ನು ಬೆಳೆಸಿಕೊಂಡು ಅವುಗಳನ್ನು ಕರಗತ ಮಾಡಿಕೊಂಡರೆ ಜೀವನದಲ್ಲಿ ಎಲ್ಲಾ ಕೌಶಲ್ಯಗಳು ವೃದ್ಧಿಯಾಗುವುದರೊಂದಿಗೆ ಭವಿಷ್ಯದಲ್ಲಿ ಉತ್ತಮ ಪ್ರಜೆಯಾಗಲು ಅಡಿಪಾಯವಾಗುತ್ತದೆ ಎಂದು ಕೆಪಿಸಿಸಿ ಕಾರ್ಯದರ್ಶಿ ವಿ ಮಂಜುನಾಥ್ ತಿಳಿಸಿದರು.

ಅವರು ಇಲ್ಲಿನ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗದ 2023-24ನೇ ಸಾಲಿನ ವಾರ್ಷಿಕೋತ್ಸವ ಸಮಾರಂಭದಲ್ಲಿ ಸುವರ್ಣ ಸಂಭ್ರಮ ಶಾಲಾ ಸ್ಮರಣ ಸಂಚಿಕೆಯನ್ನು ಬಿಡುಗಡೆ ಮಾಡಿ ಮಾತನಾಡುತ್ತಿದ್ದರು.

ಇದೆ ಶಾಲೆಯಲ್ಲಿ ಓದಿದ ತಮ್ಮನ್ನು ಸೇರಿದಂತೆ ಸಾವಿರಾರು ವಿದ್ಯಾರ್ಥಿಗಳು ದೇಶವಿದೇಶಗಳಲ್ಲಿ ಉತ್ತಮ ಸ್ಥಾನಮಾನಗಳೊಂದಿಗೆ ಭವಿಷ್ಯ ರೂಪಿಸಿಕೊಂಡಿದ್ದು 75ನೇ ವರ್ಷಕ್ಕೆ ಕಾಲಿಟ್ಟಿರುವ ಈ ಶಾಲೆಗೆ ಸುದೀರ್ಘವಾದ ಇತಿಹಾಸವಿದೆ ಎಂದು ತಿಳಿಸಿದರು.

ಪ್ರಸ್ತಾವಿಕ ನುಡಿ ನುಡಿದ ಉಪ ಪ್ರಾಂಶುಪಾಲರಾದ ಪಿ ವೆಂಕಟೇಶ್ ರವರು ಶಿಕ್ಷಣದಿಂದ ಎಲ್ಲವೂ ಸಾಧ್ಯವೆಂಬುದು ಕೆಲವೊಮ್ಮೆ ಅನ್ವರ್ತವೆನಿಸದಿರದು ಎಷ್ಟೋ ಸಲ ನಾವು ಪಡೆದ ಶಿಕ್ಷಣಕ್ಕೂ ಮಾಡುವ ಕೆಲಸಕ್ಕೂ ಸಂಬಂಧವಿರುವುದಿಲ್ಲ, ಮನಸ್ಸಿನಲ್ಲಿ ತುಮುಲಗಳಿದ್ದರೆ ಅದನ್ನು ಸ್ಥಿಮಿತದಲ್ಲಿರುವ ಶಾಂತಚಿತ್ತದಿಂದ ಆಲೋಚಿಸುವ ಶಿಕ್ಷಣವನ್ನು ನೀಡಬೇಕಾಗಿದೆ ಎಂದು ತಿಳಿಸಿ, ಈಗಾಗಲೇ ಶಾಲೆಗೆ ದಾನಿಗಳ ಸಹಾಯದಿಂದ ಸುಮಾರು 10 ಲಕ್ಷ ರೂ ವೆಚ್ಚದಲ್ಲಿ ಶಾಲಾ ಆವರಣದಲ್ಲಿ ನೆಲಹಾಸುಗಳನ್ನು ಹಾಸಿದ್ದು, ಒಂದುವರೆ ಲಕ್ಷ ರೂ ವೆಚ್ಚದಲ್ಲಿ ಶಾಲಾ ಮಕ್ಕಳಿಗೆ ಕ್ರೀಡಾ ಸಮ ವಸ್ತ್ರ ವಿತರಿಸಿದ್ದು, ನಮ್ಮ ಶಾಲೆಯು ಯಾವುದೇ ಖಾಸಗಿ ಶಾಲೆಗಳಿಗಿಂತಲೂ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು ಕಳೆದ ಐದು ವರ್ಷಗಳಿಂದಲೂ ಶಾಲೆ ಶೇ 90ಕ್ಕೂ ಹೆಚ್ಚು ಅಂಕಗಳನ್ನು ಪಡೆಯುವುದರೊಂದಿಗೆ ಜಿಲ್ಲೆಯಲ್ಲಿಯೇ ಉತ್ತಮ ಶಾಲೆ ಎಂದು ಹೆಸರು ಪಡೆದಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪುರಸಭಾ ಅಧ್ಯಕ್ಷರಾದ ವಿಮಲಾ ಬಸವರಾಜು,ಏವಿವಿ ಟ್ರಸ್ಟ್‌ನ ಕಾರ್ಯದರ್ಶಿ ತೇಜಸ್, ಪುರಸಭಾ ಸದಸ್ಯರಾದ ಹನಿ ಫುಲ್ಲಾ, ಶಾಲಾ ಅಭಿವೃದ್ಧಿ ಸಮಿತಿ ಸದಸ್ಯರುಗಳಾದ ಎನ್ ಮುನಿಚಿನಪ್ಪ, ಬೇಕರಿ ಆನಂದಪ್ಪ, ವಿ ಹರೀಶ್ ಕುಮಾರ್, ಎಂ ಅಶ್ವಥ್, ಎಂ ನಾರಾಯಣಸ್ವಾಮಿ, ಶಿವಮೂರ್ತಿ,ಪುರಸಭಾ ಸದಸ್ಯರಾದ ಸಿಎಂ ರಾಮು, ಎಸ್ ಆರ್ ಎಸ್ ಬಸವರಾಜು, ಶಿಕ್ಷಕರುಗಳಾದ ನಾರಾಯಣ್, ಕರಗಪ್ಪ, ಪೆದ್ದನ್ನ, ರೋಹಿಣಿ ಇನ್ನಿತರೆ ಶಿಕ್ಷಕರಿಂದ ಹಾಗೂ ಶಾಲಾ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು

2022-23ನೇ ಸಾಲಿನ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಏವಿವಿ ಟ್ರಸ್ಟ್ ಹಾಗೂ ಹಳೆಯ ವಿದ್ಯಾರ್ಥಿಗಳು ಪ್ರೋತ್ಸಾಹ ಧನ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದ ನಂತರ ಶಾಲಾ ಮಕ್ಕಳು ಸಾಂಸ್ಕೃತಿಕ ಕಾರ್ಯಕ್ರಮ ನೀಡಿದರು.





ಹುಳಿಯಾರು ಹೋಬಳಿಯ ಯಳನಾಡು ಗ್ರಾಮ ಪಂಚಾಯ್ತಿಯ ನೂತನ ಉಪಾಧ್ಯಕ್ಷರಾಗಿ ಶಶಿಧರ್ ಮಂಗಳವಾರ ಅವಿರೋಧ ಆಯ್ಕೆಯಾದರು. ಚುನಾವಣಾಧಿಕಾರಿಯಾಗಿ ತಹಸೀಲ್ದಾರ್ ಗೀತಾ ಆಗಮಿಸಿದ್ದರು. ಅಧ್ಯಕ್ಷೆ ನಂದಿನಿ, ಪಿಡಿಒ ಹರ್ಷ ಹಾಗೂ ಸದಸ್ಯರು ಉಪಸ್ಥಿತರಿದ್ದರು.

## ಕೊಬ್ಬರಿ ನೋಂದಣಿ ಕೇಂದ್ರ ಆರಂಭಿಸಿ

**ಹುಳಿಯಾರು:** ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಹಂದನಕೆರೆಯಲ್ಲಿ ಕೊಬ್ಬರಿ ನೊಂದಣಿ ಆರಂಭಿಸುವಂತೆ ಕೆಆರ್‌ಎಸ್ ಪಕ್ಷದಿಂದ ಮನವಿ ಸಲ್ಲಿಸಲಾಯಿತು. ಕೆಆರ್‌ಎಸ್ ಪಕ್ಷದ ಮುಖಂಡ ಸಬ್ಬೇನಹಳ್ಳಿ ಶ್ರೀನಿವಾಸ್, ಹಂದನಕೆರೆಯ ನಿವೃತ್ತ ಕಾರ್ಯಪಾಲಕ ಎಂಜಿನಿಯರ್ ಸೀತಾರಾಂ ಶೆಟ್ಟರು, ತಿಮ್ಲಾಪುರದ ಸ್ವಾಮಿ ರವರು ಮನವಿ ಸಲ್ಲಿಸಿದರು.

ಇದೇ ವೇಳೆ ಮಾತನಾಡಿದ ಶ್ರೀನಿವಾಸ್ ಹಂದನಕೆರೆ ಹೋಬಳಿ ಮಟ್ಟದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ರೈತರು ತಿಪಟೂರಿನಲ್ಲಿ 7 ಕೇಂದ್ರಗಳನ್ನು ತೆರೆಯಲಾಗಿದೆ. ಆದರೆ ವಿಸ್ತೀರ್ಣದಲ್ಲಿ ದೊಡ್ಡದಾಗಿರುವ ಚಿಕ್ಕನಾಯಕನಹಳ್ಳಿಗೆ 4 ಕೌಂಟರ್ ನೀಡಲಾಗಿದೆ. ಚಿಕ್ಕನಾಯಕಹಳ್ಳಿಯಲ್ಲಿ ಅತಿ ಹೆಚ್ಚಿನ ಕೊಬ್ಬರಿ ಬೆಳೆಗಾರರು ಇದ್ದು ಕೇವಲ 4 ಕೌಂಟರ್ ತೆರೆದಿರುವುದು ಅಧಿಕಾರಿಗಳ ಮಲತಾಯಿಧೋರಣೆಯ ನಿದರ್ಶನವಾಗಿ ಎಂದು ಆರೋಪಿಸಿದರು.

ಚಿಕ್ಕನಾಯಕನಹಳ್ಳಿ ಹಾಗೂ ಹುಳಿಯಾರಿನಲ್ಲಿ ನೊಂದಣಿ ಮಾಡಿಕೊಳ್ಳುತ್ತಿದ್ದರೂ ಸಹ ಈ ಎರಡೂ ಸ್ಥಳಕ್ಕೆ ಹೋಗಿ ಬರಲು ಹಂದನಕೆರೆಯಿಂದ ಸರಿಯಾದ ಸಾರಿಗೆ ಸೌಲಭ್ಯಗಳಿಲ್ಲ. ಹಾಗಾಗಿ ಮಹಿಳೆಯರು, ವೃದ್ಧರು ಅಲ್ಲಿಗೆ ಹೋಗಿ ನೊಂದಣಿ ಮಾಡಿಸಲು ಭಾರಿ ತೊಂದರೆಯಾಗುತ್ತಿದೆ. ಹಾಗಾಗಿ ಹಂದನಕೆರೆಯಲ್ಲಿ ನೊಂದಣಿ ಮಾಡಿಕೊಂಡು ಖರೀಧಿಯಲ್ಲಿ ಹುಳಿಯಾರಿನಲ್ಲಿ ಮಾಡಲಿ ಎಂದು ಮನವಿ ಸಲ್ಲಿಸಿದರು.



## ರೈತ ಮಹಿಳೆಯರ ಪಾಡು ಹೇಳತೀರದು



**ಹುಳಿಯಾರು:** ನಫೇಡ್ ಮೂಲಕ ಕೊಬ್ಬರಿ ಖರೀದಿಗೆ ನೋಂದಣಿ ಪ್ರಕ್ರಿಯೆ ಆರಂಭವಾಗಿ ಎರಡು ದಿನಗಳು ಕಳೆದಿದ್ದರೂ ಸಹ ಕೊಬ್ಬರಿ ಬೆಳೆಗಾರರು ನೋಂದಣಿ ಮಾಡಿಸಲು ಹಗಲು ರಾತ್ರಿ ಎನ್ನದೆ ಎಪಿಎಂಸಿ ಬಳಿ ಠಿಕಾಣಿ ಹೂಡುತ್ತಿರುವ ಘಟನೆ ಬುಧವಾರ ಸಹ ಮುಂದುವರಿದಿದ್ದು ನೋಂದಣಿ ಮಾಡಿಸಲು ಹರಸಾಹಸ ಪಡುತ್ತಿದ್ದಾರೆ.

ಸೋಮವಾರ ನೊಂದಣಿ ಆರಂಭವಾಗಿದ್ದರೂ ಸಹ ಭಾನುವಾರ ರಾತ್ರಿಯೇ ತಮ್ಮ ಬ್ಯಾಗು, ಚಪ್ಪಲಿ, ಗೋಣಿಚೀಲ ಸರತಿಯಲ್ಲಿ ಇಟ್ಟು ಅಲ್ಲಿಯೇ ನಿದ್ದೆ ಮಾಡಿ ನೊಂದಣಿಗಾಗಿ ಕಾದರು. ಇದು ಸೋಮವಾರ ರಾತ್ರಿ ಹಾಗೂ ಮಂಗಳವಾರ ರಾತ್ರಿಯೂ ಸಹ ಮುಂದುವರಿದಿದ್ದು ಸರತಿ ಸಾಲು ಕರುಗುವ ಲಕ್ಷಣಗಳು ಕಾಣುತ್ತಿಲ್ಲ.

ಮಹಿಳೆಯರೂ ಸಹ ಮುಂಜಾನೆಯೇ ಬಂದು ಸರತಿಯಲ್ಲಿ ನಿಲ್ಲುತ್ತಿದ್ದಾರೆ. ಆದರೆ ಎಪಿಎಂಸಿಯಲ್ಲಿ ಶೌಚಾಲಯದ ವ್ಯವಸ್ಥೆ ಇಲ್ಲದೆ ಶೌಚಕ್ಕೆ ಪರದಾಡುತ್ತಿದ್ದಾರೆ. ಮನೆಯಲ್ಲಿರುವ ಮಕ್ಕಳನ್ನು ಕರೆಸಿ ಸಾಲಿನಲ್ಲಿ ನಿಲ್ಲಿಸಿ ಮನೆಗೆ ಹೋಗಿ ಬರುತ್ತಿದ್ದಾರೆ. ನೀರು ಕುಡಿಯಲು ಹೋದರೆ ಸೀನಿಯಾರಿಟಿ ಹೋಗುತ್ತದೆಂದು ಅವರಿವರನ್ನು ಕಾಡಿಬೇಡಿ ನೀರು ತರಿಸಿಕೊಂಡು ಕುಡಿಯುತ್ತಿದ್ದಾರೆ.

ಇನ್ನು ವೃದ್ಧರು ಸಹ ಸರತಿ ಸಾಲಿನಲ್ಲಿ ನಿಂತು ತಮ್ಮ ನೊಂದಣಿ ಬಂದಾಗ ಬಯೋಮೆಟ್ರಿಕ್ ಬಾರದೆ ಬೇಸರದಿಂದ ಹಿಂದಿರುತ್ತಿರುವ ಸನ್ನಿವೇಶವೂ ಸಹ ನಿರ್ಮಾಣವಾಗಿದೆ. ಎಫ್‌ಐಡಿಯಲ್ಲಿ ಕೊಬ್ಬರಿ ದಾಖಲಾಗಿರುವ ಪ್ರಮಾಣ ತಿಳಿಯದೆ ಎರಡ್ಮೂರು ದಿನ ಸರತಿಸಾಲಿನಲ್ಲಿ ನಿಂತು ನೊಂದಣಿಯಾದಾಗ ಕೇವಲ ಮೂರು ನಾಲ್ಕು ಚೀಲ ಮಾತ್ರ ಮಾರಲು ಅರ್ಹತೆ ಬಂದು ಇಷ್ಟಕ್ಕೆ ಇಷ್ಟೊಂದು ವನವಾಸ ಪಡಬೇಕಿತ್ತೆ ಎಂದು ಹಿಡಿಶಾಪ ಹಾಕಿ ಹೋಗುತ್ತಿದ್ದ ದೃಶ್ಯವು ಸಹ ಕಾಣಸಿಗುತ್ತಿವೆ.

ಸರ್ಕಾರ ಖರೀಧಿ ಮಿತಿ ನಿರ್ದರಿಸಿದ್ದು ತುಮಕೂರು, ತಿಪಟೂರು, ತುರುವೇಕೆರೆಯಲ್ಲಿ ಹೆಚ್ಚು ನೊಂದಣಿಯಾಗುತ್ತಿರುವುದರಿಂದ ಯಾವ ಕ್ಷಣದಲ್ಲಿ ಕೊನೆಯಾಗುತ್ತದೆಯೋ ಎಂಬ ಆತಂಕ ಈ ಭಾಗದ ರೈತರದಾಗಿದ್ದು ಕೊಬ್ಬರಿ ನೊಂದಣಿ ಮಾಡಿಸಿ ನಿಟ್ಟುಸಿರು ಬಿಡುತ್ತಿದ್ದಾರೆ. ನೊಂದಣಿ ಕೇಂದ್ರದಲ್ಲಿ ಸರ್ವರ್ ಸಮಸ್ಯೆ, ಪಕ್ಷಪಾತ, ನಿಧಾನಗತಿ ಎನ್ನುವ ಯಾವುದೇ ಆರೋಪವಿಲ್ಲದೆ ನಡೆಯುತ್ತಿದೆ.

## 16 ರಿಂದ ಜಾತ್ರಾ ಮಹೋತ್ಸವ



**ಹುಳಿಯಾರು:** ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಹಲ್ಕಲ್ ಬೆಟ್ಟ-ನಿರುವಗಲ್ ಶ್ರೀ ದುರ್ಗಮ್ಮ ದೇವಿಯವರ ಜಾತ್ರಾ ಮಹೋತ್ಸವವು ಶ್ರೀ ದುರ್ಗಮ್ಮ ದೇವಾಲಯ ಟ್ರಸ್ಟ್‌ನಿಂದ ಮಾರ್ಚ್ 16 ರಿಂದ 23 ರವರೆಗೆ ನಡೆಯಲಿದೆ.16 ರಂದು ನಿರುವಗಲ್ ಗ್ರಾಮದಲ್ಲಿ ನೆಲೆಸಿರುವ ಶ್ರೀ ಆಂಜನೇಯಸ್ವಾಮಿಗೆ ಅಭಿಷೇಕ, ಮಹಾಮಂಗಳಾರತಿ ಹಾಗೂ ನೂರೊಂದು ಎಡೆಸೇವೆ ಸಮರ್ಪಣೆ ನಡೆಯಲಿದೆ. 17 ರಂದು ನಿರುವಗಲ್ ಗ್ರಾಮದ ವ್ಯಾಪ್ತಿಯ ತೋಟದ ಮನೆಗಳಲ್ಲಿ ಹಾಗೂ ಕಟ್ಟೆಕೋಡಿ ಮತ್ತು ಯಾದವರಹಟ್ಟಿ ಗ್ರಾಮಸ್ಥರಿಂದ ಶ್ರೀ ಅಮ್ಮನವರಿಗೆ ಮಡಿಲಕ್ಕ ಸೇವೆ ಸಮರ್ಪಣೆ ನಡೆಯಲಿದೆ.

18 ರಂದು ನಿರುವಗಲ್ ಗ್ರಾಮದ ಗ್ರಾಮಸ್ಥರಿಂದ ಶ್ರೀ ಅಮ್ಮನವರಿಗೆ ಮಡಿಲಕ್ಕಿ ಸೇವೆ ಸಮರ್ಪಣೆಯ ನಂತರ ಶ್ರೀ ಅಮ್ಮನವರು ಮದುವಣಗಿತ್ತಿಯಾಗಲು ಉತ್ಸವದೊಂದಿಗೆ ಬಸವಾಪಟ್ಟಣ ಗ್ರಾಮಕ್ಕೆ ಆಗಮಿಸಲಿದೆ. 19 ರಂದು ಶ್ರೀ ಅಮ್ಮನವರ ಆರತಿಭಾನ ನಡೆಯಲಿದೆ. ಈ ವೇಳೆ ಶ್ರೀ ದುರ್ಗಮ್ಮ ದೇವರ ಉತ್ಸವ ಮೂರ್ತಿಗೆ ಬಸವಾಪಟ್ಟಣ ಗ್ರಾಮದಲ್ಲಿ ಸಂಪ್ರದಾಯ ದಂತೆ ಪೂಜಾ ವಿಧಿ-ವಿಧಾನಗಳನ್ನು ನೆರವೇರಿಸಿದ ತರುವಾಯ ಕಂಕಣಧಾರಣೆ ಮಾಡಿ ಭಕ್ತರ ಸೇವೆ ಸ್ವೀಕರಿಸಿದ ನಂತರ ಮದುವಣಗಿತ್ತಿಯಂತೆ ಉತ್ಸವದೊಂದಿಗೆ ಅಮ್ಮನವರು ಹಲ್ಕಲ್ ಬೆಟ್ಟಕ್ಕೆ ಆಗಮಿಸಲಿದೆ.

ಜಾತ್ರೆಯ ಧ್ವಜಾರೋಹಣ ಮಾಡಿಸಿ ನಂತರ ಮೂಲಸ್ಥಾನದಲ್ಲಿ ಭಕ್ತರಿಂದ ಆರತಿ ಭಾನದ ಸೇವೆ ನಡೆಯಲಿದೆ. 20 ರಂದು ಹೊಳೆಸೇವೆ ಉತ್ಸವ ನಡೆಯಲಿದ್ದು ಜಾತ್ರೆಯಲ್ಲಿ ನಡೆಯುವ ಹೊಳೆ ಸೇವೆ ಉತ್ಸವಕ್ಕೆ ನಿರುವಗಲ್ ಗ್ರಾಮದಲ್ಲಿರುವ ಉತ್ಸವಮೂರ್ತಿ ಆಂಜನೇಯಸ್ವಾಮಿ, ಕೆಂಚರಾಯಸ್ವಾಮಿ ಹಾಗೂ ಭೂತಪ್ಪ ದೇವರು ಹಲ್ಕಲ್ ಬೆಟ್ಟಕ್ಕೆ ಆಗಮಿ ಸಲಿದ್ದಾರೆ.

ಗುಡಕಟ್ಟು ದೇವರುಗಳಾದ ಶ್ರೀ ವರದರಾಯಸ್ವಾಮಿ ಮತ್ತು ದುರ್ಗಮ್ಮ, ಆಂಜನೇಯಸ್ವಾಮಿ, ಕರಿಯಮ್ಮ ದೇವರು ಗೋಪಾಲಪುರ, ಲಕ್ಷ್ಮಮ್ಮ ಲಕ್ಷ್ಮೀಪುರ ದೇವರುಗಳನ್ನು ಶ್ರೀ ಕ್ಷೇತ್ರ ಹಲ್ಕಲ್ ಬೆಟ್ಟಕ್ಕೆ ಬರಮಾಡಿಕೊಂಡ ಕಾರ್ಯಕ್ರಮದ ನಂತರ ಅಮ್ಮನವರ ಕಟ್ಟೆಯಲ್ಲಿ ಗಂಗಾಸ್ನಾನ ನಡೆಮುಡಿ ಉತ್ಸವ ಕಾರ್ಯಕ್ರಮಗಳು ನಡೆಯಲಿವೆ.

21 ರಂದು ಮುತ್ತಿನ ಮಂಟಪೋತ್ಸವ ಮತ್ತು ಕ್ಯಾತಲಿಂಗೇಶ್ವರಸ್ವಾಮಿ ಕೃಪಾಪೋಷಿತ ನಾಟಕ ಮಂಡಳಿ, ಬೆಳಗುಲಿ ಇವರಿಂದ ರಾತ್ರಿ 9.30 ಕ್ಕೆ ದೇವಿ ಮಹಾತ್ಮ ನಾಟಕ ನಡೆಯಲಿದೆ. 22 ರಂದು ಪುಷ್ಪೋತ್ಸವ, 23 ರಂದು ಬೆಳಗ್ಗೆ ಅಮ್ಮನವರು ಹಾಗೂ ಜಾತ್ರೆಗೆ ಆಗಮಿಸಿದ ದೇವರುಗಳಿಗೆ ಮಹಾಮಂಗಳಾರತಿ ನಂತರ ಜಾತ್ರಾ ಮಹೋತ್ಸವದ ಜಾಂಡೇವು ಇಳಿಸುವುದು ಹಾಗೂ ಜಾತ್ರೆಗೆ ಆಗಮಿಸಿದ ದೇವರುಗಳ ಬೀಳ್ಕೊಡುಗೆ ಕಾರ್ಯಕ್ರಮ ನಡೆಯಲಿದೆ.

# ಚಾ.ನಗರ ಎಪಿಎಂಸಿ ಯಲ್ಲಿ ಕ್ವಿಂಟಲ್‌ಗೆ ರೂ. 13,500 ದರದಲ್ಲಿ ಕೊಬ್ಬರಿ ಖರೀದಿಗೆ ಚಾಲನೆ

**ಚಾಮರಾಜನಗರ:** ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ ಗುಣಮಟ್ಟದ ಉಂಡೆ ಕೊಬ್ಬರಿಯನ್ನು ಖರೀದಿಸಲು ಚಾಮರಾಜನಗರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಪ್ರಾಂಗಣದಲ್ಲಿ ಆರಂಭವಾಗಿರುವ ಖರೀದಿ ಕೇಂದ್ರವನ್ನು ಎಪಿಎಂಸಿ ಅಧ್ಯಕ್ಷ ಎಚ್.ಎನ್. ಮಹದೇವಸ್ವಾಮಿ( ಸೋಮೇಶ್) ಉದ್ಘಾಟಿಸಿದರು.

ನಗರದ ಎಪಿಎಂಸಿ ಕಚೇರಿ ಸಭಾಂಗಣದಲ್ಲಿ ಅನ್‌ಲೈನ್ ಮೂಲಕ ಕೊಬ್ಬರಿ ಖರೀದಿಸಲು ಮಾ. 6ರಿಂದ ರೈತರಿಗೆ ನೊಂದಾಣಿ ಮಾಡಲು ಅವಕಾಶ ನೀಡಿದೆ. ಇದರನ್ವಯ ಚಾ.ನಗರ ಎಪಿಎಂಸಿ ಪ್ರಾಂಗಣದಲ್ಲಿ ರೈತರ ಕೊಬ್ಬರಿಯನ್ನು ಖರೀಸುವ ಕೇಂದ್ರಕ್ಕೆ ಚಾಲನೆ ನೀಡಿದ ಅಧ್ಯಕ್ಷರು ಮಾತನಾಡಿ, 2024ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ಬೆಂಬಲಬೆಲೆ ಯೋಜನೆಯಡಿ ಎಫ್.ಎ.ಕ್ಯೂ. ಗುಣಮಟ್ಟದ ಪ್ರತಿ ಕ್ವಿಂಟಾಲ್ ಉಂಡೆ ಕೊಬ್ಬರಿಗೆ 12 ಸಾವಿರ ರೂ. ಬೆಂಬಲ ಬೆಲೆಯನ್ನು ಘೋಷಿಸಲಾಗಿದೆ. ಬೆಂಬಲ ಬೆಲೆಯ ಜೊತೆಗೆ ರಾಜ್ಯ ಸರ್ಕಾರದಿಂದ ಪ್ರತಿ ಕ್ವಿಂಟಾಲ್ ಉಂಡೆ ಕೊಬ್ಬರಿಗೆ 1,500 ರೂ. ಪ್ರೋತ್ಸಾಹ ಧನ ನಿಗದಿಪಡಿಸಲಾಗಿದೆ. ಒಟ್ಟಾರೆ ಪ್ರತಿ ಕ್ವಿಂಟಾಲ್ ಕೊಬ್ಬರಿಗೆ 13,500 ರೂ. ರಂತೆ ಖರೀದಿಸಲಾಗುವುದುಎ ಎಂದರು. ಉಂಡೆ ಕೊಬ್ಬರಿ ಖರೀದಿಸಲು ನಾಫೆಡ್ ಸಂಸ್ಥೆಯನ್ನು ಕೇಂದ್ರ ಸರ್ಕಾರದ ಖರೀದಿ ಸಂಸ್ಥೆಯನ್ನಾಗಿ ಮತ್ತು ರಾಜ್ಯದ ವತಿಯಿಂದ ಕರ್ನಾಟಕ ಸಹಕಾರ ಮಾರಾಟ ಮಹಾಮಂಡಳವನ್ನು ಖರೀದಿ ಸಂಸ್ಥೆಯನ್ನಾಗಿ ನೇಮಿಸಲಾಗಿದೆ. ಇಂದಿನಿಂದಲೇ ಆರಂಭಗೊಂಡು ಮೇ ಕೊನೆಯ ವಾರದವರೆಗೆ ಖರೀದಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. ರೈತ ಬಾಂಧವರು ಖರೀದಿ ಕೇಂದ್ರಗಳಲ್ಲಿ ಫ್ರೂಟ್ಸ್ ಎಫ್‌ಐಡಿ ನೀಡಿ ನೋಂದಾಯಿಸಿಕೊಂಡು ಯೋಜನೆಯ ಸದುಉಪಯೋಗ ಪಡೆದುಕೊಳ್ಳಬೇಕು ಎಂದರು. ಪ್ರತಿ ಎಕರೆಗೆ 6 ಕ್ವಿಂಟಾಲ್‌ನಂತೆ ಪ್ರತಿ ರೈತರಿಂದ ಗರಿಷ್ಠ 15 ಕ್ವಿಂಟಾಲ್ ಮಾತ್ರ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಖರೀದಿಸಲು ಪ್ರಮಾಣ ನಿಗದಿ ಪಡಿಸಲಾಗಿದೆ. ಖರೀದಿ ಕೇಂದ್ರಕ್ಕೆ ಎಫ್.ಎ.ಕ್ಯೂ. ಉತ್ತಮ ಗುಣಮಟ್ಟದ ಕೊಬ್ಬರಿಯನ್ನು ತರಬೇಕು. ರೈತರಿಂದ ಖರೀದಿಸಲಾದ ಉಂಡೆ ಕೊಬ್ಬರಿಯ ಮೌಲ್ಯವನ್ನು ಡಿ.ಬಿ.ಟಿ ಮೂಲಕ ನೇರವಾಗಿ ಆಧಾರ್ ಜೋಡಣೆಯಾದ ಹಾಗೂ ಎನ್.ಪಿ.ಸಿ.ಐ ಸೀಡಿಂಗ್ ಆದ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗುತ್ತದೆ. ಚಾ.ನಗರ ಎಪಿಎಂಸಿಯಲ್ಲಿ ಖರೀದಿ ಅಧಿಕಾರಿಯನ್ನಾಗಿ ಶಶಿಧರ್ ಅವರನ್ನು ನೇಮಕ ಮಾಡಿದ್ದು, ಈ ಭಾಗದ ರೈತರು ಕೊಬ್ಬರಿಯನ್ನು ಎಪಿಎಂಸಿಯಲ್ಲಿ ಮಾರಾಟ ಮಾಡಲು ಮುಂದಾಗಬೇಕು ಎಂದರು. ಕಾರ್ಯಕ್ರಮದಲ್ಲಿ ಎಪಿಎಂಸಿ ಉಪಾಧ್ಯಕ್ಷ ರಾಮಚಂದ್ರ, ಮಾಜಿ ಅಧ್ಯಕ್ಷ ಮನೋಜ್ ಪಟೇಲ್, ನಿರ್ದೇಶಕರಾದ ವೆಂಕಟರಾವ್ ಸಾಠೆ, ವಿಜಯಲಕ್ಷ್ಮಿ ಮ್ಮ ಸಹಾಯಕ ಕಾರ್ಯದರ್ಶಿ ಮಧುಕುಮಾರ್, ಮಾರುಕಟ್ಟೆ ಅಧಿಕಾರಿ ಶಶಿಧರ್ ಇತರರು ಇದ್ದರು.



## ಕಾಂಗ್ರೆಸ್ ಮುಖಂಡ ಬಿವಿ ಕೃಷ್ಣಪ್ಪ ಬಿಜೆಪಿಗೆ.

**ವಿಜಯಪುರ:** ಪಟ್ಟಣದ ಖ್ಯಾತ ಅಡುಗೆ ಗುತ್ತಿಗೆದಾರರಾದ ಬಿ.ವಿ. ಕೃಷ್ಣಪ್ಪ ಕಳೆದ ಪುರಸಭಾ ಚುನಾವಣೆಯಲ್ಲಿ ಎರಡನೇ ವಾರ್ಡಿನಿಂದ ಕಾಂಗ್ರೆಸ್ ಪಕ್ಷದ ಪರ ಸ್ಪರ್ಧಿಸಿದ್ದು, ಕಾಂಗ್ರೆಸ್ ಮುಖಂಡರಾಗಿದ್ದ ಬಿವಿ ಕೃಷ್ಣಪ್ಪ ರವರು ಬುಧವಾರದಂದು ಬಿಜೆಪಿ ಮುಖಂಡರುಗಳಾದ ಕಟ್ಟಾ ಸುಬ್ರಹ್ಮಣ್ಯ ನಾಯ್ಡು, ಮಾಜಿ ಶಾಸಕರುಗಳಾದ ಪಿಳ್ಳ ಮುನಿಶ್ಯಾಮಪ್ಪ, ಜಿ.ಚಂದ್ರಣ್ಣ, ಟೌನ್ ಕಾಂಗ್ರೆಸ್ ಅಧ್ಯಕ್ಷ ಆರ್ ಸಿ ಮಂಜುನಾಥ್, ಕಾರ್ಯದರ್ಶಿ ಮುನಿಂದ್ರ, ಮಾಜಿ ಅಧ್ಯಕ್ಷರಾದ ರಾಮು ಭಗವಾನ್, ಗಿರೀಶ್, ಚ ವಿಜಯ ಬಾಬು, ಜಿಲ್ಲಾ ಪ್ರಧಾನ ಕಾರ್ಯದರ್ಶಿ ರವಿಕುಮಾರ್, ತಾಲೂಕು ಉಪಾಧ್ಯಕ್ಷರಾದ ರಾಮಕೃಷ್ಣ ಹೆಗಡೆ, ತಾಲೂಕು ಪ್ರಧಾನ ಕಾರ್ಯದರ್ಶಿ ರವಿಕುಮಾರ್, ತಾಲೂಕು ಅಧ್ಯಕ್ಷರಾದ ಸುನಿಲ್ ಸುಂದರೇಶ್, ದೇವನಹಳ್ಳಿ ತಾಲೂಕು ಚುನಾವಣಾ ಉಸ್ತುವಾರಿ ಕರ್ತ ಮಲ್ಲೈ ಸತೀಶ್, ಚನ್ನಕೇಶವ, ಮಾಜಿ ಪುರಸಭಾ ಸದಸ್ಯ ವಿಜಯಕುಮಾರ್, ಚಂದನ್, ಕೃಷ್ಣಪ್ಪ, ಪುರಸಭಾ ಸದಸ್ಯೆ ಶಿಲ್ಪ ಅಜಿತ್, ಮತ್ತಿತರರು ಉಪಸ್ಥಿತರಿದ್ದರು.



## ಪ್ರಧಾನಿ ಮೋದಿಯವರ ಮೆಚ್ಚುಗೆಗೆ ಪಾತ್ರರಾದ ಗ್ರಾಮೀಣ ಪ್ರತಿಭೆ

**ವಿಜಯಪುರ:** ಗ್ರಾಮೀಣ ಪ್ರತಿಭೆಗಳು ಪ್ರಧಾನಿ ಮೋದಿಯವರ ಗಮನ ಸೆಳೆಯಬಹುದು ಎನ್ನುವುದಕ್ಕೆ ಸಾಕ್ಷಿಯಾಗಿ ವಿಜಯಪುರ ಚನ್ನರಾಯಪಟ್ಟಣ ರಸ್ತೆಯಲ್ಲಿನ ಎಸ್.ಎಲ್.ವಿ ಇಂಟರ್ನ್ಯಾಷನಲ್ ಶಾಲಾ ವಿದ್ಯಾರ್ಥಿ ವಿಜ್ಞಾನ ದಿನದಂದು ಪ್ರದರ್ಶಿಸಿದ್ದನ್ನು ಮೋದಿಯಿಂದ ಪ್ರಶಂಸೆ ಪತ್ರ ಪಡೆದಿದ್ದಾರೆ. ಯಾವ ವಿಷಯಕ್ಕೆ ಮತ್ತು ಯಾವ ತರಗತಿ ವಿದ್ಯಾರ್ಥಿಗೆ ಪ್ರಶಂಸಾ ಪತ್ರ ಬಂದಿದೆ ಇದರ ಬಗ್ಗೆ ಕುತೂಹಲದಿಂದ ನೋಡೋದಾದ್ರೆ, ಸೋಲಾರ್ ಪ್ಯಾನಲ್ ಬೀದಿ ದೀಪದ ಬಗ್ಗೆ 4 ನೇ ತರಗತಿಯ ನಭನ್ಯೂ.ಎಸ್. ಗೌಡ ಅವನ ಜ್ಞಾನಕ್ಕೆ ಮೆಚ್ಚಿ ಪ್ರಧಾನ ಮಂತ್ರಿ ಕಚೇರಿಯಿಂದ ಪ್ರಶಂಸಾ ಪತ್ರವನ್ನು ನೀಡಿದ್ದಾರೆ. ಪ್ರಧಾನ ಮಂತ್ರಿ ಯವರ ಪ್ರಶಂಸೆಗೆ ಭಾಜನರಾದ ವಿದ್ಯಾರ್ಥಿ ನಭನ್ಯೂ.ಎಸ್.ಗೌಡ ಮಾತನಾಡಿ ನಾನು ನಮ್ಮ ಪ್ರಧಾನ ಮಂತ್ರಿ ಮೋದಿಜಿ ಅವರಿಗೆ ಸೋಲಾರ್ ಸ್ಟ್ರೀಟ್ ಲೈಟ್ಸ್ ಅಳವಡಿಕೆ ಬಗ್ಗೆ ಪತ್ರ ಬರೆದಿದ್ದೇನೆ. ಇದು ಪರಿಸರ ಸ್ನೇಹಿ ಹಾಗೂ ಆರ್ಥಿಕ ವೆಚ್ಚ ಕಡಿಮೆ ಮಾಡುವಂತದ್ದು, ನಾವು 3 ವರ್ಷಗಳಿಂದ 2 ಸೋಲಾರ್ ಬೀದಿ ದೀಪ ಬಳಸುತ್ತಿದ್ದು ರಸ್ತೆ ಯಲ್ಲಿ ಬೆಳಕು ಇದ್ದು ಅಪಘಾತಗಳು ಹಾಗೂ ಅಪರಾಧಗಳು ಕಡಿಮೆ ಆಗಿದೆ. ಮೋದಿಜೀ ಪತ್ರಕ್ಕೆ ಉತ್ತರಿಸಿದ್ದು, ಸ್ಥಳೀಯ ಪುರಸಭೆ, ನಗರ ಸಭೆಗೆ ಸೋಲಾರ್ ದೀಪ ಅಳವಡಿಸಲು ಹಣ ಮಂಜೂರು ಮಾಡುವುದಾಗಿ ತಿಳಿಸಿದ್ದಾರೆ. ಎಸ್.ಎಲ್.ವಿ ಇಂಟರ್ನ್ಯಾಷನಲ್ ಶಾಲೆಯ ಖಜಾಂಚಿ ಪುನೀತ್ ಗೌಡ ಮಾತನಾಡಿ , ನಮ್ಮ ಶಾಲೆಯಲ್ಲಿ ವ್ಯಾಸಂಗ ಮಾಡಿ ವಿದ್ಯಾರ್ಥಿಗಳ ಸಾಧನೆಗೆ ಮೆಚ್ಚಿ ಪ್ರಧಾನ ಮಂತ್ರಿ ಪ್ರಶಂಸಾಪತ್ರ ಕಳಿಸಿದ್ದು ನಮ್ಮ ಶಾಲೆಗೆ ಕೀರ್ತಿ ತಂದಿದ್ದಾರೆ ವಿಜ್ಞಾನ ಮೇಳದಲ್ಲಿ ಭಾಗಿಯಾಗಿದ್ದ ಮಕ್ಕಳು ತಮ್ಮದೇ ಶೈಲಿಯಲ್ಲಿ ಅಯೋಧ್ಯೆಯ ರಾಮಮಂದಿರ , ತಾಜ್ ಮಹಲ್, ಇನ್ನು ಅನೇಕ ಕಟ್ಟಡಗಳ ಮಾದರಿಯನ್ನು ಮಾಡಿರುವುದು ಆಕರ್ಷಣೀಯವಾಗಿತ್ತು. ಇದೇ ರೀತಿ ಮಕ್ಕಳನ್ನು ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಗುರುತಿಸುವ ಕೆಲಸ ನಮ್ಮ ಆಡಳಿತ ಮಂಡಳಿ ಮಾಡುತ್ತಿದೆ ಎಂದು ತಿಳಿಸಿದರು. ಶಾಲೆಯ ಮುಖ್ಯ ಉಪಾಧ್ಯಾಯನಿ ಅನುರಾಧ ಶಾಲೆಯಲ್ಲಿ ಶಿಕ್ಷಕರ ಮತ್ತು ಆಡಳಿತ ಮಂಡಳಿಯವರ ಸಹಕಾರದೊಂದಿಗೆ ಪೋಷಕರ ಸಹಕಾರ ಅತ್ಯಗತ್ಯವಾಗಿದೆ ಇದನ್ನು ಅರಿತುಕೊಂಡು ತಮ್ಮ ತಮ್ಮ ಜವಾಬ್ದಾರಿಯನ್ನು ಪೂರೈಸಬೇಕಿದೆ ಎಂದರು.



## ಕೆರೆಗಳ ವಿಶೇಷ ಅಭಿವೃದ್ಧಿಗೆ ತ್ವರಿತ ಕಾರ್ಯೋನ್ಮುಖರಾಗಿ



**ಚಾಮರಾಜನಗರ:** ಜಿಲ್ಲಾ ವ್ಯಾಪ್ತಿಯ ನಗರ, ಗ್ರಾಮಾಂತರ ಪ್ರದೇಶಗಳ 100 ಕೆರೆಗಳನ್ನು ವಿಶೇಷವಾಗಿ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಅಗತ್ಯವಿರುವ ಸಿದ್ದತಾ ಕಾರ್ಯಗಳಿಗೆ ಶೀಘ್ರವಾಗಿ ಅಧಿಕಾರಿಗಳು ಕಾರ್ಯೋನ್ಮುಖರಾಗುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಸೂಚಿಸಿದರು. ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಜಿಲ್ಲೆಯ ಕೆರೆ, ಕುಂಟೆ, ಕಟ್ಟೆ, ಜಲಾಶಯಗಳನ್ನು ಸಂರಕ್ಷಿಸುವ ಕುರಿತು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಎಂ. ಶ್ರೀಧರ ಅವರ ಸಮ್ಮುಖದಲ್ಲಿ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಾರ್ವಜನಿಕರು, ಜಾನುವಾರುಗಳು, ಪ್ರಾಣಿ-ಪಕ್ಷಿಗಳಿಗೆ ಅನುಕೂಲವಾಗುವಂತೆ ವಿಶೇಷವಾಗಿ ಕೆರೆಗಳನ್ನು ಅಭಿವೃದ್ಧಿಪಡಿಸುವ ಕಾರ್ಯವನ್ನು ಕೈಗೆತ್ತಿಕೊಳ್ಳಬೇಕಿದೆ. ಇದಕ್ಕಾಗಿ ಆಯ್ಕೆ ಮಾಡಿಕೊಳ್ಳಲಾಗುವ ಕೆರೆಗಳನ್ನು ಪಟ್ಟಿ ಮಾಡಿಕೊಳ್ಳಬೇಕು. ಕೆರೆಗಳ ಹಸ್ತಾಂತರ, ದಾಖಲೆಗಳ ನಿರ್ವಹಣೆ, ಅನುದಾನ ಬಳಕೆ ಇನ್ನಿತರ ಪೂರ್ವ ಯೋಜನೆ ಕಾರ್ಯಗಳನ್ನು ತ್ವರಿತವಾಗಿ ನಿರ್ವಹಿಸುವಂತೆ ಜಿಲ್ಲಾಧಿಕಾರಿಯವರು ತಿಳಿಸಿದರು.

ಕೆರೆಗಳಲ್ಲಿ ಮಳೆಗಾಲಕ್ಕೂ ಮೊದಲೇ ಹೂಳೆತ್ತುವ ಕಾಮಗಾರಿ ನಿರ್ವಹಿಸಿ, ಜಂಗಲ್ ಕಟಿಂಗ್ ಕಾರ್ಯವನ್ನು ಕೈಗೆತ್ತಿಕೊಳ್ಳಿ, ಗಡಿ ಗುರುತು ಕಾರ್ಯ, ಇತರೆ ಕಾಮಗಾರಿಗಳಿಗೆ ಮುಂದಾಗಿ. ದುರಸ್ಥಿ ಕೆಲಸಗಳಿಗೆ ಸ್ಥಳೀಯವಾಗಿ ಲಭ್ಯವಾಗುವ ಯಂತ್ರೋಪಕರಣಗಳನ್ನು ಬಳಸಿಕೊಂಡು ವೇಗವಾಗಿ ಕೆಲಸ ಪೂರ್ಣಗೊಳಿಸಿ ಎಂದರು.

ನಗರ ಸ್ಥಳೀಯ ಸಂಸ್ಥೆ ವ್ಯಾಪ್ತಿಯಲ್ಲಿ ಅಮೃತ್ 2ರಡಿ ಅಭಿವೃದ್ಧಿ ಪಡಿಸಲಿರುವ ಕಾಮಗಾರಿಗಳ ವಿವರ ಅಂದಾಜು ಪಟ್ಟಿಯನ್ನು ಸಲ್ಲಿಸಬೇಕು. ಸಿಎಸ್ ಆರ್ ಅನುದಾನ ಬಳಸಿಕೊಂಡು ಕೆರೆಗಳ ಅಭಿವೃದ್ಧಿ ಮಾಡಬಹುದಾಗಿದೆ. ನರೇಗಾ ಅಡಿ ಕೆಲಸ ಪ್ರಾರಂಭಿಸಿದ್ದಲ್ಲಿ ಆದ್ಯತೆ ಮೇರೆಗೆ ಮುಗಿಸಬೇಕು ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಕೆಲವು ಕೆರೆಗಳ ಆರ್.ಟಿಸಿ ಇಂಡೀಕರಣ ಬಾಕಿಯಿದ್ದು, ತ್ವರಿತವಾಗಿ ಇತ್ಯರ್ಥಪಡಿಸಿ ಸರ್ವೆಗೆ ಬಾಕಿ ಇರುವ, ಒತ್ತುವರಿಯಾಗಿರುವ ಹಾಗೂ ಒತ್ತುವರಿ ತೆರವುಗೊಳಿಸಿರುವ, ಹಸ್ತಾಂತರಕ್ಕೆ ಬಾಕಿ ಇರುವ ಕೆರೆಗಳ ಬಗ್ಗೆ ಸಮಗ್ರವಾಗಿ ಪರಿಶೀಲಿಸಿ ಪಟ್ಟಿಯೊಂದಿಗೆ ವರದಿ ಸಲ್ಲಿಸುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಎಂ. ಶ್ರೀಧರ ಅವರು ಮಾತನಾಡಿ ಇಲಾಖೆಗಳಿಗೆ ಹಸ್ತಾಂತರವಾಗಿರುವ ಕೆರೆಗಳನ್ನು ಮುಂದೆ ಒತ್ತುವರಿಯಾಗದಂತೆ ನೋಡಿಕೊಳ್ಳುವುದು ಅಧಿಕಾರಿಗಳ ಜವಾಬ್ದಾರಿ ಯಾಗಿದೆ. ಜಿಲ್ಲಾಧಿಕಾರಿಗಳು ಈಗಾಗಲೇ ನೀಡಿರುವ ನಿರ್ದೇಶನದಂತೆ ಅಧಿಕಾರಿಗಳು ಕ್ರಮವಹಿಸಿದರೆ ಜಿಲ್ಲೆಯ ಕೆರೆಗಳು ಉತ್ತಮ ಸ್ಥಿತಿಗೆ ಬರಲಿವೆ. ಜನ ಜಾನುವಾರುಗಳಿಗೆ ಅನುಕೂಲವಾಗಲಿದೆ ಎಂದರು.

### ಕಾಂಗ್ರೆಸ್‌ನ ತುಷ್ಟೀಕರಣ ನೀತಿಯಿಂದ ರಾಜ್ಯದಲ್ಲಿ ಹರಾಜುಕತೆ ಸೃಷ್ಟಿ




## ಭಯೋತ್ಪಾದಕರ ಪರವಾಗಿರುವ ಕಾಂಗ್ರೆಸ್ ಸರ್ಕಾರವನ್ನು ಕಿತ್ತೋಗೆಯಿರಿ

**ಚಾಮರಾಜನಗರ:** ರಾಜ್ಯದಲ್ಲಿರುವ ಕಾಂಗ್ರೆಸ್ ಸರ್ಕಾರದ ಹಿಂದು ವಿರೋಧಿಯಾಗಿದ್ದು, ಬೆಂಗಳೂರು ಬಾಂಬ್ ಬ್ಲಾಸ್ಟ್ ಪ್ರಕರಣ ಹಾಗೂ ಪಾಕಿಸ್ತಾನ್ ಪರ ಘೋಷಣೆ ಕೂಗಿದವರನ್ನು ರಕ್ಷಣೆ ಮಾಡಲು ಮುಂದಾಗಿರುವ ಕಾಂಗ್ರೆಸ್ ಸರ್ಕಾರವನ್ನು ವಜಾಗೊಳಿಸಬೇಕೆಂದು ಭಯೋತ್ಪಾದನಾ ವಿರೋಧಿ ಹೋರಾಟ ಸಮಿತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ನಗರದ ಚಾಮರಾಜೇಶ್ವರ ಸ್ವಾಮಿ ದೇವಸ್ಥಾನದ ಮುಂಭಾಗ ಸಮಾವೇಶಗೊಂಡ ಕಾರ್ಯಕರ್ತರು ಹಾಗೂ ಮುಖಂಡರು ಹಿಂದೂ ವಿರೋಧಿ ಹಾಗೂ ಭಯೋತ್ಪಾದಕರ ಪರವಾಗಿರುವ ಭ್ರಷ್ಟ ಕಾಂಗ್ರೆಸ್ ಸರ್ಕಾರ ವಿರುದ್ದ ಘೋಷಣೆಗಳನ್ನು ಕೂಗಿದರು. ಭುವನೇಶ್ವರಿ ವೃತ್ತದಲ್ಲಿ ಕೆಲ ಕಾಲ ಪ್ರತಿಭಟನೆ ನಡೆಸಿ, ಬಳಿಕ ಜಿಲ್ಲಾಡಳಿತ ಭವನಕ್ಕೆ ತೆರಳಿ ಧರಣಿ ನಡೆಸಿ, ಜಿಲ್ಲಾಧಿಕಾರಿಗಳ ಮುಖಾಂತರ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು. ಮಾಜಿ ಶಾಸಕ ಎಸ್. ಬಾಲರಾಜು, ಪ್ರತಿಭಟನಾಕಾರನ್ನುದ್ದೇಶಿಸಿ ಮಾತನಾಡಿ, ರಾಜ್ಯದಲ್ಲಿರುವ ಕಾಂಗ್ರೆಸ್ ಸರ್ಕಾರ ಭ್ರಷ್ಟಚಾರ ಹಾಗೂ ಭಯೋತ್ಪಾದಕರ ಪರವಾದ ನಿಲುವು ಹೊಂದಿದೆ. ಕೇ?ವಲ ಒಂದು ಧರ್ಮವರನ್ನು ತೃಷ್ಠಿಕರಿಸುವ ಮೂಲಕ ದೇಶವನ್ನು ಭಯೋತ್ಪಾದನೆಯ ಕೂಪಕ್ಕೆ ತಳ್ಳುತ್ತಿದೆ. ಬೆಂಗಳೂರಿನಲ್ಲಿ ನಡೆದಿರು ವ ಬಾಂಬ್ ಬ್ಲಾಸ್ಟ್ ಹಾಗೂ ವಿಧಾನಸೌಧದಲ್ಲಿ ಪಾಕಿಸ್ತಾನ್ ಪರ ಘೋಷಣೆ ಕೂಗಿರುವುದು ದೇಶ ವಿರೋಧಿ ಕೃತ್ಯವಾಗಿದೆ. ಇದನ್ನು ಸಮರ್ಥಿಸಿಕೊಳ್ಳುವ ಮೂಲಕ ರಾಜ್ಯ ಸರ್ಕಾರ ಕರ್ನಾಟಕವನ್ನು ಭಯೋತ್ಪಾದಕರ ತಾಣವನ್ನಾಗಿ ಮಾಡಲು ಮುಂದಾಗಿದೆ. ಇಂಥ ಸರ್ಕಾರವನ್ನು ರಾಜ್ಯಪಾಲರು ಕೂಡಲೇ ವಜಾಗೊಳಿಸಬೇಕು. ಇಲ್ಲವೇ ಮುಂಬರುವ ಲೋಕಸಭಾ ಚುನಾವಣೆಯ ಫಲಿತಾಂಶದ ಬಳಿಕ ರಾಜ್ಯದ ಜನರೇ ಈ ಸರ್ಕಾರವನ್ನು ಕಿತ್ತೋಗೆಯಲಿದ್ದಾರೆ ಎಂದರು.

ವಿಧಾನಸೌಧದ ಅವರಣದಲ್ಲಿಯೇ ಪಾಕಿಸ್ತಾನ ಪರ ಘೋಷಣೆ ಕೂಗಿದವರ ವಿರುದ್ದ ಪ್ರಕರಣ ದಾಖಲು ಮಾಡಲು ಮೀನಾಮೇಷ ಎನ್ನಿಸುತ್ತಿರುವ ಸರ್ಕಾರ ರಾಜ್ಯ ಜನರ ಒತ್ತಾಯ ಜಾಸ್ತಿಯಾಗುತ್ತಿದ್ದಂತೆ ಮೇಲ್ನೋಟಕ್ಕೆ ಬಂಧಿಸಿದೆ. ಅಲ್ಲದೇ ಬೆಂಗಳೂರು ಬಾಂಬ್ ಸ್ಪೋಟಕ್ಕೆ ರಾಜ್ಯ ಸರ್ಕಾರದಲ್ಲಿರುವ ಜವಾಬ್ದಾರಿಯುತ ಮುಖ್ಯಮಂತ್ರಿಗಳು ಹಾಗು ಸಚಿವರು ಬೇಜವಾಬ್ದಾರಿ ಹೇಳಿಕೆಯನ್ನು ನೀಡಿ, ತನಿಖೆಯನ್ನು ದಿಕ್ಕು ತಪ್ಪಿಸುತ್ತಿದ್ದಾರೆ. ಇಂಥ ಭ್ರಷ್ಟ ಹಾಗೂ ಜನವಿರೋಧಿ ಸರ್ಕಾರ ಇದ್ದಷ್ಟು ರಾಜ್ಯದ ಜನರಿಗೆ ಅನ್ಯಾಯವಾಗುತ್ತದೆ ಎಂದರು.

ಹಿಂದೂ ಜಾಗರಣಾ ವೇದಿಕೆಯ ಸಹ ಸಂಚಾಲಕ ಮಹೇಶ್ ಮಾತನಾಡಿ, ರಾಜ್ಯದಲ್ಲಿ ಭಯೋತ್ಪಾದನೆ ಹೆಚ್ಚಾಗಲು ರಾಜ್ಯ ಸರ್ಕಾರ ನಿಲುವು ಕಾರಣವಾಗಿದೆ. ಈಗಾಗಲೇ ದೇವಾಲಯದ ಹುಂಡಿಗಳಲ್ಲಿರುವ ಭಕ್ತರ ಹಣವನ್ನು ಮದರಸಗಳಿಗೆ ಬೇಕಾ ಬಿಟ್ಟಿ ಹಂಚಿಕೆ ಮಾಡುವ ಮೂಲಕ ಭಯೋತ್ಪಾದಕರನ್ನು ಉತ್ಪಾದನೆ ಮಾಡುವ ಫ್ಯಾಕ್ಟರಿಗಳಾಗಿ ಮಾಡುತ್ತಿದ್ದಾರೆ. ಅಲ್ಲದೇ ಇಂಥ ದೇಶ ದ್ರೋಹಿಗಳನ್ನು ಜೈಲಿಗೆ ಕಳುಹಿಸುವ ಬದಲು ವಿಧಾನಸೌಧದ ಒಳಗೆ ಬಿಟ್ಟುಕೊಂಡಿರುವ ಕಾಂಗ್ರೆಸ್ ಪಕ್ಷಕ್ಕೆ ಅಲ್ಲಿನ ಸಿಎಂ ಹಾಗೂ ಡಿಸಿಎಂಗೆ ಅವರ ಮತಗಳು ಬೇಕು. ಹೀಗಾಗಿ ದೇಶ ಹಾಗೂ ರಾಜ್ಯದ ಜನರು ಸತ್ತರು ಪರವಾಗಿಲ್ಲ ಎಂಬ ನಿಲುವು ಹೊಂದಿದೆ. ಮುಸ್ಲಿಂ ರಾಷ್ಟ್ರವಾನ್ನಗಿಸಲು ಕಾಂಗ್ರೆಸ್ ಹುನ್ನಾರ ಮಾಡುತ್ತಿದೆ. ರಾಜ್ಯ ಸಭೆಗೆ ನಾಸೀರ್ ಸಾಭ್ ಆಯ್ಕೆಯಾಗುತ್ತಿದ್ದಂತೆ ಅವರ ಬೆಂಬಲಿಗರು ಪಾಕಿಸ್ತಾನ್ ಪರ ಘೋಷಣೆ ಕೂಗಿದ್ದಾರೆ. ಹೀಗಾಗಿ ತನಿಖೆ ಪೂರ್ಣಗೊಳ್ಳುವವರೆಗೆ ಪ್ರಮಾಣ ವಚನ ಸ್ವೀಕಾರ ಮಾಡದಂತೆ ತಡೆ ನೀಡಬೇಕು. ಈತನನ್ನು ಸಹ ಬಂಧಿಸಿ, ದೇಶವಿರೋಧಿಗಳಿಗೆ ಪ್ರಚೋದನೆ ನೀಡಿದ ಆರೋಪದಡಿ ಪ್ರಕರಣ ದಾಖಲು ಮಾಡಬೇಕು ಎಂದು ಆಗ್ರಹಿಸಿದರು. ಮುಖಂಡರಾದ ಹಂಗಳ ಪ್ರಣಯ್, ಪಿ.ಬಿ. ಶಾಂತಮೂರ್ತಿ ಕುಲಗಾಣ, ಸುಂದರರಾಜ್, ಮಹೇಂದ್ರಕುಮಾರ್, ವಿಜಯ್, ಆರ್. ರಂಗಸ್ವಾಮಿ, ಕಾಡಹಳ್ಳಿ ಕುಮಾರ್, ಆರ್.ಎಂ. ಪುಟ್ಟಣ್ಣ, ನಂದೀಶ್ ಕೆಬ್ಬೇಪುರ, ಶಿವು ವಿರಾಟ್, ಸಿ.ಎಂ.ಶಿವರಾಜು, ಚಿಕ್ಕರಾಜು, ಚಂದ್ರಶೇಖರ್ ರಾವ್, ಸುರೇಶ್ ಇದ್ದರು.

## ಶಾಲೆಗೆಕೊಳವೆ ಬಾವಿ ಕೊಡುಗೆ



**ಚಿಕ್ಕಬಳ್ಳಾಪುರ:** ತಾಲೂಕಿನ ಕುಪ್ಪಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಎಸ್.ಡಿ.ಎಂ.ಸಿ ಅಧ್ಯಕ್ಷ ಕೆ.ಟಿ ಶ್ರೀನಿವಾಸ್ ಮತ್ತು ಸದಸ್ಯ ಕೆ.ವಿ ಶ್ರೀನಿವಾಸ್ (ಪಂಚೆ ಸೀನಪ್ಪ) ಅವರುಗಳ ಸ್ವಂತ ಖರ್ಚಿನಲ್ಲಿ ಕೊಳವೆ ಬಾವಿ ಕೊರೆಸಿದ್ದಾರೆ. 1 ಲಕ್ಷ ವೆಚ್ಚದಲ್ಲಿ 800 ಅಡಿ ಆಳದ ಬಾವಿಯಲ್ಲಿ ನೀರು ದೊರೆತಿದೆ. ಶಾಲೆಗೆ ಬಹಳ ವರ್ಷಗಳಿಂದ ನೀರಿನ ಸಮಸ್ಯೆ ಇತ್ತು ಅಡುಗೆ, ಕುಡಿಯುವ ನೀರಿನ, ಶೌಚಾಲಯ ನೀರಿಗಾಗಿ ಪರಿತಪಿಸುವಂತಿತ್ತು. ಈಗ ಕೊಳವೆ ಬಾವಿಯ ನೀರಿನಿಂದ ಸಮಸ್ಯೆಯನ್ನು ನೀಗಿಸಿದಂತಾಯಿತು ಎಂದು ಶಿಕ್ಷಕರು ಸಂತಸ ಗೊಂಡರು. ಕೊಳವೆ ಬಾವಿಗೆ ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮುಖ್ಯ ಶಿಕ್ಷಕ ವೆಂಕಟರಮಣಪ್ಪ, ಎಸ್.ಡಿ.ಎಂ.ಸಿ ಸದಸ್ಯರಾದ ಮುನಿಕೃಷ್ಣಪ್ಪ, ಸಿದ್ದರಾಜು, ಕೆ.ವಿ.ಕೊಂಡಪ್ಪ, ನರಸಿಂಹಮೂರ್ತಿ, ಸೋಮಶೇಖರ, ಡಾ. ನರಸಿಂಹಯ್ಯ, ಭಾಸ್ಕರ್, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಬಾಲಮ್ಮ, ಸದಸ್ಯರಾದ ಕೆ.ಸಿ. ನರಸಿಂಹಯ್ಯ, ಕೆ.ವಿ.ನಾರಾಯಣಸ್ವಾಮಿ, ಕೆ.ಎಂ.ರಾಜಣ್ಣ, ಶಿಕ್ಷಕರಾದ ಕೆ.ಹೆಚ್.ನಾಗರಾಜು, ಅಪ್ಸರ, ಡಿ.ತೇಜ್ ಕುಮಾರ್, ಶ್ವೇತ, ಸತೀಶ್ ಕುಮಾರ್, ಅಶ್ವಿನಿ, ನಾಗಮಣಿ ಹಾಗೂ ಸಿಬ್ಬಂದಿ ಇದ್ದರು.

## ಹುಂಡಿ ಎಣಿಕೆ ಕಾರ್ಯ



**ಮಾಲೂರು:** ತಾಲ್ಲೂಕಿನಚಿಕ್ಕತಿರುಪತಿಯ ಶ್ರೀ ಪ್ರಸನ್ನ ವೆಂಕಟರಮಣ ಸ್ವಾಮಿದೇವಸ್ಥಾನದಲ್ಲಿಇಂದು ಹುಂಡಿಎಣಿಕೆಕಾರ್ಯ ನಡೆದುಒಟ್ಟು. 37,86,365. ರೂಪಾಯಿ. ಚಿನ್ನ 30 ಗ್ರಾಂ. ಬೆಳ್ಳಿ 371 ಗ್ರಾಂ ಸೇರಿದಂತೆ ವಿದೇಶಿ ನೋಟುಗಳು ಸಂಗ್ರಹವಾಗಿದೆಎಂದುದೇವಸ್ಥಾನದಕಾರ್ಯನಿರ್ವಹಣಾಧಿಕಾರಿ ಸೆಲ್ವಮಣಿ ತಿಳಿಸಿದರು.

ಹುಂಡಿಎಣಿಕೆಕಾರ್ಯದಲ್ಲಿಕಂದಾಯಇಲಾಖೆಯ ಅಧಿಕಾರಿಗಳು, ಕೆನರಾ ಬ್ಯಾಂಕ್ ಸಿಬ್ಬಂದಿ ದೇವಸ್ಥಾನ ಸಿಬ್ಬಂದಿ ಭಾಗಿಯಾಗಿದ್ದರು.

ಈ ಸಂದರ್ಭದಲ್ಲಿ ಮುಜರಾಯಿ ತಹಶೀಲ್ದಾರ್ ಸುಜಾತ, ಕಂದಾಯ ಅಧಿಕಾರಿಗಳು ದೇವಸ್ಥಾನ ವ್ಯವಸ್ಥಾಪನಾ ಸಮಿತಿ ಮಾಜಿ ಸದಸ್ಯರಾದ ವೆಂಕಟೇಶ್‌ಗೌಡ, ಸುರೇಶ್ ಬಾಬು. ಗ್ರಾಮ ಲೆಕ್ಕಾಧಿಕಾರಿಗಳು ರೂಪೇಂದ್ರ, ಸೇರಿದಂತೆ ಮತ್ತಿತರರು ಹಾಜರಿದ್ದರು.

## 12 ರಂದು ನೇರ ಸಂದರ್ಶನ

**ರಾಮನಗರ:** ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಇದೇ ಮಾ. 12ರ ಮಂಗಳವಾರ ಉಚಿತ ನೇರ ಸಂದರ್ಶನ ಕಾರ್ಯಕ್ರಮ ಆಯೋಜಿಸಲಾಗಿದೆ. ನೇರ ಸಂದರ್ಶನ ಕಾರ್ಯಕ್ರಮದಲ್ಲಿ ಖಾಸಗಿ ಸಂಸ್ಥೆಗಳು ಭಾಗವಹಿಸುತ್ತಿದ್ದು, ಖಾಸಗಿ ವಲಯದಲ್ಲಿ ಉದ್ಯೋಗ ಮಾಡಲು ಇಚ್ಚಿಸುವವರು ಪಿಯುಸಿ ಮತ್ತು ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆ/ರೆಸ್ಯೂಮ್ (ಬಯೋಡೇಟಾ) ಇತ್ಯಾದಿ ದಾಖಲೆಗಳೊಂದಿಗೆ ಮಾ. 12ರ ಮಂಗಳವಾರ ಬೆಳಿಗ್ಗೆ 10.30ಕ್ಕೆ ಜಿಲ್ಲಾ ಕೌಶಲ್ಯ ಕೇಂದ್ರ, ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಕೊಠಡಿ ಸಂಖ್ಯೆ: 208, ಮೊದಲನೇ ಮಹಡಿ, ಬಿ.ಎಂ.ರಸ್ತೆ, ಕಂದಾಯ ಭವನ, ರಾಮನಗರ-562159 ಈ ಕಚೇರಿಗೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗೆ ದೂ.ಸಂಖ್ಯೆ: 080-27273364, 990331779 ಅಥವಾ 9964784178 ಅನ್ನು ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೀರಿನ ಸಮಸ್ಯೆ ಪರಿಹಾರಕ್ಕೆ ಗ್ರಾಮಗಳಿಗೆ ಭೇಟಿ ನೀಡಿ

**ಚಾಮರಾಜನಗರ:** ಮುಂಬರುವ ತಿಂಗಳಲ್ಲಿ ಕುಡಿಯುವ ನೀರಿನ ಕೊರತೆ ಉಂಟಾಗಬಹುದಾದ ಗ್ರಾಮಗಳಿಗೆ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳು ಭೇಟಿ ನೀಡಿ ಯಾವುದೇ ಸಮಸ್ಯೆಯಾಗದಂತೆ ಪೂರ್ವ ಸಿದ್ದತೆ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಂದೆ ಬರುವ ಅವಧಿಯಲ್ಲಿ ಕುಡಿಯುವ ನೀರಿನ ತೊಂದರೆ ಕಾಣಿಸಿಕೊಳ್ಳಬಹುದಾದ ಗ್ರಾಮಗಳ ಪಟ್ಟಿಯನ್ನು ಮಾಡಲಾಗಿದ್ದು, ಈ ಗ್ರಾಮಗಳಿಗೆ ಕುಡಿಯುವ ನೀರಿನ ಕೊರತೆಯಾಗದಿರಲು ವಹಿಸಬೇಕಿರುವ ಕ್ರಮಗಳಿಗೆ ಈಗಿನಿಂದಲೇ ಸಿದ್ದತೆ ಮಾಡಬೇಕು. ನೀರಿನ ಸಮಸ್ಯೆ ಕಾಡಬಹುದಾದ ಗ್ರಾಮಗಳಲ್ಲಿ ಖಾಸಗಿ ಕೊಳವೆಬಾವಿಗಳ ಮೂಲಕ ನೀರು ಪೂರೈಸಲು ಒಪ್ಪಂದ ಪ್ರಕ್ರಿಯೆ ಸೇರಿದಂತೆ ಇನ್ನಿತರ ಕ್ರಮಗಳಿಗೆ ಅಧಿಕಾರಿಗಳು ತುರ್ತಾಗಿ ಮುಂದಾಗಬೇಕು. ನಗರ, ಪಟ್ಟಣ ಪ್ರದೇಶಗಳಲ್ಲಿಯೂ ಸಮರ್ಪಕವಾಗಿ ನೀರು ಪೂರೈಸಬೇಕು ಎಂದು ಜಿಲ್ಲಾಧಿಕಾರಿಯವರು ನಿರ್ದೇಶನ ನೀಡಿದರು.

ಬರಗಾಲದ ಹಿನ್ನೆಲೆಯಲ್ಲಿ ಕುಡಿಯುವ ನೀರಿಗೆ ಎಲ್ಲಿಯೂ ತೊಂದರೆಯಾಗದಂತೆ ನೋಡಿಕೊಳ್ಳಬೇಕಿದೆ. ನೀರಿನ ಸಮಸ್ಯೆ ಎದುರಾದಲ್ಲಿ ಸಾರ್ವಜನಿಕರು ಮಾಹಿತಿ ನೀಡುವ ಸಲುವಾಗಿ ಸಹಾಯವಾಣಿ ತೆರೆಯಲಾಗಿದೆ. ಸಾರ್ವಜನಿಕರಿಂದ



ಸ್ವೀಕೃತವಾಗುವ ಕರೆಗಳಿಗೆ ತುರ್ತಾಗಿ ಸ್ಪಂದಿಸಿ ಸಮಸ್ಯೆ ಪರಿಹರಿಸಬೇಕು. ಜನರಿಗೆ ಸ್ಪಂದಿಸದಿದ್ದಲ್ಲಿ ಅಧಿಕಾರಿಗಳ ವಿರುದ್ಧ ಗಂಭೀರ ಕ್ರಮ ಜರುಗಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿಯವರು ಎಚ್ಚರಿಕೆ ನೀಡಿದರು.

ಕುಡಿಯುವ ನೀರಿನ ಗುಣಮಟ್ಟ ಪರಿಶೀಲಿಸಬೇಕು. ಪರಿಶುದ್ಧ ಕುಡಿಯುವ ನೀರು ಪೂರೈಸಬೇಕು. ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸುಸ್ಥಿತಿಯಲ್ಲಿಟ್ಟುಕೊಳ್ಳಬೇಕು. ಯಾವುದೇ ದುರಸ್ಥಿ ಕಾರ್ಯ ಇದ್ದಲ್ಲಿ ಶೀಘ್ರವಾಗಿ ಮುಗಿಸಬೇಕು. ನಗರ, ಗ್ರಾಮಾಂತರ ಪ್ರದೇಶಗಳಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಈ ಬಗ್ಗೆ ನಿಗಾವಹಿಸುವಂತೆ ಜಿಲ್ಲಾಧಿಕಾರಿಯವರು ಸೂಚಿಸಿದರು.

ಜಾನುವಾರುಗಳಿಗೆ ಮೇವು, ನೀರು ಲಭ್ಯವಾಗಬೇಕು. ಹೊರ ರಾಜ್ಯಗಳಿಗೆ ಮೇವು ಸಾಗಿಸುವುದನ್ನು ನಿರ್ಬಂಧಿಸಿ ಈ ಹಿಂದೆಯೇ ಆದೇಶ ಹೊರಡಿಸಲಾಗಿದೆ. ಸ್ಥಳೀಯವಾಗಿ ಮೇವು ದಾಸ್ತಾನು ಇರಬೇಕಿದೆ. ಮೇವಿನ ಕಿಟ್‌ಗಳನ್ನು ವಿತರಿಸಲಾಗಿದೆ. ಈ ಬಗ್ಗೆ ಪರಿಶೀಲಿಸಬೇಕು. ಬರಗಾಲ ನಿರ್ವಹಣೆಯಲ್ಲಿ ಯಾವುದೇ ಲೋಪಗಳಿಗೆ ಅವಕಾಶವಾಗದಂತೆ ಅಧಿಕಾರಿಗಳು ಕರ್ತವ್ಯ ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಆನಂದ್ ಪ್ರಕಾಶ್ ಮೀನಾ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ, ಉಪವಿಭಾಗಾಧಿಕಾರಿ ಎಂ. ಶಿವಮೂರ್ತಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಎಂಜಿನಿಯರ್ ಮಧುಸೂಧನ್, ಜಂಟಿ ಕೃಷಿ ನಿರ್ದೇಶಕರಾದ ಆಬೀದ್, ತೋಟಗಾರಿಕೆ ಇಲಾಖೆ ಉಪನಿರ್ದೇಶಕರಾದ ಶಿವಪ್ರಸಾದ್, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಕಾರ್ಯಪಾಲಕ ಎಂಜಿನಿಯರ್ ವಸಂತ್‌ಕುಮಾರ್ ಇದ್ದರು.

## ನೀತಿಸಂಹಿತೆ ಪಾಲನೆಗೆ ಜಿಲ್ಲಾಧಿಕಾರಿಗಳ ಸಭೆ

**ಚಾಮರಾಜನಗರ:** ಮುಂಬರುವ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಅಂತರರಾಜ್ಯ ಗಡಿ ಜಿಲ್ಲೆಗಳ ಭಾಗಗಳಲ್ಲಿ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಅನುಸರಿಸುವ ಸಂಬಂಧ ಚಾಮರಾಜನಗರ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಹಾಗೂ ಕೇರಳ ರಾಜ್ಯದ ವೈನಾಡು ಜಿಲ್ಲಾಧಿಕಾರಿ ಡಾ. ರೇಣುರಾಜ್ ಅವರು ವರ್ಚುವೆಲ್ ಮೂಲಕ ಸಭೆ ನಡೆಸಿದರು. ಗಡಿ ಭಾಗಗಳಲ್ಲಿ ಉಭಯ ಜಿಲ್ಲೆಗಳ ಅಧಿಕಾರಿಗಳು ಪರಸ್ಪರ ಚುನಾವಣಾ ಸಂಬಂಧಿ ಮಾಹಿತಿ ವಿನಿಮಯ ಮಾಡಿಕೊಳ್ಳಬೇಕು. ಅಕ್ರಮಗಳಿಗೆ ಅವಕಾಶವಾಗದಂತೆ ಕಟ್ಟೆಚ್ಚರ ಇರಬೇಕು. ಚೆಕ್ ಪೋಸ್ಟ್‌ಗಳಲ್ಲಿ ನಿರಂತರ ತಪಾಸಣಾ ಕ್ರಮಗಳನ್ನು ಅನುಸರಿಸಬೇಕು ಎಂಬುದು ಸೇರಿದಂತೆ ಇತರೆ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಉಭಯ ಜಿಲ್ಲಾಧಿಕಾರಿಗಳು ವಿವರವಾಗಿ ಚರ್ಚಿಸಿದರು. ಅಕ್ರಮ ಮದ್ಯ, ದಾಖಲೆ ಇಲ್ಲದ ಹಣ, ವಸ್ತುಗಳ ಸಾಗಾಣಿಕೆ ಮೇಲೆ ಹೆಚ್ಚಿನ ನಿಗಾ ವಹಿಸಬೇಕು. ಯಾವುದೇ ಅಕ್ರಮಗಳು ಕಂಡು ಬಂದರೆ ತ್ವರಿತ ಕ್ರಮ ವಹಿಸುವ ಬಗ್ಗೆ ಅಧಿಕಾರಿಗಳಿಗೆ ಸೂಚಿಸಲಾಯಿತು. ಉಭಯ ಜಿಲ್ಲೆಗಳ ಅಧಿಕಾರಿಗಳು ಜಂಟಿಯಾಗಿ ಗಡಿಭಾಗಗಳಲ್ಲಿ ಗಸ್ತು ಕಾರ್ಯ ನಿರ್ವಹಣೆ ಸೇರಿದಂತೆ ಮಾದರಿ ನೀತಿ ಸಂಹಿತೆ ಅವಧಿಯಲ್ಲಿ ಕಟ್ಟುನಿಟ್ಟಾಗಿ ಎಲ್ಲಾ ಕಾರ್ಯ ಚಟುವಟಿಕೆಗಳ ಮೇಲೆ ಕಣ್ಗಾವಲು ಇರಿಸುವ ಕುರಿತು ಜಿಲ್ಲಾಧಿಕಾರಿಗಳು ವಿಸ್ತೃತವಾಗಿ ಸಮಾಲೋಚಿಸಿದರು. ಚಾಮರಾಜನಗರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ವೈನಾಡು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಾರಾಯಣ್, ಚಾಮರಾಜನಗರ ಜಿಲ್ಲೆಯ ಅಬಕಾರಿ ಉಪ ಆಯುಕ್ತರಾದ ನಾಗಶಯನ, ವೈನಾಡು ಅಬಕಾರಿ ಉಪ ಆಯುಕ್ತರಾದ ರಾಕೇಶ್, ಪ್ರಾದೇಶಿಕ ಸಾರಿಗೆ ಅಧಿಕಾರಿ ಗಾಯತ್ರಿ ಸೇರಿದಂತೆ ಉಭಯ ಜಿಲ್ಲೆಗಳ ಅಧಿಕಾರಿಗಳು ಸಭೆಯಲ್ಲಿ ಇದ್ದರು.





## ರೀಡಿಸೈನಿಂಗ್ ಎಜುಕೇಶನ್ ದಿ ಇಂಡಸ್ ವೇ ಪುಸ್ತಕ ಬಿಡುಗಡೆ

ಇಂಡಸ್ ಇಂಟರ್ನ್ಯಾಶನಲ್ ಸ್ಕೂಲ್ ಇತ್ತೀಚೆಗೆ ಶಾಲೆಯಲ್ಲಿ ಖ್ಯಾತ ಲೇಖಕ ಬೆನೆಡಿಕ್ಟ್ ಪರಮಾನಂದರ ರೀಡಿಸೈನಿಂಗ್ ಎಜುಕೇಶನ್ ದಿ ಇಂಡಸ್ ವೇ ಪುಸ್ತಕವನ್ನು ಬಿಡುಗಡೆ ಮಾಡಿತು. ಈ ಪುಸ್ತಕವು ಇಂಡಸ್ ಗುಂಪಿನ ವಾರಸೆ ಮತ್ತು ಸಾಧನೆಗಳನ್ನು ಹರಸುತ್ತದೆ. ಈ ಸಂದರ್ಭದಲ್ಲಿ ಮಾತನಾಡಿದ ಬೆನೆಡಿಕ್ಟ್ ಪರಮಾನಂದ, ಬೆಸ್ಟ್ ಸೆಲ್ಲರ್ ಗೇಮ್ಸ್ ಇಂಡಿಯನ್ಸ್ ಪ್ಲೇ (2006) ಸೇರಿದಂತೆ ಹಲವಾರು ಪುಸ್ತಕ ಬರೆದಿರುವ ಒಬ್ಬ ನಿಪುಣ ಬರಹಗಾರ, ನಾನು ''ಇಂಡಿಯಾ ವೇ'' ಮತ್ತು ''ಟೊಯೋಟಾ ವೇ'' ಪುಸ್ತಕಗಳಿಂದ ಸ್ಫೂರ್ತಿ ಪಡೆದಿದ್ದೇನೆ. ಆ ಪುಸ್ತಕಗಳು ಜನರ ಬಗ್ಗೆ ಕಾಳಜಿ ವಹಿಸುವ ವ್ಯವಹಾರಗಳ ಬಗ್ಗೆ ಇದ್ದಾಗ, ಇಂಡಸ್ ಮಾರ್ಗ ಇದು ಕೇಂದ್ರ ವಿಷಯವು ಶಿಕ್ಷಣದಲ್ಲಿ ನಾಯಕರ ಬಗ್ಗೆ ಜನರ ಕಾಳಜಿಯ ಮೂಲಕ ಶಿಕ್ಷಣಕ್ಕಾಗಿ ವಾತಾವರಣವನ್ನು ಸೃಷ್ಟಿಸುತ್ತದೆ. ಪುಸ್ತಕದ ಸಾರದ ಕುರಿತು ಮಾತನಾಡಿದ ಲೆಫ್ಟಿನೆಂಟ್ ಜನರಲ್ ಅರ್ಜುನ್ ರೇ, ''ವ್ಯಕ್ತಿಗಳು ಮಾತ್ರವಲ್ಲ, ಸಂಸ್ಥೆಗಳೂ ಸಹ ತನ್ನನ್ನು ಮೀರಿದ ಉದ್ದೇಶವನ್ನು ಹೊಂದಿರಬೇಕು. ಉದ್ದೇಶವಿಲ್ಲದ ಸಂಸ್ಥೆಯು ಪರಂಪರೆಯನ್ನು ಹೊಂದಿರುವುದಿಲ್ಲ, ಹೊಸತನವನ್ನು ಮಾಡಲು ಮತ್ತು ಮುಂದಿನ ದಾರಿಯನ್ನು ತೋರಿಸಲು ಸಾಧ್ಯವಾಗುವುದಿಲ್ಲ. ಉದ್ದೇಶದಿಂದ ದೃಷ್ಟಿ ಹರಿಯುತ್ತದೆ. ನನಗೆ, ಇದು ಇಂಡಸ್ ಮಾರ್ಗದ ಮೂಲ ಸಾರವಾಗಿದೆ. ವಿಧಾನಸಭೆಯ ಮಾಜಿ ಅಧ್ಯಕ್ಷರು, ಮಾಜಿ ಸಚಿವರು, ಐಐಎಂ ಬೆಂಗಳೂರು ಮಾಜಿ ಪ್ರಾಧ್ಯಾಪಕರಾದ ಪ್ರೊ.ಬಿ.ಕೆ.ಚಂದ್ರಶೇಖರ್. ಈವೆಂಟ್ ಮುಖ್ಯಾಂಶವೆಂದರೆ ಲೆಫ್ಟಿನೆಂಟ್ ಜನರಲ್ ಅರ್ಜುನ್ ರೇ ಮತ್ತು ಬೆನೆಡಿಕ್ಟ್ ಪರ್ಮಾನಂದ್ ಅವರೊಂದಿಗೆ ಪುಸ್ತಕದ ಸಂಭಾಷಣೆ, ಐಐಎಂ ಅಹಮದಾಬಾದ್ನ ಮಾಜಿ ಪ್ರೊಫೆಸರ್ ಡಾ ವಿ.ರಘುನಾಥನ್, ಮಾಜಿ ಅಧ್ಯಕ್ಷ ಐಎನ್ಜಿ ವೈಶ್ಯ ಬ್ಯಾಂಕ್ ಮತ್ತು ಮಾಜಿ ಸಿಇಒ, ಜಿಎಂಆರ್ ಫೌಂಡೇಶನ್. ಉಪಸ್ಥಿತರಿದ್ದರು.

## ನೂಡಲ್ಸ್ ಪಕೋಡಾ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

250 ಗ್ರಾಂ ನೂಡಲ್ಸ್, ಒಂದೂವರೆ ಕಪ್ ಮೈದಾ, ಕತ್ತರಿಸಿದ ಈರುಳ್ಳಿ 1, ಸ್ವಲ್ಪ ಕರಿಮೆಣಸಿನ ಪುಡಿ, ಶುಂಠಿ ಪೇಸ್ಟ್ 1 ಚಮಚ, 5-6 ಹಸಿಮೆಣಸಿನ ಕಾಯಿ, 1/2 ಕಪ್ ಮೈದಾ, 1 ಕಪ್ ಹಾಲು, 1/2 ಕಪ್ ಬ್ರೆಡ್ ಚೂರುಗಳು, ರುಚಿಗೆ ತಕ್ಕ ಉಪ್ಪು, ಎಣ್ಣೆ

### ಮಾಡುವ ವಿಧಾನ

ನೂಡಲ್ಸ್ ಅನ್ನು ಚಿಟಿಕೆಯಷ್ಟು ಉಪ್ಪು ಹಾಕಿ ಬಿಸಿನೀರಿನಲ್ಲಿ ಹಾಕಿ ಬೇಯಿಸಬೇಕು. ಅಂಟದಿರಲು ಸ್ವಲ್ಪ ಎಣ್ಣೆ ಹಾಕಬೇಕು. ಈಗ ಬೆಂದ ನೂಡಲ್ಸ್ಗೆ ಶುಂಠಿ ಪೇಸ್ಟ್, ಕರಿಮೆಣಸಿನ ಪುಡಿ, ಈರುಳ್ಳಿ, ಹಸಿಮೆಣಸಿನಕಾಯಿ, ಉಪ್ಪು ಹಾಕಿ ಮಿಶ್ರ ಮಾಡಿ ಪಕೋಡಕ್ಕೆ ಉಂಡೆ ಕಟ್ಟಿದ ರೀತಿ ಕಟ್ಟಬೇಕು. ಈಗ ಬಾಣಲೆಯನ್ನು ಬಿಸಿ ಮಾಡಿ ಸ್ವಲ್ಪ ಎಣ್ಣೆ ಹಾಕಿ ಅದಕ್ಕೆ ಬ್ರೆಡ್ ಚೂರುಗಳನ್ನು ಹಾಕಿ ಹುರಿದು ತಟ್ಟೆಯಲ್ಲಿ ಇಡಬೇಕು.

ಈಗ ಬಾಣಲೆಗೆ ಒಂದು ಚಮಚ ಎಣ್ಣೆ ಹಾಕಿ ಅದಕ್ಕೆ ಮೈದಾ ಹಾಕಿ 1 ನಿಮಿಷದ ಬಳಿಕ ಹಾಲು ಸೇರಿಸಿ ಕಡಿಮೆ ಉರಿಯಲ್ಲಿ ಬೇಯಿಸಬೇಕು. ಮೈದಾ ಸ್ವಲ್ಪ ಗಟ್ಟಿ ಪೇಸ್ಟ್ ಆದ ಮೇಲೆ ಉರಿಯಿಂದ ತೆಗೆಯಬೇಕು. ಬಾಣಲೆಯಲ್ಲಿ ಎಣ್ಣೆ ಹಾಕಿ ಕುದಿಸಬೇಕು. ಈಗ ನೂಡಲ್ಸ್ ಪಕೋಡವನ್ನು ಈ ಮೈದಾ ಮಿಶ್ರಣದಲ್ಲಿ ಅದ್ದಿ, ನಂತರ ಬ್ರೆಡ್ ಚೂರುಗಳ ಮೇಲೆ ಉರುಳಿಸಿ ಎಣ್ಣೆಯಲ್ಲಿ ಹಾಕಬೇಕು. ಪಕೋಡ ಕಂದು ಬಣ್ಣಕ್ಕೆ ಬಂದಾಗ ತೆಗೆದರೆ ರುಚಿಕರವಾದ ಪಕೋಡ ರೆಡಿ.

# ದಕ್ಷಿಣ ಅಂದರೆ ಕೇವಲ ಇಡ್ಲಿ-ವಡೆ ಅಲ್ಲ: ಕಿಂಗ್ ಖಾನ್ ವಿರುದ್ಧ ಗರಂ



ಶಾರುಕ್ ಖಾನ್ ಅಂದರೆ ಹಿಂದಿ ಚಿತ್ರರಂಗದ ಸೂಪರ್ ಸ್ಟಾರ್, ಪ್ರೀತಿಯಿಂದ ಅಭಿಮಾನಿಗಳು ಅವರನ್ನು ಕಿಂಗ್ ಖಾನ್ ಎಂದು ಹೇಳುತ್ತಾರೆ. ಅಷ್ಟೇ ಅಲ್ಲ ಬಾದಶಾಹ್, ಪಠಾಣ್, ಜವಾನ್ ಇತ್ಯಾದಿ ಹಸರುಗಳಿಂದಲೂ ಕೂಡ ಶಾರುಕ್ ಅವರನ್ನು ಪ್ರೀತಿಸುತ್ತಾರೆ ಮತ್ತು ಗೌರವಿಸುತ್ತಾರೆ. ಶಾರುಕ್ ಅಂದರೆ ಅಭಿಮಾನಿಗಳಿಗೆ ಅಪಾರ ಗೌರವ, ಆದರೆ, ಅವರು ಮಾತನಾಡುವ ಒಂದು ಮಾತು ಜನರ ಅಪಾರ ಮನಸ್ಸು ನೋಯಿಸುತ್ತದೆ. ಶಾರುಕ್ ಕೋಟ್ಯಾಂತರ ಅಭಿಮಾನಿಗಳನ್ನು ಹೊಂದಿದ್ದಾರೆ ಮತ್ತು ಹಲವರು ಅವರನ್ನು ತಮ್ಮ ರೋಲ್ ಮಾಡೆಲ್ ಎಂದೂ ಕೂಡ ಭಾವಿಸುತ್ತಾರೆ. ಹೀಗಿರುವಾಗ ಅವರು ಮಾತನಾಡುವ ಒಂದೊಂದು ಮಾತು ಜನರ ಮನಸ್ಸಿನ ಮೇಲೆ ಆಘಾಡ ಪರಿಣಾಮ ಬೀರುತ್ತದೆ. ಹೀಗಿರುವಾಗ ಅವರು ತಮಾಷೆ ಕೂಡ ಸಾಕಷ್ಟು ಪ್ರಜ್ಞೆಯಿಂದ ಮಾಡಬೇಕಾಗುತ್ತದೆ.

ಪ್ರಸ್ತುತ ಅನಂತ್ ಅಂಬಾನಿ-ರಾಧಿಕಾ ಮರ್ಚೆಂಟ್ ಅವರ ವಿವಾಹದ ಪಾರ್ಟಿ ಬಳಿಕ ಶಾರುಖ್ ಖಾನ್ ಅಭಿಮಾನಿಗಳು ಅವರ ಮೇಲೆ ಕೋಪಗೊಂಡಿದ್ದಾರೆ. ರಾಮ್ ಚರಣ್ ಅವರನ್ನು 'ಇಡ್ಲಿ ವಡಾ' ಎಂದು ಗೇಲಿ ಎಂದು ಕರೆದಿದ್ದೆ ಇದಕ್ಕೆ ಕಾರಣ ಎನ್ನಲಾಗಿದೆ. ಇದು ನಿಜಕ್ಕೂ ತೀರಾ ನೋವನ್ನುಂಟು ಮಾಡುತ್ತದೆ. ಒಂದೆಡೆ ಶಾರುಖ್ ಹಾಸ್ಯಪ್ರಜ್ಞೆ ತುಂಬಾ ಅದ್ಭುತವಾಗಿದೆ ಎಂದು ಒಪ್ಪಿಕೊಂಡರೂ ಕೂಡ, ಈ ಬಾರಿ ಅದು ಅವರ ಬಳಿಯೇ ಹಿಂದಿರುಗುತ್ತಿದೆ. ಏಕೆಂದರೆ ದಕ್ಷಿಣ ಚಿತ್ರರಂಗದ ಮೇರು ನಟ ರಾಮ್ ಚರಣ್ ಕುರಿತು ಶಾರುಕ್ ಮಾಡಿದ ತಮಾಷೆ, ರಾಮ್ ಚರಣ್ ಬಿಡಿ, ಶಾರುಕ್ ಅಭಿಮಾನಿಗಳಿಗೆಯೇ ಇರುಸುಮುರುಸು ಉಂಟು ಮಾಡಿದೆ



ಈ ಕುರಿತು ರಾಮ್ ಚರಣ್ ಅವರ ಮೇಕಪ್ ಆರ್ಟಿಸ್ಟ್ ಝೆಬಾ ಹಾಸನ್ ಸಾಮಾಜಿಕ ಜಾಲತಾಣದಲ್ಲಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕೋಟ್ಯಾಂತರ ಅಭಿಮಾನಿಗಳಂತೆ ತಾನೂ ಒರ್ವ ಶಾರುಖ್ ಅಭಿಮಾನಿ ಎಂದು ಹೇಳಿಕೊಂಡ ಝೆಬಾ, ಶಾರುಖ್ ತಮಾಷೆಗೆ ಪ್ರತಿಕ್ರಿಯಿಸಿದ್ದಾಳೆ. 'ನಾನು ಶಾರುಖ್ ಖಾನ್ ಅವರ ದೊಡ್ಡ ಅಭಿಮಾನಿ. ಆದರೆ ಅವರು ರಾಮ್ ಚರಣ್ ಅವರನ್ನು ವೇದಿಕೆಗೆ ಕರೆದ ರೀತಿ ನನಗೆ ಇಷ್ಟವಾಗಿಲ್ಲ ಎಂದಿದ್ದಾರೆ. ನಂತರ ಅವರು ಇನ್ಸ್ಟಾಗ್ರಾಮ್ ಸ್ಟೋರಿ ಬಗ್ಗೆ ಪ್ರತಿಕ್ರಿಯಿಸಿದ್ದಾರೆ. ಈ ಕುರಿತು ಇನ್ಸ್ಟಾ ಕಥೆ ಬರೆದುಕೊಂಡ ಝೆಬಾ, 'ಇಡ್ಲಿ ವಡಾ ಸಂಭಾರ್ ರಾಮ್ ಚರಣ್, ನೀವು ಎಲ್ಲಿದ್ದೀರಿ? ಇದನ್ನು ಕೇಳಿ ನಾನು ಪಾರ್ಟಿ ಹಾಲ್ನಿಂದ ಹೊರಗೆ ಬಂದೆ. ಇದು ರಾಮ್ ಚರಣ್ ಗೆ ಇದು ತುಂಬಾ ಅವಮಾನ' ಎಂದು ಹೇಳಿದ್ದಾರೆ. ರಾಮ್ ಚರಣ್. ದಕ್ಷಿಣ ಚಿತ್ರರಂಗದಲ್ಲಿ ದೊಡ್ಡ ಹೆಸರು. ಕಳೆದ ವರ್ಷ, ಅವರು ಮತ್ತು ಅವರ ತಂಡದ ಕಾರಣ, ಪ್ರತಿಯೊಬ್ಬ ಭಾರತೀಯ 'ನಾಟು ನಾಟು' ಹಾಡುತ್ತಿದ್ದನು. ಇದು ಆಸ್ಕರ್ ಮತ್ತು ಗೋಲ್ಡನ್ ಪ್ರಶಸ್ತಿಯನ್ನು ಗೆದ್ದುಕೊಂಡಿದೆ.

ಈಗ ಪಾರ್ಟಿಯಲ್ಲಿ ರಾಮ್ ಚರಣ್ ಗೆ ಇಂತಹ ಪದಗಳನ್ನು ಬಳಸುವುದು ಸಂಪೂರ್ಣ ತಪ್ಪು. ಒಬ್ಬ ಸೂಪರ್ಸ್ಟಾರ್ ಇನ್ನೊಬ್ಬ ಸೂಪರ್ಸ್ಟಾರ್ ಬಗ್ಗೆ ಇಂತಹ ತಮಾಷೆ ಮಾಡಲು ಹೇಗೆ ಸಾಧ್ಯ ಎಂದು ಅಭಿಮಾನಿಗಳು ಪ್ರಶ್ನಿಸುತ್ತಿದ್ದಾರೆ.

ಮೊದಮೊದಲು ಶಾರುಖ್ ಖಾನ್ ಹಾಗೂ ಬಾಲಿವುಡ್ನ ಎಲ್ಲಾ ಜನ ದಕ್ಷಿಣ ಅಂದರೆ ಕೇವಲ ಸಾಂಬಾರ್ ವಡೆ, ಇಡ್ಲಿ ಅಷ್ಟಕ್ಕೇ ಸೀಮಿತವಾಗಿಲ್ಲ ಎಂಬುದನ್ನು ಅರ್ಥಮಾಡಿಕೊಳ್ಳಬೇಕಿದೆ. ದಕ್ಷಿಣ ಭಾರತ ದೇಶದ ಹೆಮ್ಮೆ. ಇದು ದೇಶದ ಸಂಪ್ರದಾಯ ಮತ್ತು ಸಂಸ್ಕೃತಿಯ ಪ್ರತೀಕವಾಗಿದೆ. ಇದು ಭಾರತೀಯ ಚಲನಚಿತ್ರೋದ್ಯಮದ ವಿಶೇಷ ಭಾಗವಾಗಿದೆ. ರಾಮ್ ಚರಣ್, ಪ್ರಭಾಸ್, ಅಲ್ಲು ಅರ್ಜುನ್, ರಜನಿಕಾಂತ್, ಮಹೇಶ್ ಬಾಬು, ವಿಜೇಂದ್ರ ಪ್ರಸಾದ್, ಟೊವಿನೋ ಥಾಮಸ್, ಮೋಹನ್ ಲಾಲ್, ಮಣಿರತ್ನಂ, ಎಆರ್ ರೆಹಮಾನ್, ಚಿರಂಜೀವಿ, ನಾಗಾರ್ಜುನ, ಎಸ್ ಎಸ್ ರಾಜಮೌಳಿ ಸೇರಿದಂತೆ ಹಲವು ಸೂಪರ್ ಸ್ಟಾರ್ ಗಳು ದಕ್ಷಿಣ ಚಿತ್ರರಂಗದಿಂದ ಬರುತ್ತಾರೆ.

# ಔಷಧೀಯ ಆಗರ ನುಗ್ಗೆಕಾಯಿ



### ಹೆಲ್ತ್ ಟಿಪ್ಸ್

ನುಗ್ಗೆಕಾಯಿ ಸಾಂಬಾರನ್ನು ಬಾಯಿ ಚಪ್ಪರಿಸಿಕೊಂಡು ತಿನ್ನುವವರ ಸಂಖ್ಯೆಯೇನೂ ಕಡಿಮೆಯಿಲ್ಲ. ಕೇವಲ ರುಚಿಯಿಂದ ಅಷ್ಟೇ ಅಲ್ಲ, ಔಷಧೀಯ ಗುಣದಿಂದಲೂ ನುಗ್ಗೆಕಾಯಿ ಸಾಕಷ್ಟು ಬೇಡಿಕೆಯ ಪದಾರ್ಥವಾಗಿದೆ.

ಆರೋಗ್ಯದಾಯಕವಾದ ಸಾಕಷ್ಟು ಪೋಷಕಾಂಶ, ಖನಿಜ, ಪ್ರೋಟೀನ್ ಗಳ ಆಗರವಾಗಿದೆ.

ನುಗ್ಗಿಕಾಯಿ ಅಷ್ಟೇ ಅಲ್ಲದೆ ಇದರ ಸೊಪ್ಪು, ಹೂವು, ಬೀಜಗಳು ಸಹ ಸಾಕಷ್ಟು ಔಷಧೀಯ ಗುಣಗಳನ್ನು ಹೊಂದಿದ್ದು ಅದರ ಉಪಯೋಗಗಳು ಇಲ್ಲಿವೆ.

ನುಗ್ಗೆಯ ಎಲೆ ಹಾಗೂ ಬೀಜದಲ್ಲಿ ರಕ್ತವನ್ನು ಶುದ್ಧೀಕರಿಸುವ ಗುಣಗಳಿದ್ದು, ದೇಹದಲ್ಲಿನ ರಕ್ತವನ್ನು ಶುದ್ಧೀಕರಿಸುವ ಕಾರ್ಯದಲ್ಲಿ ನೆರವಾಗುತ್ತದೆ.

ನುಗ್ಗೆಕಾಯಿಯ ಸೇವನೆಯು ದೇಹದಲ್ಲಿನ ರೋಗ ನಿರೋಧಕತೆಯನ್ನು ಹೆಚ್ಚಿಸಿ ಸೋಂಕು ರೋಗಗಳಿಂದ ರಕ್ಷಣೆ ನೀಡುತ್ತದೆ.

ನುಗ್ಗೆಯಲ್ಲಿ ವಿಟಮಿನ್ ಸಿ ಅಧಿಕವಾಗಿರುವ ಕಾರಣ ಸಾಮಾನ್ಯವಾಗಿ ಕಾಣಬಹುದಾದ ಗಂಟಲುಬೇನೆ, ಗಂಟಲು ಕೆರೆತ, ಶೀತದಂತಹ ಸಾಮಾನ್ಯ ಕಾಯಿಲೆಗಳಿಗೆ ರಾಮಬಾಣವಾಗಿ ಕಾರ್ಯನಿರ್ವಹಿಸುತ್ತದೆ.

ನುಗ್ಗೆಯ ಎಲೆಗಳನ್ನು ಅರೆದು ಸ್ವಲ್ಪ ಜೇನಿನೊಡನೆ ಮಿಶ್ರಣ ಮಾಡಿ ಎಳನೀರಿನೊಡನೆ ಸೇವಿಸುವುದನ್ನು ರೂಡಿಸಿಕೊಂಡರೆ ಹೊಟ್ಟೆ ಉರಿ, ಅತಿಸಾರ ಮೊದಲಾದ ರೋಗಗಳನ್ನು ತಡೆಗಟ್ಟಬಹುದು. ನುಗ್ಗೆಯು ಚರ್ಮದ ಸೋಂಕುಗಳಿಗೆ ರಾಮಬಾಣವಾಗಿ ಕಾರ್ಯನಿರ್ವಹಿಸುತ್ತದೆ ಅಲ್ಲದೇ ಚರ್ಮದ ಕಾಂತಿಯನ್ನು ಹೆಚ್ಚಿಸುತ್ತದೆ.

# ನೈಸರ್ಗಿಕ ಹೇರ್ ಡೈ.!

### ಬ್ಯೂಟಿ ಟಿಪ್ಸ್



ಕಪ್ಪಗಿನ ಕೂದಲು ತಮ್ಮದಾಗಬೇಕು ಎಂಬ ಆಸೆ ಎಲ್ಲರಿಗೂ ಇರುತ್ತದೆ. ಆದರೆ ವರ್ಷ ಮೂವತ್ತರ ಗಡಿ ದಾಟುತ್ತಿದ್ದಂತೆ ನಿಧಾನಕ್ಕೆ ಬಿಳಿ ಕೂದಲಿನ ಹಾವಳಿ ಹೆಚ್ಚಾಗುತ್ತದೆ. ಯಾವುದಾದರೂ ಕಾರ್ಯಕ್ರಮಕ್ಕೆ ಚೆನ್ನಾಗಿ ಹೇರ್ ಸ್ಟೈಲ್ ಮಾಡಿಕೊಳ್ಳಬೇಕು ಎಂದುಕೊಳ್ಳುವಾಗ ಈ ಬಿಳಿ ಕೂದಲು ಒಂದು ರೀತಿ ನಿರಾಶೆ ಉಂಟು ಮಾಡುತ್ತದೆ. ಕೆಮಿಕಲ್ ಯುಕ್ತ ಹೇರ್ ಡೈ ಮಾಡಿಕೊಳ್ಳಲು ಇಷ್ಟಪಡದವರು ಒಮ್ಮೆ ಈ ಹೇರ್ ಡೈ ಮನೆಯಲ್ಲಿ ಟ್ರೈ ಮಾಡಿ. ಇದಕ್ಕೆ ಬೇಕಾಗಿರುವುದು ಮೆಹಂದಿ ಹಾಗೂ ಇಂಡಿಗೋ ಪೌಡರ್. ಇದು ಆನ್ ಲೈನ್ ಹಾಗೂ ಕೆಲವು ಶಾಪ್ ಗಳಲ್ಲೂ ಲಭ್ಯವಿದೆ. ಮೊದಲಿಗೆ ಒಂದು ಬೌಲ್ ಗೆ 4 ಚಮಚ ಮೆಹಂದಿ ಪೌಡರ್ ಹಾಕಿ ಅದಕ್ಕೆ ಟೀ ಡಿಕಾಕ್ಷನ್ ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿ ರಾತ್ರಿಯಿಡಿ ಹಾಗೇ ಇಡಿ. ಬೆಳಿಗ್ಗೆ ಇದನ್ನು ತಲೆಗೆ ಹಚ್ಚಿಕೊಂಡು ಶವರ್ ಕ್ಯಾಪ್ ಹಾಕಿಕೊಳ್ಳಿ ಇಲ್ಲದಿದ್ದರೆ ಯಾವುದಾದರೂ ಪ್ಲಾಸ್ಟಿಕ್ ಕವರ್ ಅನ್ನು ತಲೆಗೆ ಹಾಕಿಕೊಳ್ಳಿ. 3 ಗಂಟೆ ಬಿಟ್ಟು ಸ್ನಾನ ಮಾಡಿ. ಶಾಂಪೂ ಬಳಸಬೇಡಿ. ಮಾರನೇ ದಿನ ಒಂದು ಬೌಲ್ ಗೆ 4 ಚಮಚ ಇಂಡಿಗೂ ಪೌಡರ್ ಹಾಕಿ ಅದಕ್ಕೆ ತುಸು ಉಗುರುಬೆಚ್ಚಗಿನ ನೀರು ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿ ಅದೇ ಕೂಡಲೇ ನಿಮ್ಮ ತಲೆಗೆ ಹಚ್ಚಿಕೊಳ್ಳಿ. 2 ಗಂಟೆ ಬಿಟ್ಟು ತಲೆ ಸ್ನಾನ ಮಾಡಿ. ಇದರಿಂದ ಕೂದಲು ಕಪ್ಪು ಆಗುತ್ತದೆ.

# ಎವೆರೆಡಿ ಮದ್ದೂರು ಘಟಕದಲ್ಲಿ ಮಹಿಳಾ ಉದ್ಯೋಗಿಗಳ ಸಂಖ್ಯಾಬಲ ಹೆಚ್ಚಳ




ಬ್ಯಾಟರಿ ತಯಾರಿಕೆಯಲ್ಲಿ 50%ಗಿಂತ ಹೆಚ್ಚಿನ ಮಾರುಕಟ್ಟೆ ಪಾಲು ಹೊಂದಿರುವ ಭಾರತದ ನಂ.1 ಬ್ಯಾಟರಿ ಬ್ರ್ಯಾಂಡ್ ''ಎವೆರೆಡಿ ಇಂಡಸ್ಟ್ರೀಸ್ ಇಂಡಿಯಾ ಲಿಮಿಟೆಡ್ (ಇಐಐಎಲ್)'', ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಸಂದರ್ಭದಲ್ಲಿ ವೈವಿಧ್ಯತೆ, ನ್ಯಾಯ ಸಮ್ಮತತೆ ಮತ್ತು ಎಲ್ಲರನ್ನೂ ಒಳಗೊಂಡ(ಪುರುಷ ಮತ್ತು ಮಹಿಳಾ ಉದ್ಯೋಗಿಗಳಿಗೆ ಸಮಾನ ಅವಕಾಶ) ಅಭಿವೃದ್ಧಿಯ ಅನ್ವೇಷಣೆಯಲ್ಲಿ ಮಹತ್ವದ ಪ್ರಗತಿ ಸಾಧಿಸಿದೆ. ಕರ್ನಾಟಕದ ಮಂಡ್ಯ ಜಿಲ್ಲೆಯ ಮದ್ದೂರು ಘಟಕದಲ್ಲಿ ಎಲ್ಲರನ್ನೂ ಒಳಗೊಂಡ ಅಂದರೆ ಪುರುಷರಷ್ಟೇ ಸಮಾನವಾಗಿ ಮಹಿಳಾ ಉದ್ಯೋಗಿಗಳಿಗೆ ಕೆಲಸದ ವಾತಾವರಣವನ್ನು ಪೋಷಿಸುವ ಉದಾತ್ತ ಧ್ಯೇಯದೊಂದಿಗೆ ಎವೆರೆಡಿ ಇಂಡಸ್ಟ್ರೀಸ್ ಇಂಡಿಯಾ ಲಿಮಿಟೆಡ್ ಕಂಪನಿಯ ಮದ್ದೂರು ಘಟಕವು ಸಂಸ್ಕೃತಿ, ಜನಾಂಗೀಯತೆ, ಲಿಂಗ, ರಾಷ್ಟ್ರೀಯತೆ, ಧರ್ಮ, ಜಾತಿ, ವಯಸ್ಸು ಮತ್ತು ಕಲ್ಪನೆಗಳಂತಹ ಆಯಾಮಗಳಲ್ಲಿ ವೈವಿಧ್ಯತೆಯನ್ನು ಉತ್ತೇಜಿಸುವ ಮಾದರಿ ಸಂಸ್ಥೆಯಾಗಿ ಕಾರ್ಯ ನಿರ್ವಹಿಸುತ್ತಿದೆ. ಗಮನಾರ್ಹವಾಗಿ, ಮದ್ದೂರು ಘಟಕವು ಪ್ರಭಾವಶಾಲಿ 55% ಮಹಿಳಾ ಉದ್ಯೋಗಿಗಳ ಪ್ರಾತಿನಿಧ್ಯದೊಂದಿಗೆ ಹೊಸ ಮಾನದಂಡವನ್ನು ಹೊಂದಿಸಿದೆ. ದೈನಂದಿನ ಕೆಲಸದ ಪ್ರತಿ ಹಂತದಲ್ಲೂ ಉದ್ಯೋಗಿಗಳು ವೈವಿಧ್ಯತೆಯನ್ನು ಅಳವಡಿಸಿಕೊಳ್ಳುವಂತೆ ಕೆಲಸದ ಸ್ಥಳವನ್ನು ರೂಪಿಸುವಲ್ಲಿ ಕಂಪನಿ ತೋರಿರುವ ಸಮರ್ಪಣೆಯನ್ನು ಇದು ಪ್ರದರ್ಶಿಸುತ್ತಿದೆ.

ಕೆಲಸ ಮಾಡುವ ಸ್ಥಳದಲ್ಲಿ ವೈವಿಧ್ಯತೆಯ ಪ್ರಾತಿನಿಧ್ಯ ಒದಗಿಸಿರುವ ಒಂದು ಸ್ಪಷ್ಟ ನೋಟವಾಗಿ, ಎವೆರೆಡಿ ಕಂಪನಿಯ ವೈವಿಧ್ಯತೆ, ನ್ಯಾಯ ಸಮ್ಮತತೆ ಮತ್ತು ಎಲ್ಲರನ್ನೂ ಒಳಗೊಂಡ ಅಭಿವೃದ್ಧಿಯ ಕಾರ್ಯ ವಿಧಾನವು ಮದ್ದೂರು ಘಟಕದ ಮಳಿಗೆಗಳ ವಿಭಾಗದಲ್ಲಿ ಮಹಿಳಾ ಉದ್ಯೋಗಿಗಳ ಸಂಖ್ಯಾಬಲ 55% ಮತ್ತು ಸಿಬ್ಬಂದಿ ಸಂಖ್ಯಾಬಲ 5%ಗೆ ಹೆಚ್ಚಳವಾಗಿದ್ದು, ಇದು ಪ್ರಭಾವಶಾಲಿ ಗರಿಷ್ಠ ಅಂಕಿಅಂಶಗಳಿಗೆ ಸಾಕ್ಷಿಯಾಗಿದೆ. ಗಮನಾರ್ಹ ವಿಷಯವೆಂದರೆ, ಎವೆರೆಡಿಯಲ್ಲಿ ಕೆಲಸ ಮಾಡುತ್ತಿರುವ ಮಹಿಳೆಯರು ಸೇರಿದಂತೆ ಪ್ರತಿಯೊಬ್ಬ ಉದ್ಯೋಗಿಯೂ ನಾಯಕತ್ವ ಮತ್ತು ವ್ಯವಸ್ಥಾಪನಾ (ನಿರ್ವಹಣೆ) ಜವಾಬ್ದಾರಿಗಳನ್ನು ವಹಿಸಿಕೊಂಡಿದ್ದಾರೆ. ಇದು ನೌಕರಪಡೆ ಮತ್ತು ಸ್ಥಳೀಯ ಆರ್ಥಿಕತೆಗೆ ಅವರ ಗಮನಾರ್ಹ ಕೊಡುಗೆಗಳನ್ನು ಒತ್ತಿಹೇಳುತ್ತದೆ. ಸಂಸ್ಥೆಯೊಳಗೆ ಮಹಿಳೆಯರನ್ನು ಸಬಲೀಕರಣಗೊಳಿಸುವ ನಿಟ್ಟಿನಲ್ಲಿ ಸಂಸ್ಥೆಯು ಸುಸ್ಥಿರ ಅಭ್ಯಾಸಗಳು, ಸಾಮಾಜಿಕ ಕಲ್ಯಾಣ ಮತ್ತು ಶಿಕ್ಷಣ ಪ್ರೋತ್ಸಾಹಿಸಲು ವಿನ್ಯಾಸಗೊಳಿಸಿದ ಅನೇಕ ಉಪಕ್ರಮಗಳನ್ನು ಅನುಷ್ಠಾನಗೊಳಿಸಿದೆ. ಈ ಎಲ್ಲಾ ಉಪಕ್ರಮಗಳು ಈ ಪ್ರದೇಶದ ಒಟ್ಟಾರೆ ಬೆಳವಣಿಗೆಗೆ ಕೊಡುಗೆ ನೀಡುತ್ತಿವೆ. ಎವೆರೆಡಿ ಮದ್ದೂರು ಘಟಕವು ಮಹಿಳಾ ಅಭಿವೃದ್ಧಿ ಮತ್ತು ಎಲ್ಲರನ್ನೂ ಒಳಗೊಂಡ ನಾಯಕತ್ವ ರೂಪಿಸಲು ತೋರಿರುವ ಸಂಪೂರ್ಣ ಸಮರ್ಪಣೆಯಿಂದಾಗಿ ಗುರುತಿಸಿಕೊಂಡಿದೆ. 2023 ಆಗಸ್ಟ್ನಲ್ಲಿ ಐಐಎಂ-ಮುಂಬೈನಲ್ಲಿ ನಡೆದ ಶೀಮೇಕರ್ ಶೃಂಗಸಭೆಯು ಉತ್ಪಾದನಾ ವಲಯದಲ್ಲಿ ಮಹಿಳೆಯರನ್ನು ಒಂದುಗೂಡಿಸುವ ಕ್ರಿಯಾತ್ಮಕ ವೇದಿಕೆಯಾಗಿದೆ. ಇದು ತಯಾರಿಕಾ ಉದ್ಯಮದಲ್ಲಿ ಮಹಿಳಾ ಉದ್ಯೋಗಿಗಳ ಭವಿಷ್ಯವನ್ನು ಮುನ್ನಡೆಸಲು, ಆವಿಷ್ಕಾರ ನಡೆಸಲು ಮತ್ತು ಸಹಯೋಗ ರೂಪಿಸಲು ಸಾಕ್ಷಿಯಾಯಿತು.

ಎವೆರೆಡಿ ಇಂಡಸ್ಟ್ರೀಸ್ ಇಂಡಿಯಾ ಲಿಮಿಟೆಡ್ನ ಮದ್ದೂರು ಘಟಕದ ಮುಖ್ಯಸ್ಥ ಶ್ರೀ ಪ್ರಸಾದ್ ತಂತ್ರಿ ಮಾತನಾಡಿ, ಈ ಬಾರಿಯ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಸುಸಂದರ್ಭದಲ್ಲಿ ನಾವು ಎಲ್ಲರನ್ನೂ ಒಳಗೊಂಡ ಅಂದರೆ ಸದೃಢ ಪುರುಷ ಮತ್ತು ಮಹಿಳಾ ನೌಕರ ಪಡೆಯನ್ನು ನಿರ್ಮಿಸಲು ಸಂಪೂರ್ಣ ಬದ್ಧರಾಗಿದ್ದೇವೆ. ಘಟಕದ ಮಳಿಗೆಗಳ ವಿಭಾಗದಲ್ಲಿ ಮಹಿಳಾ ನೌಕರರ ಸಂಖ್ಯಾಬಲವನ್ನು 55%ಗೆ ಹೆಚ್ಚಿಸಿ ಸಾಧನೆ ಮಾಡಿರುವುದಕ್ಕೆ ಹೆಮ್ಮೆಪಡುತ್ತೇವೆ. ಇದು ಉತ್ಪಾದನಾ ವಲಯದಲ್ಲಿ ವೈವಿಧ್ಯತೆ, ಸಮಾನ ಅವಕಾಶ, ನ್ಯಾಯ ಸಮ್ಮತತೆ ಮತ್ತು ಎಲ್ಲರ ಸೇರ್ಪಡೆಯ ಕಂಪನಿ ಬದ್ಧತೆಗೆ ಪ್ರಬಲವಾದ ಪೂರ್ವನಿದರ್ಶನವಾಗಿದೆ.. ಮಹಿಳಾ ಉದ್ಯೋಗಿಗಳು ಯಂತ್ರಗಳನ್ನು ಚಾಲನೆ ಮಾಡುವುದರಿಂದ ಹಿಡಿದು ಉದ್ಯಮ ಸಂಪನ್ಮೂಲ ಯೋಜನೆ(ಇಆರ್ಪಿ) ನಿರ್ವಹಣೆ ವ್ಯವಸ್ಥೆಗಳಲ್ಲಿ ಉತ್ಪಾದನಾ ದಾಖಲೆಗಳನ್ನು ನಿರ್ವಹಿಸುವ ತನಕ ಎಲ್ಲಾ ಕ್ಷೇತ್ರಗಳಲ್ಲೂ ಕೆಲಸ ಮಾಡುತ್ತಿದ್ದಾರೆ ಎಂದರು.

ಕಂಪನಿಯ ಈ ಅಮೋಘ ಯಶಸ್ಸಿಗೆ ಲೀಗಲ್ ಮತ್ತು ಕಂಪನಿ ಕಾರ್ಯದರ್ಶಿ(ಸಿಎಸ್) ಮುಖ್ಯಸ್ಥರು, ಸಿಎಸ್ಆರ್ ಮುಖ್ಯಸ್ಥರು, ಕಾರ್ಪೊರೇಟ್ ಎಚ್ಆರ್ ಲೀಡ್ಸ್, ಐಟಿ ಲೀಡ್, ರಿಸರ್ಚ್ ಅಂಡ್ ಡೆವಲಪ್ಮೆಂಟ್ ಲೀಡ್ ಮತ್ತು ಮದ್ದೂರು ಸ್ಥಾವರದಲ್ಲಿ ಮಹಿಳಾ ಮೇಲ್ವಿಚಾರಕರು ಸೇರಿದಂತೆ ಪ್ರತಿಷ್ಠಿತ ಮಹಿಳಾ ನಾಯಕರು ಕಾರಣರಾಗಿದ್ದಾರೆ. ಅವರೆಲ್ಲರಿಗೂ ಕಂಪನಿ ಋಣಿಯಾಗಿದೆ. ಇದಕ್ಕೆ ಬೆಂಬಲವಾಗಿ, ನಾವು ನಮ್ಮ ಮಹಿಳಾ ಉದ್ಯೋಗಿಗಳ ಯೋಗಕ್ಷೇಮಕ್ಕೆ ಆದ್ಯತೆ ನೀಡುತ್ತಿದ್ದೇವೆಎಂದರು.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಆರ್ಥಿಕ ಬೆಳವಣಿಗೆ, ಮಕ್ಕಳಿಂದ ಸಹಕಾರ, ಐಷಾರಾಮಿ ಜೀವನದ ಕಡೆ ಒಲವು, ಆಹಾರ ವ್ಯತ್ಯಾಸದಿಂದ ಅನಾರೋಗ್ಯ

**ವೃಷಭ:** ಆರ್ಥಿಕ ಪ್ರಗತಿ, ಕೌಟುಂಬಿಕ ಸಹಕಾರ, ಮಾತಿನಿಂದ ಕಾರ್ಯಜಯ, ಪತ್ರ ವ್ಯವಹಾರಗಳಲ್ಲಿ ಸಮಸ್ಯೆ

**ಮಿಥುನ:** ವ್ಯವಹಾರದಲ್ಲಿ ಹಿನ್ನಡೆ, ಮಕ್ಕಳಿಂದ ಅನಾನುಕೂಲ, ಆರೋಗ್ಯ ಸುಧಾರಣೆ, ಅಧಿಕಾರಿಗಳಿಂದ ಅನುಕೂಲ

**ಕಟಕ:** ಲಾಭದಲ್ಲಿ ಕುಂಠಿತ, ವ್ಯಾಪಾರ ವ್ಯವಹಾರದಲ್ಲಿ ಪ್ರಗತಿ, ವಿದ್ಯಾಭ್ಯಾಸದಲ್ಲಿ ಅನುಕೂಲ, ಕೌಟುಂಬಿಕ ಸಹಕಾರ

**ಸಿಂಹ:** ಸ್ಥಳ ಬದಲಾವಣೆಯಿಂದ ಅನುಕೂಲ, ಯತ್ನ ಕಾರ್ಯಗಳಲ್ಲಿ ಜಯ, ತಂದೆಯಿಂದ ಅನುಕೂಲ, ವಾಹನ ಖರೀದಿ ಆಲೋಚನೆ

**ಕನ್ಯಾ:** ಆರ್ಥಿಕ ಬೆಳವಣಿಗೆ, ಆಕಸ್ಮಿಕ ಉದ್ಯೋಗ ಲಾಭ, ವಿದ್ಯಾಭ್ಯಾಸದಲ್ಲಿ ಬೆಳವಣಿಗೆ, ನಷ್ಟದ ಪ್ರಮಾಣ ಕಡಿಮೆ

**ತುಲಾ:** ವ್ಯವಹಾರದಲ್ಲಿ ಉತ್ತಮ ಅವಕಾಶ, ಉನ್ನತ ವಿದ್ಯಾಭ್ಯಾಸದಲ್ಲಿ ಪ್ರಗತಿ, ಪ್ರಯಾಣದಲ್ಲಿ ಅನುಕೂಲ, ಭವಿಷ್ಯದ ಯೋಜನೆಯಲ್ಲಿ ಯಶಸ್ಸು

**ವೃಶ್ಚಿಕ:** ಉದ್ಯೋಗ ಬದಲಾವಣೆಯಿಂದ ಅನುಕೂಲ, ಆರೋಗ್ಯ ಸುಧಾರಣೆ, ಆರ್ಥಿಕತೆಯಲ್ಲಿ ಬದಲಾವಣೆ, ಪಾಲುದಾರಿಕೆಯಲ್ಲಿ ತೊಂದರೆ

**ಧನಸ್ಸು:** ಆರ್ಥಿಕ ಬೆಳವಣಿಗೆ, ಶುಭ ಕಾರ್ಯದಲ್ಲಿ ಅನುಕೂಲ, ಪ್ರೀತಿ ಪ್ರೇಮ ವಿಷಯಗಳಲ್ಲಿ ಜಯ, ವಿದ್ಯಾಭ್ಯಾಸದಲ್ಲಿ ಅನುಕೂಲ

**ಮಕರ:** ಯತ್ನ ಕಾರ್ಯಗಳಲ್ಲಿ ಅನಾನುಕೂಲ, ವಾಹನ ಚಾಲನೆಯಲ್ಲಿ ಎಚ್ಚರಿಕೆ, ಅನಿರೀಕ್ಷಿತ ಉದ್ಯೋಗಾವಕಾಶ, ಅನಾರೋಗ್ಯ ಸಮಸ್ಯೆ

**ಕುಂಭ:** ವ್ಯಾಪಾರ ವ್ಯವಹಾರದಲ್ಲಿ ಅನುಕೂಲ, ಸ್ಥಿರಾಸ್ತಿಯಿಂದ ಲಾಭ, ಪ್ರೀತಿ ಪ್ರೇಮ ಭಾವನೆಗಳಿಗೆ ಸ್ಪಂದನೆ, ರೋಗಬಾಧೆಯಿಂದ ಮುಕ್ತಿ

**ಮೀನ:** ವ್ಯಾಪಾರ ವ್ಯವಹಾರದಲ್ಲಿ ಕುಂಠಿತ, ಆರ್ಥಿಕ ಬದಲಾವಣೆ, ಸ್ಥಿರಾಸ್ತಿ ಯೋಗ ಫಲ, ನೆರೆಹೊರೆಯವರೊಂದಿಗೆ ಮನಸ್ತಾಪ

## ಸಸ್ಯ ಶಕ್ತಿ ದಿನ

ಸಸ್ಯ ಶಕ್ತಿ ದಿನವನ್ನು ಪ್ರತಿ ಮಾರ್ಚ್ 7 ರಂದು ಸುಸ್ಥಿರ ಆಹಾರದ ಪ್ರಯೋಜನಗಳ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಸಸ್ಯ ಆಧಾರಿತ ಆಹಾರಗಳನ್ನು ಅಳವಡಿಸಿಕೊಳ್ಳಲು ಪ್ರತಿಯೊಬ್ಬರನ್ನು ಪ್ರೋತ್ಸಾಹಿಸಲು ಆಚರಿಸಲಾಗುತ್ತದೆ. ನಿಮಗೆ ತಿಳಿದಿದೆಯೇ ಪ್ಲಾಂಟ್ ಪವರ್ ಡೇ ಅನ್ನು ಆಲ್ಪ್ರೋ ಮತ್ತು ಬೋಶ್ ಪ್ರಾರಂಭಿಸಿದ್ದಾರೆ!? ಸಸ್ಯ ಆಧಾರಿತ ಆಹಾರಗಳು ವ್ಯಕ್ತಿಯನ್ನು ಅವಲಂಬಿಸಿ ವಿಭಿನ್ನ ಅರ್ಥಗಳನ್ನು ಹೊಂದಿವೆ. ಸಸ್ಯ-ಆಧಾರಿತ ಆಹಾರವು ಸಂಪೂರ್ಣವಾಗಿ ಸಸ್ಯಾಹಾರಿಯಾಗಿರಬಹುದು - ಯಾವುದೇ ಪ್ರಾಣಿ ಮೂಲದ ಉತ್ಪನ್ನಗಳಿಲ್ಲ - ಮುಖ್ಯವಾಗಿ ಸಸ್ಯ ಆಹಾರಗಳನ್ನು ಒಳಗೊಂಡಿರುತ್ತದೆ, ಅಥವಾ ಕನಿಷ್ಠವಾಗಿ ಸಂಸ್ಕರಿಸಿದ ಸಂಪೂರ್ಣ ಸಸ್ಯ ಆಹಾರಗಳಿಂದ ಮಾಡಲ್ಪಟ್ಟಿದೆ. ಸಸ್ಯ-ಆಧಾರಿತ ಆಹಾರವು ಯುಗಗಳಿಂದಲೂ ಅನೇಕ ಜನರಿಗೆ ಒಂದು ಆಯ್ಕೆಯಾಗಿದೆ, ಇದು ಇತ್ತೀಚಿನವರೆಗೂ ಜನರು ಅದನ್ನು ಜೀವನಶೈಲಿಯಾಗಿ ಸ್ವೀಕರಿಸುವುದರೊಂದಿಗೆ ಮುಖ್ಯವಾಹಿನಿಯ ಗಮನವನ್ನು ಗಳಿಸಲಿಲ್ಲ. ಸಸ್ಯಾಧಾರಿತ ಆಹಾರಗಳ ಇತಿಹಾಸವು ಸಸ್ಯಾಹಾರದೊಂದಿಗೆ ಹೆಣೆದುಕೊಂಡಿದೆ, ಇದು ಸ್ವತಃ ಸಸ್ಯಾಹಾರದಿಂದ ಬಂದಿದೆ. ಸಸ್ಯಾಹಾರದ ಆರಂಭಿಕ ಪುರಾವೆಗಳು 3300 ರಿಂದ 1300 ಃಅ ಯಲ್ಲಿ ಕಾಣಿಸಿಕೊಂಡವು. ಉತ್ತರ ಮತ್ತು ಪಶ್ಚಿಮ ಪ್ರಾಚೀನ ಸಿಂಧೂ ಕಣಿವೆ ನಾಗರಿಕತೆಯಲ್ಲಿ. ಇದು ಮುಖ್ಯವಾಗಿ ಚಂದ್ರಗುಪ್ತ ಮೌರ್ಯ, ಅಶೋಕ, ಮಹಾವೀರ ಮತ್ತು ಆಚಾರ್ಯ ಕುಂದಕುಂದ ಸೇರಿದಂತೆ ಭಾರತೀಯ ಚಕ್ರವರ್ತಿಗಳು ಮತ್ತು ದಾರ್ಶನಿಕರು ಅಭ್ಯಾಸ ಮಾಡಿದ ಜೀವನಶೈಲಿಯಾಗಿದೆ. ಸಸ್ಯಾಹಾರವನ್ನು ಪ್ರಾಚೀನ ಗ್ರೀಸ್ ಮತ್ತು ರೋಮ್ನಲ್ಲಿ ಸೆನೆಕಾ ದಿ ಯಂಗರ್, ಓವಿಡ್, ಪ್ಲುಟಾರ್ಕ್ ಮತ್ತು ಎಂಪೆಡೋಕ್ಲಿಸ್ನಂತಹ ಪ್ರಮುಖ ವ್ಯಕ್ತಿಗಳು ಅಭ್ಯಾಸ ಮಾಡಿದರು.ಜೀವನಶೈಲಿಯ ಈ ಆಯ್ಕೆಯು ಆರೋಗ್ಯ, ಆತ್ಮಗಳ ವರ್ಗಾವಣೆ ಮತ್ತು ಪ್ರಾಣಿಗಳ ಕಲ್ಯಾಣ ಮತ್ತು ನ್ಯಾಯದ ಕಾರಣದಿಂದಾಗಿರುತ್ತದೆ ಎಂದು ಅವರು ವಾದಿಸಿದರು. ಅರಬ್ ಕವಿ, ಅಲ್-ಮಾರ್ರಿ, ಆರಂಭಿಕ ತಿಳಿದಿರುವ ಸಸ್ಯಾಹಾರಿಗಳಲ್ಲಿ ಒಬ್ಬರು. 19 ನೇ ಶತಮಾನದಲ್ಲಿ, ಸಸ್ಯಾಹಾರವು ಬ್ರಿಟನ್ ಮತ್ತು ಯುನೈಟೆಡ್ ಸ್ಟೇಟ್ಸ್ನಲ್ಲಿ ವ್ಯಾಪಕವಾಗಿ ಅಂಗೀಕರಿಸಲ್ಪಟ್ಟ ಚಳುವಳಿಯಾಯಿತು. ಸಸ್ಯಾಹಾರಿಗಳೆಂದು ಗುರುತಿಸಿಕೊಂಡ ವೃತ್ತಿಪರರು ತಮ್ಮ ಕೃತಿಗಳ ಮೂಲಕ ಸಸ್ಯಾಹಾರಿ ಜೀವನಶೈಲಿಯ ಪ್ರಯೋಜನಗಳ ಬಗ್ಗೆ ಜಾಗೃತಿ ಮೂಡಿಸಿದರು. ಅದರಲ್ಲಿ ಕವಿ ಪರ್ಸಿ ಬೈಸ್ಶೆ ಶೆಲ್ಲಿ ಅವರ 1813 ರ ಪುಸ್ತಕ, ಎ ವಿಂಡಿಕೇಶನ್ ಆಫ್ ನ್ಯಾಚುರಲ್ ಡಯಟ್, ವೈದ್ಯ ವಿಲಿಯಂ ಲ್ಯಾಂಬೆ ಮತ್ತು ಸಿಲ್ವೆಸ್ಟರ್ ಗ್ರಹಾಂ ಸೇರಿದ್ದಾರೆ - ಅವರು ಯುನೈಟೆಡ್ ಸ್ಟೇಟ್ಸ್ನಲ್ಲಿ 1830 ರ ದಶಕದಲ್ಲಿ ಹೆಚ್ಚು ಜನಪ್ರಿಯವಾಗಿದ್ದ ಮಾಂಸರಹಿತ 'ಗ್ರಹಾಂ ಡಯಟ್' ಅನ್ನು ಅಭಿವೃದ್ಧಿಪಡಿಸಿದರು. ಈ ಸಮಯದಲ್ಲಿ ಹಲವಾರು ಸಸ್ಯಾಹಾರಿ ಸಮುದಾಯಗಳು ಮತ್ತು ಸಮಾಜಗಳನ್ನು ಸ್ಥಾಪಿಸಲಾಯಿತು. 1840 ರ ದಶಕದಲ್ಲಿ ಸ್ಥಾಪಿಸಲಾದ ಯುನೈಟೆಡ್ ಕಿಂಗ್ಡಮ್ ಸಸ್ಯಾಹಾರಿ ಸೊಸೈಟಿಯು ಅಂತಹ ಸಮಾಜಗಳಲ್ಲಿ ಒಂದಾಗಿದೆ.1994 ರಲ್ಲಿ ಸಸ್ಯಾಹಾರಿ ಸೊಸೈಟಿಯ ಸುದ್ದಿಪತ್ರದ ಒಂದು ಭಾಗವನ್ನು ಡೈರಿ ಅಲ್ಲದ ಸಸ್ಯಾಹಾರಕ್ಕೆ ಮೀಸಲಿಡಲು ಹಲವಾರು ಸದಸ್ಯರು ವಿನಂತಿಸಿದರು.

ಸಂಜೆ ಮುಗಿಲು
ಗುರುವಾರ
7.3.2024


# ತಾಜ್ ಮಹಲ್‌ಗೆ ಈಗ ಮೆಟ್ರೋ ಸವಾರಿ; ಆಗ್ರಾ ಮೆಟ್ರೋ ಕಾರಿಡಾರ್ ಉದ್ಘಾಟಿಸಿದ ಮೋದಿ

**ಲಕ್ನೋ:** ಪ್ರಧಾನಿ ನರೇಂದ್ರ ಮೋದಿ ಅವರು ಆಗ್ರಾ ಮೆಟ್ರೋ ಕಾರಿಡಾರ್ ಉದ್ಘಾಟನೆ ಮಾಡಿದ್ದಾರೆ. ತಾಜ್ ಮಹಲ್‌ಗೆ ಈಗ ಮೆಟ್ರೋ ಸವಾರಿ ಮಾಡಬಹುದಾಗಿದೆ.

ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಮತ್ತು ಇತರ ನಾಯಕರು ತಾಜ್ ಮಹಲ್ ನಿಲ್ದಾಣದಿಂದ ಆಗ್ರಾದ ತಾಜ್ ಮಹಲ್ ಈಸ್ಟ್ ಸ್ಟೇಷನ್‌ಗೆ ಉದ್ಘಾಟನಾ ರೈಲು ಸವಾರಿ ಮಾಡಿದ್ದಾರೆ.6 ಕಿಮೀ ಕಾರಿಡಾರ್‌ನಲ್ಲಿ ಮೆಟ್ರೋ ಸೇವೆ ಗುರುವಾರದಿಂದ ಪ್ರಯಾಣಿಕರಿಗೆ ಲಭ್ಯವಿದೆ. ತಾಜ್ ಮಹಲ್ ಪೂರ್ವ ನಿಲ್ದಾಣ, ಕ್ಯಾಪ್ಟನ್ ಶುಭಂ ಗುಪ್ತಾ ನಿಲ್ದಾಣ, ಫತೇಹಾಬಾದ್ ರಸ್ತೆ ನಿಲ್ದಾಣ, ತಾಜ್ ಮಹಲ್ ನಿಲ್ದಾಣ ಮತ್ತು ಮಂಕಮೇಶ್ವರ ದೇವಸ್ಥಾನ ನಿಲ್ದಾಣಗಳಲ್ಲಿ ನಿಲುಗಡೆಯಾಗಲಿದೆ. ತಾಜ್ ಮಹಲ್ ನಿಲ್ದಾಣದಲ್ಲಿ ಮಾತನಾಡಿದ ಯೋಗಿ ಆದಿತ್ಯನಾಥ್, ಆಗ್ರಾ ಮೆಟ್ರೋವು ಸ್ಥಳೀಯರು ಮತ್ತು ನಗರಕ್ಕೆ ಭೇಟಿ ನೀಡುವ ಪ್ರವಾಸಿಗರಿಗೆ ವಿಶ್ವದರ್ಜೆಯ ಸಾರ್ವಜನಿಕ ಸಾರಿಗೆ ಸೌಲಭ್ಯ ಒದಗಿಸುತ್ತದೆ. ಆಗ್ರಾ ಮೆಟ್ರೋವನ್ನು ಆಧುನಿಕ ಸೌಲಭ್ಯಗಳ ಕೇಂದ್ರವನ್ನಾಗಿ ಮಾಡುವ ಅಗತ್ಯವಿದೆ ಎಂದು ಹೇಳಿದ್ದಾರೆ. ಉತ್ತರ ಪ್ರದೇಶದ ಅತ್ಯಂತ ಹಳೆಯ ನಗರಗಳಲ್ಲಿ ಆಗ್ರ ಒಂದಾಗಿದೆ. ಇದು 'ಬ್ರಜ್ ಭೂಮಿ'ಯ ಭಾಗವಾಗಿದೆ. ಈ ನಗರವು ಛತ್ರಪತಿ ಶಿವಾಜಿ ಮಹಾರಾಜರ ಶೌರ್ಯದ ಕಥೆಗಳೊಂದಿಗೆ ಸಂಬಂಧ ಹೊಂದಿದೆ ಎಂದು ಯೋಗಿ ಆದಿತ್ಯನಾಥ್ ಸ್ಮರಿಸಿದ್ದಾರೆ. ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು 2020, ಡಿಸೆಂಬರ್ 7 ರಂದು ಮೆಟ್ರೋದ ಶಂಕುಸ್ಥಾಪನೆ ನೆರವೇರಿಸಿದ್ದರು. ಇದು 23 ತಿಂಗಳಲ್ಲಿ ಪೂರ್ಣಗೊಂಡಿದೆ.

# ತೆಲಂಗಾಣದಲ್ಲಿ 33.3 ಲಕ್ಷ ರೂ. ಮೌಲ್ಯದ ನಕಲಿ ಔಷಧಗಳು ವಶ

**ತೆಲಂಗಾಣ:** ತೆಲಂಗಾಣದ ಡ್ರಗ್ಸ್ ಕಂಟ್ರೋಲ್ ಅಡ್ಮಿನಿಸ್ಟ್ರೇಷನ್ (ಡಿಸಿಎ) 33.35 ಲಕ್ಷ ಮೌಲ್ಯದ ಚಾಕ್ ಪೌಡರ್ ಮತ್ತು ಪಿಷ್ಟವನ್ನು ಹೊಂದಿರುವ ನಕಲಿ ಔಷಧಿಗಳನ್ನು ವಶಪಡಿಸಿಕೊಂಡಿದೆ. ಚಾಕ್ ಪೌಡರ್ ಮತ್ತು ಪಿಷ್ಟವನ್ನು ಹೊಂದಿರುವ ನಕಲಿ ಔಷಧಿಗಳನ್ನು ಅಸ್ತಿತ್ವದಲ್ಲಿಲ್ಲದ 'ಮೆಗ್ ಲೈಫ್ ಸೈನ್ಸಸ್' ಕಂಪನಿಯು ಮೆಡಿಕಲ್ ಶಾಪ್ ಗಳಲ್ಲಿ ಮಾರಾಟ ಮಾಡುತ್ತಿರುವುದು ಪತ್ತೆಯಾಗಿದೆ. ಪತ್ತೆಯಾದ ನಂತರ, ''ಮೆಗ್ ಲೈಫ್ ಸೈನ್ಸಸ್'' ಉತ್ಪಾದಿಸುತ್ತದೆ ಎಂದು ಹೇಳಲಾದ ಎಲ್ಲಾ ಔಷಧಿಗಳು ಡಿಸಿಎಯಿಂದ ''ನಕಲಿ ಡ್ರಗ್ ಅಲರ್ಟ್ ಮತ್ತು ಸ್ಟಾಪ್-ಯೂಸ್ ನೋಟಿಸ್'' ಗೆ ಒಳಪಟ್ಟಿವೆ. ಶೋಧದ ವೇಳೆ 33.35 ಲಕ್ಷ ಮೌಲ್ಯದ ನಕಲಿ ಔಷಧಿಗಳನ್ನು ವಶಪಡಿಸಿಕೊಳ್ಳಲಾಗಿದೆ. ಕಾರ್ಯಾಚರಣೆಯಲ್ಲಿ ಐವರನ್ನು ಸಹ ಬಂಧಿಸಲಾಗಿದೆ ಎಂದು ವರದಿಯಾಗಿದೆ.




# ಅಧ್ಯಕ್ಷೀಯ ಅಭ್ಯರ್ಥಿ ರೇಸ್ ನಿಂದ ಹಿಂದೆ ಸರಿಯಲು ನಿಕ್ಕಿ ಹ್ಯಾಲೆ ನಿರ್ಧಾರ

**ವಾಷಿಂಗ್ಟನ್:** 'ಸೂಪರ್ ಟ್ಯೂಸ್ಡೇ' ಪ್ರಾಥಮಿಕ ಚುನಾವಣೆಯಲ್ಲಿ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭರ್ಜರಿ ಮುನ್ನಡೆ ಸಾಧಿಸಿರುವ ಹಿನ್ನೆಲೆಯಲ್ಲಿ ಜಿಒಪಿ ಅಧ್ಯಕ್ಷೀಯ ಅಭ್ಯರ್ಥಿ ರೇಸ್ನಿಂದ ಹಿಂದೆ ಸರಿಯಲು ಅಮೆರಿಕದ ಮಾಜಿ ರಾಯಭಾರಿ ನಿಕ್ಕಿ ಹ್ಯಾಲೆ ನಿರ್ಧರಿಸಿದ್ದಾರೆ ಎಂದು ವರದಿಯಾಗಿದೆ. ಈ ಬಗ್ಗೆ ಶೀಘ್ರವೇ ಅಧಿಕೃತ ಘೋಷಣೆ ಹೊರಬೀಳಲಿದೆ ಎಂದು ಉನ್ನತ ಮೂಲಗಳು ಹೇಳಿವೆ. ಇದರೊಂದಿಗೆ ಇದೀಗ ಜಿಒಪಿ (ಗ್ರಾಂಡ್ ಓಲ್ಡ್ ಪಾರ್ಟಿ, ಅಂದರೆ ರಿಪಬ್ಲಿಕನ್ ಪಕ್ಷ)ಯ ಪ್ರಮುಖ ಅಧ್ಯಕ್ಷೀಯ ಅಭ್ಯರ್ಥಿಯಾಗಿ ಟ್ರಂಪ್ ಹೊರಹೊಮ್ಮುವುದು ಬಹುತೇಕ ನಿಚ್ಚಳವಾಗಿದ್ದು ಸತತ ಎರಡನೇ ಬಾರಿಗೆ ಅಧ್ಯಕ್ಷೀಯ ಚುನಾವಣೆಯಲ್ಲಿ ಡೆಮೊಕ್ರಟಿಕ್ ಪಕ್ಷದ ಅಭ್ಯರ್ಥಿ, ಹಾಲಿ ಅಧ್ಯಕ್ಷ ಜೋ ಬೈಡನ್‌ರನ್ನು ಎದುರಿಸುವ ಸಾಧ್ಯತೆಯಿದೆ. ಮಂಗಳವಾರ 13 ರಾಜ್ಯಗಳಲ್ಲಿ ನಡೆದ ರಿಪಬ್ಲಿಕನ್ ಪಕ್ಷದ ಪ್ರಾಥಮಿಕ ಚುನಾವಣೆಗಳಲ್ಲಿ 12ರಲ್ಲಿ ಟ್ರಂಪ್ ಗೆದ್ದರೆ ವೆರ್ಮೊಂಟ್‌ನಲ್ಲಿ ಮಾತ್ರ ಹ್ಯಾಲೆ ಗೆಲುವು ಸಾಧಿಸಿದರು. ಹ್ಯಾಲೆಯ ಭದ್ರಕೋಟೆ ಎಂದು ಬಿಂಬಿಸಲ್ಪಟ್ಟಿದ್ದ ವರ್ಜೀನಿಯಾ, ಮಸಚುಸೆಟ್ಸ್ ಮತ್ತು ಮಯಿನ್ ರಾಜ್ಯಗಳಲ್ಲಿ ಟ್ರಂಪ್ ಮೇಲುಗೈ ಸಾಧಿಸಿದ ಬಳಿಕ ಅಧ್ಯಕ್ಷೀಯ ಅಭ್ಯರ್ಥಿ ರೇಸ್ನಿಂದ ಹಿಂದೆ ಸರಿಯುವಂತೆ ಪಕ್ಷದ ಸದಸ್ಯರೇ ಸಲಹೆ ನೀಡಿದ್ದರು. ಭಾರತೀಯ ಅಮೆರಿಕನ್ ನಿಕ್ಕಿ ಹ್ಯಾಲೆ ಮಧ್ಯಮ ವರ್ಗದ ಹಾಗೂ ಕಾಲೇಜು ಶಿಕ್ಷಿತ ಮತದಾರರಲ್ಲಿ ಜನಪ್ರಿಯರಾಗಿದ್ದರು. ಪಕ್ಷೇತರ ಅಭ್ಯರ್ಥಿಯಾಗಿ ಕಣಕ್ಕಿಳಿಯುವ ಸಾಧ್ಯತೆಯನ್ನು ಹ್ಯಾಲೆ ನಿರಾಕರಿಸಿದ್ದು, ನಾನೋರ್ವ ರಿಪಬ್ಲಿಕನ್ ಎಂದು ಹೇಳಿಕೊಳ್ಳಲು ಹೆಮ್ಮೆಯಿದೆ. ಆದ್ದರಿಂದ ಗುರುತುಪಟ್ಟಿ ಇಲ್ಲದೆ ಸ್ಪರ್ಧಿಸಲು ಬಯಸುವುದಿಲ್ಲ ಎಂದು ಹೇಳಿರುವುದಾಗಿ ಫಾಕ್ಸ್ ನ್ಯೂಸ್ ವರದಿ ಮಾಡಿದೆ.



# ಚೀನಾದಿಂದ ಮಿಲಿಟರಿ ತರಬೇತಿಗೆ ಒಪ್ಪಂದ



**ಚೀನಾ:** ಚೀನಾದಿಂದ ಮಾರಕವಲ್ಲದ ಶಸ್ತ್ರಾಸ್ತ್ರಗಳು ಹಾಗೂ ಮಿಲಿಟರಿ ತರಬೇತಿಯನ್ನು ಉಚಿತವಾಗಿ ಪಡೆಯುವ ಬಗ್ಗೆ ತಮ್ಮ ಸರಕಾರ ಚೀನಾದೊಂದಿಗೆ ಒಪ್ಪಂದ ಮಾಡಿಕೊಂಡಿದೆ ಎಂದು ಅಧ್ಯಕ್ಷ ಮುಯಿಝ್ಝು ಹೇಳಿದ್ದಾರೆ.

ಇದು ನಮ್ಮ ರಕ್ಷಣಾ ಪಡೆಗಳನ್ನು ಬಲಪಡಿಸಲಿದೆ. ಈ ಕ್ರಮಗಳಿಂದ ನಾವು ನಮ್ಮದೇ ಕಾಲಿನ ಮೇಲೆ ನಿಂತುಕೊಳ್ಳಬಹುದು ಮತ್ತು ನಮ್ಮ ಸ್ವಾಯತ್ತತೆ ಮತ್ತು ಸ್ವಾತಂತ್ರ್ಯವನ್ನು ಪಡೆಯಬಹುದು.

ಮಿಲಿಟರಿ ತರಬೇತಿಯು ನಮ್ಮ ರಕ್ಷಣಾ ಪಡೆಗಳ ತಾಂತ್ರಿಕ ಸಾಮರ್ಥ್ಯವನ್ನು ಹೆಚ್ಚಿಸಲಿದೆ ಎಂದು ಮುಯಿಝ್ಝು ಹೇಳಿದ್ದಾರೆ. ಚೀನಾದ ಜತೆಗಿನ ನಿಕಟ ಸಂಬಂಧಗಳ ಅಗತ್ಯವನ್ನು ಒತ್ತಿಹೇಳಿದ ಅವರು ಚೀನಾದ ಎಕ್ಸಿಮ್ (ಎಕ್ಸ್ಪೋರ್ಟ್ ಇಂಪೋರ್ಟ್ ಬ್ಯಾಂಕ್) ಬ್ಯಾಂಕ್ನಿಂದ ಮಾಲ್ದೀವ್ಸ್ ಗಮನಾರ್ಹ ನೆರವು ಪಡೆದಿದೆ. ಚೀನಾ-ಮಾಲ್ದೀವ್ಸ್ ಫ್ರೆಂಡ್ಶಿಪ್ ಸೇತುವೆ, ಸಾಮಾಜಿಕ ವಸತಿ ಯೋಜನೆ ಸೇರಿದಂತೆ ಹಲವು ಪ್ರಮುಖ ಅಭಿವೃದ್ಧಿ ಯೋಜನೆಗಳಿಗೆ ಎರಡೂ ದೇಶಗಳು ಒಪ್ಪಂದ ಮಾಡಿಕೊಂಡಿವೆ ಎಂದು ಅಧ್ಯಕ್ಷರು ಹೇಳಿದ್ದಾರೆ.

# ಭಾರತದಲ್ಲೇ ಮೊದಲಿಗೆ ಎಐ ಶಿಕ್ಷಕಿ ಪರಿಚಯಿಸಿದ ಕೇರಳ ಶಾಲೆ

**ತಿರುವನಂತಪುರಂ:** ಭಾರತದಲ್ಲಿ ಮೊಟ್ಟಮೊದಲ ಬಾರಿಗೆ ಶಾಲೆಯೊಂದು ಎಐ(ಐಖ) ಶಿಕ್ಷಕಿ ಐರಿಸ್ ಪರಿಚಯಿಸಿದೆ. ಎಐ ಆಧರಿಸಿದ ಮತ್ತು ಮೇಕರ್ ಲ್ಯಾಬ್ಸ್ ನಿಂದ ರಚಿಸಲಾದ ರೋಬೋಟ್ 'ಕಲಿಕೆಯ' ಹೊಸ ಸಾಧ್ಯತೆ ಮರು ವ್ಯಾಖ್ಯಾನಿಸಲು ಸಿದ್ಧವಾಗಿದೆ. ಮಾತ್ರವಲ್ಲ, ಎಐ ರೋಬೋಟ್ ಶಿಕ್ಷಣ ಕ್ಷೇತ್ರದಲ್ಲಿನ ಗಡಿಗಳನ್ನು ದಾಟಿದೆ. ಜನರೇಟಿವ್ ಎಐ ಆಧಾರಿತ ಭಾರತದ ಮೊದಲ ಎಐ ಶಿಕ್ಷಕಿ ರೋಬೋಟ್ ಖಖಖ ಅನ್ನು ಪರಿಚಯಿಸಲಾಗುತ್ತಿದೆ ಎಂದು ಜಾಲತಾಣದಲ್ಲಿ ವಿಡಿಯೋ ಹಂಚಿಕೊಳ್ಳಲಾಗಿದೆ. ಕಲಿಕೆಯ ಅನುಭವ ರಚಿಸಲು ಎಐನ ಶಕ್ತಿಯನ್ನು ಬಳಸಿಕೊಳ್ಳುವ ಮೂಲಕ ನಾವು ಶಿಕ್ಷಣವನ್ನು ಕ್ರಾಂತಿಗೊಳಿಸಲು ಹೊರಟಿದ್ದೇವೆ. ಪ್ರತಿ ವಿದ್ಯಾರ್ಥಿಯ ಅಗತ್ಯತೆಗಳು ಮತ್ತು ಆದ್ಯತೆಗಳಿಗೆ ಹೊಂದಿಕೊಳ್ಳುವ ಮೂಲಕ, ಹಿಂದೆಂದಿಗಿಂತಲೂ ತೊಡಗಿಸಿಕೊಳ್ಳುವ ಮತ್ತು ಪರಿಣಾಮಕಾರಿ ಪಾಠಗಳನ್ನು ನೀಡಲು ಖಖಖ ಶಿಕ್ಷಕರಿಗೆ ಸಾಧ್ಯವಾಗಲಿದೆ ಎಂದು ಹೇಳಲಾಗಿದೆ. ಕೇರಳದ ಕೆಟಿಸಿಟಿ ಹೈಯರ್ ಸೆಕೆಂಡರಿ ಶಾಲೆಯಲ್ಲಿ ರೋಬೋಟ್ ಅನ್ನು ವೇದಿಕೆಯಲ್ಲಿ ಅನಾವರಣಗೊಳಿಸುವುದನ್ನು ನೋಡಬಹುದು. ಇದು ರೋಬೋಟ್ ಅನ್ನು ತರಗತಿಯೊಳಗೆ ತೋರಿಸುತ್ತದೆ, ಮಕ್ಕಳೊಂದಿಗೆ ಸಂವಹನ ನಡೆಸುತ್ತದೆ. ಐರಿಸ್ ಅನ್ನು ವಿಎಸ್ ಎಸ್ಸಿಯ ಬಾಹ್ಯಾಕಾಶ ಭೌತಶಾಸ್ತ್ರ ಪ್ರಯೋಗಾಲಯದ(ಎಸ್ಪಿಎಲ್) ನಿರ್ದೇಶಕ ಡಾ.ಕೆ.ರಾಜೀವ್ ಉದ್ಘಾಟಿಸಿದರು.



# ರಷ್ಯಾ ಸೈನ್ಯದಲ್ಲಿದ್ದ ಹೈದರಾಬಾದ್ ವ್ಯಕ್ತಿ ಸಾವು!

**ಮಾಸ್ಕೋ:** ಉದ್ಯೋಗ ಕೊಡಿಸುವುದಾಗಿ ರಷ್ಯಾದ ಸೈನ್ಯಕ್ಕೆ ಸೇರಲು ಒತ್ತಾಯಿಸಲ್ಪಟ್ಟ ಭಾರತೀಯ ಮೂಲದ ವ್ಯಕ್ತಿಯೊಬ್ಬರು ಸಾವನ್ನಪ್ಪಿರುವುದಾಗಿ ಅಧಿಕಾರಿಗಳು ಬುಧವಾರ ತಿಳಿಸಿದ್ದಾರೆ. ಉದ್ಯೋಗ ವಂಚನೆಗೆ ಒಳಗಾಗಿ ರಷ್ಯಾ ಪರವಾಗಿ ಹೋರಾಡುತ್ತಾ ಸಾವನ್ನಪ್ಪಿದ ವ್ಯಕ್ತಿಯನ್ನು ಹೈದರಾಬಾದ್ ಮೂಲದ ಮೊಹಮ್ಮದ್ ಅಸ್ಫಾನ್ (30) ಎಂದು ಗುರುತಿಸಲಾಗಿದೆ. ವ್ಯಕ್ತಿಯ ಕುಟುಂಬ ಎಐಎಂಐಎಂ ಮುಖ್ಯಸ್ಥ ಮತ್ತು ಹೈದರಾಬಾದ್ ಸಂಸದ ಅಸಾದುದ್ದೀನ್ ಓವೈಸಿ ಅವರನ್ನು ರಷ್ಯಾದಿಂದ ಮರಳಿ ಕರೆತರಲು ನೆರವು ಕೋರಿದ್ದರು. ಆದರೆ ಎಐಎಂಐಎಂ ಮಾಸ್ಕೋದಲ್ಲಿರುವ ಭಾರತೀಯ ರಾಯಭಾರ ಕಚೇರಿಯನ್ನು ಸಂಪರ್ಕಿಸಿದಾಗ ಅಸ್ಫಾನ್ ಮೃತಪಟ್ಟಿರುವುದನ್ನು ಅಧಿಕಾರಿಗಳು ಖಚಿತಪಡಿಸಿದ್ದಾರೆ. ಅಸ್ಫಾನ್ ಪತ್ನಿ ಹಾಗೂ ಇಬ್ಬರು ಮಕ್ಕಳನ್ನು ಅಗಲಿದ್ದಾರೆ. ಅಸ್ಫಾನ್ ಹಲವಾರು ಇತರ ಭಾರತೀಯರೊಂದಿಗೆ ಉದ್ಯೋಗದ ವಂಚನೆಗೆ ಒಳಗಾಗಿ ಯುದ್ಧದಲ್ಲಿ ಭಾಗಿಯಾಗಲು ರಷ್ಯಾದ ಸೈನ್ಯಕ್ಕೆ ಸಹಾಯ ಮಾಡಲು ನೇಮಿಸಿಕೊಳ್ಳಲಾಗಿತ್ತು. ಕೆಲ ವಾರಗಳ ಹಿಂದಷ್ಟೇ ಉಕ್ರೇನ್ನೊಂದಿಗಿನ ಯುದ್ಧದಲ್ಲಿ ರಷ್ಯಾದ ಸೇನೆಯೊಂದಿಗೆ ಸಹಾಯಕನಾಗಿ ಕೆಲಸ ಮಾಡುತ್ತಿದ್ದ ಗುಜರಾತ್ ಮೂಲದ 23 ವರ್ಷದ ಭಾರತೀಯ ವ್ಯಕ್ತಿ ಸಾವನ್ನಪ್ಪಿದ್ದರು.



# ಫೇಸ್ ಬುಕ್, ಇನ್ಸ್ಟಾಗ್ರಾಮ್ ಸ್ಥಗಿತದಿಂದಾಗಿ META ಗೆ 8 ಬಿಲಿಯನ್ ಡಾಲರ್ ನಷ್ಟ

ನವದೆಹಲಿ : ಮಾರ್ಚ್ 5 ರ ರಾತ್ರಿ ಸಾಮಾಜಿಕ ಮಾಧ್ಯಮಗಳಾದ ಫೇಸ್ ಬುಕ್ ಮತ್ತು ಇನ್ಸ್ಟಾಗ್ರಾಮ್ ಸ್ಥಗಿತಗೊಂಡಿದ್ದು, ಸುಮಾರು 2 ಗಂಟೆಗಳ ನಂತರ, ಈ ಅಪ್ಲಿಕೇಶನ್ಗಳು ಮತ್ತೆ ಕಾರ್ಯನಿರ್ವಹಿಸಲು ಪ್ರಾರಂಭಿಸಿದವು. ತಜ್ಞರ ಪ್ರಕಾರ, ಮೆಟಾ ಈ ಸ್ಥಗಿತದಿಂದ ಭಾರಿ ನಷ್ಟವನ್ನು ಅನುಭವಿಸಿದೆ. ಮೆಟಾ ಷೇರು ಬೆಲೆ ಶೇಕಡಾ 1.5 ರಷ್ಟು ಕುಸಿದಿದೆ ಮತ್ತು ಇಲ್ಲಿಯವರೆಗೆ ಅದು ಶೇಕಡಾ 1.6 ರಷ್ಟು ಕಳೆದುಕೊಂಡಿದೆ. ಇದು ಮೆಟಾಗೆ ಸಾಕಷ್ಟು ದೊಡ್ಡ ನಷ್ಟ ಎಂದು ಹೇಳಲಾಗುತ್ತದೆ. ಮಾರ್ಚ್ 5 ರಂದು ಫೇಸ್ಬುಕ್, ಇನ್ಸ್ಟಾಗ್ರಾಮ್ ಮತ್ತು ವಾಟ್ಸಾಪ್ ಇದ್ದಕ್ಕಿದ್ದಂತೆ ಕೆಲಸ ಮಾಡುವುದನ್ನು ನಿಲ್ಲಿಸಿತು. ಅಲ್ಲಿ ಫೇಸ್ ಬುಕ್ ಬಳಕೆದಾರರ ಖಾತೆಗಳು ಸ್ವಯಂಚಾಲಿತವಾಗಿ ಲಾಗ್ ಔಟ್ ಆಗುತ್ತವೆ. ಅದೇ ಸಮಯದಲ್ಲಿ, ಇನ್ಸ್ಟಾ ಮತ್ತು ವಾಟ್ಸಾಪ್ ಚಾಲನೆಯಲ್ಲಿ ಸಮಸ್ಯೆ ಇತ್ತು. ಬಳಕೆದಾರರಿಂದ ನಿರಂತರ ದೂರುಗಳ ನಂತರ, ಕಂಪನಿಯು ಅದರ ಮೇಲೆ ಕೆಲಸ ಮಾಡುತ್ತಿದೆ ಮತ್ತು ಅದನ್ನು ಶೀಘ್ರದಲ್ಲೇ ಸರಿಪಡಿಸಲಾಗುವುದು ಎಂದು ಕಂಪನಿ ಹೇಳಿದೆ. 2 ಗಂಟೆಗಳ ಸ್ಥಗಿತದಿಂದ ಮೆಟಾಗೆ ಎಷ್ಟು ಹಾನಿಯಾಗಿದೆ ಎಂದು ತಿಳಿಯೋಣ. ಮೆಟಾ ಮಾಲೀಕ ಮಾರ್ಕ್ ಜುಕರ್ಬರ್ಗ್ ಸುಮಾರು 100 ಮಿಲಿಯನ್ ಡಾಲರ್ ಅಥವಾ ಸುಮಾರು 8,28,97,90,000 ರೂಪಾಯಿಗಳನ್ನು ಕಳೆದುಕೊಂಡಿದ್ದಾರೆ ಎಂದು ವೆಡ್ಬುಶ್ ಸೆಕ್ಯುರಿಟೀಸ್ನ ವ್ಯವಸ್ಥಾಪಕ ನಿರ್ದೇಶಕ ಡಾನ್ ಐವ್ಸ್ ತಿಳಿಸಿದ್ದಾರೆ. ಈ 2 ಗಂಟೆಗಳ ಸ್ಥಗಿತವು ಕಂಪನಿಗೆ ತುಂಬಾ ಭಾರವಾಗಿದೆ.





# ಶಾಶ್ವತ ಕದನ ವಿರಾಮಕ್ಕೆ ಹಮಾಸ್ ಆಗ್ರಹ

**ಗಾಜಾ:** ಶಾಶ್ವತ ಕದನ ವಿರಾಮ ಜಾರಿಯಾದಾಗ ಮತ್ತು ಇಸ್ರೇಲಿಗಳು ಗಾಝಾದಿಂದ ಸಂಪೂರ್ಣವಾಗಿ ಹಿಂದೆ ಸರಿದ ನಂತರವೇ ಉಳಿದ 134 ಒತ್ತೆಯಾಳುಗಳನ್ನು ಬಿಡುಗಡೆ ಮಾಡುವುದಾಗಿ ಹಮಾಸ್ ಹಿರಿಯ ಮುಖಂಡ ಒಸಾಮಾ ಹಮಾಡೆನ್ ಹೇಳಿದ್ದಾರೆ.

ಕಳೆದ ಎರಡು ದಿನಗಳಲ್ಲಿ ಸಂಘಟನೆಯು ಕತಾರ್ ಮತ್ತು ಈಜಿಪ್ಟ್ ಮಧ್ಯವರ್ತಿಗಳ ಮುಂದೆ ಈ ಅಭಿಪ್ರಾಯವನ್ನು ಸ್ಪಷ್ಟವಾಗಿ ಪ್ರಸ್ತುತಪಡಿಸಿದೆ ಎಂದು ಹಮದಾನ್ ಮಂಗಳವಾರ ಬೈರುತ್ ನಲ್ಲಿ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಗಾಝಾ ಪಟ್ಟಿಯಿಂದ ಐಡಿಎಫ್ನಿಂದ ಸಂಪೂರ್ಣವಾಗಿ ಹಿಂದೆ ಸರಿದ ನಂತರ ಮತ್ತು ಸ್ಥಳಾಂತರಗೊಂಡ ಫೆಲೆಸ್ತೀನ್ ಕುಟುಂಬಗಳನ್ನು ತಮ್ಮ ಮನೆಗಳಿಗೆ ಮರಳಿದ ನಂತರವೇ ಶಾಶ್ವತ ಕದನ ವಿರಾಮ ಸಾಧ್ಯ ಎಂದು ಹಮಾಸ್ ತನ್ನ ನಿಲುವನ್ನು ಪುನರುಚ್ಚರಿಸಿದೆ ಎಂದು ಅವರು ಹೇಳಿದರು. ಹಮಾಸ್ ತೆಗೆದುಕೊಂಡ ಕಠಿಣ ನಿಲುವು ಪವಿತ್ರ ರಂಜಾನ್ ತಿಂಗಳ ಆರಂಭವಾದ ಮಾರ್ಚ್ 10 ರ ಮೊದಲು ಆರು ವಾರಗಳ ತಾತ್ಕಾಲಿಕ ಕದನ ವಿರಾಮವನ್ನು ಘೋಷಿಸಬಹುದು ಎಂಬ ಯುಎಸ್ ಅಧ್ಯಕ್ಷ ಜೋ ಬೈಡನ್ ಅವರ ಆಶಾವಾದವನ್ನು ಬಹುತೇಕ ಸುಳ್ಳಾಗಿಸಿದೆ. ಆದಾಗ್ಯೂ, ಯುಎಸ್ ಸ್ಟೇಟ್ ಸೆಕ್ರೆಟರಿ ಆಂಟನಿ ಬ್ಲಿಂಕೆನ್ ಅವರು ಕತಾರ್ ಪ್ರಧಾನಿ ಮೊಹಮ್ಮದ್ ಅಲ್-ಥಾನಿ ಮತ್ತು ಈಜಿಪ್ಟ್ ಮಧ್ಯವರ್ತಿ ಮೇಜರ್ ಜನರಲ್ ಅಬ್ಬಾಸ್ ಕಲಾಂ ಅವರೊಂದಿಗೆ ನಿರಂತರ ಚರ್ಚೆ ನಡೆಸುತ್ತಿದ್ದಾರೆ. ಅಮೆರಿಕ ಪ್ರವಾಸದಲ್ಲಿರುವ ಇಸ್ರೇಲ್ ಸಚಿವ ಬೆನ್ನಿ ಗಾಂಟ್ಜ್ ಅವರೊಂದಿಗೂ ಅಮೆರಿಕ ನಾಯಕರು ಸಂಪರ್ಕದಲ್ಲಿದ್ದಾರೆ.

# 10 ನೇ ತರಗತಿ ಬೋರ್ಡ್ ಪರೀಕ್ಷೆ ವೇಳೆ ಚೀಟಿ ಪಾಸ್ ಮಾಡಲು ಗೋಡೆ ಏರಿದ್ರು!

**ಚಂಡೀಗಢ:** ಹರಿಯಾಣದ ನುಹ್ ಜಿಲ್ಲೆಯ ಶಾಲೆಯೊಂದರಲ್ಲಿ 10 ನೇ ತರಗತಿಯ ಬೋರ್ಡ್ ಪರೀಕ್ಷೆಯ ಸಂದರ್ಭದಲ್ಲಿ ನಕಲಿಗೆ ಸಹಕರಿಸಿರುವ ವಿಚಾರ ಬಯಲಾಗಿದೆ.ನುಹ್ ಜಿಲ್ಲೆಯ ತೌರುನಲ್ಲಿರುವ ಚಂದ್ರಾವತಿ ಶಾಲೆಯಲ್ಲಿ ಬುಧವಾರ ಈ ಘಟನೆ ನಡೆದಿದೆ. ಪರೀಕ್ಷೆ ಪ್ರಾರಂಭವಾದ ಸ್ವಲ್ಪ ಸಮಯದ ನಂತರ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದೆ ಎಂದು ವರದಿಯಾಗಿದೆ. ಇದಕ್ಕೆ ಸಂಬಂಧಪಟ್ಟ ವೀಡಿಯೋವೊಂದು ಸಾಮಾಜಿಕ ಜಾಲತಾಣಗಳಲ್ಲಿ ಸಖತ್ ವೈರಲ್ ಆಗುತ್ತಿದೆ. ವೀಡಿಯೋದಲ್ಲಿ ಜನರು ಬೋರ್ಡ್ ಪರೀಕ್ಷೆಗಳನ್ನು ಬರೆಯುವ ವಿದ್ಯಾರ್ಥಿಗಳಿಗೆ ಚೀಟಿ ರವಾನಿಸಲು ಶಾಲೆಯ ಗೋಡೆಗಳನ್ನು ಏರುತ್ತಿರುವುದನ್ನು ಕಾಣಬಹುದಾಗಿದೆ. ಈ ಸಂಬಂಧ ವಿದ್ಯಾರ್ಥಿಗಳ ಜೊತೆಗಿದ್ದ ಪೋಷಕರು ಮತ್ತು ಸಂಬಂಧಿಕರು ಪರೀಕ್ಷೆಯ ಹೊರಗೆ ಗಲಾಟೆ ಸೃಷ್ಟಿಸಿದರು. ಕೆಲವು ಮಕ್ಕಳು ಶಾಲೆಯ ಛಾವಣಿಯ ಮೇಲೆ ಹತ್ತಿದ ವೀಡಿಯೋ ನಾನು ನೋಡಿದೆ. ಘಟನೆಗೆ ಸಂಬಂಧಿಸಿದಂತೆ ವರದಿ ನೀಡುವಂತೆ ಅಧಿಕಾರಿಗಳಿಗೆ ಆದೇಶಿಸಿರುವುದಾಗಿ ಜಿಲ್ಲಾ ಶಿಕ್ಷಣಾಧಿಕಾರಿ ಪರಮಜೀತ್ ಚಹಾಲ್ ಮಾಧ್ಯಮಕ್ಕೆ ತಿಳಿಸಿದ್ದಾರೆ. ಪರೀಕ್ಷೆಯ ಸಮಯದಲ್ಲಿ ನಕಲು ಮಾಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಪರೀಕ್ಷಾ ಕೇಂದ್ರಗಳ ಹೊರಗೆ ಪೊಲೀಸರ ನಿಯೋಜನೆಯನ್ನು ಹೆಚ್ಚಿಸಲು ಶಿಕ್ಷಣ ಮಂಡಳಿಯು ಪೊಲೀಸರನ್ನು ವಿನಂತಿಸುತ್ತದೆ ಎಂದು ಬ್ಲಾಕ್ ಶಿಕ್ಷಣಾಧಿಕಾರಿ ಧರಂಪಾಲ್ ಹೇಳಿದರು.

# ಸೂಪರ್ ಪ್ರೈಮರಿ ಚುನಾವಣೆಯಲ್ಲಿ ಡೊನಾಲ್ಡ್ ಟ್ರಂಪ್ ಗೆಲುವು

**ಅಮೇರಿಕಾ:** ವರ್ಜೀನಿಯಾ ಮತ್ತು ಉತ್ತರ ಕೆರೊಲಿನಾದಲ್ಲಿ ನಡೆದ ಪ್ರಾಥಮಿಕ ಚುನಾವಣೆಗಳಲ್ಲಿ ಡೊನಾಲ್ಡ್ ಟ್ರಂಪ್ ಗೆಲುವು ಸಾಧಿಸಿದ್ದಾರೆ ಎಂದು ಯುಎಸ್ ನೆಟ್ ವರ್ಕ್ ಗಳು ವರದಿ ಮಾಡಿವೆ. ರಿಪಬ್ಲಿಕನ್ ಅಧ್ಯಕ್ಷೀಯ ನಾಮನಿರ್ದೇಶನದ ಸ್ಪರ್ಧೆಯಲ್ಲಿ 15 'ಸೂಪರ್ ಮಂಗಳವಾರ' ರಾಜ್ಯಗಳಿಂದ ಫಲಿತಾಂಶಗಳು ಬರಲು ಪ್ರಾರಂಭಿಸಿವೆ. 2020 ರಲ್ಲಿ ಡೆಮಾಕ್ರಟಿಕ್ ಜೋ ಬೈಡನ್ ಅವರಿಂದ ಪದಚ್ಯುತಗೊಂಡ ನಂತರ ಸಂವೇದನಾಶೀಲ ಪುನರಾಗಮನಕ್ಕೆ ಬಿಡ್ ಮಾಡುತ್ತಿರುವ ಮಾಜಿ ಅಧ್ಯಕ್ಷರು, ನಾಮನಿರ್ದೇಶನದ ಹಾದಿಯಲ್ಲಿ ಮಂಗಳವಾರ ರಾಜ್ಯಗಳಲ್ಲಿ ಕ್ಲೀನ್ ಸ್ವೀಪ್ ಸಾಧಿಸುವ ನಿರೀಕ್ಷೆಯಿದೆ. ಟ್ರಂಪ್ ತಮ್ಮ ಟ್ರೂತ್ ಸೋಷಿಯಲ್ ಸೈಟ್ ನಲ್ಲಿ ವರ್ಜೀನಿಯಾ ಮತ್ತು ಉತ್ತರ ಕೆರೊಲಿನಾಗೆ ಧನ್ಯವಾದ ಅರ್ಪಿಸಿದ್ದಾರೆ. ಅವರ ದೀರ್ಘಕಾಲದ ಪ್ರತಿಸ್ಪರ್ಧಿ, ವಿಶ್ವಸಂಸ್ಥೆಯ ಮಾಜಿ ರಾಯಭಾರಿ ನಿಕ್ಕಿ ಹ್ಯಾಲೆ ಅವರು ಟ್ರಂಪ್ ಅವರ ನಾಮನಿರ್ದೇಶನದ ಹಾದಿಯಲ್ಲಿ ಗಮನಾರ್ಹ ಅಡಚಣೆಯನ್ನು ಒದಗಿಸಲು ವಿಫಲರಾಗಿದ್ದಾರೆ, ಆದರೆ ಸ್ಪರ್ಧೆಯಿಂದ ಹೊರಗುಳಿಯಲು ನಿರಾಕರಿಸಿದ್ದಾರೆ. ರಿಯಲ್ ಕ್ಲಿಯರ್ ಪಾಲಿಟಿಕ್ಸ್ ನ ಸಮೀಕ್ಷೆಯ ಸರಾಸರಿಗಳು 77 ವರ್ಷದ ಟ್ರಂಪ್ ಪ್ರಾಥಮಿಕ ಚುನಾವಣೆಯಲ್ಲಿ 65 ಅಂಕಗಳು ಸ್ಪಷ್ಟವಾಗಿದ್ದಾರೆ ಮತ್ತು ನವೆಂಬರ್ ಚುನಾವಣೆಯಲ್ಲಿ ಅಧ್ಯಕ್ಷ ಜೋ ಬಿಡೆನ್ ಗಿಂತ ಎರಡು ಅಂಕ ಮುಂದಿದ್ದಾರೆ ಎಂದು ತೋರಿಸುತ್ತದೆ.




# ಸೋಷಿಯಲ್ ಮೀಡಿಯಾದಲ್ಲಿ ಡಾರ್ಕ್ ಪಾರ್ಲೆ-ಜಿ ಹವಾ

**ನವದೆಹಲಿ:** ಭಾರತೀಯರು ತಮ್ಮ ಜೀವನದಲ್ಲಿ ಒಮ್ಮೆಯಾದ್ರು ಪಾರ್ಲೆ-ಜಿ ರುಚಿಯನ್ನ ಸವಿದಿರಬಹುದು. ಆದ್ರೆ, ಈ ಬಾರಿ ಪಾರ್ಲೆ-ಜಿಯ ಹೊಸ ರೂಪಾಂತರದ ರ್ಯಾಪರ್ ಸಾಮಾಜಿಕ ಮಾಧ್ಯಮದಲ್ಲಿ ಕೋಲಾಹಲ ಸೃಷ್ಟಿಸಿದೆ. ಈ ಬಗ್ಗೆ ನೆಟ್ಟಿಗರು ವಿವಿಧ ರೀತಿಯ ಪ್ರತಿಕ್ರಿಯೆಗಳನ್ನ ನೀಡುತ್ತಿದ್ದಾರೆ.ಪಾರ್ಲೆ-ಜಿ ಸುಮಾರು 85 ವರ್ಷಗಳಷ್ಟು ಹಳೆಯದಾದ ಬಿಸ್ಕತ್ತು, ಇದನ್ನು ಜನರು ಬೆಳಿಗ್ಗೆ ಮತ್ತು ಸಂಜೆ ಉಪಾಹಾರದಲ್ಲಿ ತಿನ್ನಲು ಇಷ್ಟಪಡುತ್ತಾರೆ ಮತ್ತು ಇಲ್ಲಿಯವರೆಗೆ ಇದು ಹೆಚ್ಚು ಮಾರಾಟವಾಗುವ ಬ್ರಾಂಡ್ಗಳಲ್ಲಿ ಒಂದಾಗಿದೆ.ಈ ಬಗ್ಗೆ ವಿಮರ್ಶೆಗಳನ್ನ ಸಹ ನೀಡಲು ಪ್ರಾರಂಭಿಸಿದ್ದು, ಸಾಮಾಜಿಕ ಮಾಧ್ಯಮ ಪ್ಲಾಟ್ಫಾರ್ಮ್ 'ಎಕ್ಸ್' ಬಳಕೆದಾರರೊಬ್ಬರು, ಪಾರ್ಲೆ ಜಿ ಸಾಕಷ್ಟು ಡಾರ್ಕ್ ಆಗಿದೆ ಎಂದು ಹೇಳಿದರು. ಇನ್ನೊಬ್ಬ ಬಳಕೆದಾರರು, ಪಾರ್ಲೆ-ಜಿ ತುಂಬಾ ಡಾರ್ಕ್ ಆಗಿದ್ಯಾ.ಅವರು ಅದನ್ನು ಏಕೆ ಮಾಡಿದರು ಎಂದು ಪ್ರಶ್ನಿಸಿದ್ದಾರೆ. ಮೂರನೇ ಬಳಕೆದಾರ ಮೊದಲನೆಯದು ಡಾರ್ಕ್ ಪಾರ್ಲೆ ಜಿ ಗಿಂತ ಉತ್ತಮವಾಗಿದೆ ಎಂದು ಹೇಳಿದ್ದಾರೆ.




# ಇಮ್ರಾನ್ ಖಾನ್ ಪಕ್ಷ ಬೆಂಬಲಿತ ಸಂಸದರಿಗೆ ಮೀಸಲು ಸ್ಥಾನ ನಿರಾಕರಿಸಿದ ಚುನಾವಣಾ ಆಯೋಗ

**ಪಾಕಿಸ್ತಾನ:** ಸಂಸತ್ನಲ್ಲಿ ಮಹಿಳೆಯರಿಗೆ ಮತ್ತು ಅಲ್ಪಸಂಖ್ಯಾತರಿಗೆ ಮೀಸಲಿಟ್ಟಿರುವ ಸ್ಥಾನಗಳಲ್ಲಿ ಮಾಜಿ ಪ್ರಧಾನಿ ಇಮ್ರಾನ್ಖಾನ್ಗೆ ನಿಷ್ಠರಿರುವ ಸಂಸದರು ಪಾಲು ಪಡೆಯುವಂತಿಲ್ಲ ಎಂದು ಪಾಕಿಸ್ತಾನದ ಚುನಾವಣಾ ಆಯೋಗ ಸೂಚನೆ ನೀಡಿದೆ.

ಪಿಎಂಎಲ್-ಎನ್ ಮುಖಂಡ ಶೆಹಬಾಝ್ ಷರೀಫ್ ಪಾಕಿಸ್ತಾನದ ನೂತನ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಬಳಿಕ ಚುನಾವಣಾ ಆಯೋಗ ಈ ನಿರ್ಧಾರ ಪ್ರಕಟಿಸಿದೆ.

336 ಸದಸ್ಯಬಲದ ಪಾಕಿಸ್ತಾನ ಸಂಸತ್ನಲ್ಲಿ 70 ಸ್ಥಾನಗಳನ್ನು ಮಹಿಳೆಯರಿಗೆ ಮತ್ತು ಅಲ್ಪಸಂಖ್ಯಾತರಿಗೆ ಮೀಸಲಿರಿಸಲಾಗಿದೆ. ರಾಜಕೀಯ ಪಕ್ಷಗಳು ಚುನಾವಣೆಯಲ್ಲಿ ಗೆದ್ದ ಸ್ಥಾನಗಳ ಅನುಪಾತದಲ್ಲಿ ಮೀಸಲು ಸ್ಥಾನ ದೊರಕಲಿದೆ. ಆದರೆ ಫೆಬ್ರವರಿ 8ರಂದು ಪಾಕಿಸ್ತಾನದಲ್ಲಿ ನಡೆದಿದ್ದ ಸಾರ್ವತ್ರಿಕ ಚುನಾವಣೆಯಲ್ಲಿ ಇಮ್ರಾನ್ಖಾನ್ ಅವರ ಪಾಕಿಸ್ತಾನ್ ತೆಹ್ರೀಕೆ ಇನ್ಸಾಫ್ (ಪಿಟಿಐ) ಪಕ್ಷಕ್ಕೆ ಚಿಹ್ನೆ ನಿರಾಕರಿಸಿದ್ದರಿಂದ ಪಕ್ಷದ ಅಭ್ಯರ್ಥಿಗಳು ಪಕ್ಷೇತರರಾಗಿ ಸ್ಪರ್ಧಿಸಿ ಇತರ ಪಕ್ಷಗಳಿಗಿಂತ ಹೆಚ್ಚಿನ (93 ಸ್ಥಾನ) ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದ್ದರು. ಬಳಿಕ ಸುನ್ನಿ ಇತ್ತೆಹಾದ್ ಕೌನ್ಸಿಲ್(ಎಸ್ಐಸಿ) ಪಕ್ಷದ ಜತೆ ಗುರುತಿಸಿಕೊಂಡು ಮೀಸಲು ಸ್ಥಾನಕ್ಕೆ ಹಕ್ಕು ಮಂಡಿಸಿದ್ದರು.

'ಪಕ್ಷೇತರ ಅಭ್ಯರ್ಥಿಗಳು ರಾಜಕೀಯ ಪಕ್ಷದ ಜತೆ ಗುರುತಿಸಿಕೊಂಡ ಅಥವಾ ಸೇರ್ಪಡೆಗೊಂಡ ಮಾತ್ರಕ್ಕೆ ಮೀಸಲು ಸ್ಥಾನಗಳಲ್ಲಿ ತಮ್ಮ ಹಕ್ಕನ್ನು ಪ್ರತಿಪಾದಿಸುವಂತಿಲ್ಲ' ಎಂದು ಪಾಕಿಸ್ತಾನದ ಚುನಾವಣಾ ಆಯೋಗ ಹೇಳಿದೆ. ಇದನ್ನು ಪ್ರಶ್ನಿಸಿ ನ್ಯಾಯಾಲಯಕ್ಕೆ ಮೇಲ್ಮನವಿ ಸಲ್ಲಿಸುವುದಾಗಿ ಪಿಟಿಐ ಪಕ್ಷ ತಿಳಿಸಿದೆ.




# ಉಕ್ರೇನ್ ನ ಡ್ರೋನ್ ದಾಳಿಗೆ ರಷ್ಯಾದ ಮತ್ತೊಂದು ಯುದ್ಧನೌಕೆ ನಾಶ

**ರಷ್ಯಾ:** ರಷ್ಯಾ ಮತ್ತು ಉಕ್ರೇನ್ನಡುವಿನಯುದ್ಧ ಆರಂಭವಾಗಿ ಎರಡು ವರ್ಷ ಕಳೆದಿದೆ. ಈ ಮಧ್ಯೆ ಉಕ್ರೇನ್ ಹೈಟೆಕ್ಸಮುದ್ರಡ್ರೋನ್ ಗಳನ್ನುಬಳಸಿಕೊಂಡುರಷ್ಯಾದಮತ್ತೊಂದುಯುದ್ಧನೌಕೆಯನ್ನುಕಪ್ಪುಸಮುದ್ರದಲ್ಲಿಮುಳುಗಿಸಲಾಗಿದೆಎಂದುಹೇಳಿಕೊಂಡಿದೆ.

ವಿಶೇಷ ಕಾರ್ಯಾಚರಣೆ ಘಟಕವು ದೊಡ್ಡ ಗಸ್ತು ಹಡಗು ಸೆರ್ಗೆಯ್ ಕೊಟೊವ್ ಅನ್ನು ರಾತ್ರೋರಾತ್ರಿ ನಾಶಪಡಿಸಿದೆ ಎಂದು ಉಕ್ರೇನ್ ಮಿಲಿಟರಿ ಗುಪ್ತಚರ ಸಂಸ್ಥೆ ತಿಳಿಸಿದೆ. 2021 ರಲ್ಲಿ ನಿಯೋಜಿಸಲಾಗಿದ್ದ ಈ ಹಡಗನ್ನು ಕೆರ್ಚ್ ಜಲಸಂಧಿಯ ಬಳಿ ಡ್ರೋನ್ ದಾಳಿಯಿಂದ ನಾಶವಾಯಿತು ಎಂದು ಉಕ್ರೇನ್ ಹೇಳಿದೆ. ಸುದ್ದಿ ಸಂಸ್ಥೆ ಎಪಿಯ ವರದಿಯ ಪ್ರಕಾರ, ಅಂತಹ ಆಧುನಿಕ ಹಡಗು ಮುಳುಗಿರುವುದು ರಷ್ಯಾಕ್ಕೆ ಗಮನಾರ್ಹ ನಷ್ಟ ಮತ್ತು ನಾಚಿಕೆಗೇಡಿನ ಸಂಗತಿಯಾಗಿದೆ. ಉಕ್ರೇನ್ ಮೇಲಿನ ರಷ್ಯಾದ ಕ್ಷಿಪಣಿ ದಾಳಿಗಳಲ್ಲಿ ಸುಮಾರು 20% ಕಪ್ಪು ಸಮುದ್ರದಿಂದ ಉಕ್ರೇನ್ ನಿಂದ ಉಡಾಯಿಸಲ್ಪಟ್ಟಿವೆ ಮತ್ತು ಯಶಸ್ವಿ ಉಕ್ರೇನ್ ದಾಳಿಗಳು ರಷ್ಯಾದ ಸಾಮರ್ಥ್ಯವನ್ನು ಹಾನಿಗೊಳಿಸಿವೆ ಎಂದು ಉಕ್ರೇನ್ ಅಧಿಕಾರಿಗಳು ಹೇಳುತ್ತಾರೆ. ಕಳೆದ ಎರಡು ವರ್ಷಗಳಲ್ಲಿ ಮಾಸ್ಕೋದ ನೌಕಾ ಸಾಮರ್ಥ್ಯ ಮತ್ತು ಸೀಮಿತ ನೌಕಾ ಕಾರ್ಯಾಚರಣೆಗಳನ್ನು ದುರ್ಬಲಗೊಳಿಸಿದ ಉಕ್ರೇನಿಯನ್ ಡ್ರೋನ್ ದಾಳಿಗಳ ಸರಣಿಯಲ್ಲಿ ಈ ದಾಳಿ ಇತ್ತೀಚಿನದು. ಯಶಸ್ವಿ ಉಕ್ರೇನಿಯನ್ ಡ್ರೋನ್ ಮತ್ತು ಕ್ಷಿಪಣಿ ದಾಳಿಗಳು ಉಕ್ರೇನ್ ನೈತಿಕ ಸ್ಥೈರ್ಯವನ್ನು ಹೆಚ್ಚಿಸಿವೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 'ನನ್ನಮ್ಮ ಸೂಪರ್ ಸ್ಟಾರ್-3'ನಲ್ಲಿ ತನಿಷಾ ಕುಪ್ಪಂಡ



'ಬಿಗ್ ಬಾಸ್' ಬೆಡಗಿ ತನಿಷಾ ಕುಪ್ಪಂಡ ದೊಡ್ಮನೆ ಆಟ ಮುಗಿದ ಮೇಲೆ ಸಖತ್ ಬ್ಯುಸಿಯಾಗಿದ್ದಾರೆ. ನಟನೆ, ಉದ್ಯಮ ಕ್ಷೇತ್ರಗಳಲ್ಲಿ ತನಿಷಾ ಬ್ಯುಸಿಯಾಗಿದ್ದಾರೆ. ಸದ್ಯ 'ನನ್ನಮ್ಮ ಸೂಪರ್ ಸ್ಟಾರ್-3'ರಲ್ಲಿ ತನಿಷಾ ಭಾಗಿಯಾಗಿದ್ದಾರೆ. ಈ ಕುರಿತ ಫೋಟೋವನ್ನು ನಟಿ ಹಂಚಿಕೊಂಡಿದ್ದಾರೆ.

ಸಿನಿಮಾ ಕೆಲಸ, ಪೇಡ್ ಪ್ರಮೋಷನ್, ಹೋಟೆಲ್ ಬ್ಯುಸಿನೆಸ್ ಎಂದು ಸದಾ ಬ್ಯುಸಿಯಾಗಿರುವ ನಟಿ ಈಗ 'ನನ್ನಮ್ಮ ಸೂಪರ್ ಸ್ಟಾರ್'-3 ಕಾರ್ಯಕ್ರಮಕ್ಕೆ ಎಂಟ್ರಿ ಕೊಟ್ಟಿದ್ದು, ಮಕ್ಕಳ ಜೊತೆ ಬೆರೆತು ಎಂಜಾಯ್ ಮಾಡಿದ್ದಾರೆ. ಅಷ್ಟೇ ಅಲ್ಲ, ಶೋನಲ್ಲಿ ತನಿಷಾ ಅಡುಗೆ ಕೂಡ ಮಾಡಿದ್ದಾರೆ. ಬಳಿಕ ಹಿರಿಯ ನಟಿ ತಾರಾ, ಮತ್ತು ಅನುಪ್ರಭಾಕರ್ ಜೊತೆ ಫೋಟೋ ಕ್ಲಿಕ್ಕಿಸಿಕೊಂಡು ನಟಿ ಸಂಭ್ರಮಿಸಿದ್ದಾರೆ.

ಇತ್ತೀಚೆಗೆ ತನಿಷಾ ಮತ್ತು ಕಾರ್ತಿಕ್ ಸಿನಿಮಾ ಮಾಡುವ ಕುರಿತಂತೆ ಮಾತನಾಡಿದ್ದರು. ಈ ಕುರಿತು ಸ್ವತಃ ತನಿಷಾ ಅವರೇ ಮಾಧ್ಯಮಗಳ ಮುಂದೆ ಹೇಳಿಕೆ ನೀಡಿದ್ದರು. ನಮ್ಮದೇ ಬ್ಯಾನರ್‌ನಲ್ಲಿ ಪುಟ್ಟ ಪ್ರಾಜೆಕ್ಟ್‌ವೊಂದನ್ನು ಮಾಡಲು ಹೊರಟ್ಟಿದ್ದೇನೆ. ಕಾರ್ತಿಕ್ ಅವರ ಕಾಲ್‌ಶೀಟ್ ಕೇಳಿದ್ದೇವೆ ಎಂದಿದ್ದರು.

ಸಿನಿಮಾ ಯಾವುದು, ಏನು ಎನ್ನುವುದರ ಕುರಿತು ತನಿಷಾ ಹೆಚ್ಚಿನ ಮಾಹಿತಿ ನೀಡಿಲ್ಲ. ಆದರೆ ಕಾರ್ತಿಕ್ ಅವರು ಬಿಡುವು ಮಾಡಿಕೊಂಡು, ಕಥೆ ಕೇಳಬೇಕು ಎಂದಷ್ಟೇ ತಿಳಿಸಿದ್ದರು. ಬಿಗ್ ಬಾಸ್ ಮುಗಿದ ನಂತರ ಬಹುತೇಕ



ಸ್ಪರ್ಧಿಗಳು ಕಾರ್ಯಕ್ರಮಗಳಲ್ಲಿ ಬಿಜಿ ಆಗಿದ್ದಾರೆ. ಅದರಂತೆ ಕಾರ್ತಿಕ್ ಮತ್ತು ತನಿಷಾ ಒಟ್ಟಾಗಿಯೂ ಕಾರ್ಯಕ್ರಮಗಳಲ್ಲಿ ಕಾಣಿಸಿಕೊಳ್ತಿದ್ದಾರೆ.

ಕಾರ್ತಿಕ್ ಈ ಸೀಸನ್‌ನಲ್ಲಿ ವಿನ್ ಆದರೆ, ತನಿಷಾ ಕುಪ್ಪಂಡ ಬೆಂಕಿ ಅಂತಾನೇ ಫೇಮಸ್ ಆದವರು. ಬಿಗ್ ಬಾಸ್ ಮನೆಯಲ್ಲಿದ್ದಾಗ ಸಾಕಷ್ಟು ಅಭಿಮಾನಿಗಳನ್ನು ಹೊಂದಿದ್ದಾರೆ. ಈ ಜೋಡಿ ತೆರೆಯ ಮೇಲೆ ಬರಲಿ ಎನ್ನುವುದು ಹಲವರ ಆಸೆ ಕೂಡ ಇದೆ.

ನಯನತಾರಾ ಡಿವೋರ್ಸ್

# ಕೊನೆಗೂ ಮೌನ ಮುರಿದ ನಟಿ

ದಕ್ಷಿಣದ ಲೇಡಿ ಸೂಪರ್ ಸ್ಟಾರ್ ನಯನತಾರಾ ಮತ್ತು ನಿರ್ದೇಶಕ ವಿಘ್ನೇಶ್ ಶಿವನ್ ಡಿವೋರ್ಸ್ ವಿಚಾರ ಭಾರೀ ಸದ್ದು ಮಾಡಿತ್ತು. ಸೋಷಿಯಲ್ ಮೀಡಿಯಾದಲ್ಲಂತೂ ಸಾಕಷ್ಟು ಚರ್ಚೆಗೆ ಕಾರಣವಾಗಿತ್ತು. ಆದರೂ, ಈ ಕುರಿತಂತೆ ಇಬ್ಬರೂ ಪ್ರತಿಕ್ರಿಯೆ ನೀಡಿರಲಿಲ್ಲ. ಸತ್ಯ ಅಥವಾ ಸುಳ್ಳು ಅಂತಾನೂ ಸ್ಪಷ್ಟಪಡಿಸಲಿಲ್ಲ. ಆದರೆ, ಇದೀಗ ನಯನತಾರಾ ಈ ಕುರಿತಂತೆ ರಿಯ್ಯಾಕ್ಟ್ ಮಾಡಿದ್ದಾರೆ. ಹಾರ್ಟ್ ಸಿಂಬಲ್ ಹಾಕಿ, ಅಭಿಮಾನಿಗಳ ಹಾರ್ಟ್ ಬಿಟ್ ಹೆಚ್ಚಿಸಿದ್ದಾರೆ.

ಕೊಳಲು ವಾದಕ ನವೀನ್ ಎನ್ನುವವರು ತಾವು ಕೊಳಲು ನುಡಿಸುತ್ತಿರುವ ಮತ್ತು ಅದನ್ನು ತನ್ಮತೆಯಿಂದ ನಯನತಾರಾ ಮತ್ತು ವಿಘ್ನೇಶ್ ಶಿವನ್ ಕೇಳುತ್ತಿರುವ ವಿಡಿಯೋವನ್ನು ಹಂಚಿಕೊಂಡಿದ್ದಾರೆ. ಆ ವಿಡಿಯೋವನ್ನು ನಯನತಾರಾ ಶೇರ್ ಮಾಡುವ ಮೂಲಕ ಹಾರ್ಟ್ ಸಿಂಬಲ್ ಹಾಕಿದ್ದಾರೆ. ಅಲ್ಲಿಗೆ ತಮ್ಮ ಜೀವನದಲ್ಲಿ ಯಾವುದೇ ಡಿವೋರ್ಸ್ ಬಿರುಗಾಳಿ ಎದ್ದಿಲ್ಲ ಎನ್ನುವುದನ್ನು ಸ್ಪಷ್ಟಪಡಿಸಿದ್ದಾರೆ.



ತಮಿಳಿನ ಬೆಸ್ಟ್ ಕಪಲ್ ಆಗಿ ಹೈಲೆಟ್ ಆಗಿದ್ದ ನಯನತಾರಾ ಮತ್ತು ವಿಘ್ನೇಶ್ ಶಿವನ್ ಬಾಳಲ್ಲಿ ಬಿರುಗಾಳಿ ಬೀಸಿದ್ಯಾ ಎಂಬ ಅನುಮಾನ ಅಭಿಮಾನಿಗಳಲ್ಲಿ ಕಾಡುತ್ತಿತ್ತು. ನಟಿ ನಯನತಾರಾ ಅವರು ಪತಿ ವಿಘ್ನೇಶ್‌ರನ್ನು ಇನ್ಸ್ಟಾದಲ್ಲಿ ಅನ್‌ಫಾಲೋ ಮಾಡಿದ್ದರಿಂದ ಇಂಥದ್ದೊಂದು ಪ್ರಶ್ನೆ ಮೂಡಿತ್ತು.

ಪತ್ನಿಯನ್ನು ವಿಘ್ನೇಶ್ ಫಾಲೋ ಮಾಡ್ತಿದ್ದಾರೆ. ಆದರೆ ನಯನತಾರಾ ಅನ್ ಫಾಲೋ ಮಾಡಿ ಫುಲ್ ಸೈಲೆಂಟ್ ಆಗಿದ್ದರು. ಬಳಿಕ ಸೋಷಿಯಲ್ ಮೀಡಿಯಾದಲ್ಲಿ ನಟಿ ಅಳಲು ತೋಡಿಕೊಂಡಿದ್ದರು. 'ಕಣ್ಣಲ್ಲಿ ನೀರು ಬರುತ್ತಿದ್ದರೂ ಇದು ನನಗೆ ಸಿಕ್ಕಿತು' ಎಂದು ಬರೆದುಕೊಂಡಿದ್ದರು. ಇಬ್ಬರ ನಡುವೆ ಇದೀಗ ಬಿರುಕು ಮೂಡಿದೆ ಎನ್ನಲಾಗುತ್ತಿತ್ತು. ಡಿವೋರ್ಸ್‌ಗೆ ಈ ಜೋಡಿ ಮುಂದಾಗಿದೆ ಎಂದೇ ಹೇಳಲಾಗುತ್ತಿತ್ತು.

ಹಲವು ವರ್ಷಗಳು ಪ್ರೀತಿಸಿ, ಕಳೆದ ವರ್ಷ ಜೂನ್‌ನಲ್ಲಿ ನಯನತಾರಾ-ವಿಘ್ನೇಶ್ ಶಿವನ್ ಅದ್ದೂರಿಯಾಗಿ ಮದುವೆಯಾದರು. ಬಳಿಕ ಬಾಡಿಗೆ ತಾಯ್ತನದ ಮೂಲಕ ಅವಳಿ ಮಕ್ಕಳನ್ನು ಪಡೆದರು. ಖುಷಿ ಖುಷಿಯಿಂದ ಬದುಕುತ್ತಿದ್ದ ಈ ಜೋಡಿ ಈಗ ಬೇರೇ ಆಗ್ತಾರೆ ಎಂದೆಲ್ಲಾ ಸೋಷಿಯಲ್ ಮೀಡಿಯಾದಲ್ಲಿ ಚರ್ಚೆ ಆಗ್ತಿದ್ದಂತೆ ಫ್ಯಾನ್ಸ್ ತಲೆಕೆಡಿಸಿಕೊಂಡಿದ್ದರು. ಇದೀಗ ಎಲ್ಲದಕ್ಕೂ ಸುಖಾಂತ್ಯವಾಗಿದೆ.



# ನಿಶ್ಚಿತಾರ್ಥ ಸಂಭ್ರಮದಲ್ಲಿ ಕೌಸ್ತುಭ ಮಣಿ

ಕಿರುತೆರೆ ನಟಿ ಕೌಸ್ತುಭ ಮಣಿ ಅವರು ತಮ್ಮ ಅಭಿಮಾನಿಗಳಿಗೆ ಗುಡ್ ನ್ಯೂಸ್ ಕೊಟ್ಟಿದ್ದಾರೆ. 'ಗೌರಿ ಶಂಕರ' ಸೀರಿಯಲ್‌ನಿಂದ ಹೊರಬರುತ್ತಿದ್ದಂತೆ ನಟಿ ಎಂಗೇಜ್‌ಮೆಂಟ್ ಮಾಡಿಕೊಳ್ಳುವ ಮೂಲಕ ಫ್ಯಾನ್ಸ್‌ಗೆ ಸಿಹಿಸುದ್ದಿ ನೀಡಿದ್ದಾರೆ.

'ನನ್ನರಸಿ ರಾಧೆ' ಸೀರಿಯಲ್ ಮೂಲಕ ಟಿವಿ ಪರದೆಗೆ ರಾಧೆಯಾಗಿ ಪರಿಚಿತರಾದ ಕೌಸ್ತುಭ ಇದೀಗ ಅದ್ದೂರಿಯಾಗಿ ಎಂಗೇಜ್‌ಮೆಂಟ್ ಮಾಡಿಕೊಂಡಿದ್ದಾರೆ. ಸಿದ್ಧಾಂತ್ ಸತೀಶ್ ಎಂಬುವವರ ಜೊತೆ ನಿಶ್ಚಿತಾರ್ಥ ನಡೆದಿದೆ. ಇದೀಗ ಮದುವೆಯಾಗುವ ಹುಡುಗನ ಜೊತೆ ಚೆಂದದ ಫೋಟೋಶೂಟ್ ಶೇರ್ ಮಾಡಿ ಖುಷಿ ಹಂಚಿಕೊಂಡಿದ್ದಾರೆ.



ಇತ್ತೀಚೆಗೆ 'ಗೌರಿ ಶಂಕರ' ಎಂಬ ಸೀರಿಯಲ್‌ನಲ್ಲಿ ನಟಿಸುತ್ತಿದ್ದರು. ಮದುವೆ ನಿಶ್ಚಯವಾಗಿದೆ ಎಂಬ ಕಾರಣಕ್ಕೆ ನಟಿ ಸೀರಿಯಲ್‌ನಿಂದ ಹೊರಬಂದಿದ್ದರು. ಈ ವಿಚಾರ ಫ್ಯಾನ್ಸ್‌ಗೆ ನಿರಾಸೆ ಮೂಡಿಸಿತ್ತು.

'ರಾಮಾಚಾರಿ 2.0' ಸಿನಿಮಾದಲ್ಲಿ ನಾಯಕಿಯಾಗಿ ಬೆಳ್ಳಿತೆರೆಗೆ ಪಾದಾರ್ಪಣೆ ಮಾಡಿದ್ದಾರೆ. ಸಂಗೀತ ನಿರ್ದೇಶಕ ಅರ್ಜುನ್ ಜನ್ಯ ನಿರ್ದೇಶನದ ಸಿನಿಮಾದಲ್ಲಿ ರಾಜ್ ಬಿ ಶೆಟ್ಟಿಗೆ ಜೋಡಿಯಾಗಿ ನಟಿಸಿದ್ದಾರೆ. ಶಿವಣ್ಣ, ಉಪೇಂದ್ರ, ರಾಜ್ ಬಿ. ಶೆಟ್ಟಿ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಸದ್ಯದಲ್ಲೇ ಈ ಚಿತ್ರದ ರಿಲೀಸ್ ಬಗ್ಗೆ ಮಾಹಿತಿ ಸಿಗಲಿದೆ.

# ಕಳಪೆ ಬೌಲಿಂಗ್, ಬ್ಯಾಟಿಂಗ್‌ನಿಂದ ಆರ್‌ಸಿಬಿಗೆ ಸೋಲು

ಕಳಪೆ ಬೌಲಿಂಗ್, ಅಗ್ರ ಕ್ರಮಾಂಕದ ಬ್ಯಾಟರ್‌ಗಳ ಕಳಪೆ ಬ್ಯಾಟಿಂಗ್‌ನಿಂದಾಗಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮಹಿಳಾ ತಂಡ ಗುಜರಾತ್ ಜೈಂಟ್ಸ್ ಮಹಿಳಾ ತಂಡದ ವಿರುದ್ಧ ಸೋಲನುಭವಿಸಿದೆ. ಆದ್ರೆ ಕಳೆದ 4 ಪಂದ್ಯಗಳಲ್ಲೂ ಸೋಲಿನಿಂದ ಕಂಗೆಟ್ಟಿದ್ದ ಗುಜರಾತ್ ತಂಡ 19 ರನ್‌ಗಳ ಜಯ ಸಾಧಿಸಿ, ಡಬ್ಲ್ಯೂಪಿಎಲ್‌ನ 2ನೇ ಆವೃತ್ತಿಯಲ್ಲಿ ಗೆಲುವಿನ ಖಾತೆ ತೆರೆದಿದೆ.

ಇಲ್ಲಿನ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಗುಜರಾತ್ ಜೈಂಟ್ಸ್ ತಂಡ 20 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 199 ರನ್ ಬಾರಿಸಿತು. 200 ರನ್‌ಗಳ ಬೃಹತ್ ಮೊತ್ತದ ಗುರಿ ಬೆನ್ನತ್ತಿದ ಆರ್‌ಸಿಬಿ ನಿಗದಿತ ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 180 ರನ್ ಗಳಿಸಿ ಸೋಲೊಪ್ಪಿಕೊಂಡಿತು.

ಚೇಸಿಂಗ್ ಆರಂಭಿಸಿದ ಆರ್‌ಸಿಬಿ ಸ್ಫೋಟಕ ಪ್ರದರ್ಶನ ನೀಡುವ ಉತ್ಸಾಹದಲ್ಲಿ ವಿಕೆಟ್ ಕಳೆದುಕೊಂಡು ಸಂಕಷ್ಟಕ್ಕೀಡಾಯಿತು. ಅಗ್ರಕ್ರಮಾಂಕದ ಬ್ಯಾಟರ್‌ಗಳು ಅಲ್ಪ ಮೊತ್ತಕ್ಕೆ ಕೈಚೆಲ್ಲಿದರು. ಆರಂಭಿಕ ಆಟಗಾರ್ತಿ ಸಬ್ಬಿನೇನಿ ಮೇಘನಾ 4 ರನ್‌ಗಳಿಗೆ ಕೈಕೊಟ್ಟರೆ, ಸ್ಮೃತಿ ಮಂಧಾನ, ಎಲ್ಲಿಸ್ ಪೆರ್ರಿ ತಲಾ 24 ರನ್, ಸೋಫಿ ಡಿವೈನ್ 23 ರನ್, ರಿಚಾ ಘೋಷ್ 30 ರನ್ ಗಳಿಸಿದ್ದರು. ಕೊನೆಯಲ್ಲಿ ಆರ್ಭಟಿಸಿದ ಜಾರ್ಜಿಯಾ ವೇರ್ಹ್ಯಾಮ್ 21 ಎಸೆತಗಳಲ್ಲಿ 48 ರನ್ ಸಿಡಿಸಿ, ಗೆಲುವಿನ ಭರವಸೆ ಮೂಡಿಸಿದ್ದರು. ಅಷ್ಟರಲ್ಲಿ 22ನೇ ಎಸೆತದಲ್ಲೇ ರನೌಟ್‌ಗೆ ತುತ್ತಾದರು. ಇದರೊಂದಿಗೆ ಆರ್‌ಸಿಬಿ ಗೆಲುವಿನ ಕನಸು



ಮಣ್ಣುಪಾಲಾಯಿತು. ಸೋಫಿ ಮೊಲಿನೆಕ್ಸ್ 3 ರನ್ ಗಳಿಸಿದ್ರೆ, ಸಿಮ್ರನ್ ಬಹದ್ದೂರ್ 1 ರನ್ , ಏಕ್ತಾ ಬಿಷ್ಟ್ 12 ರನ್ ಗಳಿಸಿ ಔಟಾದರು. ಅಂತಿಮವಾಗಿ ಆರ್‌ಸಿಬಿ 180 ರನ್‌ಗಳಿಗೆ 8 ವಿಕೆಟ್ ಕಳೆದುಕೊಂಡು ಸೋಲೊಪ್ಪಿಕೊಂಡಿತು.

ಇದಕ್ಕೂ ಮುನ್ನ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಆಯ್ದುಕೊಂಡ ಗುಜರಾತ್ ತಂಡ ಆರಂಭದಲ್ಲೇ ಹೊಡಿಬಡಿ ಆಟಕ್ಕೆ ಮುಂದಾಯಿತು. ಆರ್‌ಸಿಬಿ ಬೌಲರ್‌ಗಳನ್ನು ಹಿಗ್ಗಾಮುಗ್ಗಾ ಚೆಂಡಾಡಿದ ಲಾರಾ ವೊಲ್ವಾರ್ಡ್ಟ್, ಬೆತ್ ಮೂನಿ ಜೋಡಿ 13 ಓವರ್‌ಗಳಲ್ಲಿ 140 ರನ್‌ಗಳ ಭರ್ಜರಿ ಜೊತೆಯಾಟ ನೀಡಿದರು. ಲಾರಾ 5 ಎಸೆತಗಳಲ್ಲಿ ಸ್ಫೋಟಕ 76 ರನ್ (13 ಬೌಂಡರಿ) ಸಿಡಿಸಿ ರನೌಟ್‌ಗೆ ತುತ್ತಾದರೆ, ಕೊನೆಯವರೆಗೂ ಕ್ರೀಸ್‌ನಲ್ಲಿ ಉಳಿದ ಬೆತ್ ಮೂನಿ 51 ಎಸೆತಗಳಲ್ಲಿ 85 ರನ್ (12 ಬೌಂಡರಿ, 1 ಸಿಕ್ಸರ್) ಚಚ್ಚಿದರು. ಇನ್ನುಳಿದಂತೆ ಫೋಬೆ ಲಿಚ್‌ಫೀಲ್ಡ್ 18 ರನ್ ಗಳಿಸಿದ್ರೆ, ದಯಾಳನ್ ಹೇಮಲತಾ, ವೇದಾ ಕೃಷ್ಣಮೂರ್ತಿ ಮತ್ತು ಕ್ಯಾಥರಿನ್ ಬ್ರೈಸ್ ತಲಾ ಒಂದೊಂದು ರನ್ ಗಳಿಸಿದರು. ಆರ್‌ಸಿಬಿ ಪರ ಸೋಫಿ ಮೊಲಿನೆಕ್ಸ್, ಜಾರ್ಜಿಯಾ ವೇರ್ಹ್ಯಾಮ್ ತಲಾ ಒಂದೊಂದು ವಿಕೆಟ್ ಕಿತ್ತರು.

# ಲೋಕಸಭೆ ಚುನಾವಣೆ ಬಳಿಕ ಸರ್ಕಾರ ಪತನ

**ಬೆಳಗಾವಿ:** ದೇಶದಲ್ಲಿ ಬಿಜೆಪಿಗೆ 400 ಸೀಟು ಬಂದರೆ ಕೇಂದ್ರದಲ್ಲಿ ನಮ್ಮ ಸರ್ಕಾರ ಬರುತ್ತೆ. ಕೇಂದ್ರದಲ್ಲಿ ನಮ್ಮ ಸರ್ಕಾರ ಬಂದರೆ ರಾಜ್ಯದಲ್ಲೂ ನಮ್ಮ ಸರ್ಕಾರವೇ ಇರುತ್ತೆ. ಆಗ ನೋಡಿ ಮಾರಿ ಹಬ್ಬ ಆರಂಭ ಆಗುತ್ತದೆ. ಅವಾಗ ನಮ್ಮ ತಲ್ವಾರದ ತುದಿ ಹೇಗೆ ಜಳಪಿಸುತ್ತೆ ನೋಡಿ ಎಂದು ಸಂಸದ ಅನಂತಕುಮಾರ್ ಹೆಗಡೆ ಮತ್ತೆ ಪ್ರಚೋದಾತ್ಮಕ ಹೇಳಿಕೆ ನೀಡಿದ್ದಾರೆ. ಜಿಲ್ಲೆಯ ಖಾನಾಪುರ ತಾಲೂಕಿನ ನಂದಗಡ ಗ್ರಾಮದಲ್ಲಿ ನಡೆದ ಸ್ಥಳೀಯ ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಲೋಕಸಭೆ ಚುನಾವಣೆ ಬಳಿಕ ರಾಜ್ಯದಲ್ಲಿ ಸರ್ಕಾರ ಪತನ ಆಗುತ್ತದೆ ಎಂದು ಹೇಳಿದ್ದಾರೆ.

ಅದಕ್ಕಾಗಿ ಬಿಜೆಪಿ ನಿಮ್ಮಲ್ಲಿ ವಿನಂತಿ ಮಾಡುತ್ತೆ ಪ್ರತಿಯೊಂದು ಓಟು ಮಹತ್ವವಿದೆ. ಈ ಹಿಂದೆ ಸರ್ಕಾರ ಕೇವಲ ಒಂದು ಮತದ ಅಂತರ ಸೋಲಾಗಿ ವಾಜಪೇಯಿ ಪ್ರಧಾನಿ ಸ್ಥಾನದಿಂದ ಕೆಳಗಿಳಿದರು. ಬರುವ ಎರಡು ತಿಂಗಳ ಚುನಾವಣೆಯಲ್ಲಿ ಪ್ರಕ್ರಿಯೆ ಮುಗಿದು ಹೋಗಿರುತ್ತೆ. ಐದರಿಂದ ಹತ್ತು ದಿನಗಳ ಅವಧಿಯಲ್ಲಿ ಚುನಾವಣೆ ದಿನಾಂಕ ಘೋಷಣೆ ಆಗುತ್ತೆ. ಏಪ್ರಿಲ್ ಕೊನೆ ವಾರದಲ್ಲಿ ಚುನಾವಣೆ ಮುಗಿಯುತ್ತೆ ಅಲ್ಲಿಯವರೆಗೆ ನಾವು ಕೆಲಸ ಮಾಡಬೇಕಿದೆ. ಮುಂದಿನ ಎರಡು ತಿಂಗಳಲ್ಲಿ



ಚುನಾವಣೆ ಬಂದಿದೆ, ಎಲ್ಲರೂ ಪ್ರಚಾರ ಮಾಡಬೇಕು ಅಂತಿಲ್ಲ, ಹೊಸಬರಿಗೆ ಮೋದಿ ಬಗ್ಗೆ ಹೇಳಬೇಕು. ಮತ್ತೊಮ್ಮೆ ಮೋದಿಗೆ ಅವಕಾಶ ಕೊಡಬೇಕೆಂದು ಮನವಿ ಮಾಡಿದ್ದಾರೆ.

**ಕಾಂಗ್ರೆಸ್ ವಿರುದ್ಧ ಸಂಸದ ಅನಂತಕುಮಾರ್ ಹೆಗಡೆ ಕಿಡಿ:** ರಾಜ್ಯದಲ್ಲಿ ಸಿದ್ದರಾಮಯ್ಯ ಸರ್ಕಾರ ಹರಾಜಾಗುತ್ತಿದೆ. 1 ವರ್ಷದಲ್ಲಿ ಸಿದ್ದರಾಮಯ್ಯ ಸರ್ಕಾರ ಹರಾಜಾಗಿದೆ. ವೇತನ ಕೊಡುವುದಕ್ಕೂ ಸರ್ಕಾರದ ಬಳಿ ಹಣ ಇಲ್ಲ, ಮನೆಯಲ್ಲಿ ಯಾರಾದರೂ ಸರ್ಕಾರಿ ನೌಕರರಿದರೆ ಕೇಳಿ ಸಂಬಳದಲ್ಲೂ ವ್ಯತ್ಯಯ ಆಗುತ್ತಿದೆ ಎಂದು ಕಾಂಗ್ರೆಸ್ ವಿರುದ್ಧ ಕಿಡಿ ಕಾರಿದ್ದಾರೆ.

ಪ್ರಧಾನಿ ಮೋದಿ ಗ್ಯಾರಂಟಿ ಕಳೆದ ಹತ್ತು ವರ್ಷಗಳಿಂದ ಜಾರಿಯಲ್ಲಿದೆ. ದಿನದಿಂದ ದಿನಕ್ಕೆ ಭಾರತ ದೇಶ ಗಟ್ಟಿಯಾಗುತ್ತಿದೆ, ದೇಶ ಸಾಧನೆಯ ಕಡೆ ಹೊರಟಿದೆ. ನಾವೇನೂ ಹೇಳಿದ್ದೇವೆ ಅದನ್ನ ಮಾಡಿ ತೋರಿಸಿದ್ದೇವೆ. ಕಾಶ್ಮೀರ, ರಾಮಮಂದಿರ, ಮುಂದಿನ ದಿನಗಳಲ್ಲಿ ಮಥುರಾ ಕಾಶಿ ವಿಶ್ವನಾಥ ಇರಬಹುದು. ಇನ್ನು ಕೆಲವು ದೇವಾಲಗಳು ಇವತ್ತಲ್ಲ ನಾಳೆ ಹಿಂದುಗಳ ಸುಪರ್ದಿಗೆ ಬರುತ್ತವೆ. ಎಲ್ಲವೂ ಯಾವಾಗ ಸಾಧ್ಯ ಅಂದರೆ ಕೇಂದ್ರದಲ್ಲಿ ಮೋದಿ ಸರ್ಕಾರದ ಬಂದಾಗ ಎಂದರು.

ಇದುವರೆಗೆ ಕಾಂಗ್ರೆಸ್‌ನಿಂದ ಯಾರು ನಿಲುತ್ತಾರೆ ಗೊತ್ತಿಲ್ಲ, ಆದರೆ ವದಂತಿ ಇದೆ. ಖಾನಾಪುರ ಮತಕ್ಷೇತ್ರದಲ್ಲಿ ರಿಜೆಕ್ಟ್ ಮೆಟೀರಿಯಲ್ ಲೋಕಸಭಾ ಕ್ಯಾಂಡಿಡೇಟ್ ಆಗಲಿದ್ದಾರಂತೆ. ಪರೋಕ್ಷವಾಗಿ ಮಾಜಿ ಶಾಸಕಿ ಡಾ. ಅಂಜಲಿ ನಿಂಬಾಳಕರ್ ವಿರುದ್ಧ ವಾಗ್ದಾಳಿ ಮಾಡಿದರು. ಇಲ್ಲಿ ರಿಜೆಕ್ಟ್ ಆಗಿರುವ ಕ್ಯಾಂಡಿಡೇಟ್ ಮೆಟಿರಿಯಲ್ ಲೋಕಸಭೆ ನಿಲ್ಲಲಿದ್ದಾರಂತೆ. ಅವರಿಗೆ ಹೇಗೆ ಉತ್ತರ ಕೊಡಬೇಕು ಅನೋದು ನಿಮಗೆ ಗೊತ್ತಿದೆ. ಕ್ಷೇತ್ರದ ಜನರು ಬಹಳ ಬುದ್ದಿವಂತರಿದ್ದಾರೆ ಹೆಚ್ಚು ಹೇಳುವ ಅವಶ್ಯಕತೆ ಇಲ್ಲ ಎಂದಿದ್ದಾರೆ.

# ಇಂದಿನಿಂದ ಇಂಗ್ಲೆಂಡ್ ವಿರುದ್ಧ ಫೈನಲ್ ಟೆಸ್ಟ್

ಇಂದಿನಿಂದ ಭಾರತ ಮತ್ತು ಇಂಗ್ಲೆಂಡ್ ನಡುವೆ ಅಂತಿಮ ಹಾಗೂ 5ನೇ ಟೆಸ್ಟ್ ಪಂದ್ಯ ಆರಂಭವಾಗಲಿದೆ. ಇಂದಿನಿಂದ 11ರ ವರೆಗೆ ಪಂದ್ಯ ನಡೆಯಲಿದ್ದು, ಹಲವು ಐತಿಹಾಸಿಕ ದಾಖಲೆಗಳನ್ನು ಸೃಷ್ಟಿಸಲು ಟೀಂ ಇಂಡಿಯಾ ಕಾತರವಾಗಿದೆ.

ಹಿಮಾಚಲ ಪ್ರದೇಶದಲ್ಲಿರುವ ಧರ್ಮಶಾಲಾ ಕ್ರೀಡಾಂಗಣದಲ್ಲಿ ಗುರುವಾರ ಬೆಳಗ್ಗೆ 9:30 ರಿಂದ ಪಂದ್ಯ ಆರಂಭವಾಗಲಿದೆ. ಈ ಪಂದ್ಯವನ್ನಾಡುವ ಮೂಲಕ ಟೀಂ ಇಂಡಿಯಾದ ಸ್ಪಿನ್ ಮಾಂತ್ರಿಕ ಆರ್.ಅಶ್ವಿನ್ 100ನೇ ಟೆಸ್ಟ್ ಪಂದ್ಯವನ್ನಾಡಿದ 14ನೇ ಭಾರತೀಯ ಆಟಗಾರನೆಂಬ ಸಾಧನೆ ಮಾಡಲಿದ್ದಾರೆ. ಜೊತೆಗೆ ಟೀಂ ಇಂಡಿಯಾ ನಾಯಕ ಸಿಕ್ಸರ್‌ಗಳಿಂದಲೇ ಡಬ್ಲ್ಯೂಟಿಸಿ ನಲ್ಲಿ ವಿಶೇಷ ದಾಖಲೆ ಬರೆಯಲ್ಲಿದ್ದಾರೆ. ಯುವ ಆರಂಭಿಕ ಯಶಸ್ವಿ ಜೈಸ್ವಾಲ್ ಸಹ ಸರಣಿಯೊಂದರಲ್ಲಿ 600ಕ್ಕೂ ಹೆಚ್ಚು ರನ್‌ಗಳಿಸಿದ ವಿರಾಟ್ ಕೊಹ್ಲಿ ಅವರ ದಾಖಲೆ ಮುರಿಯುವ ಸನಿಹದಲ್ಲಿದ್ದಾರೆ.

ಇಂಗ್ಲೆಂಡ್ ವಿರುದ್ಧ ನಡೆಯುತ್ತಿರುವ 5 ಪಂದ್ಯಗಳ ಟೆಸ್ಟ್ ಸರಣಿಯಲ್ಲಿ ಈಗಾಗಲೇ 4-1



ಅಂತರದಲ್ಲಿ ಸರಣಿ ಗೆದ್ದಿರುವ ಭಾರತ, ಅಂತಿಮ ಟೆಸ್ಟ್‌ನಲ್ಲಿ ಹಲವು ಮೈಲುಗಲ್ಲುಗಳನ್ನು ಸ್ಥಾಪಿಸಲು ಕಾಯುತ್ತಿದೆ.

**ಒಂದೇ ಒಂದು ಸಿಕ್ಸರ್ ಸಿಡಿಸಿದ್ರೆ ದಾಖಲೆ:** ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಸಿಕ್ಸರ್‌ಗಳ ಸರದಾರನೆಂದೇ ಬಿಂಬಿಸಿಕೊಂಡಿರುವ ಹಿಟ್‌ಮ್ಯಾನ್ ರೋಹಿತ್ ಶರ್ಮಾ, ಮೊದಲ ಸಿಕ್ಸರ್ ಸಿಡಿಸುತ್ತಿದ್ದಂತೆ ಐಸಿಸಿ ವಿಶ್ವ ಟೆಸ್ಟ್ ಚಾಂಪಿಯನ್ ಶಿಪ್ ಟೂರ್ನಿಯಲ್ಲಿ 50 ಸಿಕ್ಸರ್ ದಾಖಲೆ ನಿರ್ಮಿಸಲಿದ್ದಾರೆ. ಡಬ್ಲ್ಯೂಟಿಸಿ ಟೂರ್ನಿಯ 31 ಪಂದ್ಯಗಳಿಂದ 49 ಸಿಕ್ಸ್ ಸಿಡಿಸಿರುವ ರೋಹಿತ್, ಇನ್ನೊಂದು ಸಿಕ್ಸರ್ ಬಾರಿಸಿದ್ರೆ, 50ನೇ ಸಿಕ್ಸರ್ ಬಾರಿಸಿದ ವಿಶ್ವದ 2ನೇ ಹಾಗೂ ಭಾರತದ ಮೊದಲ ಆಟಗಾರ ಎಂಬ ದಾಖಲೆ ಬರೆಯಲಿದ್ದಾರೆ. ಡಬ್ಲ್ಯೂಟಿಸಿನಲ್ಲಿ ಇಂಗ್ಲೆಂಡ್ ತಂಡದ ನಾಯಕ ಬೆನ್ ಸ್ಟೋಕ್ಸ್ 44 ಪಂದ್ಯಗಳಿಂದ 78 ಸಿಕ್ಸರ್ ಸಿಡಿಸಿ ಅಗ್ರಸ್ಥಾನದಲ್ಲಿದ್ದಾರೆ. ಭಾರತದ ವಿಕೆಟ್ ಕೀಪರ್ ಬ್ಯಾಟರ್ ರಿಷಭ್ ಪಂತ್ 38 ಸಿಕ್ಸರ್, ಇಂಗ್ಲೆಂಡ್‌ನ ಜಾನಿ ಬೈರ್‌ಸ್ಟೋವ್ 27 ಸಿಕ್ಸರ್, ಭಾರತದ ಯಶಸ್ವಿ ಜೈಸ್ವಾಲ್ 26 ಸಿಕ್ಸರ್ ಸಿಡಿಸಿ ಕ್ರಮವಾಗಿ ಮೊದಲ 5 ಸ್ಥಾನಗಳಲ್ಲಿದ್ದಾರೆ.

**600 ಸಿಕ್ಸರ್‌ಗಳ ಸನಿಹದಲ್ಲಿ ಹಿಟ್‌ಮ್ಯಾನ್:** ಟೀಂ ಇಂಡಿಯಾದ ನಾಯಕ ರೋಹಿತ್ ಶರ್ಮಾ, ಅಂತಾರಾಷ್ಟ್ರೀಯ ಕ್ರಿಕೆಟ್‌ನ ಮೂರು ಮಾದರಿಗಳಲ್ಲಿಯೂ 594 ಸಿಕ್ಸರ್ ಸಿಡಿಸಿ ಅಗ್ರಸ್ಥಾನದಲ್ಲಿದ್ದಾರೆ. ಇಂಗ್ಲೆಂಡ್ ವಿರುದ್ಧ ಧರ್ಮಶಾಲಾದಲ್ಲಿ ನಡೆಯಲಿರುವ ಟೆಸ್ಟ್ ಪಂದ್ಯದಲ್ಲಿ 6 ಸಿಕ್ಸರ್ ಸಿಡಿಸಿದರೆ, ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ 600 ಸಿಕ್ಸರ್ ಸಿಡಿಸಿದ ವಿಶ್ವದ ಮೊದಲ ಆಟಗಾರ ಎಂಬ ಕೀರ್ತಿಗೆ ಪಾತ್ರರಾಗಲಿದ್ದಾರೆ.

# ಪಾಕಿಸ್ತಾನ ಪರ ಘೋಷಣೆ ಕಾಲ್ಪನಿಕ ಎಂದಿದ್ದ ಪ್ರಿಯಾಂಕ್ ಖರ್ಗೆ ಯೂಟರ್ನ್

**ಗದಗ:** ವಿಧಾನಸೌಧದಲ್ಲಿ ಪಾಕಿಸ್ತಾನ ಪರ ಘೋಷಣೆ ಕೂಗಿದ ವಿಚಾರಕ್ಕೆ ಸಂಬಂಧಿಸಿ ನೀಡಿದ್ದ ತಮ್ಮ ಹೇಳಿಕೆಗೆ ಸಚಿವ ಪ್ರಿಯಾಂಕ್ ಖರ್ಗೆ ಯೂಟರ್ನ್ ಹೊಡೆದಿದ್ದಾರೆ. ಪಾಕಿಸ್ತಾನ ಪರ ಘೋಷಣೆ ಕಾಲ್ಪನಿಕ ಎಂದು ಈ ಹಿಂದೆ ಪ್ರಿಯಾಂಕ್ ಖರ್ಗೆ ಹೇಳಿಕೆ ನೀಡಿದ್ದರು. ಆದರೆ ಈಗ ನಾನು ಈಖಙ ವರದಿ ನೋಡಿಲ್ಲ, ಗೃಹ ಸಚಿವರು ನೋಡಿದ್ದಾರೆ. ಎಫ್‌ಎಸ್ ಎಲ್ ವರದಿ ಬಂದಿದೆ, ಘೋಷಣೆ ಕೂಗಿರಬಹುದು ಅಂದಿದ್ದಾರೆ ಎಂದು ಹೇಳುವ ಮೂಲಕ ಗದಗದಲ್ಲಿ ತಮ್ಮ ಹೇಳಿಕೆಗೆ ಪ್ರಿಯಾಂಕ್ ಖರ್ಗೆ ಯೂಟರ್ನ್ ಹೊಡೆದಿದ್ದಾರೆ.

ನನ್ನ ಬಳಿ ಬಂದಿದ್ದ ವಿಡಿಯೋ ನೋಡಿ ಪರೀಕ್ಷೆ ಮಾಡಿಸಿದ್ವಿ. ಆ ವಿಡಿಯೋವನ್ನ ಖಾಸಗಿಯಾಗಿ ಪರೀಕ್ಷೆ ಮಾಡಿಸಲಾಗಿತ್ತು. ಅದರಲ್ಲಿ ಬಂದಿಲ್ಲ ಅಂತಾ ಈ ಹಿಂದೆ ಹೇಳಿದ್ದೆ. ಸರ್ಕಾರದ ವರದಿ ಫೈನಲ್ ಅಂತನೂ ಹೇಳಿದ್ದೆ. ಬಿಜೆಪಿ ಖಾಸಗಿ ವರದಿಯನ್ನ ಸರ್ಕಾರಿ ವರದಿಯಾಗಿ ಬಿಂಬಿಸುವುದು ತಪ್ಪು ಅಂತಾ ಹೇಳಿದ್ದೆ. ಅಥವಾ ನನ್ನ ವರದಿ ಸರಿ ಅಂತಾ ಹೇಳುವುದೂ ತಪ್ಪು ಅಂತಾನೇ ಹೇಳಿದ್ದು ನಾನು ಎಫ್‌ಎಸ್‌ಎಲ್ ವರದಿ ನೋಡಿಲ್ಲ. ಗೃಹ ಸಚಿವರು ವರದಿ ನೋಡಿ ಹೇಳಿದ್ದಾರೆ. ಎಫ್‌ಎಸ್‌ಎಲ್ ರಿಪೋರ್ಟ್ ಬಂದಿದೆ. ಘೋಷಣೆ ಕೂಗಿರಬಹುದು ಅಂತಾ ಹೇಳಿದ್ದಾರೆ.



ಮೂವರನ್ನ ಕರೆದುಕೊಂಡು ಹೋಗಿದಾರೆ. ಧ್ವನಿ ಮ್ಯಾಚ್ ಆಗ್ಬೇಕು. ಆ ಸಂದರ್ಭದಲ್ಲಿ ಅವರಿದ್ರಾ ಅಂತಾ ದೃಢಪಡಿಸಿಕೊಳ್ಳಬೇಕು ಎಂದು ಗದಗದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಬಿಜೆಪಿಯವರಂತೆ ಮಂಡ್ಯದಲ್ಲಿ ಕೂಗಿದ್ದನ್ನ ಮುಚ್ಚಿಹಾಕಿದ್ದೀವಾ? ಇನ್ನೂ ತನಿಖೆ ನಡೀತಿದೆ. ಧ್ವನಿಯ ಸ್ಯಾಂಪಲ್ ಅವ್ರದ್ದು ಇವ್ರದ್ದು ಅಂತಾ ಎಲ್ಲೂ ಹೇಳಿಲ್ಲ. ಮಾನ್ಯ ಗೃಹ ಸಚಿವರ ಹೇಳಿಕೆ ನೀವೇ ಕೇಳಿದ್ದೀರಾ. ಒಂದ್ರಲ್ಲಿ ಕೇಳಿದಂಗಿದೆ. ಹೈಪ್ರಾಬೆಬಲಿಟಿ ಇದೆ ಅಂತಾ ಹೇಳಿದ್ದಾರೆ. ಕರೆಸಿದ್ದೇವೆ, ವಿಚಾರಣೆ ಮಾಡ್ತಿದ್ದೀವಿ. ವೈಸ್ ಸ್ಯಾಂಪಲ್ ಮ್ಯಾಚ್ ಮಾಡಿ ಮುಂದಿನ ಕ್ರಮ ಕೈಗೊಳ್ಳಲಾಗುತ್ತೆ. ಸರ್ಕಾರಿ ವರದಿ ಫೈನಲ್, ಆರ್‌ಎಸ್‌ಎಸ್ ವರದಿ ಒಪ್ಪಲ್ಲ ಅಂತಾನೇ ಹೇಳಿದ್ದು ಸರ್ಕಾರಿ ವರದಿ ಫೈನಲ್ ಅಂತಾ ಹೇಳಿದ್ವಿ. ಆ ವರದಿಗೆ ಅಪಸ್ವರ ಎತ್ತಿದ್ದೀವಾ? ಇಲ್ಲ ಎಂದರು.

### ಬಿಜೆಪಿ ವಿರುದ್ಧ ವಾಗ್ದಾಳಿ

**ಬಿಜೆಪಿಯವರಿಗೆ ನಿಜವಾಗಲೂ ನೈತಿಕತೆ ಇದೆಯಾ? ರಾಮೇಶ್ವರಂ ಕೆಫೆ ಬ್ಲಾಸ್ಟ್ ಬಗ್ಗೆ ಇಷ್ಟು ಮಾತಾಡ್ತಿದ್ದಾರೆ. ಮಂಗಳೂರು ಕುಕ್ಕರ್ ಬ್ಲಾಸ್ಟ್ ಯಾರ ಅವಧಿಯಲ್ಲಾಯ್ತು? ಕುಕ್ಕರ್ ಬ್ಲಾಸ್ಟ್ ಆರೋಪಿ ತರಬೇತಿ ಪಡೆದಿದ್ದು ಎಲ್ಲಿ? ಅಂದಿನ ಗೃಹ ಸಚಿವರ ಕ್ಷೇತ್ರ ತೀರ್ಥಹಳ್ಳಿಯಲ್ಲಿ ಕುಕ್ಕರ್ ಬ್ಲಾಸ್ಟ್ ಆರೋಪಿಗೆ ತರಬೇತಿ. RSS ಪ್ರಯೋಗಾಲಯ ಮಂಗಳೂರಿನಲ್ಲಿ ಸ್ಫೋಟಿಸಿದ್ದ. ಆಗ ಇವರು ರಾಜೀನಾಮೆ ಕೊಟ್ಟಿದ್ರಾ? ಬಿಜೆಪಿಯವರು ಉಸಿರಾದ್ರೂ ಬಿಟ್ಟಿದ್ದರಾ ಎಂದು ಪ್ರಿಯಾಂಕ್ ಖರ್ಗೆ ಗರಂ ಆದರು.**

ಇನ್ನು ಇದೇ ವೇಳೆ ಪ್ರಿಯಾಂಕ್ ಖರ್ಗೆ ವಿರುದ್ಧ ಗುಲಾಮ್ ಗ್ಯಾಂಗ್ ಅಭಿಯಾನ ಸಂಬಂಧ ಪ್ರತಿಕ್ರಿಯೆ ನೀಡಿದ ಸಚಿವರು, ಬಿಜೆಪಿಯವರಿಗೆ ನಾನು ಮನೆ ದೇವರು ಇದ್ದಂಗೆ. ಅವ್ರ ಮನೆ ಬಾಗಿಲು ತೆಗೆಯಲ್ಲ. ಊಟ ಜೀರ್ಣವಾಗಲ್ಲ. ಕರ್ನಾಟಕದಲ್ಲಿ ಬಿಜೆಪಿ ಶಾಶ್ವತವಾಗಿ ವಿರೋಧ ಪಕ್ಷದಲ್ಲಿ ಇರ್ತಾರೆ ಎಂದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com